ಸಂಪುಟ : 13 Volume ಸಂಚಿಕೆ : 187 Issue ಪುಟಗಳು : 08 Pages ಶನಿವಾರ 06 ಸೆಪ್ಟೆಂಬರ್ 2025 ₹2 RNINO:KARKAN/2011/48371 BDR/054/2026-20274 www.mallammanudi.in mallammanudi@gmail.com 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟಣೆ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಆತ್ಮ ವಿಶ್ವಾಸ ಒಂದು ಮಹಾ ಆಯುಧ. ಅದು ಎಲ್ಲಾ ಸಂದರ್ಭದಲ್ಲಿ ಜಯ ತಂದು ಕೊಡದಿರಬಹುದು. ಆದರೆ ಯಾವುದೇ ಸವಾಲನ್ನು ಎದುರಿಸಲು ಧೈರ್ಯ ತುಂಬುತ್ತದೆ.

■ ಶಿಕ್ಷಕರೇ ರೂವಾರಿಗಳು 2

■ ಎಸ್.ಟಿ. ಗೊಂಡ ಎಂದೇ ಬರೆಸಿ 4

■ ಕಾಯಕ ಪ್ರಜ್ಞೆಎಲ್ಲರಲ್ಲಿ ಮೂಡಲಿ 8


## ಮತಪತ್ರ ಬಳಕೆಗೆ ಬಿಜೆಪಿ ವಿರೋಧ



ಬೆಂಗಳೂರು:ಸೆ.5:ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಇವಿಎಂ ಬದಲು ಮತಪತ್ರ ಬಳಸುವ ಸರ್ಕಾರದ ತೀರ್ಮಾನವನ್ನು ರಾಜ್ಯ ಬಿಜೆಪಿ ವಿರೋಧಿಸಿದ್ದು, ಪ್ರಜಾಪ್ರಭುತ್ವ ವ್ಯವಸ್ಥೆ ಹಾಗೂ ಪಾರದರ್ಶಕಚುನಾವಣೆಯಲ್ಲಿ ಧಿಕ್ಕರಿಸುವುದೇ ಕಾಂಗ್ರೆಸ್‌ನ ಕಾರ್ಯಸೂಚಿಹಾಗೂ ಗುರಿಯಾಗಿದೆ ಎಂದು ಟೀಕಿಸಿದೆ.ಈಬಗ್ಗೆ ಸಾಮಾಜಿಕಜಾಲತಾಣ ಎಕ್ಸ್‌ನಲ್ಲಿ ಟ್ವೀಟ್ ಮಾಡಿರುವ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ ವಿಜಯೇಂದ್ರಅವರು,ಮತ ಪತ್ರಗಳ ಬಳಕೆಯಿಂದ ಚುನಾವಣಾಅಕ್ರಮವೆಸಗಬಹುದು. ಮತಗಟ್ಟೆಗಳಲ್ಲಿ ದೌರ್ಜನ್ಯ ಮೆರೆಯಬಹುದು, ಎಗ್ಗಿಲ್ಲದೆ ಕಳ್ಳ ಮತದಾನವನ್ನು ಮಾಡಬಹುದುಎಂಬ ಏಕೈಕ ಕಾರಣಕ್ಕೆ ಕಾಂಗ್ರೆಸ್ ಮತಪತ್ರಆಧರಿಸಿದ ಚುನಾವಣೆಯನ್ನು ರಾಹುಲ್‌ಗಾಂಧಿನೇತೃತ್ವದಲ್ಲಿಬೆಂಬಲಿಸ 'ುತ್ತಿದೆ ಎಂದು ವಾಗ್ದಾಳಿನಡೆಸಿದ್ದಾರೆ.ಮುಂದಿನ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಇವಿಎಂ ಯಂತ್ರ ಬದಿಗಿಟ್ಟು ಮತಪತ್ರ ಬಳಕೆಗೆ ನಿರ್ಧರಿಸಿರುವ ಸರ್ಕಾರದ ತೀರ್ಮಾನ ರಾಜ್ಯದಲ್ಲಿ ಅಧಿಕಾರಕ್ಕೆ ಬಂದಿರುವುದೇ ಮತಗಳ್ಳತನದಿಂದ ಎಂದು ಸ್ವಯಂ ಪ್ರಮಾಣೀಕರಿಸಿಕೊಂಡಂತಿದೆ ಎಂದು ಅವರು ಟೀಕಿಸಿದ್ದಾರೆ.

## ಹೃದಯಾಘಾತಕ್ಕೆ ಮುಖ್ಯ ಪೇದೆ ಬಲಿ

ಕಲಬುರಗಿ:ಸೆ.5: ಗಣೇಶ ವಿಸರ್ಜನಾ ಮೆರವಣಿಗೆಗೆ ಭದ್ರತೆಗಾಗಿ ತೆರಳಿದ್ದ ಮುಖ್ಯಪೇದೆಯೊಬ್ಬರು ಹೃದಯಾಘಾತದಿಂದ ಸಾವನ್ನಪ್ಪಿರುವುದು ಸೇಡಂನ ಮಳಖೇಡದಲ್ಲಿ ನಡೆದಿದೆ.ಮೃತರನ್ನು ಮಳಖೇಡ ಪೊಲೀಸ್ ಠಾಣೆಯ ಮುಖ್ಯಪೇದೆ ಮನೋಹರ್ ಪವಾರ್ (46) ಎಂದು ಗುರುತಿಸಲಾಗಿದೆ. ಅವರಿಗೆ ಕರ್ತವ್ಯದ ವೇಳೆಯೆ ಹೃದಯಾಘಾತವಾಗಿದೆ. ಕೂಡಲೇ ಅವರನ್ನು ಅಂಬುಲೇನ್ಸ್‌ನಲ್ಲಿ ಕಲಬುರಗಿ ಆಸ್ಪತ್ರೆಗೆ ಕರೆದೊಯ್ಯುವ ಯತ್ನ ಮಾಡಲಾಯಿತು. ಆದರೆ ಮಾರ್ಗ ಮಧ್ಯೆಯೆ ಅವರು ಸಾವನ್ನಪ್ಪಿದ್ದಾರೆ.



ಮಳಖೇಡ ಠಾಣೆಯಲ್ಲಿ ಮುಖ್ಯಪೇದೆಯಾಗಿ ಕರ್ತವ್ಯ ನಿರ್ವಸುತ್ತಿದ್ದ ಮನೋಹರ್ ಸಾವಿಗೆ ಸಹೋದ್ಯೋಗಿಗಳು ಹಾಗೂ ಆತ್ಮೀಯರು ಕಂಬನಿ ಮಿಡಿದಿದ್ದಾರೆ. ಹಿರಿಯ ಅಧಿಕಾರಿಗಳು ಹಾಗೂ ಠಾಣೆಯ ಸಿಬ್ಬಂದಿ ಅವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಪ್ರಾರ್ಥಿಸಿದ್ದಾರೆ.

## ಸೆ. 22 ರಿಂದ ಜಿಲ್ಲಾದ್ಯಂತ ಎಲ್ಲಾ ವರ್ಗಗಳ

### ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ: ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ

ಬೀದರ, ಸೆ.05 : ಸೆಪ್ಟೆಂಬರ್ 22 ರಿಂದ ಜಿಲ್ಲಾದ್ಯಂತ ಎಲ್ಲಾ ವರ್ಗಗಳ ಅಥವಾ ಜಾತಿಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ತಿಳಿಸಿದರು.ಅವರು ಗುರುವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಎಲ್ಲಾ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿ ಕುರಿತ ಸಮೀಕ್ಷೆ ಬಗ್ಗೆ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಅಧ್ಯಕ್ಷ ವಹಿಸಿ ಮಾತನಾಡಿದರು.ಜಿಲ್ಲಾದ್ಯಂತ 22-09-2025 ರಿಂದ 07-10-2025 ರ ವರೆಗೆ ಎಲ್ಲಾ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕಮತ್ತು ಆರ್ಥಿಕ ಸ್ಥಿತಿಗತಿಗಳ ಕುರಿತು ಸಮೀಕ್ಷೆ ಕೈಗೊಳ್ಳಲಾಗುವುದು ಎಂದರು. ಸಮೀಕ್ಷೆಗಾಗಿ ರಾಜ್ಯ ಮಟ್ಟದಲ್ಲಿ ತರಬೇತಿ ಪಡೆದ ಮಾಸ್ಟರ್ ಟ್ರೈನರ್ ಗಳಿಂದ ಜಿಲ್ಲಾ ಮಟ್ಟದಲ್ಲಿ ಮಾಸ್ಟರ್ ಟ್ರೈನರ್ ಗಳ ತರಬೇತಿ ಆಯೋಜಿಸಲಾಗುವುದು ಎಂದರು.ಸರ್ಕಾರಿ ಶಿಕ್ಷಕರನ್ನು ಮತ್ತು ಇತರೆ ಇಲಾಖೆಗಳ ಅಧಿಕಾರಿಗಳನ್ನು ಸಮೀಕ್ಷೆದಾರರು ಮತ್ತು ಮೇಲ್ವಿಚಾರಕರಾಗಿ ನಿಯೋಜಿಸುವುದು ಹಾಗೂ ಸಮೀಕ್ಷೆದಾರರ ಮಾಹಿತಿಯನ್ನು ಪೊ?ರ್ಟಲ್ ನಲ್ಲಿ ಅಪ್ಲೋಡ್ ಮಾಡಬೇಕು ಎಂದರು.



# ಶಿಕ್ಷಣಕ್ಕಾಗಿ 65 ಸಾ.ಕೋ.ಖರ್ಚು

### ಡಾ. ಸರ್ವೆಪಲ್ಲಿ ರಾಧಾಕೃಷ್ಣನ್ ರ ಜೀವನ ಮತ್ತು ಮಾರ್ಗದರ್ಶನ ಶಿಕ್ಷಕರು ಮತ್ತು ನಾವು ಅಳವಡಿಸಿಕೊಳ್ಳಬೇಕು



ಬೆಂಗಳೂರು ಸೆ. 05 :ಶಿಕ್ಷಣ ಕ್ಷೇತ್ರ ನಮ್ಮ ಸರ್ಕಾರದ ಅದ್ಯತಾ ಕಾರ್ಯಕ್ರಮವಾಗಿದ್ದು, ಶಾಲಾ ಶಿಕ್ಷಣ ಮತ್ತು ಉನ್ನತ ಶಿಕ್ಷಣಕ್ಕಾಗಿ ಸುಮಾರು 65 ಸಾವಿರ ಕೋಟಿ ರೂ.ಗಳಿಗೂ ಹೆಚ್ಚು ಖರ್ಚು ಮಾಡಲಾಗುತ್ತಿದೆ ಎಂದು ಮುಖ್ಯಮಂತ್ರಿಸಿದ್ಧರಾಮಯ್ಯ ತಿಳಿಸಿದರು.ಇಂದು ಶಾಖಾ ಶಿಕ್ಷಣ ಮತ್ತು ಸಾಕ್ಷಾರತಾ ಇಲಾಖೆ ಹಾಗೂ ಉನ್ನತ ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ ವಿಧಾನಸೌಧದ ಬ್ಯಾಂಕ್ವೆಟ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಭಾರತ ರತ್ನ ಡಾ. ಸರ್ವೆಪಲ್ಲಿ ರಾಧಾಕೃಷ್ಣನ್ ರವರ ಜನ್ಮ ದಿನಾಚರಣೆ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ರಾಜ್ಯ ಮಟ್ಟದ ಶಿಕ್ಷಕರ ದಿನಾಚರಣೆ- 2025ರ ಕಾರ್ಯಕ್ರಮ ಉದ್ಘಾಟನೆ ನೆರವೇರಿಸಿ,ಡಾ. ಸರ್ವೆಪಲ್ಲಿ ರಾಧಾಕೃಷ್ಣನ್ ಹಾಗೂ ಶ್ರೀಮತಿ ಸಾವಿತ್ರಿ ಪುಲೆ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ರಾಜ್ಯ ಪ್ರಶಸ್ತಿ ಪುರಸ್ಕೃತರಿಗೆ ಮಲೆನಾಡ ಗಾಂಧಿ ಮತ್ತು ಮಾಜಿ ಶಿಕ್ಷಣ ಸಚಿವ ಹೆಚ್.ಜಿ.ಗೋವಿಂದೇಗೌಡ ಪ್ರಶಸಿ ಪುರಸ್ಕೃತ ಶಾಲೆಗಳಿಗೆ ಹಾಗೂ ಎನ್‌ಎಎಸಿ ಮಾನ್ಯತೆ ಪಡೆದ ಸರ್ಕಾರಿ ಕಾಲೇಜುಗಳಿಗೆ ಅಭಿನಂದನಾ ಪತ್ರ ಪ್ರದಾನ ಮಾಡಿ ಮಾತನಾಡಿದರು.

ಡಾ. ಸರ್ವೆಪಲ್ಲಿ ರಾಧಾಕೃಷ್ಣನ್ ರವರು ಅತ್ಯಂತ ಮೌಲ್ಯಗಳ್ಳುಳ್ಳ ಶಿಕ್ಷಕರು ಮತ್ತು ರಾಷ್ಟ್ರಪತಿಗಳಾಗಿದ್ದರು. ಇವರ ಜೀವನ ಮತ್ತು ಮಾರ್ಗದರ್ಶನವನ್ನು ಶಿಕ್ಷಕರು ಮತ್ತು ನಾವು ಅಳವಡಿಸಿಕೊಂಡಾಗ ಅವರಿಗೆ ಸಲ್ಲಿಸುವ ಅತ್ಯುನ್ನತ ಗೌರವ ಎಂದರು.ನಮ್ಮ ರಾಜ್ಯದ ಮಕ್ಕಳಿಗೆ ಹಾಗೂ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡಬೇಕು ಎನ್ನುವ ಉದ್ದೇಶದಿಂದ ಸರ್ಕಾರ ಹೆಚ್ಚು ಹಣ ಖರ್ಚು ಮಾಡುತ್ತಿದ್ದು, ಸರ್ಕಾರದ ನಿರೀಕ್ಷೆಗೆ ತಕ್ಕಂತೆ ಶಿಕ್ಷಕರು ವೈಚಾರಿಕತೆ ಮತ್ತು ವೈಜ್ಞಾನಿಕತೆಯಿಂದ ಕೂಡಿದ ಶಿಕ್ಷಣ ನೀಡಬೇಕು ಸಮಾಜದ ಸಮಸ್ಯೆಗಳಿಗೆ ಸ್ಪಂದಿಸುವ ವಿದ್ಯೆಯನ್ನು ನೀಡಬೇಕು. ವಿದ್ಯೆಯ ಜೊತೆಗೆ ಕಲಿಕೆಯ ಕಿಡಿ ಹೊತ್ತಿಸುವ ಕೆಲಸವಾಗಬೇಕು. ಅಂತಹ ವಿದ್ಯೆ ಕೊಡಿಸುವ ಜವಬ್ದಾರಿ ಶಿಕ್ಷಕರ ಮೇಲಿದೆ ಎಂದರು.ಒಂದು ಕಾಲದಲ್ಲಿ ಶೂದ್ರರಿಗೆ ವಿದ್ಯೆ ಕಲಿಯುವ ಅವಕಾಶವಿರಲಿಲ್ಲ. ನಮ್ಮ ಸಂವಿಧಾನ ಜಾರಿಯಾದ ಮೇಲೆ ಎಲ್ಲರಿಗೂ ವಿದ್ಯೆ ಕಲಿಯುವ ಸಮಾನಾ ಅವಕಾಶ ದೊರಕಿದೆ. ನಮ್ಮ ಸರ್ಕಾರ ಬಂದ ಮೇಲೆ ಎಲ್ಲಾ ಶಾಲೆಗಳನ್ನು ಸಂವಿಧಾನ ಪಿಠೀಕೆಯನ್ನು ವಿದ್ಯಾರ್ಥಿಗಳು ಓದುತ್ತಿದ್ದು, ಸಂವಿಧಾನದ ಪೀಠಿಕೆಯನ್ನು ಅರ್ಥೈಸುವ ಕೆಲಸ ಮಾಡುತ್ತಿದೆ. ಸ್ವಾತಂತ್ರ , ಸಮಾನತೆ, ಬ್ರಾತೃತ್ವ ನಮ್ಮ ಸಂವಿಧಾನದ ಮೌಲ್ಯಗಳಾಗಿದ್ದು, ಈ ಮೂರನ್ನು ನಾವು ಅಥೈಸಿಕೊಂಡರೆ ಮನುಷ್ಯತ್ವತನಾಗಿ ಬೆಳಯಲು ಸಾಧ್ಯ. ಮನುಷತ್ವ ಇಲ್ಲದೆ ಹೋದರೆ ಸಮಾಜದಲ್ಲಿ ಒಳ್ಳೆಯ ನಾಗರೀಕರಾಗಲು ಸಾಧ್ಯವಿಲ್ಲ. ಇದನ್ನು ಶಿಕ್ಷಕರು ಅರ್ಥೈಸಿಕೊಂಡು ಎಲ್ಲಾ ವಿದ್ಯಾರ್ಥಿಗಳನ್ನು ಉತ್ತಮ ನಾಗರೀಕರನ್ನಾಗಿ ಮಾಡುವುದು ಶಿಕ್ಷಕರ ಜವಬ್ದಾರಿ. ಶಿಕ್ಷಕರು,ಸೈನಿಕರು ನಮ್ಮ ದೇಶಕ್ಕೆ ಬಹಳ ಮುಖ್ಯ ಎಂದರು. ನಮ್ಮಲ್ಲಿ ಜಾತಿ ವ್ಯವಸ್ಥೆ ನೂರಾರು ವರ್ಷಗಳಿಂದ ಇದ್ದು, ಈ ಹಿಂದೆ ಸ್ವಾರ್ಥಕ್ಕೆ ಹುಟ್ಟುಹಾಕಿರುವ ಜಾತಿ ವ್ಯವಸ್ಥೆ ಶಿಕ್ಷಣದಿಂದ ಬದಲಾಗಬೇಕು. ಜಾತಿ ವ್ಯವಸ್ಥೆ ಕಾರಣದಿಂದ ಅಸಮಾನ ಸಮಾಜ ನಿರ್ಮಾಣವಾಗಿ ಅವಕಾಶಗಳು ಎಲ್ಲರಿಗೂ ಸಿಗುತ್ತಿಲ್ಲ. ವಿದ್ಯಾವಂತರು ಕೂಡ ಕಂದಾಚಾರ, ಮೌಢ್ಯ, ಮೂಡನಂಬಿಕೆ ಪಾಲನೆ ಮಾಡುವಂತೆ ಆಗಬಾರದು. ಆದ್ದರಿಂದ ಶಿಕ್ಷಕರು ವಿದ್ಯಾರ್ಥಿಗಳನ್ನು ತಯಾರು ಮಾಡುವಾಗ ಉತ್ತಮ ರೀತಿಯಲ್ಲಿ ತಯಾರಾಗುವಂತೆ ಮಾಡಬೇಕು. ವೈಚಾರಿಕತೆ,ಪರಧರ್ಮ,ಸಹಿಷ್ಣುತೆ ಮೈಗೂಡಿಸಿಕೊಳ್ಳುವ ಶಿಕ್ಷಣಕೊಡುವ ನೈತಿಕತೆ ಮತ್ತು ವೃತ್ತಿಪರ ಹೊಣೆಗಾರಿಕೆ ಶಿಕ್ಷಕರ ಮೇಲಿದೆ. ಶಿಕ್ಷಣದ ಹಕ್ಕಿನಿಂದಾಗಿ ಹೆಣ್ಣು ಮಕ್ಕಳು ಹೆಚ್ಚು ವಿದ್ಯಾವಂತರಾಗುತ್ತಿದ್ದು, ರ್‍ಯಾಂಕ್ ಪಡೆಯುವಲ್ಲಿಯೂ ಸಹ ಮುಂದೆ ಇದ್ದಾರೆ ಎಂದು ಮೆಚ್ಚಿಗೆ ವ್ಯಕ್ತಪಡಿಸಿದ್ದರು.ಶಿಕ್ಷಕರ ವೃತ್ತಿ ಪವಿತ್ರವಾದ ವೃತ್ತಿ ಎಂದು ಅರ್ಥ ಮಾಡಿಕೊಂಡಾಗ ನಿಮ್ಮ ಬದುಕು ಸಾರ್ಥಕವಾಗುತ್ತದೆ.

ನಾವು ಉತ್ತಮವಾದ ಸಮಾಜ ನಿರ್ಮಾಣ ಮಾಡಲು ಪ್ರಯತ್ನ ಮಾಡುತ್ತಿದ್ದೇವೆ ಎಂಬುದು ಮುಖ್ಯ ಎಂದರು. ಇತ್ತೀಚೆಗೆ ಮಕ್ಕಳಿಗೆ ಮೊಬೈಲ್ ಗೀಳು ಹೆಚ್ಚಾಗುತ್ತಿದ್ದು, ಇದರಿಂದ ಮಕ್ಕಳನ್ನು ಹೊರಗೆ ತರುವ ಪರಿಣಾಮಕಾರಿ ಕೆಲಸವಾಗಬೇಕಾಗಿರುವುದರಿಂದ

" ಮೊಬೈಲ್ ಬಿಡಿ, ಪುಸ್ತಕ ಹಿಡಿ, ಓದು" ಎಂಬ ಕಾರ್ಯಕ್ರಮವನ್ನು ಜಾರಿಗೊಳಿಸುವಂತೆ ಶಿಕ್ಷಕರಲ್ಲಿ ಮನವಿ ಮಾಡಿದರು ಹಾಗೂ ರಾಜ್ಯದ, ದೇಶದ ಎಲ್ಲಾ ಶಿಕ್ಷಕರಿಗೂ, ಪ್ರಶಸ್ತಿ ಪುರಸ್ಕತರಿಗೂ ಅಭಿನಂದನೆ ಸಲ್ಲಿಸಿದರು.ಕಾರ್ಯಕ್ರಮದಲ್ಲಿ

ಸರ್ಕಾರದ ವಿಧಾನ ಪರಿಷತ್ ಶಾಸಕರಾದ ಪುಟ್ಟಣ್ಣ, ರಾಮೋಜಿಗೌಡ, ಡಿ.ಟಿ. ಶ್ರೀನಿವಾಸ, ಶಾಲಾ ಶಿಕ್ಷಣ ಮತ್ತು ಸಾಕ್ಷಾರತಾ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಶ್ರೀಮತಿ ವಿ. ರಷ್ಮಿ ಮಹೇಶ್, ಶಾಲಾ ಶಿಕ್ಷಣ ಆಯುಕ್ತರಾದ ಡಾ. ಕೆ.ವಿ. ತ್ರಿಲೋಕ ಚಂದ್ರ, ಪ್ರಶಸ್ತಿ ಪುರಸ್ಕೃತ ಶಿಕ್ಷಕರು, ಉಪನ್ಯಾಸಕರು ಉಪಸ್ಥಿತರಿದ್ದರು.

### ಡಾ. ರಾಧಾಕೃಷ್ಣನ್ ರವರು ಮಾದರಿ ಶಿಕ್ಷಕರು: ಎಸ್. ಮಧು ಬಂಗಾರಪ್ಪ

ಕಾರ್ಯಕ್ರಮದಲ್ಲಿ ಪ್ರಾಸ್ತವಿಕ ಮಾತನಾಡಿದ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಎಸ್. ಮಧು ಬಂಗಾರಪ್ಪನವರು ಡಾ. ಸರ್ವೆಪಲ್ಲಿ ರಾಧಾಕೃಷ್ಣನ್ ರವರು ಮಾದರಿ ಶಿಕ್ಷಕರು ಮತ್ತು ಶಿಕ್ಷಕರಿಗೆ ದಾರಿ ದೀಪವಾಗಿದ್ದರು. ದೇಶದ ಅಭಿವೃದ್ಧಿಗೆ ಶಿಕ್ಷಕರು ಉತ್ತಮ ಪ್ರಜೆಗಳನ್ನು ರೂಪಿಸುತ್ತಾರೆ. ನಮ್ಮ ಸರ್ಕಾರ ಬಂದ ಮೇಲೆ ಶಾಲೆಗಳಿಗೆ ಮೂಲಭೂತ ಸೌಲಭ್ಯಗಳಾದ ಶೌಚಾಲಯ, ಶಾಲಾ ಕೊಠಡಿ ವಿವಿಧ ಸಹಕಾರಗಳನ್ನು ನೀಡಿದ್ದೇವೆ. ಗುಣಮಟ್ಟದ ಶಿಕ್ಷಣಕ್ಕಾಗಿ ಇತ್ತೀಚೆಗೆ ನಡೆದ ಸಚಿವ ಸಂಪುಟದಲ್ಲಿ 800 ಕೆಪಿಎಸ್ ಶಾಲೆ ಹಾಗೂ 164 ಪೌಢಶಾಲೆಗಳಿಗೆ ಅನುಮೋದನೆಗೆ ನೀಡಲಾಗಿದೆ. 50ಪಿಯುಸಿ ಕಾಲೇಜುಗಳಿಗೆ ಒಂದು ವಾರದ ನಂತರ ಅನುಮೋದನೆ ನೀಡಲಾಗುವುದು. 1000 ಎಲ್.ಕೆ.ಜಿ ಯು.ಕೆ.ಜಿ ಇದ್ದ ಶಾಲೆಗಳನ್ನು ಇದರ ಜೊತೆಗೆ 4000 ಮಾಡಿದಕ್ಕೆ ಮುಖ್ಯಮಂತ್ರಿಗಳಿಗೆ ಧನ್ಯವಾದ ಅರ್ಪಿಸಿದರು.

### ಹೆಣ್ಣು ಮಕ್ಕಳ ಸಬಲೀಕರಣಕ್ಕಾಗಿ ಸರ್ಕಾರದ ಮಹತ್ವದ ಹೆಜ್ಜೆ:ಡಾ.ಎಂ.ಸಿ.ಸುಧಾಕರ್

ಹೆಣ್ಣು ಮಕ್ಕಳ ಸಬಲೀಕರಣಕ್ಕಾಗಿ ಅಜೀಂ ಪ್ರೇಮ್ ಜಿ ಫೌಂಡೇಶನ್ ರವರ ಮುಖಾಂತರ ಉನ್ನತ ಶಿಕ್ಷಣದಿಂದ ವಂಚಿತರಾದ ಸರ್ಕಾರಿ ಶಾಲೆಯಲ್ಲಿ 10ನೇ ತರಗತಿ ಮತ್ತು ಪಿಯುಸಿಯಲ್ಲಿ ವ್ಯಾಸಂಗ ಮಾಡಿರುವ ಸುಮಾರು 36 ಸಾವಿರ ಹೆಣ್ಣುಮಕ್ಕಳಿಗೆ ಯಾವುದೇ ಐಟಿಐ ಅಥವಾ ಪದವಿ ಶಿಕ್ಷಣ ಪಡೆಯಲು ಅನುಕೂಲವಾಗುವಂತೆ ಪ್ರತಿ ವರ್ಷ ಸುಮಾರು 30 ಸಾವಿರ ರೂ.ಗಳ ಸ್ಕಾಲರ್ ಶಿಪ್ ನೀಡುವ ಯೋಜನೆಯನ್ನು ಸದ್ಯದಲ್ಲಿಯೇ ಜಾರಿಗೊಳಿಸಲಾಗುವುದು ಎಂದು ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ. ಸುಧಾಕರ್ ತಿಳಿಸಿದರು.

## ಭೋವಿ ನಿಗಮದಲ್ಲಿ 'ಕಮಿಷನ್' ಆರೋಪ: ರವಿಕುಮಾರ್ ರಾಜೀನಾಮೆ

ಬೆಂಗಳೂರು:ಸೆ.5: ರಾಜ್ಯ ಭೋವಿ ಅಭಿವೃದ್ಧಿ ನಿಗಮದಅಧ್ಯಕ್ಷ ಸ್ಥಾನಕ್ಕೆ ಎಸ್.ರವಿಕುಮಾರ್ ರಾಜೀನಾಮೆ ನೀಡಿದ-ರೆ ಎಂದು ವರದಿಯಾಗಿದೆ. ಸಿಎಂ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿರಾಜಿನಾಮೆ ಪತ್ರ ಸಲ್ಲಿಸಿದ್ದಾರೆ ಎಂದು ಹೇಳಲಾಗುತ್ತಿದೆ.



ಕಮಿಷನ್ ವಸೂಲಿ ಆರೋಪಕ್ಕೆ ಗುರಿಯಾಗಿರುವ ಭೋವಿ ನಿಗಮದ ಅಧ್ಯಕ್ಷ ಎಸ್. ರವಿಕುಮಾರ್‌ಗೆರಾಜೀನಾಮೆ ನೀಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ನೀಡಿದ್ದುಈ ಹಿನ್ನೆಲೆಯಲ್ಲಿ ಅವರು ರಾಜೀನಾಮೆ ನೀಡಿದ್ದಾರೆ.ಸುಮಾರು 15 ಕೋಟಿ ರೂ.ವೆಚ್ಚದಲ್ಲಿ ಕರ್ನಾಟಕ ರಾಜ್ಯ ಭೋವಿ ಅಭಿವೃದ್ಧಿ ನಿಗಮವು ಭೂಒಡೆತನ ಯೋಜನೆ ಜಾರಿಗೊಳಿಸಲಾಗಿದ್ದುಈಯೋಜನೆಯಡಿ 60 ಎಕರೆ ಖರೀದಿಸಿ ಫಲಾನುಭವಿಗಳಿಗೆಹಂಚಿಕೆಮಾಡಬೇಕಿತ್ತು. ಈ ಫಲಾನುಭವಿಗಳಿಂದ ಶೇಕಡ 60ರಷ್ಟು ಕಮಿಷನ್ ನಿಗದಿ ಮಾಡಿರುವ ಆರೋಪ ಕೇಳಿ ಬಂದಿತ್ತು. ಈ ಕುರಿತ ವಿಡಿಯೋವೊಂದು ವೈರಲ್‌ಆಗಿತ್ತು.ಈಹಿಂದೆ ಮಾತನಾಡಿದ್ದ ರವಿಕುಮಾರ್, ತಮ್ಮ ವಿರುದ್ಧದಆರೋಪಗಳನ್ನುತಳ್ಳಿ ಹಾಕಿದ್ದರು.ಕೃತಕ ಬುದ್ಧಿಮತ್ತೆ ತಂತ್ರಜ್ಞಾನ ಬಳಸಿ ನನ್ನವಿರುದ್ಧ ಪಿತೂರಿ ನಡೆಸಲಾಗಿದೆ. ಆದರೂ ಪಕ್ಷಕ್ಕೆ ಮುಜುಗರ ಉಂಟಾಗುವುದನ್ನುತಡೆಯಲು ನೈತಿಕ ಹೊಣೆ ಹೊತ್ತು ರಾಜೀನಾಮೆ ಕೊಡಲು ನಿರ್ಧರಿಸಿದ್ದೆ ಎಂದು ಹೇಳಿದ್ದರು. ನಿಗಮದ ಅಧ್ಯಕ್ಷನಾದನಂತರ ನಾನು ಯಾರ ಬಳಿಯೂ ಕಮೀಷನ್ ಪಡೆದಿಲ್ಲ.ಯಾರಿಗೂ ಕೊಟ್ಟಿಲ್ಲ. ಎಐ ತಂತ್ರಜ್ಞಾನ ಬಳಸಿಕೊಂಡು ನನ ್ನಮಾತುಗಳನ್ನುತಿರುಚಲಾಗಿದೆ. ನಿಗಮದ ಕಚೇರಿಯಲ್ಲಿಯೇ ವಿಡಿಯೊ ಚಿತ್ರೀಕರಿಸಿರುವುದು ಅಚ್ಚರಿ ಮೂಡಿಸಿದೆ. ಈ ಪಿತೂರಿಯಲ್ಲಿ ನಿಗಮದ ಅಧಿಕಾರಿಗಳ ಪಾತ್ರವನ್ನು ಅಲ್ಲಗಳೆಯಲಾಗದು. ಮುಖ್ಯಮಂತ್ರಿ ಮತ್ತು ಡಿಸಿಎಂ ಅವರನ್ನು ಭೇಟಿಯಾಗಿ ವಾಸ್ತವ ಏನೆಂಬುದನ್ನು ಮನವರಿಕೆಮಾಡಿಕೊಟ್ಟು ತನಿಖೆ ನಡೆಸುವಂತೆ ಮನವಿ ಮಾಡಲಿದ್ದೇನೆ ಎಂದು ತಿಳಿಸಿದರು.

## ಬುರುಡೆ ಕೊಟ್ಟಿದ್ದು ಮಟ್ಟಣ್ಣನವರ್:ಜಯಂತ್

ಮಂಗಳೂರು:ಸೆ.5: ಧರ್ಮಸ್ಥಳ 'ಬುರುಡೆ' ಪ್ರಕರಣದಲ್ಲಿ ಸ್ಫೋಟಕ ಮಾಹಿತಿಬಹಿರಂಗಗೊಂಡಿದೆ. ಆ ಒಂದು ಬುರುಡೆ ಧರ್ಮಸ್ಥಳದಲ್ಲಿ ನೂರಾರುಕೊಲೆಗಳುನಡೆದಿರಬಹುದಾ ಎಂಬ ಊಹಾಪೋಹಗಳುಹುಟ್ಟಿಕೊಳ್ಳುವಂತೆ ಮಾಡಿತ್ತು. ಆದರೆ ಎಸ್‌ಐಟಿ ತನಿಖೆಯಲ್ಲಿ ಧರ್ಮಸ್ಥಳವಿರುದ್ಧ ನಡೆದ ಒಂದೊಂದೆಷಡ್ಯಂತ್ರಗಳು ಹೊರಬರುತ್ತಿವೆ. ವಿಶೇಷ ತನಿಖಾತಂಡದತನಿಖೆಯ ವೇಳೆ ಬುರುಡೆಯನ್ನು ನಮಗೆಕೊಟ್ಟಿದ್ದುಗಿರೀಶ್ ಮಟ್ಟಣ್ಣನವರ್ ಎಂದು ಮತ್ತೊಬ್ಬ ದೂರುದಾರ ಜಯಂತ್ ಹೇಳಿರುವುದಾಗಿ ಮೂಲಗಳು ತಿಳಿಸಿವೆ. ಧರ್ಮಸ್ಥಳಬುರುಡೆಪ್ರಕರಣಕ್ಕೆ ಸಂಬಂಧಿಸಿದಂತೆಎಸ್‌ಐಟಿ ತನಿಖೆಆರಂಭಿಸಿತ್ತು.ಆದರೆ ಮೊದಲಿಗೆಬುರುಡೆಸಿಕ್ಕಿದ್ದು ಎಲ್ಲಿ ಎಂಬ ಪ್ರಶ್ನೆಗೆ ಉತ್ತರ ಸಿಕ್ಕಿಲ್ಲಆದರೆ ಪ್ರಕರಣ ಸಂಬಂಧ ದೂರುದಾರ ಜಯಂತ್ ನನ್ನು ವಿಚಾರಣೆಗೆ ಒಳಪಡಿದ್ದು ವಿಚಾರಣೆ ವೇಳೆ ಬುರುಡೆ ಸಿಕ್ಕಿದ್ದು ಎಲ್ಲಿ ಎಂಬ ಪ್ರಶ್ನೆಗೆ ಜಯಂತ್ ಬುರುಡೆ ತಂದುಕೊಟ್ಟಿದ್ದು ಗಿರೀಶ್ ಮಟ್ಟಣ್ಣನವರ್ ಎಂದು ಹೇಳಿರುವುದಾಗಿ ತಿಳಿದುಬಂದಿದೆ.ಸೌಜನ್ಯ ಕೊಲೆ ಮತ್ತು ಅತ್ಯಾಚಾರ ಪ್ರಕರಣದಲ್ಲಿ ನಿರಂತರವಾಗಿ ಹೋರಾಟ ನಡೆಸುತ್ತಿರುವ ಮಹೇಶ್ ಶೆಟ್ಟಿ ತಿಮರೋಡಿ ತೋಟದಿಂದ ಬುರುಡೆ ತಂದು ನ್ಯಾಯಾಲಯಕ್ಕೆ ನೀಡಿರುವ ಅನುಮಾನ ವ್ಯಕ್ತವಾಗಿತ್ತು. ನ್ಯಾಯಾಲಯಕ್ಕೆ ಹಾಜರುಪಡಿಸಿದ ಬುರುಡೆ ಜೊತೆ ಇದ್ದ ಮಣ್ಣುಗಳನ್ನು ವಿಧಿವಿಜ್ಞಾನ ಪ್ರಯೋಗಾಲಯಕ್ಕೆ ಕಳುಹಿಸಲಾಗಿತ್ತು. ಎಫ್‌ಎಸ್‌ಎಲ್ ಲ್ಯಾಬ್‌ನಲ್ಲಿ ಧರ್ಮಸ್ಥಳದ ಅಸುಪಾಸಿನಲ್ಲಿ ಇರುವ ಮಣ್ಣಿಗೂ ಬುರುಡೆಯಲ್ಲಿರುವ ಮಣ್ಣಿನ ಠಿಉಗೂ ಸಾಮ್ಯತೆ ಇಲ್ಲ ಎಂಬ ವಿಚಾರ ದೃಢಪಟ್ಟಿತ್ತು.ಹೀಗಾಗಿ ಮಾಸ್ಕ್ ಮ್ಯಾನ್ ಚಿನ್ನಯ್ಯನ ವಿಚಾರಣೆಯನ್ನು ಎಸ್‌ಐಟಿ ತೀವ್ರಗೊಳಿಸಿತ್ತು. ಆಗ ಚಿನ್ನಯ್ಯ ಸತ್ಯ ಒಪ್ಪಿಕೊಂಡು ಷಡ್ಯಂತ್ರದ ಭಾಗವಾಗಿ ಬುರುಡೆ ತರಲಾಗಿತ್ತು. ಅದನ್ನು ತಿಮರೋಡಿ ತೋಟದಿಂದ ತಂದಿರುವುದಾಗಿ ಚಿನ್ನಯ್ಯ ಹೇಳಿದ್ದನು. ಈ ವಿಚಾರ ಬೆಳಕಿಗೆ ಬಂದ ಬೆನ್ನಲ್ಲೇ ತಿಮರೋಡಿ ನಿವಾಸಕ್ಕೆ ಮಹಜರು ಮಾಡಲು ಬಂದಿದ್ದಾಗ ಚಿನ್ನಯ್ಯ ರಬ್ಬರ್ ತೋಟದ ಒಂದು ಜಾಗವನ್ನು ತೋರಿಸಿ ಇಲ್ಲಿಂದ ಬುರುಡೆ ತೆಗೆದಿರುವುದಾಗಿ ತಿಳಿಸಿದ್ದನು.



## ಮತಪತ್ರ ಬಳಕೆಗೆ ಚುನಾವಣಾ ಆಯೋಗ ಸಿದ್ಧ

ಬೆಂಗಳೂರು:ಸೆ.5:ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಇವಿಎಂ ಬದಲಿಗೆ ಮತಪತ್ರ ಬಳಸಲು ರಾಜ್ಯ ಚುನಾವಣಾ ಆಯೋಗ ಸಿದ್ಧವಿದೆ. ಈಗಿರುವ ಕೆಲ ನಿಯಮಗಳಿಗೆ ರಾಜ್ಯಸರ್ಕಾರ ತಿದ್ದುಪಡಿ ಮಾಡಿದರೆ ಬ್ಯಾಲೆಟ್ ಪೇಪರನ್ನೇ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಬಳಸಲು ಕ್ರಮ ತೆಗೆದುಕೊಳ್ಳುತ್ತೇವೆ ಎಂದು ರಾಜ್ಯ ಚುನಾವಣಾ ಮುಖ್ಯ ಆಯುಕ್ತ ಜಿ.ಎಸ್. ಸಂಗ್ರೇಸಿ ಅವರು ಹೇಳಿದ್ದಾರೆ.ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ರಾಜ್ಯ ಚುನಾವಣಾ ಆಯೋಗವೇ ಮತಪಟ್ಟಿಯನ್ನು ಸಿದ್ಧಪಡಿಸಲು ಅವಕಾಶವಿದೆ. ರಾಜ್ಯ ಚುನಾವಣಾ ಆಯೋಗ ಒಂದು ಸಾಂವಿಧಾನಿಕ ಹಾಗೂ ಸ್ವಾಯತ್ತ ಸಂಸ್ಥೆ ಇವಿಎಂ ಬದಲು ಮತಪತ್ರದ ಮೂಲಕ ಚುನಾವಣೆ ನಡೆಸಲು ಕಾಯ್ದೆ ನಿಯಮಗಳಿಗೆ ತಿದ್ದುಪಡಿ ಮಾಡಿದರೆ ಅದರ ಪ್ರಕಾರವೇ ನಾವು ಚುನಾವಣೆ ಮಾಡಬೇಕಾಗುತ್ತದೆ ಎಂದರು.ವಿಧಾನಸಭೆ ಹಾಗೂ ಲೋಕಸಭಾ ಚುನಾವಣೆಯಲ್ಲಿ ತಿದ್ದುಪಡಿ ಮಾಡಬೇಕಾದರೆ ಭಾರತೀಯ ಚುನಾವಣಾ ಆಯೋಗದ ಅನುಮತಿ ಬೇಕಾಗುತ್ತದೆ. ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಭಾರತೀಯ ಚುನಾವಣಾ ಆಯೋಗದ ಅನುಮತಿ ಬೇಕಿಲ್ಲ. ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಮತಪತ್ರ ಬಳಸುವುದರಿಂದ ಮತದಾರರಿಗೆ ಗೊಂದಲವಾಗುವ ಸಾಧ್ಯತೆ ಕಡಿಮೆ.ಈ ಹಿಂದೆ ಹಲವು ಚುನಾವಣೆಗಳಲ್ಲಿ ಮತಪತ್ರ ಬಳಕೆಯಾಗಿದೆ ಎಂದರು.



## ಲವರ್ ಜೊತೆ 3 ಮಕ್ಕಳ ತಾಯಿ ಪರಾರಿ

ಬೆಂಗಳೂರು:ಸೆ.5: ಬೆಂಗಳೂರಿನಲ್ಲಿ ಮತ್ತೊಂದು ಅಕ್ರಮ ಸಂಬಂಧ ಪ್ರಕರಣ ವರದಿಯಾಗಿದ್ದು, ಮೂರು ಮಕ್ಕಳ ತಾಯಿಯೊಬ್ಬಳು ಲವರ್ ಜೊತೆ ಪರಾರಿಯಾಗಿರುವ ಪ್ರಕರಣ ವರದಿಯಾಗಿದೆ.

ಬೆಂಗಳೂರಿನ ಆನೇಕಲ್ ತಾಲೂಕಿನ ಬಸವನಪುರದಲ್ಲಿ ಮೂರು ಮಕ್ಕಳ ತಾಯಿಯೊಬ್ಬಳು ಲವರ್ ಜೊತೆ ಪರಾರಿಯಾಗಿದ್ದು, ಈ ಕುರಿತು ತನ್ನ ಗಂಡ ಮಾಧ್ಯಮಗಳೊಂದಿಗೆ ಕಷ್ಟ ಹೇಳಿಕೊಂಡು ಕಣ್ಣೀರು ಹಾಕಿದ್ದಾರೆ.

ಅಗ್ನಿಸಾಕ್ಷಿಯಾಗಿ ಸಪ್ತಪದಿ ತುಳಿದು ಜೀವನಪೂರ್ತಿ ಜೊತೆಗಿರುತ್ತೇನೆ ಎಂದು ಬಂದವಳು ಲವರ್ ಗೋಸ್ಕರ ಮೂರು ಮಕ್ಕಳು ಸೇರಿ ಗಂಡನನ್ನು ಬಿಟ್ಟು ಓಡಿ ಹೋಗಿರುವಂತಹ ಘಟನೆ ಬನ್ನೇರುಘಟ್ಟ ಸಮೀಪದ ಬಸವನಪುರ ಗ್ರಾಮದಲ್ಲಿ ನಡೆದಿದೆ. ನನಗೆ ಪ್ರಿಯಕರನೇ ಬೇಕೆಂದು ಓಡಿಹೋದ ಹೆಂಡತಿಗಾಗಿ ಗಂಡ ಕಣ್ಣೀರು ಹಾಕಿದ್ದಾರೆ.'ಪತಿ ನೀಡಿರುವ ಮಾಹಿತಿಯಂದೆ ಇದೇ ಬಸವನಪುರ ನಿವಾಸಿ ಸಂತೋಷ್ ಎಂಬಾತ ನಾನು ಕೆಲಸಕ್ಕೆ ಹೋದ ಬಳಿಕ ನನ್ನ ಹೆಂಡತಿಯನ್ನು ಪುಸಲಾಯಿಸಿ ಆಕೆಯನ್ನು ಬಲೆಗೆ ಬೀಳಿಕೊಂಡಿದ್ದಾನೆ. ನಾನು ಕೆಲಸಕ್ಕೆ ಹೋದ ಮನೆಗೆ ಬಂದು ಆಕೆಯೊಂದಿಗೆ ಚಕ್ಕಂದವಾಡುತ್ತಿದ್ದ. ಈ ಕುರಿತ ಸಾಕಷ್ಟು ವಿಡಿಯೋ ಮತ್ತು ಫೋಟೋಗಳು ನನ್ನ ಬಳಿ ಇವೆ ಎಂದು ಪತಿ ಹೇಳಿಕೊಂಡಿದ್ದಾರೆ.

ಮದುವೆಯಾಗಿ 11 ವರ್ಷ ಆಯಿತು. ನಮಗೆ ಮೂರು ಜನ ಮಕ್ಕಳಿದ್ದಾರೆ. ಈಗ ನನ್ನ ಹೆಂಡತಿ ಸಂತೋಷ್ ಜೊತೆ ಪರಾರಿಯಾಗಿದ್ದಾಳೆ. ಈ ಕುರಿತು ಅವನನ್ನು ವಿಚಾರಿಸಿದರೆ ಆಕೆಯೇ ನನ್ನೊಂದಿಗೆ ಬಂದಿದ್ದಾಳೆ ಎಂದು ನಿರ್ಲಕ್ಷ್ಯ ಉತ್ತರ ನೀಡಿದ್ದಾನೆ ಎಂದು ಪತಿ ಹೇಳಿದ್ದಾನೆ. ಕುರಿತು ಪೊಲೀಸ್ ದೂರು ದಾಖಲಿಸುವುದಾಗಿ ಪತಿ ಕಣ್ಣೀರು ಹಾಕಿದ್ದಾರೆ.

## ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸುವವರಿಗೆ ಗ್ಯಾರಂಟಿ ಯೋಜನೆ ಕೊಡಿ: ಕೆ.ಎಸ್.ಬಸವಂತಪ್ಪ

ದಾವಣಗೆರೆ:ಸೆ.5: ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸುವವರಿಗೆ ಮಾತ್ರ ಗ್ಯಾರಂಟಿ ಯೋಜನೆ ಕೊಡಿ ಎಂದು ಶಾಸಕ ಕೆ.ಎಸ್.ಬಸವಂತಪ್ಪ ಸರ್ಕಾರಕ್ಕೆ ಮನವಿ ಮಾಡಿದ್ದಾರೆ.ದಾವಣಗೆರೆಯ ಪಾರ್ವತಮ್ಮ ಶಾಮನೂರು ಶಿವಶಂಕರಪ್ಪ ಕಲ್ಯಾಣ ಮಂಟಪದಲ್ಲಿ ನಡೆದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಈ ವೇಳೆ, ಪೋಷಕರಿಗೆ ತಮ್ಮ ಮಕ್ಕಳನ್ನು ಕಡ್ಡಾಯವಾಗಿ ಸರ್ಕಾರಿ ಶಾಲೆಗೆ ಸೇರಿಸಿದರೆ ಮಾತ್ರ ಗ್ಯಾರಂಟಿ ಕೊಡ್ತಿವೆ ಎಂದು ಸರ್ಕಾರ ಘೋಷಿಸಬೇಕು. ಆಗ ಸರ್ಕಾರಿ ಶಾಲೆ ಮಕ್ಕಳ ಹಾಜರಾತಿ ಸಂಖ್ಯೆ ಹೆಚ್ಚಳ ಆಗುತ್ತದೆ ಎಂದಿದ್ದಾರೆ.




## ಜಿಎಸ್‌ಟಿ ದರ ಇಳಿಕೆಗೆ ರಾಜ್ಯ ಸರ್ಕಾರಗಳ ಒತ್ತಡ ಕಾರಣ:ಸಿಎಂ

ಬೆಂಗಳೂರು:ಸೆ.5: ಜಿಎಸ್ ಟಿ ದರ ಇಳಿಕೆಗೆ ರಾಜ್ಯ ಸರ್ಕಾರಗಳು ಸತತವಾಗಿ ಹೇರುತ್ತಾ ಬಂದಿರುವ ಒತ್ತಡ ಮುಖ್ಯ ಕಾರಣ ಎನ್ನುವುದು ಸ್ಪಷ್ಟವಾಗಿದೆ. ಇದನ್ನು ಪ್ರಾರಂಭದಲ್ಲಿಯೇ ಮಾಡಿದ್ದರೆ ದೇಶದ ಜನತೆ "ಗಬ್ಬರ್ ಸಿಂಗ್ ತೆರಿಗೆ"ವ್ಯವಸ್ಥೆಯಿಂದ ಪಡಬಾರದ ಕಷ್ಟಗಳನ್ನು ಪಡಬೇಕಾದ ಪರಿಸ್ಥಿತಿ ಇರುತ್ತಿರಲಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಸಿದ್ದರಾಮಯ್ಯ, ತೆರಿಗೆದಾರ ಜನತೆ ಮತ್ತು ವ್ಯಾಪಾರಿ ವರ್ಗದ ಮೇಲಿನ ಆರ್ಥಿಕ ಭಾರ ಮತ್ತು ಅನುಷ್ಠಾನದ ಜಂಜಾಟವನ್ನು ತಗ್ಗಿಸಲು ಅತ್ಯಗತ್ಯವಾಗಿದ್ದ ತೆರಿಗೆ ಸುಧಾರಣೆಯನ್ನು ಜಾರಿಗೆ ತರುವ ಸರಕು ಸೇವಾ ತೆರಿಗೆ (ಜಿಎಸ್‌ಟಿ) ಮಂಡಳಿಯ ನಿರ್ಧಾರವನ್ನು ಸ್ವಾಗತಿಸುತ್ತೇವೆ ಎಂದಿದ್ದಾರೆ.ಈಗ ಜಿ.ಎಸ್.ಟಿ ಸುಧಾರಣೆಯ ಲಾಭ ಬಳಕೆದಾರ ಜನತೆಗೆ ತಲುಪುವಂತೆ ಮಾಡುವುದು ಕೇಂದ್ರ ಸರ್ಕಾರ ಮತ್ತು ಕೇಂದ್ರ ತೆರಿಗೆ ಮತ್ತು ಸುಂಕ ಮಂಡಳಿ (ಸಿಬಿಐಸಿ)ಯ ಜವಾಬ್ದಾರಿಯಾಗಿದೆ. ಈ ತೆರಿಗೆ ಸುಧಾರಣೆಯನ್ನು ವ್ಯಾಪಾರಿಗಳು ಮತ್ತು ಉದ್ಯಮಿಗಳು ತಮ್ಮ ಲಾಭಾಂಶವನ್ನು ಹೆಚ್ಚುಮಾಡಲು ದುರುಪಯೋಗ ಮಾಡದಂತೆ ತಡೆಯುವ ಹೊಣೆ ಕೂಡಾ ಕೇಂದ್ರ ಸರ್ಕಾರದ್ದಾಗಿದೆ ಎಂದು ಹೇಳಿದ್ದಾರೆ.



# ಅಮಲಾಪೂರ ಗ್ರಾಮದಲ್ಲಿ ಗ್ಯಾರಂಟಿ ಯೋಜನೆಗಳ ಕ್ರಾಂತಿ



ಮಲ್ಲಮ್ಮನುಡಿ ವಾರ್ತೆ ಬೀದರ. ಸೆ. 05: ರಾಜ್ಯ ಸರ್ಕಾರದ ಜನಪರ ಕಾರ್ಯಕ್ರಮಗಳಾದ ಗ್ಯಾರಂಟಿ ಯೋಜನೆಗಳನ್ನು ಪ್ರತಿ ಮನೆಗೂ ತಲುಪಿಸುವ ನಿಟ್ಟಿನಲ್ಲಿ ಮಾನ್ಯ ಮಾಜಿ ಶಾಸಕರಾದ ಸನ್ಮಾನ್ಯ ಶ್ರೀ ಅಶೋಕ ಖೇಣಿ ಸರ್ ರವರ ಮಾರ್ಗದರ್ಶನದಲ್ಲಿ ಬೀದರ ದಕ್ಷಿಣ ಕ್ಷೇತ್ರದ ತಾಲ್ಲೂಕ ಪಂಚ ಗ್ಯಾರಂಟಿ ಉಪಾಧ್ಯಕ್ಷರಾದ ಶ್ರೀ ರಾಜಕುಮಾರ ಮಡಕಿ ಹಾಗೂ ಸದಸ್ಯರ ನೇತೃತ್ವದಲ್ಲಿ ನಮ್ಮ ನಡೆ ಹಳ್ಳಿ ಕಡೆ ಕಾರ್ಯಕ್ರಮವನ್ನು ಬೀದರ ದಕ್ಷಿಣ ವಿಧಾನಸಭಾ ಕ್ಷೇತ್ರದ ಅಮಲಾಪೂರ್ ಗ್ರಾಮದ ವಾರ್ಡ್ ನಂ – 02 ರಲ್ಲಿ ಕರ್ನಾಟಕ ಸರ್ಕಾರದ ಪಂಚ್ ಗ್ಯಾರಂಟಿ ಯೋಜನೆಗಳಾದ, ಅನ್ನಭಾಗ್ಯ ಯೋಜನೆ: ಪಡಿತರ ಚೀಟಿ ತಿದ್ದುಪಡಿಗೆ ಸಂಬಂಧಿಸಿದಂತೆ ಗ್ರಾಮ ಒನ್ ಕೇಂದ್ರಗಳಲ್ಲಿ ಎದುರಾಗುತ್ತಿದ್ದ ತೊಂದರೆಗಳನ್ನು ನಿವಾರಿಸುವಲ್ಲಿ ತಂಡವು ಸಕ್ರಿಯವಾಗಿ ಕೆಲಸ ಮಾಡಿದೆ.

ಅಲ್ಲದೆ, ಕಳ್ಳ ಸಾಗಣಿಕೆಯಂತಹ ಪ್ರಕರಣಗಳ ಬಗ್ಗೆಯೂ ನಿಗಾ ವಹಿಸಿ, ಅಧಿಕಾರಿಗಳ ಗಮನಕ್ಕೆ ತರುತ್ತಿದೆ. ಮತ್ತು ಗೃಹಲಕ್ಷ್ಮಿ, ಶಕ್ತಿ ಯೋಜನೆ, ಗೃಹ ಜ್ಯೋತಿ, ಯುವನಿಧಿ, ಯೋಜನಗಳ ಮಹತ್ವದ ಬಗ್ಗೆ ಮನೆ ಮನೆಗೆ ತೆರಳಿ ಜನರಲ್ಲಿ ತಿಳಿಸಲಾಯಿತು. ಈ ಸಂದರ್ಭದಲ್ಲಿ ಕಮಿಟಿಯ ಸದಸ್ಯರಾದ ಉದಯಕುಮಾರ ಚಟನಳ್ಳಿ, ಶಿವಕುಮಾರ ಕುತ್ತಾಬಬಾದ್, ಮುಖಂಡರಾದ ಜುಬೇರ್ ಪಟೇಲ್, ಮೋಹಿನ್ ಪಠಾಣ್, ಫಿರೋಜ್ ಶೇರಿಕಾರ, ಸಲಾಂ, ಪವನ ಬಾಪೂರೆ ಸೇರಿ ಅನೇಕ ಗ್ರಾಮಸ್ಥರು ಪಾಲ್ಗೊಂಡಿದರು.

# ಗಣೇಶ ಹಬ್ಬದ ಆಚರಣೆ: ಮದ್ಯ ಮಾರಾಟ ನಿಷೇಧಿಸಿ ಡಿ.ಸಿ. ಆದೇಶ

ಕಲಬುರಗಿ,ಸೆ.05–ಗಣೇಶ ಹಬ್ಬದ ಆಚರಣೆ ಹಿನ್ನೆಲೆಯಲ್ಲಿ ಕಲಬುರಗಿ ಜಿಲ್ಲೆಯಾದ್ಯಂತ ಪ್ರತಿಷ್ಠಾಪನೆಗೊಂಡ ಗಣೇಶ ವಿಗ್ರಹಗಳ (11ನೇ ದಿವಸದ) ವಿಸರ್ಜನೆಯು ಸೆಪ್ಟೆಂಬರ್ 6 ರಂದು ಶನಿವಾರ ನಡೆಯಲಿದೆ. ಈ ಸಂದರ್ಭದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಶಾಂತಿ ಕಾಪಾಡಲು ಅನುಕೂಲವಾಗುವಂತೆ ಕಲಬುರಗಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾದಂಡಾಧಿಕಾರಿಗಳಾದ ಬಿ. ಫೌಜಿಯಾ ತರನ್ನುಮ್ ಅವರು ಕಲಬುರಗಿ ನಗರ ಸೇರಿದಂತೆ ಜಿಲ್ಲೆಯಾದ್ಯಂತ 2025ರ ಸೆಪ್ಟೆಂಬರ್ 6ರ ಬೆಳಗಿನ 6 ಗಂಟೆಯಿಂದ ಸೆಪ್ಟೆಂಬರ್ 7ರ ಬೆಳಗಿನ 6 ಗಂಟೆಯವರೆಗೆ ಎಲ್ಲಾ ತರಹದ ಮದ್ಯ ಮಾರಾಟವನ್ನು ನಿಷೇಧಿಸಿ ಅವರು ಆದೇಶ ಹೊರಡಿಸಿದ್ದಾರೆ. ಕಲಬುರಗಿ ನಗರ ಸೇರಿದಂತೆ ಜಿಲ್ಲೆಯಾದ್ಯಂತ ಎಲ್ಲಾ ತರಹದ ಮಾರಾಟವನ್ನು ನಿಷೇಧಿಸಿ ಹಾಗೂ ಬಾರ್ ಮತ್ತು ರೆಸ್ಟೋರೆಂಟ್‌ಗಳನ್ನು ಮುಚ್ಚುವಂತೆ ಅವರು ಆದೇಶ ಹೊರಡಿಸಿದ್ದಾರೆ. ಈ ಹಬ್ಬದ ಸಂದರ್ಭದಲ್ಲಿ ಶಾಂತಿ, ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ಉದ್ದೇಶದಿಂದ ಕರ್ನಾಟಕ ಅಬಕಾರಿ ಕಾಯ್ದೆ 1965ರ ಕಲಂ 21ರ ಅನ್ವಯ ಈ ಆದೇಶ ಹೊರಡಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

# ಸೆ. 7 ರಂದು ಜಿಲ್ಲಾ ವಿಜ್ಞಾನ ಕೇಂದ್ರದಲ್ಲಿ ದೂರದರ್ಶಕದ ಮೂಲಕ ಒಟ್ಟು ಚಂದ್ರಗ್ರಹಣದ ವೀಕ್ಷಣೆಗೆ ಅವಕಾಶ

ಕಲಬುರಗಿ,ಸೆ.5–ಕಲಬುರಗಿ ಜಿಲ್ಲಾ ವಿಜ್ಞಾನ ಕೇಂದ್ರದ ವತಿಯಿಂದ ಇದೇ ಸೆಪ್ಟೆಂಬರ್ 7 ರಂದು ರಾತ್ರಿ 9 ರಿಂದ 11 ಗಂಟೆಯವರೆಗೆ ದೂರದರ್ಶಕದ ಮೂಲಕ 'ಸಂಪೂರ್ಣ ಚಂದ್ರಗ್ರಹಣ' ಎಂದು ಕರೆಯಲ್ಪಡುವ ಅಪರೂಪದ ವಿಶೇಷ ಆಕಾಶ ವೀಕ್ಷಣಾ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಕಲಬುರಗಿ ಜಿಲ್ಲಾ ವಿಜ್ಞಾನ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬ್ಲಡ್ ಮೂನ್ ಎಂದೂ ಕರೆಯಲ್ಪಡುವ ಸಂಪೂರ್ಣ ಚಂದ್ರಗ್ರಹಣವು ಸೆಪ್ಟೆಂಬರ್ 7 ಹಾಗೂ 8 ರಂದು ರಾತ್ರಿ ಕರ್ನಾಟಕದ ಕಲಬುರಗಿಯಲ್ಲಿ ಗೋಚರಿಸುತ್ತದೆ. ಗ್ರಹಣವು ಸೆಪ್ಟೆಂಬರ್ 7 ರಂದು ರಾತ್ರಿ 8.58 ಕ್ಕೆ ಪ್ರಾರಂಭವಾಗುತ್ತದೆ. ಗ್ರಹಣದ ಗರಿಷ್ಠ ಬಿಂದುವು ರಾತ್ರಿ 11.41 ಕ್ಕೆ ಸಂಭವಿಸುತ್ತದೆ ಮತ್ತು ಇಡೀ ವೀಕ್ಷಣೆಯು ಸೆಪ್ಟೆಂಬರ್ 8 ರಂದು ಬೆಳಿಗ್ಗೆ 2:25 ರ ಸುಮಾರಿಗೆ ಕೊನೆಗೊಳ್ಳುತ್ತದೆ. ಚಂದ್ರನು ಭೂಮಿಯ ನೆರಳಿನ ಮೂಲಕ ಹಾದು ಹೋಗುವಾಗ ಗಾಢ ಕೆಂಪು–ಕಿತ್ತಳೆ ಬಣ್ಣಕ್ಕೆ ತಿರುಗುತ್ತಾನೆ ಹಾಗೂ ಇದು ವಾತಾವರಣದಲ್ಲಿ ಸೂರ್ಯನ ಬೆಳಕಿನ ಚದುರುವಿಕೆಯಿಂದ ಉಂಟಾಗುವ ಪರಿಣಾಮವಾಗಿದೆ.

ಈ ವೀಕ್ಷಣಾ ಕಾರ್ಯಕ್ರಮವು ಆಕಾಶದ ಸ್ಥಿತಿಗತಿಗೆ ಒಳಪಟ್ಟಿದ್ದು, ಎಲ್ಲಾ ವೀಕ್ಷಕರಿಗೆ ಉಚಿತ ಪ್ರವೇಶವಿರುತ್ತದೆ. ಈ ಅಪರೂಪದ ಆಕಾಶ ವೀಕ್ಷಣಾ ಕಾರ್ಯಕ್ರಮವು ವಿದ್ಯಾರ್ಥಿಗಳು, ಸಾರ್ವಜನಿಕರು ಮತ್ತು ಖಗೋಳ ವಿಜ್ಞಾನ ಉತ್ಸಾಹಿಗಳಿಗೆ ನಮ್ಮ ನೈಸರ್ಗಿಕ ಉಪಗ್ರಹದ ಸೌಂದರ್ಯವನ್ನು ವೀಕ್ಷಿಸಲು ಮತ್ತು ಅರ್ಥ ಮಾಡಿಕೊಳ್ಳಲು ಒಂದು ಅದ್ಭುತ ಅವಕಾಶ ಕಲ್ಪಿಸಲಾಗಿದೆ.

ಆಸಕ್ತ ವಿದ್ಯಾರ್ಥಿಗಳು, ಶಿಕ್ಷಕರು ಮತ್ತು ಸಾರ್ವಜನಿಕರು ತಮ್ಮ ಕುಟುಂಬದ ಸದಸ್ಯರೊಂದಿಗೆ ಈ ಕಾರ್ಯಕ್ರಮದಲ್ಲಿ ಭಾಗವಹಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವಿಜ್ಞಾನ ಕೇಂದ್ರ ದೂರವಾಣಿ ಸಂಖ್ಯೆ 08472–270608, ಮೊಬೈಲ್ ಸಂಖ್ಯೆ 9788078048 ಗೆ ಸಂಪರ್ಕಿಸಲು ಕೋರಲಾಗಿದೆ.

# 5 ಲಕ್ಷ ರೂ.ವರೆಗೆ ಯುಪಿಐ ವಹಿವಾಟಿಗೆ ಅವಕಾಶ





ನವದೆಹಲಿ, ಸೆ.5– ಡಿಜಿಟಲ್ ಪಾವತಿಗಳ ಬಳಕೆ ದಿನೇದಿನೇ ವಿಸ್ತರಿಸುತ್ತಿರುವ ಹಿನ್ನೆಲೆಯಲ್ಲಿ ಯುಪಿಐ ಬಳಕೆದಾರರಿಗೆ ಭಾರತೀಯ ರಾಷ್ಟ್ರೀಯ ಪಾವತಿ ನಿಗಮ ಮಹತ್ವದ ನಿರ್ಧಾರ ಕೈಗೊಂಡಿದ್ದು, ಇತ್ತೀಚಿನವರೆಗೂ ಒಂದೇ ಬಾರಿ ಗರಿಷ್ಠ 1 ಲಕ್ಷ ರೂಪಾಯಿ ಪಾವತಿ ಮಿತಿ ಇತ್ತು. ಈಗ ಮಿತಿಯನ್ನು 5 ಲಕ್ಷ ರೂಪಾಯಿಗೆ ಏರಿಸಲಾಗಿದೆ. ಜೊತೆಗೆ, ದಿನವೊಂದಕ್ಕೆ ಗರಿಷ್ಠ 10 ಲಕ್ಷ ರೂಪಾಯಿವರೆಗೆ ವಹಿವಾಟು ನಡೆಸಲು ಅವಕಾಶ ನೀಡಲಾಗಿದೆ.

ಈ ಹೊಸ ಪಾವತಿ ಮಿತಿಗಳು ಸೆಪ್ಟೆಂಬರ್ 15ರಿಂದಲೇ ಜಾರಿಯಾಗಲಿವೆ. ತೆರಿಗೆ ಪಾವತಿ, ಸಾಲದ ಇಎಂಐ, ದೈನಂದಿನ ವಹಿವಾಟು ಮುಂತಾದ ಪ್ರಮುಖ ಹಣಕಾಸು ವ್ಯವಹಾರಗಳಲ್ಲಿ ಗ್ರಾಹಕರಿಗೆ ಇದರಿಂದ ದೊಡ್ಡ ಮಟ್ಟದಲ್ಲಿ ಅನುಕೂಲವಾಗಲಿದೆ.

ಆದರೆ, ಈ ಹೆಚ್ಚುವರಿ ಮಿತಿ ವ್ಯಾಪಾರಿಗಳಿಗೆ (B2B) ಮಾಡುವ ಪಾವತಿಗಳಿಗೆ ಮಾತ್ರ ಅನ್ವಯವಾಗುತ್ತದೆ. ವ್ಯಕ್ತಿಯಿಂದ ವ್ಯಕ್ತಿಗೆ (P2P) ಮಾಡುವ ಪಾವತಿಗೆ ಮಿತಿಯು ಹಳೆಯದಂತೆ 1 ಲಕ್ಷ ರೂಪಾಯಿ ಮುಂದುವರಿಯಲಿದೆ ಎಂದು ನಿಗಮ ತಿಳಿಸಿದೆ.

ಡಿಜಿಟಲ್ ಪಾವತಿಯ ಬಳಕೆಯ ಹೆಚ್ಚಳಕ್ಕೆ ಸಾಕ್ಷಿಯಾಗಿ, ಈ ವರ್ಷ ಆಗಸ್ಟ್ ತಿಂಗಳಲ್ಲಿ 2,000 ಕೋಟಿಗೂ ಅಧಿಕ ಯುಪಿಐ ವಹಿವಾಟುಗಳು ನಡೆದಿದ್ದು, ಇದರ ಒಟ್ಟು ಮೊತ್ತ 24.85 ಲಕ್ಷ ಕೋಟಿ ರೂಪಾಯಿ ತಲುಪಿದೆ. ಹಿಂದಿನ ವರ್ಷಕ್ಕೆ ಹೋಲಿಕೆ ಮಾಡಿದರೆ, ಆಗಸ್ಟ್ ತಿಂಗಳಲ್ಲಿ ಯುಪಿಐ ವಹಿವಾಟಿನಲ್ಲಿ 34% ಏರಿಕೆ ದಾಖಲಾಗಿದೆ.

# ಮೋದಿ-ಟ್ರಂಪ್ ಸಂಬಂಧ ಅಂತ್ಯ




ನ್ಯೂಯಾರ್ಕ್ /ವಾಷಿಂಗ್ಟನ್,ಸೆ.5– ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಭಾರತದ ಪ್ರಧಾನಿ ನರೇಂದ್ರ ಮೋದಿ ಅವರ ವೈಯಕ್ತಿಕ ಸಂಬಂಧ ಮುಗಿದ ಅಧ್ಯಾಯ ಎಂದು ಅಮೆರಿಕದ ಮಾಜಿ ರಾಷ್ಟ್ರೀಯ ಭದ್ರತಾ ಸಲಹೆಗಾರ ಜಾನ್ ಬೋಲ್ಟನ್ ಹೇಳಿದ್ದಾರೆ,

ಕಳೆದ ಎರಡು ದಶಕಗಳಿಗೂ ಹೆಚ್ಚು ಕಾಲದಲ್ಲಿ ಭಾರತ–ಅಮೆರಿಕ ಸಂಬಂಧಗಳಲ್ಲಿ ಬಹುಶಃ ಅತ್ಯಂತ ಕೆಟ್ಟ ಹಂತದ ಸಂಬಂಧ ಇದಾಗಿದೆ. ಡೊನಾಲ್ಡ್ ಟ್ರಂಪ್ ಅವರ ಸುಂಕ ನೀತಿ ಜಾರಿಯಿಂದ ಒಂದು ಕಾಲದ ಆಪ್ತಮಿತ್ರರ ನಡುವೆ ಎಲ್ಲವೂ ಮುಗಿದ ಅಧ್ಯಾಯವಾಗಿದೆ ಎಂದಿದ್ದಾರೆ

ಅಮೆರಿಕಾ ಅಧ್ಯಕ್ಷ ಡೊನಾಲ್ಡ್ "ಟ್ರಂಪ್ ಜಾಗತಿಕ ನಾಯಕರೊಂದಿಗಿನ ಅವರ ವೈಯಕ್ತಿಕ ಸಂಬಂಧಗಳನ್ನು ದಿನದಿಂದ ದಿನಕ್ಕೆ ಅಳಸಿಕೊಳ್ಳುತ್ತಿದ್ದಾರೆ. ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರಿಂದ ಹಿಡಿದು ಭಾರತದ ಪ್ರಧಾನಿ ನರೇಂದ್ರ ಮೋದಿ ಅವರ ತನಕ ಸಂಬಂಧ ಹಳಸಿಕೊಳ್ಳುತ್ತಿದೆ ಎಂದು ತಿಳಿಸಿದ್ದಾರೆ.

ಡೊನಾಲ್ಡ್ "ಟ್ರಂಪ್ ಅವರು ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ವೈಯಕ್ತಿಕವಾಗಿ ಉತ್ತಮ ಸಂಬಂಧ ಹೊಂದಿದ್ದರು. ಅದು ಈಗ ಮುಗಿದ ಹೋದ ಅಧ್ಯಾಯವಾಗಿದೆ. ಇದು ಇತರೆ ಜಾಗತಿಕ ನಾಯಕರಿಗೆ ಉತ್ತಮ ಪಾಠವಾಗಿದೆ. ಇಂಗ್ಲೆಂಡ್ ಪ್ರಧಾನಿ ಕೀರ್ ಸ್ಟಾರ್ಮರ್, ಉತ್ತಮ ವೈಯಕ್ತಿಕ ಸಂಬಂಧವೂ ಈಗ ಹಳಸುವ ಹಂತಕ್ಕೆ ಬಂದಿದೆ ಎಂದಿದ್ದಾರೆ.

ಡೊನಾಲ್ಡ್ ಟ್ರಂಪ್ ಸೆಪ್ಟೆಂಬರ್ 17 ರಿಂದ 19 ರವರೆಗೆ ಇಂಗ್ಲೆಂಡ್‌ಗೇ ಭೇಟಿ ನೀಡಲಿದ್ದು ಅಮೇರಿಕಾ ಮತ್ತು ಇಂಗ್ಲೆಂಡ್ ನಡುವಿನ ಸಂಬಂಧವನ್ನು ಸುಧಾರಿಸುವ ನಿಟ್ಟಿನಲ್ಲಿ ಗಮನ ಹರಿಸುವ ಸಾಧ್ಯತೆ ಇದೆ ಎನ್ನಲಾಗಿದೆ.

# ಸಮಾಜವನ್ನು ಉತ್ತಮ ಮಾರ್ಗದಲ್ಲಿ ಕೊಂಡ್ಯೊಯಲು ಶಿಕ್ಷಕರೇ ರೂವಾರಿಗಳು:ಸುರೇಖಾ



ಮಲ್ಲಮ್ಮನುಡಿ ವಾರ್ತೆ ಬೀದರ, ಸೆ.05: ಬೀದರ ವಿಶ್ವವಿದ್ಯಾಲಯದಲ್ಲಿ ಡಾ. ಸರ್ವಪಲ್ಲಿ ರಾಧಾಕೃಷ್ಣನ ರವರ ಭಾವ ಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಜನ್ಮದಿನಾಚರಣೆ ಹಾಗೂ ಶಿಕ್ಷಕರ ದಿನಾಚರಣೆಯನ್ನು ಆಚರಿಸಲಾಯಿತು. ಸದರಿ ಕಾರ್ಯಕ್ರಮದಲ್ಲಿ ಗೌರವಾನ್ವಿತ ಕುಲಸಚಿವರು(ಆಡಳಿತ) ಸುರೇಖಾ ಕೆ.ಎ.ಎಸ್ (ಹಿ ಶ್ರೇ), ಬೀದರ ವಿಶ್ವವಿದ್ಯಾಲಯದ ವಿಶೇಷಾಧಿಕಾರಿಗಳಾದ ಡಾ. ರವಿಂದ್ರನಾಥ ವಿ ಗಬಾಡಿ, ಸಮಾಜಕಾರ್ಯ ಅಧ್ಯಯನ ವಿಭಾಗದ ಉಪನ್ಯಾಸಕರಾದ ಅರುಣಕುಮಾರ ಬೇಂದ್ರೆ, ರಾಸಾಯನ ಶಾಸ್ತ್ರ ವಿಭಾಗದ ಉಪನ್ಯಾಸಕರಾದ ಡಾ. ತುಕಾರಾಮ ಮೇತ್ರೆ, ಕನ್ನಡ ವಿಭಾಗದ ಉಪನ್ಯಾಸಕರಾದ ಶ್ರೀ ಶಿವರಾಜ ಪಾಟೀಲ್ ಹಾಗೂ ವಿಶ್ವವಿದ್ಯಾಲಯದ ಬೋಧಕೇತರ ಸಿಬ್ಬಂದಿಗಳು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಈ ಕಾರ್ಯಕ್ರಮದಲ್ಲಿ ಮಾನ್ಯ ಕುಲಸಚಿವರು(ಆಡಳಿತ) ಸುರೇಖಾ ಕೆ.ಎ.ಎಸ್ (ಹಿ.ಶ್ರೇ) ಮಾತನಾಡುತ್ತ ಡಾ. ಸರ್ವಪಲ್ಲಿ ರಾಧಕೃಷ್ಣ ರವರು ಭಾರತದ ಮೊದಲ ಉಪರಾಷ್ಟ್ರಪತಿ ಹಾಗೂ ಎರಡನೇ ರಾಷ್ಟ್ರಪತಿಯಾಗಿ ಕಾರ್ಯನಿರ್ವಹಿಸಿದ್ದು ಸಹ ಅವರು ಶಿಕ್ಷಕ ವೃತ್ತಿಗೆ ತೂರುವಂತಹ ಪ್ರತಿ ಗೌರವ ಇಂದು ನಾವೇಲ್ಲರು ಅವರ ಜನ್ಮದಿನವನ್ನು ಶಿಕ್ಷಕರ ದಿನಾಚರಣೆ ಎಂದು ಆಚರಿಸುತ್ತಿದ್ದೆವೆ. ಆದ್ದರಿಂದ ಈ ದಿವಸ ಶಿಕ್ಷಕರಿಗೆ ಶಿಕ್ಷಕ ಸೇವೆ ಹಾಗೂ ಮನೋಭಾವಕ್ಕೆ ಗೌರವ ನೀಡುವ ಸುದಿನವಾಗಿದೆ. ಪ್ರತಿಯೊಬ್ಬ ವ್ಯಕ್ತಿಯ ಯಶಸ್ಸಿನ ಹಿಂದೆ ಶಿಕ್ಷಕರ ಪಾತ್ರ ಮಹತ್ವದಾಗಿದೆ. ಇಂದು ಸಮಾಜವನ್ನು ಉತ್ತಮ ಮಾರ್ಗದಲ್ಲಿ ಕೊಂಡ್ಯೊಯಲು ಶಿಕ್ಷಕರೆ ರುವಾರಿಯಾಗಿದ್ದು. ವಿದ್ಯಾರ್ಥಿಗಳು ಶಿಕ್ಷಕರಿಗೆ ಹಾಗೂ ತಂದೆ ತಾಯಿ ರವರಿಗೆ ಸದಾ ಗೌರವ ಪೂರ್ವಕವಾಗಿ ನಡೆದುಕೊಳ್ಳಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಬೀದರ ವಿಶ್ವವಿದ್ಯಾಲಯದ ವಿಶೇಷಾಧಿಕಾರಿಗಳಾದ ಡಾ. ರವೀಂದ್ರನಾಥ ವಿ ಗಬಾಡಿ ರವರು ಮಾತನಾಡಿ ಗುರು ಎಂದರೇ ವ್ಯಕ್ತಿಯಲ್ಲ ಒಂದು ಶಕ್ತಿ ಅಜ್ಞಾನದಿಂದ ಸುಜ್ಞಾನದೇಡಗೆ ಕರೆದ್ಯೋಯುವ ಶಕ್ತಿಯೇ ಗುರು. ಎಂದು ಒಳ್ಳೇಯ ಶಿಕ್ಷಣ ಪಾಠವೇ ಸಮಾಜದ ಬೇರು ವಿದ್ಯಾರ್ಥಿ ಭವಿಷ್ಯ ಅಷ್ಟೇ ಅಲ್ಲದೇ ಸಮಾಜದ ಭವಿಷ್ಯದ ಶಿಲ್ಪಿ ಶಿಕ್ಷಕ ಎಂದು ಹೇಳುತ್ತಾ ವಿದ್ಯಾರ್ಥಿಗಳು ಗುರುವನ್ನು ಗೌರವಿಸುತ್ತ ಗುರುವಿನ ಮಾರ್ಗದರ್ಶನದಲ್ಲಿ ಒಳ್ಳೆಯ ಸುಸಂಸ್ಕೃತವಾದ ಸಮಾಜವನ್ನು ಕಟ್ಟಲು ವಿದ್ಯಾರ್ಥಿಳು ಕಂಕಣ ಬದ್ಧರಾಗಬೇಕೇಂದು ಹೇಳಿದರು.

ನಂತರ ಸಮಾಜಕಾರ್ಯ ಅಧ್ಯಯನ ವಿಭಾಗದ ಉಪನ್ಯಾಸಕರಾದ ಅರುಣಕುಮಾರ ಬೇಂದ್ರೆ ರವರು ವಂದನಾರ್ಪಣ ಮಾಡಿದರು.

# ಮಾಡಿದ ಸಮಾಜಮುಖಿ ಕೆಲಸ-ಬರೆದ ಸಾಹಿತ್ಯ ಅಜರಾಮರ



ಕಲಬುರಗಿ:ಸೆ.5: ಮಾಡಿದ ಅಭಿವೃದ್ಧಿ ಕಾರ್ಯಗಳು, ಸಮಾಜಮುಖಿ ಸೇವೆಗಳು ಹಾಗೂ ಬರೆದ ಸಾಹಿತ್ಯ ಅಜರಾಮರವಾಗಿರುತ್ತದೆ ಎಂದು ಶ್ರೀಶೈಲಂ –ಸುಲಫಲ ಮಠದ ಜಗದ್ಗುರು ಡಾ. ಸಾರಂಗಧರ ದೇಶಿಕೇಂದ್ರ ಮಹಾಸ್ವಾಮಿಗಳು ಹೇಳಿದರು.

ನಗರದ ಆಳಂದ ರಸ್ತೆಯ ಬೆಣ್ಣೂರ ಪೆಟ್ರೋಲ್ ಪಂಪ ಎದುರುಗಡೆಯ ಎಸ್.ಬಿ. ಕನ್ವೆನ್ಷನ್ ಹಾಲ್‌ದಲ್ಲಿ ಶುಕ್ರವಾರ ನಡೆದ ನಿವೃತ್ತ ಅಪರ ನಿಬಂಧಕ ಶರಣಬಸಪ್ಪ ಎ. ಬೆಣ್ಣೂರ ಅಭಿನಂದನಾ ಹಾಗೂ ಸಹಕಾರಿ ಜ್ಯೋತಿ ಅಭಿನಂದನಾ ಗ್ರಂಥ ಬಿಡುಗಡೆ ಸಮಾರಂಭದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಕಟ್ಟಿದ ಗುಡಿ–ಗುಂಡಾರಗಳು ಬಿದ್ದು ಹೋಗುತ್ತವೆ, ಆಳಿದ ರಾಜರು ಮಣ್ಣುಪಾಲು ಆಗಿರುತ್ತಾರೆ. ಆದರೆ ಮಾಡಿದ ಕಾರ್ಯಗಳು ಜತೆಗೆ ಬರೆದ ಸಾಹಿತ್ಯಕ್ಕೆ ಭವಿಷ್ಯವಿದೆಯಲ್ಲದೇ ಶಾಶ್ವತವಾಗಿರುತ್ತದೆ. ಇದೇ ಕಾರಣಕ್ಕೆ ಸಾಹಿತ್ಯಕ್ಕೆ ಇಂದಿಗೂ ಬೆಲೆ ಇದೆ ಎಂದರಲ್ಲದೇ ಸಹಕಾರಿ ಕ್ಷೇತ್ರದಲ್ಲಿ ಮೂರು ದಶಕಗಳ ಕಾಲದುದ್ದಕ್ಕೂ ನಿವೃತ್ತ ಅಪರ ನಿಬಂಧಕ ಶರಣಬಸಪ್ಪ ಎ. ಬೆಣ್ಣೂರ ಮಾಡಿದ ಕಾರ್ಯಗಳು ಮಾದರಿಯಾಗಿದ್ದು ಹಾಗೂ ಅವರ ಕಾರ್ಯ ಹಾಗೂ ವ್ಯಕ್ತಿತ್ವ ಕುರಿತು ಹಿರಿಯ ಪತ್ರಕರ್ತ, ಲೇಖಕ ಗುಂಡೂರಾವ್ ಕಡಣಿ ಸಂಪಾಕದಲ್ಲಿ ಹೊರ ತರಲಾದ ಸಹಕಾರ ಜ್ಯೋತಿ ಸಾಹಿತ್ಯ (ಅಭಿನಂದನಾ ಗ್ರಂಥ) ಕೃತಿಯೂ ನಿಜಕ್ಕೂ ದೊಡ್ಡ ಕೊಡುಗೆ–ಯಾಗಿ ಹೊರ ಹೊಮ್ಮಿವೆ ಎಂದು ಹೇಳಿದರು.

ಬೆಣ್ಣೂರ ಸರ್ಕಾರಿ ಅಧಿಕಾರಿಯಾಗಿ ಎಲ್ಲರೊಂದಿಗೆ ಬೆರೆತು, ಸೌಜನ್ಯದೊಂದಿಗೆ ಮಾಡಿರುವ ದೊಡ್ಡ ಕಾರ್ಯಗಳು ಅವರ ವ್ಯಕ್ತಿತ್ವಕ್ಕೆ ಹಿಡಿದ ಕನ್ನಡಿ. ರೈತ ಬಂದರೆ ಆತನೊಂದಿಗೆ, ಅಧಿಕಾರಿಗಳು ಅವರೊಂದಿಗೆ ಅಷ್ಟೇ ಏಕೆ, ಮಠಾಧೀಶರು ಬಂದರೆ ಅವರೊಂದಿಗೆ ಹೇಗೆ ಮಾತನಾಡಬೇಕೆಂಬುದನ್ನು ಬೆಣ್ಣೂರು ಅವರನ್ನು ನೋಡಿ ಈಗಿನವರು ಅರಿಯುವುದು ಅಗತ್ಯವಾಗಿದೆ ಎಂದು ಜಗದ್ಗುರುಗಳು ಕಿವಿ ಮಾತು ಹೇಳಿದರು.

ಕಡಗಂಚಿ ಮಠದ ವೀರತಪಸ್ವಿ ವೀರಭದ್ರ ಶಿವಾಚಾರ್ಯರು, ಚವದಾಪುರಿ ಹಿರೇಮಠದ ರಾಜಶೇಖರ ಶಿವಾಚಾರ್ಯರು ಹಗೂ ಶ್ರೀನಿವಾಸಸರಡಗಿಯ ಡಾ. ಅಪ್ಪಾರಾವ ದೇವಿ ಮುತ್ಯಾ ಅವರು ಸಮ್ಮುಖತೆ ವಹಿಸಿ, ಶರಣಬಸಪ್ಪ ಅವರು ತಮ್ಮ ತಂದೆಯಂತೆ ಹೆಸರು ಮಾಡಿದ್ದಾರೆ. ನಿವೃತ್ತಿ ನಂತರವೂ ಹತ್ತಾರು ಸಮಾಜಮುಖಿ ಕಾರ್ಯಗಳು ಮುಂದುವರೆಯಲಿ ಎಂದು ಹೇಳಿದರು.

ಮಾಜಿ ಸಚಿವ ಎಸ್.ಕೆ. ಕಾಂತಾ ಸಮಾರಂಭ ಉದ್ಘಾಟಿಸಿ ಹಾಗೂ ಅಭಿನಂದನಾ ಗ್ರಂಥ ಬಿಡುಗಡೆಗೊಳಿಸಿ, ಸರ್ಕಾರಿ ಅಧಿಕಾರಿಗಳಿಗೆ ಒಳ್ಳೆಯವರು ಇಲ್ಲವೇ ಕೆಟ್ಟವರು ಎಂಬ ಎರಡೇ ಹೆಸರು ಬರುತ್ತವೆ. ಬೆಣ್ಣೂರ ಅವರ ಒಳ್ಳೆಯವರು ಎಂಬ ಹೆಸರು ಗಳಿಸಿದವರು. ಹೆಸರು ಕೆಡಿಸಿಕೊಂಡಿಲ್ಲ. ಪ್ರಮುಖವಾಗಿ ಸಾಕಷ್ಟು ರೈತರಿಗೆ ಸಹಾಯ ಮಾಡಿದ್ದಾರೆ ಎಂದು ವಿವರಣೆ ನೀಡಿದರು.

ಕಲಬುರಗಿ–ಯಾದಗಿರಿ ಜಿಲ್ಲಾ ಸಹಕಾರಿ ಕೇಂದ್ರ(ಡಿಸಿಸಿ) ಬ್ಯಾಂಕ್‌ನ ಅಧ್ಯಕ್ಷ ಸೋಮಶೇಖರ ಗೋನಾಯಕ ಮಾತನಾಡಿ, ಬೆಣ್ಣೂರ ಹಾಗೂ ತಾವು ಸಮಾನ ವಯಸ್ಕ ಹಾಗೂ ಸಮಾನ ಮನಸ್ಸಿನವರು. ಇದೇ ಕಾರಣ ಅವರು ಹಾಗೂ ತಾವು ಸಹಕಾರ ಕ್ಷೇತ್ರದಲ್ಲಿ ಉತ್ತಮವಾಗಿ ಕೆಲಸ ಮಾಡಲು ಸಾಧ್ಯವಾಗಿದೆ. ಜಿಲ್ಲೆಯ ಹೈನುಗಾರಿಕೆ ಹೆಚ್ಚಿಸುವ ನಿಟ್ಟಿನ ಕಾಮಧೇನು ಯೋಜನೆಯೇ ಇದಕ್ಕೆ ಸಾಕ್ಷಿ ಎಂದರು. ವಿಧಾನ ಪರಿಷತ್ ಸದಸ್ಯ ತಿಪ್ಪಣ್ಣಪ್ಪ ಕಮಕನೂರ ಮಾತನಾಡಿ, ಬೆಣ್ಣೂರ ಎಲ್ಲರೊಂದಿಗೆ ಸಾಮಾನ್ಯವಾಗಿ ಬೆರೆಯುತ್ತಿದ್ದರಲ್ಲದೇ ಕೆಲವೊಂದು ಸಂದರ್ಭದಲ್ಲಿ ಕಠಿಣ ನಿಲುವು ತಳೆಯುತ್ತಿದ್ದರಾದರೂ ಅದು ಸಮಾಜಮುಖಿಯೇ ಆಗಿರುತ್ತಿತ್ತು ಎಂದು ಹೇಳಿದರು.

ಸನ್ಮಾನ: ಸಮಾರಂಭದಲ್ಲಿ ಅಪರ ನಿಬಂಧಕರಾಗಿ ನಿವೃತ್ತಿ ಹೊಂದಿದ ಶರಣಬಸಪ್ಪ ಬೆಣ್ಣೂರ ದಂಪತಿಯನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಲಾಯಿತು. ಅದೆ ತೆರನಾಗಿ ಸಹಕಾರ ಜ್ಯೋತಿ ಅಭಿನಂದನಾ ಗ್ರಂಥದ ಸಂಪಾದಕರಾದ ಗುಂಡೂರಾವ ಕಡಣಿ ಅವರನ್ನು ಸನ್ಮಾನಿಸಲಾಯಿತು. ತದನಂತರ ಗಣ್ಯರು ಹಾಗೂ ಮಠಾಧೀಶರು ಗ್ರಂಥ ಮೌಲ್ಯಧಾರಿತವಾಗಿ ಬಂದಿದೆ ಎಂದು ಶ್ಲಾಘಿಸಿದರು.

ಸೊನ್ನ ವಿರಕ್ತ ಮಠದ ಡಾ. ಶಿವಾನಂದ ಸ್ವಾಮಿಗಳು, ಕಲ್ಯಾಣ ಕರ್ನಾಟಕ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಎಂ.ಎನ್. ಪಾಟೀಲ್, ಸಹಕಾರ ಸಂಘಗಳ ಜಂಟಿ ನಿಬಂಧಕ ವಿಶ್ವನಾಥ ಮಲಕೂಡ, ಮುಖಂಡರಾದ ನೀಲಕಂಠರಾವ ಮೂಲಗೆ, ಶರಣಬಸಪ್ಪ ಪಾಟೀಲ್ ಅಷ್ಠಗಾ, ಚಂದ್ರಶೇಖರ ಬೆಣ್ಣೂರ, ಧೂಳಪ್ಪ ಬೆಣ್ಣೂರ, ವಿಶ್ವನಾಥ ಬೆಣ್ಣೂರ, ನವೀನ ಬೆಣ್ಣೂರ ಹಾಗೂ ಬೆಣ್ಣೂರ ಗೆಳೆಯರ ಬಳಗದವರಾದ ಬಸವರಾಜ ವಾಲಿ, ಕೆ.ಎಸ್. ಮಾಲಿಪಾಟೀಲ್, ಅರುಣಕುಮಾರ ಪಾಟೀಲ್, ಡಾ. ಸಂಗಮೇಶ ಹಿರೇಮಠ, ಗುರುಬಸಪ್ಪ ಪಾಟೀಲ್, ಶ್ರೀಶೈಲ್ ಘೂಳಿ, ಚಂದ್ರಕಾಂತ ಬಿರಾದಾರ, ಸಿದ್ಧಣ್ಣಗೌಡ ಮಾಲಿಪಾಟೀಲ್, ಶಿವಶರಣಪ್ಪ ಜಮಾದಾರ, ರಾಜಶೇಖರ ಬಿರಾದಾರ ಸೇರಿದಂತೆ ಮುಂತಾದವರಿದ್ದರು. ಪ್ರಾಚಾರ್ಯರಾದ ಡಾ. ಸುರೇಶ ನಂದಗಾಂವ ಸ್ವಾಗತಿಸಿದರು. ಆರ್.ಜೆ ವಾಣಿ ನಿರೂಪಿಸಿದರು. ಡಾ. ಸೂರ್ಯಕಾಂತ ಪಾಟೀಲ್ ಸರಸಂಬಾ ವಂದಿಸಿದರು.

ಶರಣಬಸಪ್ಪ ಬೆಣ್ಣೂರ ಅವರು ಸಹಕಾರ ಕ್ಷೇತ್ರಕ್ಕೆ ದೊಡ್ಡ ಕೊಡುಗೆ ನೀಡಿದ್ದಲ್ಲದೇ ಉದ್ಯಮಗಳಲ್ಲೂ ಸೈ ಎನಿಸಿಕೊಂಡಿದ್ದಾರೆ. ಹೀಗಾಗಿ ಅವರ ತಂದೆ ಅಣ್ಣಾರಾವ ಬೆಣ್ಣೂರ ಮಾಸ್ತರ್ ಹೆಸರಿನಲ್ಲಿ ರೆಸಿಡೆನ್ಷಿಯನ್ ಶಾಲೆ ತೆರೆಯುವ ಮುಖಾಂತರ ಮತ್ತೊಂದು ಸಮಾಜಮುಖಿ ಕಾರ್ಯಕ್ಕೆ ಮುಂದಾಗಲಿ.ಡಾ. ಸಾರಂಗಧರ ದೇಶಿಕೇಂದ್ರ ಮಹಾಸ್ವಾಮಿಗಳು, ಶ್ರೀಶೈಲಂ–ಸುಲಫಲ ಮಠ

# ಪಂಜಾಬ್ ಪ್ರವಾಹ: ಪರಿಹಾರ ಬಿರುಸು



ಚಂಡೀಗಢ, ಸೆ. 5: ಪಂಜಾಬ್ ನಲ್ಲಿ ಪ್ರವಾಹದ ಬಳಿಕ ಪರಿಹಾರ ಕಾರ್ಯಚರಣೆ ಚುರುಕುಗೊಂಡಿದೆ. ಆಮ್ ಆದ್ಮಿ ಪಕ್ಷದ (ಎಎಪಿ) ರಾಜ್ಯಸಭಾ ಸಂಸದ ವಿಕ್ರಮ್ ಜಿತ್ ಸಿಂಗ್ ಸಾಹ್ನಿ ಅವರು ಪಂಜಾಬ್ ನ ಪ್ರವಾಹ ಪರಿಹಾರ ಕಾರ್ಯಾಚರಣೆಗಳಿಗೆ 5 ಕೋಟಿ ರೂ.ನೀಡುವುದಾಗಿ ವಾಗ್ದಾನ ಮಾಡಿದ್ದಾರೆ.

ಈ ನಿಧಿಯ ಒಂದು ಭಾಗವು ಸುಧಾರಿತ ರಕ್ಷಣಾ ದೋಣಿಗಳು, ಆಧುನಿಕ ಹೂಳೆತ್ತುವ ಯಂತ್ರೋಪಕರಣಗಳು ಮತ್ತು ಭವಿಷ್ಯದ ವಿಪತ್ತುಗಳಿಂದ ದುರ್ಬಲ ಪ್ರದೇಶಗಳನ್ನು ರಕ್ಷಿಸಲು ಒಡ್ಡುಗಳ ನಿರ್ಮಾಣಕ್ಕೆ ಬಳಸಲಾಗುತ್ತದೆ ಎಂದು ಸಾಹ್ನಿ ಹೇಳಿದ್ದಾರೆ.

ಸನ್ ಫೌಂಡೇಶನ್ ಎಂಬ ಎನ್ ಜಿಒ ಮೂಲಕ ಸಾಹ್ನಿ ಈಗಾಗಲೇ ಮೋಟಾರು ದೋಣಿಗಳು, ಆಂಬ್ಯುಲೆನ್ಸ್ ಗಳು, ಒಣ ಪಡಿತರ ಕಿಟ್ ಗಳು, ವೈದ್ಯಕೀಯ ಸರಬರಾಜುಗಳು, ನೈರ್ಮಲ್ಯ ವಸ್ತುಗಳು ಮತ್ತು ಜಾನುವಾರುಗಳ ಮೇವಿಗಾಗಿ 1 ಕೋಟಿ ರೂ.ಗಳನ್ನು ಖರ್ಚು ಮಾಡಿದ್ದಾರೆ.

ಮುಂದಿನ ಬಿತ್ತನೆ ಋತುವಿಗಾಗಿ ಸಣ್ಣ ರೈತರಿಗೆ ರಸಗೊಬ್ಬರಗಳು, ಬೀಜಗಳು ಮತ್ತು ಕೀಟನಾಶಕಗಳನ್ನು ಒದಗಿಸುವುದಾಗಿ ಅವರು ಭರವಸೆ ನೀಡಿದರು.

ಇದೇ ವೇಳೆ ಕೇಂದ್ರ ಸರ್ಕಾರದ ನೆರವನ್ನು ಒತ್ತಾಯಿಸಿದ ಸಾಹ್ನಿ, ಬೆಳೆ ನಷ್ಟವನ್ನು ಎದುರಿಸುತ್ತಿರುವ ರೈತರಿಗೆ ಎಕರೆಗೆ 50,000 ರೂ.ಗಳ ಪರಿಹಾರವನ್ನು ನೀಡಬೇಕು ಎಂದು ಒತ್ತಾಯಿಸಿದ್ದಾರೆ. ಜತೆಗೆ ಕೂಲಿ ಕಾರ್ಮಿಕರು ಮತ್ತು ಜಾನುವಾರು ಮಾಲೀಕರಿಗೆ ವಿತ್ತೀಯ ಸಹಾಯವನ್ನು ಪ್ರಸ್ತಾಪಿಸಿ 10,000 ಕೋಟಿ ರೂ.ಗಳ ಪರಿಹಾರ ಪ್ಯಾಕೇಜ್ ಅನ್ನು ಒತ್ತಾಯಿಸಿದ್ದಾರೆ.

ಹೆಚ್ಚಿದ ನೀರಿನ ಮಟ್ಟ, ಭಾಕ್ರಾ ಮತ್ತು ಪಾಂಗ್ ಅಣೆಕಟ್ಟೆಗಳಲ್ಲಿ ಎಚ್ಚರಿಕೆ

ಭಾಕ್ರಾ ಅಣೆಕಟ್ಟಿನ ನೀರಿನ ಮಟ್ಟವು 1,679 ಅಡಿಗಳನ್ನು ತಲುಪಿದ್ದರಿಂದ ಪಂಜಾಬ್ ನ ಅಧಿಕಾರಿಗಳು ಹೆಚ್ಚಿನ ಎಚ್ಚರಿಕೆ ವಹಿಸಿದ್ದಾರೆ. ಇದು ಅದರ ಗರಿಷ್ಠ ಸಾಮರ್ಥ್ಯಕ್ಕಿಂತ ಕೇವಲ ಒಂದು ಅಡಿ ಕಡಿಮೆಯಾಗಿದೆ. ನೀರಿನ ಒಳಹರಿವು ಹೆಚ್ಚುತ್ತಿರುವುದರಿಂದ ರೂಪ್ ನಗರ್ ಆಡಳಿತವು ಸಟ್ಲೆಜ್ ನದಿಯ ಬಳಿಯ ನಿವಾಸಿಗಳಿಗೆ ಎಚ್ಚರಿಕೆ ನೀಡಿದ್ದು, ಸುರಕ್ಷಿತ ಪ್ರದೇಶಗಳು ಮತ್ತು ಪರಿಹಾರ ಶಿಬಿರಗಳಿಗೆ ತಕ್ಷಣ ಸ್ಥಳಾಂತರಿಸುವಂತೆ ಸೂಚಿಸಲಾಗಿದೆ.

ಪಾಂಗ್ ಅಣೆಕಟ್ಟು ಸಹ ಸಾಮರ್ಥ್ಯವನ್ನು ಮೀರಿ ಹರಿಯುತ್ತಿದೆ. ಒಳಹರಿವು 1.32 ಲಕ್ಷ ಕ್ಯೂಸೆಕ್ ತಲುಪಿದೆ. ಹೀಗಾಗಿ ಅಪಾರ ಪ್ರಮಾಣದ ನೀರನ್ನು ಹೊರ ಬಿಡಬೇಕಾಗಿದೆ. ಭಾಕ್ರಾದಿಂದ ನೀರಿನ ಹೊರಹರಿವು 80,000–85,000 ಕ್ಯೂಸೆಕ್ ಗೆ ಏರಬಹುದು ಎಂದು ಅಧಿಕಾರಿಗಳು ಎಚ್ಚರಿಸಿದ್ದಾರೆ.

ಸಾವಿನ ಸಂಖ್ಯೆ 40ಕ್ಕೆ ಏರಿಕೆ

ಪಂಜಾಬ್ ನ ಪ್ರವಾಹ ದುರಂತದಲ್ಲಿ ಈಗಾಗಲೇ 14 ಜಿಲ್ಲೆಗಳಲ್ಲಿ 43 ಜನರು ಮೃತಪಟ್ಟಿದ್ದಾರೆ ಮತ್ತು ಪಠಾಣ್ ಕೋಟ್ ನಲ್ಲಿ ಮೂವರು ಕಾಣೆಯಾಗಿದ್ದಾರೆ. 1.71 ಲಕ್ಷ ಹೆಕ್ಟೇರ್ ಕೃಷಿ ಭೂಮಿಯಲ್ಲಿ ಬೆಳೆದು ನಿಂತಿದ್ದ ಬೆಳೆಗಳು ಸಂಪೂರ್ಣ ನಾಶವಾಗಿದ್ದು, ರಾಜ್ಯದ ಕೃಷಿ ಆರ್ಥಿಕತೆಯನ್ನು ಹಿನ್ನಡೆಯುಂಟು ಮಾಡಿದೆ. ಪ್ರವಾಹದಿಂದಾಗಿ 23 ಜಿಲ್ಲೆಗಳ 1,902 ಗ್ರಾಮಗಳು ಜಲಾವೃತವಾಗಿದ್ದು, 3.84 ಲಕ್ಷಕ್ಕೂ ಹೆಚ್ಚು ನಿವಾಸಿಗಳ ಮೇಲೆ ಪರಿಣಾಮ ಬೀರಿದೆ. ವಿಪತ್ತು ಪ್ರತಿಕ್ರಿಯೆ ಪಡೆಗಳು ಮತ್ತು ಸ್ಥಳೀಯ ಆಡಳಿತವು ಸುಮಾರು 21,000 ಜನರನ್ನು ಸ್ಥಳಾಂತರಿಸಿದೆ.

ರಾಜ್ಯ ಮತ್ತು ಕೇಂದ್ರದಿಂದ ಪರಿಹಾರ ಕಾರ್ಯ ಹೆಚ್ಚಳ

ಪೀಡಿತ ನಿವಾಸಿಗಳೊಂದಿಗೆ ನೇರ ಸಂವಹನ ಮತ್ತು ಸಮಸ್ಯೆಗಳನ್ನು ತ್ವರಿತವಾಗಿ ಪರಿಹರಿಸುವುದನ್ನು ಖಚಿತಪಡಿಸಿಕೊಳ್ಳಲು ಪ್ರತಿ ಮರೂನ್ ಗ್ರಾಮದಲ್ಲಿ ಗೆಜೆಟೆಡ್ ಅಧಿಕಾರಿಗಳನ್ನು ನಿಯೋಜಿಸುವಂತೆ ಮುಖ್ಯಮಂತ್ರಿ ಭಗವಂತ್ ಮಾನ್ ನಿರ್ದೇಶನ ನೀಡಿದ್ದಾರೆ. ಬೆಳೆ ಮತ್ತು ಆಸ್ತಿ ನಷ್ಟವನ್ನು ನಿರ್ಣಯಿಸಲು ವಿಶೇಷ 'ಗಿರ್ದಾವರಿ' ಸಮೀಕ್ಷೆಗೆ ಆದೇಶಿಸಲಾಗಿದೆ.

ಪ್ರವಾಹ ಪೀಡಿತ ಜಿಲ್ಲೆಗಳಾದ ಅಮೃತಸರ, ಗುರುದಾಸ್ ಪುರ ಮತ್ತು ಕಪುರ್ಥಾಲಾಗಳಿಗೆ ಭೇಟಿ ನೀಡಿದ ನಂತರ ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಪರಿಸ್ಥಿತಿಯನ್ನು " ಜಲಪ್ರಳಯ" ಎಂದು ಬಣ್ಣಿಸಿದ್ದಾರೆ. ರೈತರಿಗೆ ಸಂಪೂರ್ಣ ಕೇಂದ್ರ ಬೆಂಬಲದ ಭರವಸೆ ನೀಡಿದ ಅವರು, ಪರಿಹಾರ ವಿತರಣೆಗಾಗಿ ಎರಡು ಕೇಂದ್ರ ತಂಡಗಳು ಹಾನಿಯನ್ನು ನಿರ್ಣಯಿಸುತ್ತಿವೆ ಎಂದು ತಿಳಿಸಿದ್ದಾರೆ.

ಏತನ್ಮಧ್ಯೆ, ಎಎಪಿ ಮುಖ್ಯಸ್ಥ ಅರವಿಂದ್ ಕೇಜ್ರಿವಾಲ್ ಕಪುರ್ತಾಲಾದ ತೀವ್ರ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ತುರ್ತು ಕೇಂದ್ರ ಪರಿಹಾರ ಪ್ಯಾಕೇಜ್ ಗಾಗಿ ಮನವಿ ಮಾಡಿದರು.

ಪಂಜಾಬ್ ನ ಭೀಕರ ಪ್ರವಾಹಗಳಲ್ಲಿ ಒಂದು ಹಿಮಾಚಲ ಪ್ರದೇಶ, ಜಮ್ಮು ಮತ್ತು ಕಾಶ್ಮೀರ ಮತ್ತು ಪಂಜಾಬ್ ನ ಸ್ವಂತ ಜಲಾನಯನ ಪ್ರದೇಶಗಳಲ್ಲಿ ಭಾರಿ ಮಳೆಯೊಂದಿಗೆ ಉಬ್ಬಿದ ಸಟ್ಲೆಜ್, ಬಿಯಾಸ್ ಮತ್ತು ರಾವಿ ನದಿಗಳಿಂದ ಉಂಟಾದ ಈ ದುರಂತವನ್ನು ದಶಕಗಳಲ್ಲಿ ಪಂಜಾಬ್ ನ ಅತ್ಯಂತ ತೀವ್ರ ಪ್ರವಾಹ ಬಿಕ್ಕಟ್ಟುಗಳಲ್ಲಿ ಒಂದಾಗಿದೆ ಎಂದು ವಿವರಿಸಲಾಗಿದೆ. ಎನ್ ಡಿಆರ್ ಎಫ್, ಎಸ್ ಡಿಆರ್ ಎಫ್ ಮತ್ತು ಸ್ಥಳೀಯ ಸ್ವಯಂಸೇವಕರ ತಂಡಗಳು ವ್ಯಾಪಕ ಸ್ಥಳಾಂತರ ಮತ್ತು ರಕ್ಷಣಾ ಕಾರ್ಯಾಚರಣೆಗಳನ್ನು ನಡೆಸುತ್ತಿವೆ. ಆದರೆ ಹೆಚ್ಚಿನ ಮಳೆಯೊಂದಿಗೆ ಬಿಕ್ಕಟ್ಟು ತೀವ್ರಗೊಳ್ಳಬಹುದು ಎಂದು ಅಧಿಕಾರಿಗಳು ಎಚ್ಚರಿಸಿದ್ದಾರೆ.

# ನಿವೃತ್ತ ಅಪರ ನಿಬಂಧಕ ಬೆಣ್ಣೂರ ಅಭಿನಂದನಾ ಸಮಾರಂಭ ಮಾಡಿದ ಸಮಾಜಮುಖಿ ಕೆಲಸ:ಬರೆದ ಸಾಹಿತ್ಯ ಅಜರಾಮರ



**ಮಲ್ಲಮ್ಮ ನುಡಿ ವಾರ್ತೆ**
**ಕಲಬುರಗಿ:**

ಮಾಡಿದ ಅಭಿವೃದ್ಧಿ ಕಾರ್ಯಗಳು, ಸಮಾಜಮುಖಿ ಸೇವೆಗಳು ಹಾಗೂ ಬರೆದ ಸಾಹಿತ್ಯ ಅಜರಾಮರವಾಗಿರುತ್ತದೆ ಎಂದು ಶ್ರೀಶೈಲಂ –ಸುಲಫಲ ಮಠದ ಜಗದ್ಗುರು ಡಾ. ಸಾರಂಗಧರ ದೇಶಿಕೇಂದ್ರ ಮಹಾಸ್ವಾಮಿಗಳು ಹೇಳಿದರು.

ನಗರದ ಆಳಂದ ರಸ್ತೆಯ ಬೆಣ್ಣೂರ ಪೆಟ್ರೋಲ್ ಪಂಪ ಎದುರುಗಡೆಯ ಎಸ್.ಬಿ. ಕನ್ವೆನ್ಷನ್ ಹಾಲ್‌ದಲ್ಲಿ ಶುಕ್ರವಾರ ನಡೆದ ನಿವೃತ್ತ ಅಪರ ನಿಬಂಧಕ ಶರಣಬಸಪ್ಪ ಎ. ಬೆಣ್ಣೂರ ಅಭಿನಂದನಾ ಹಾಗೂ ಸಹಕಾರಿ ಜ್ಯೋತಿ ಅಭಿನಂದನಾ ಗ್ರಂಥ ಬಿಡುಗಡೆ ಸಮಾರಂಭದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಕಟ್ಟಿದ ಗುಡಿ–ಗುಂಡಾರಗಳು ಬಿದ್ದು ಹೋಗುತ್ತವೆ, ಆಳಿದ ರಾಜರು ಮಣ್ಣುಪಾಲು ಆಗಿರುತ್ತಾರೆ. ಆದರೆ ಮಾಡಿದ ಕಾರ್ಯಗಳು ಜತೆಗೆ ಬರೆದ ಸಾಹಿತ್ಯಕ್ಕೆ ಭವಿಷ್ಯವಿದೆಯಲ್ಲದೇ ಶಾಶ್ವತವಾಗಿರುತ್ತದೆ. ಇದೇ ಕಾರಣ–ಕ್ಕೆ ಸಾಹಿತ್ಯಕ್ಕೆ ಇಂದಿಗೂ ಬೆಲೆ ಇದೆ ಎಂದರಲ್ಲದೇ ಸಹಕಾರಿ ಕ್ಷೇತ್ರದಲ್ಲಿ ಮೂರು ದಶಕಗಳ ಕಾಲದುದ್ದಕ್ಕೂ ನಿವೃತ್ತ ಅಪರ ನಿಬಂಧಕ ಶರಣಬಸಪ್ಪ ಎ. ಬೆಣ್ಣೂರ ಮಾಡಿದ ಕಾರ್ಯಗಳು ಮಾದರಿಯಾಗಿದ್ದು ಹಾಗೂ ಅವರ ಕಾರ್ಯ ಹಾಗೂ ವ್ಯಕ್ತಿತ್ವ ಕುರಿತು ಹಿರಿಯ ಪತ್ರಕರ್ತ, ಲೇಖಕ ಗುಂಡೂರಾವ್ ಕಡಣಿ ಸಂಪಾಕದಲ್ಲಿ ಹೊರ ತರಲಾದ ಸಹಕಾರ ಜ್ಯೋತಿ ಸಾಹಿತ್ಯ (ಅಭಿನಂದನಾ ಗ್ರಂಥ) ಕೃತಿಯೂ ನಿಜಕ್ಕೂ ದೊಡ್ಡ ಕೊಡುಗೆ–ಯಾಗಿ ಹೊರ ಹೊಮ್ಮಿವೆ ಎಂದು ಹೇಳಿದರು.

ಬೆಣ್ಣೂರ ಸರ್ಕಾರಿ ಅಧಿಕಾರಿಯಾಗಿ ಎಲ್ಲರೊಂದಿಗೆ ಬೆರೆತು, ಸೌಜನ್ಯದೊಂದಿಗೆ ಮಾಡಿರುವ ದೊಡ್ಡ ಕಾರ್ಯಗಳು ಅವರ ವ್ಯಕ್ತಿತ್ವಕ್ಕೆ ಹಿಡಿದ ಕನ್ನಡಿ. ರೈತ ಬಂದರೆ ಆತನೊಂದಿಗೆ, ಅಧಿಕಾರಿಗಳು ಅವರೊಂದಿಗೆ ಅಷ್ಟೇ ಏಕೆ, ಮಠಾಧೀಶರು ಬಂದರೆ ಅವರೊಂದಿಗೆ ಹೇಗೆ ಮಾತನಾಡಬೇಕೆಂಬುದನ್ನು ಬೆಣ್ಣೂರು ಅವರನ್ನು ನೋಡಿ ಈಗಿನವರು ಅರಿಯುವುದು ಅಗತ್ಯವಾಗಿದೆ ಎಂದು ಜಗದ್ಗುರುಗಳು ಕಿವಿ ಮಾತು ಹೇಳಿದರು.

ಕಡಗಂಚಿ ಮಠದ ವೀರತಪಸ್ವಿ ವೀರಭದ್ರ ಶಿವಾಚಾರ್ಯರು, ಚವದಾಪುರಿ ಹಿರೇಮಠದ ರಾಜಶೇಖರ ಶಿವಾಚಾರ್ಯರು ಹಗೂ ಶ್ರೀನಿವಾಸಸರಡಗಿಯ ಡಾ. ಅಪ್ಪಾರಾವ ದೇವಿ ಮುತ್ಯಾ ಅವರು ಸಮ್ಮುಖತೆ ವಹಿಸಿ, ಶರಣಬಸಪ್ಪ ಅವರು ತಮ್ಮ ತಂದೆಯಂತೆ ಹೆಸರು ಮಾಡಿದ್ದಾರೆ. ನಿವೃತ್ತಿ ನಂತರವೂ ಹತ್ತಾರು ಸಮಾಜಮುಖಿ ಕಾರ್ಯಗಳು ಮುಂದುವರೆಯಲಿ ಎಂದು ಹೇಳಿದರು.

ಮಾಜಿ ಸಚಿವ ಎಸ್.ಕೆ. ಕಾಂತಾ ಸಮಾರಂಭ ಉದ್ಘಾಟಿಸಿ ಹಾಗೂ ಅಭಿನಂದನಾ ಗ್ರಂಥ ಬಿಡುಗಡೆಗೊಳಿಸಿ, ಸರ್ಕಾರಿ ಅಧಿಕಾರಿಗಳಿಗೆ ಒಳ್ಳೆಯವರು ಇಲ್ಲವೇ ಕೆಟ್ಟವರು ಎಂಬ ಎರಡೇ ಹೆಸರು ಬರುತ್ತವೆ. ಬೆಣ್ಣೂರ ಅವರ ಒಳ್ಳೆಯವರು ಎಂಬ ಹೆಸರು ಗಳಿಸಿದವರು. ಹೆಸರು ಕೆಡಿಸಿಕೊಂಡಿಲ್ಲ. ಪ್ರಮುಖವಾಗಿ ಸಾಕಷ್ಟು ರೈತರಿಗೆ ಸಹಾಯ ಮಾಡಿದ್ದಾರೆ ಎಂದು ವಿವರಣೆ ನೀಡಿದರು.

ಕಲಬುರಗಿ–ಯಾದಗಿರಿ ಜಿಲ್ಲಾ ಸಹಕಾರಿ ಕೇಂದ್ರ (ಡಿಸಿಸಿ) ಬ್ಯಾಂಕ್‌ನ ಅಧ್ಯಕ್ಷ ಸೋಮಶೇಖರ ಗೋನಾಯಕ ಮಾತನಾಡಿ, ಬೆಣ್ಣೂರ ಹಾಗೂ ತಾವು ಸಮಾನ ವಯಸ್ಕ ಹಾಗೂ ಸಮಾನ ಮನಸ್ಸಿನವರು. ಇದೇ ಕಾರಣ ಅವರು ಹಾಗೂ ತಾವು ಸಹಕಾರ ಕ್ಷೇತ್ರದಲ್ಲಿ ಉತ್ತಮವಾಗಿ ಕೆಲಸ ಮಾಡಲು ಸಾಧ್ಯವಾಗಿದೆ. ಜಿಲ್ಲೆಯ ಹೈನುಗಾರಿಕೆ ಹೆಚ್ಚಿಸುವ ನಿಟ್ಟಿನ ಕಾಮಧೇನು ಯೋಜನೆಯೇ ಇದಕ್ಕೆ ಸಾಕ್ಷಿ ಎಂದರು. ವಿಧಾನ ಪರಿಷತ್ ಸದಸ್ಯ ತಿಪ್ಪಣ್ಣಪ್ಪ ಕಮಕನೂರ ಮಾತನಾಡಿ, ಬೆಣ್ಣೂರ ಎಲ್ಲರೊಂದಿಗೆ ಸಾಮಾನ್ಯವಾಗಿ ಬೆರೆಯುತ್ತಿದ್ದರಲ್ಲದೇ ಕೆಲವೊಂದು ಸಂದರ್ಭದಲ್ಲಿ ಕಠಿಣ ನಿಲುವು ತಳೆಯುತ್ತಿದ್ದರಾದರೂ ಅದು ಸಮಾಜಮುಖಿಯೇ ಆಗಿರುತ್ತಿತ್ತು ಎಂದು ಹೇಳಿದರು.

ಸನ್ಮಾನ: ಸಮಾರಂಭದಲ್ಲಿ ಅಪರ ನಿಬಂಧಕರಾಗಿ ನಿವೃತ್ತಿ ಹೊಂದಿದ ಶರಣಬಸಪ್ಪ ಬೆಣ್ಣೂರ ದಂಪತಿಯನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಲಾಯಿತು. ಅದೇ ತೆರನಾಗಿ ಸಹಕಾರ ಜ್ಯೋತಿ ಅಭಿನಂದನಾ ಗ್ರಂಥದ ಸಂಪಾದಕರಾದ ಗುಂಡೂರಾವ ಕಡಣಿ ಅವರನ್ನು ಸನ್ಮಾನಿಸಲಾಯಿತು. ತದನಂತರ ಗಣ್ಯರು ಹಾಗೂ ಮಠಾಧೀಶರು ಗ್ರಂಥ ಮೌಲ್ಯಧಾರಿತವಾಗಿ ಬಂದಿದೆ ಎಂದು ಶ್ಲಾಘಿಸಿದರು.

ಸೊನ್ನ ವಿರಕ್ತ ಮಠದ ಡಾ. ಶಿವಾನಂದ ಸ್ವಾಮಿಗಳು, ಕಲ್ಯಾಣ ಕರ್ನಾಟಕ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಎಂ.ಎನ್. ಪಾಟೀಲ್, ಸಹಕಾರ ಸಂಘಗಳ ಜಂಟಿ ನಿಬಂಧಕ ವಿಶ್ವನಾಥ ಮಲಕೂಡ, ಮುಖಂಡರಾದ ನೀಲಕಂಠರಾವ ಮೂಲಗೆ, ಶರಣಬಸಪ್ಪ ಪಾಟೀಲ್ ಅಷ್ಟಗಾ, ಚಂದ್ರಶೇಖರ ಬೆಣ್ಣೂರ, ಧೂಳಪ್ಪ ಬೆಣ್ಣೂರ, ವಿಶ್ವನಾಥ ಬೆಣ್ಣೂರ, ನವೀನ ಬೆಣ್ಣೂರ ಹಾಗೂ ಬೆಣ್ಣೂರ ಗೆಳೆಯರ ಬಳಗದವರಾದ ಬಸವರಾಜ ವಾಲಿ, ಕೆ.ಎಸ್. ಮಾಲಿಪಾಟೀಲ್, ಅರುಣಕುಮಾರ ಪಾಟೀಲ್, ಡಾ. ಸಂಗಮೇಶ ಹಿರೇಮಠ, ಗುರುಬಸಪ್ಪ ಪಾಟೀಲ್, ಶ್ರೀಶೈಲ್ ಘೂಳಿ, ಚಂದ್ರಕಾಂತ ಬಿರಾದಾರ, ಸಿದ್ಧಣ್ಣಗೌಡ ಮಾಲಿಪಾಟೀಲ್, ಶಿವಶರಣಪ್ಪ ಜಮಾದಾರ, ರಾಜಶೇಖರ ಬಿರಾದಾರ ಸೇರಿದಂತೆ ಮುಂತಾದವರಿದ್ದರು. ಪ್ರಾಚಾರ್ಯರಾದ ಡಾ. ಸುರೇಶ ನಂದಗಾಂವ ಸ್ವಾಗತಿಸಿದರು. ಆರ್.ಜೆ ವಾಣಿ ನಿರೂಪಿಸಿದರು. ಡಾ. ಸೂರ್ಯಕಾಂತ ಪಾಟೀಲ್ ಸರಸಂಬಾ ವಂದಿಸಿದರು.

> ಶರಣಬಸಪ್ಪ ಬೆಣ್ಣೂರ ಅವರು ಸಹಕಾರ ಕ್ಷೇತ್ರಕ್ಕೆ ದೊಡ್ಡ ಕೊಡುಗೆ ನೀಡಿದ್ದಲ್ಲದೇ ಉದ್ಯಮಗಳಲ್ಲೂ ಸೈ ಎನಿಸಿಕೊಂಡಿದ್ದಾರೆ. ಹೀಗಾಗಿ ಅವರ ತಂದೆ ಅಣ್ಣಾರಾವ ಬೆಣ್ಣೂರ ಮಾಸ್ತರ್ ಹೆಸರಿನಲ್ಲಿ ರೆಸಿಡೆನ್ಷಿಯನ್ ಶಾಲೆ ತೆರೆಯುವ ಮುಖಾಂತರ ಮತ್ತೊಂದು ಸಮಾಜಮುಖಿ ಕಾರ್ಯಕ್ಕೆ ಮುಂದಾಗಲಿ.
> **– ಡಾ. ಸಾರಂಗಧರ ದೇಶಿಕೇಂದ್ರ ಮಹಾಸ್ವಾಮಿಗಳು, ಶ್ರೀಶೈಲಂ–ಸುಲಫಲ ಮಠ**



ಬಸವಕಲ್ಯಾಣ:–ತಾಲೂಕಿನ ಸುಕ್ಷೇತ್ರ ಹಾರಕೂಡ ಶ್ರೀಮಠದ ದಾಸೋಹ ಮನೆಯಲ್ಲಿ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಜೊಕುಮಾರನಿಗೆ ಗೌರವ ಸಮರ್ಪಿಸಿದರು. ಈ ಸಂದರ್ಭದಲ್ಲಿ ಮಲ್ಲಿನಾಥ ಹಿರೇಮಠ ಹಾರಕೂಡ. ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಸೇನಾ ತರಬೇತಿಗೆ ಅರ್ಜಿ ಆಹ್ವಾನ

**ಮಲ್ಲಮ್ಮ ನುಡಿ ವಾರ್ತೆ**
**ಬೀದರ:**

ಸೆಪ್ಟೆಂಬರ್.05– ಭಾರತೀಯ ಸೇನೆ/ ಇತರೆ ಯೂನಿಫಾರ್ಮ್ ಸೇವೆಗಳಿಗೆ ಸೇರ ಬಯಸುವ ಕರ್ನಾಟಕ ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ– 1, 2(ಎ), 3(ಎ), ಹಾಗೂ 3(ಬಿ)ಗಳ ಅರ್ಹ ಅಭ್ಯರ್ಥಿಗಳಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ಆಯ್ಕೆಯ ಪೂರ್ವ ಸಿದ್ಧತೆ ಬಗ್ಗೆ ವೃತ್ತಿ ಮಾರ್ಗದರ್ಶನ ಹಾಗೂ ತರಬೇತಿಯನ್ನು ಉಚಿತವಾಗಿ ನೀಡುತ್ತಿದೆ. ತರಬೇತಿಗಾಗಿ ಅರ್ಹ 3ನೇ ಬ್ಯಾಚ್ ಪ್ರಾರಂಭಿಸಲು ಅಭ್ಯರ್ಥಿಗಳಿಂದ (ಬಾಲಕರಿಗೆ ಮಾತ್ರ) ಅರ್ಜಿ ಆಹ್ವಾನಿಸಲಾಗಿದೆ.

ಅಭ್ಯರ್ಥಿಯು ಕರ್ನಾಟಕ ರಾಜ್ಯದ ಕಾಯಂ ನಿವಾಸಿಯಾಗಿದ್ದು, ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ–1, 2ಎ, 3ಎ ಮತ್ತು 3ಬಿ ಸೇರಿರಬೇಕು. ಅಭ್ಯರ್ಥಿ ಮತ್ತು ಕುಟುಂಬದ ಒಟ್ಟು ಗರಿಷ್ಠ ವಾರ್ಷಿಕ ಆದಾಯ ಮಿತಿ (ಪ್ರವರ್ಗ–1 ಕ್ಕೆ 2.50 ಲಕ್ಷ ರು. ಮತ್ತು ಪ್ರವರ್ಗ–2(ಎ), 3(ಎ) ಮತ್ತು 3(ಬಿ) ಗಳಿಗೆ 10 ಲಕ್ಷ ರು.) ಯಲ್ಲಿರಬೇಕು. ಅಭ್ಯರ್ಥಿಯು 10ನೇ ತರಗತಿ ಉತ್ತೀರ್ಣವಾಗಿದ್ದು, ಪ್ರತಿ ವಿಷಯದಲ್ಲಿ ಕನಿಷ್ಠ 33 ಅಂಕಗಳು ಮತ್ತು ಸರಾಸರಿ ಶೇ. 45ರಷ್ಟು ಅಂಕಗಳನ್ನು ಪಡೆದಿರಬೇಕು.

ಗ್ರೇಡಿಂಗ್ ಸಿಸ್ಟಮ್ ಇದ್ದಲ್ಲಿ ಮೇಲ್ಕಂಡಂತೆ ಸಮಾನವಾದ ಗ್ರೇಡ್ ಪಡೆದಿರುವ ಕನಿಷ್ಠ ವಿದ್ಯಾರ್ಹತೆ ಹೊಂದಿರಬೇಕು. 17 ರಿಂದ 20 ವರ್ಷದೊಳಗಿರಬೇಕು. 2025ರ ಸೆ. 1 ರಿಂದ ಅನ್ವಯಿಸುವಂತೆ ಅಭ್ಯರ್ಥಿಯ ವಯಸ್ಸನ್ನು ಪರಿಗಣಿಸಲಾಗುವುದು. ಅಭ್ಯರ್ಥಿಯು 2008ರ ಸೆ. 1 ರಿಂದ 2025ರ ಸೆ. 1ರ ನಡುವಿನ ಅವಧಿಯಲ್ಲಿ ಜನಿಸಿರಬೇಕು. ತರಬೇತಿಯನ್ನು ಕಲಬುರಗಿ ಜಿಲ್ಲೆ (ಕೇಂದ್ರ ಸ್ಥಳ) ದಲ್ಲಿ ನೀಡಲಾಗುವುದು.

ಆಸಕ್ತ ಅಭ್ಯರ್ಥಿಗಳು ಅರ್ಜಿಯನ್ನು ಕಲಬುರಗಿ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಕಚೇರಿಗೆ ಖುದ್ದಾಗಿ ಅಥವಾ ನೋಂದಾಯಿತ ಅಂಚೆ ಮೂಲಕ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಸೆ. 10 ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿ ಕಲಬುರಗಿ ಅವರಿಂದ ಪಡೆಯಬಹುದಾಗಿದೆ. ಅಥವಾ ಮೊ. 8105085410, 9148489157ನ್ನು ಸಂಪರ್ಕಿಸಬಹುದು ಎಂದು ಬೀದರ ಜಿಲ್ಲೆಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ತಿಳಿಸಿದ್ದಾರೆ.

# ಕಲ್ಯಾಣ ಪತ್ತಿನ ಸೌಹಾರ್ದ ಸಹಕಾರಿ ಸಂಘಕ್ಕೆ 13.23ಲಕ್ಷಗಳ ನಿವ್ವಳ ಲಾಭ ಜ್ಯಾಂತಿಕರ




**ಮಲ್ಲಮ್ಮ ನುಡಿ ವಾರ್ತೆ**
**ಬೀದರ:**

ನಗರದ ಮೋಹನ ಮಾರ್ಕೆಟನಲ್ಲಿರುವ ಕಲ್ಯಾಣ ಪತ್ತಿನ ಸೌಹಾರ್ದ ಸಹಕಾರಿ ನಿ., ಬೀದರ ಇದರ 2024–25ನೇ ಸಾಲಿಗೆ ನಿವ್ವಳ 13.23 ಲಕ್ಷ ಲಾಭ ಗಳಿಸಿದೆ ಎಂದು ಪ್ರಶಕ್ತ ಸಾಲಿನಲ್ಲಿ ಶೇ 11 ರಷ್ಟು ಸಹಕಾರಿಯ ಸದಸ್ಯರಿಗೆ ಲಾಭ ನೀಡಲಾಗಿದೆ ಎಂದು ಸಹಕಾರಿಯ ಅಧ್ಯಕ್ಷರಾದ ಗುರುನಾಥ ಜ್ಯಾಂತಿಕರ ತಿಳಿಸಿದರು.

ನಗರದ ಶಾರದಾ ರೂಡಶೆಟ್ ತರಬೇತಿ ಸಭಾಂಗಣದಲ್ಲಿ ಕಲ್ಯಾಣ ಪತ್ತಿನ ಸೌಹಾರ್ದ ಸಹಕಾರಿ ನಿ ಬೀದರ ಇದರ 25ನೇ ವಾರ್ಷಿಕ ಸಾಮಾನ್ಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ನಮ್ಮ ಸಹಕಾರಿಯು ಕಳೆದ 25 ವರ್ಷಗಳಿಂದ ಸದಸ್ಯರಿಗೆ ಉತ್ತವ ಸೇವೆ ನೀಡುತ್ತ ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿದೆ. ಸದಸ್ಯರ ಸಹಕಾರದಿಂದ ಆಡಳಿತ ಮಂಡಳಿಯ ಕಾರ್ಯಯೋಜನೆ ಹಾಗೂ ಸಿಬ್ಬಂದಿಗಳ ಪರಿಶ್ರಮದಿಂದ ಸಹಕಾರಿಯು ಸತತ ಲಾಭದಲ್ಲಿ ನಡೆಯುತ್ತಿದೆ ಎಂದು ತಿಳಿಸಿದರು.

ಸಹಕಾರಿಯ ಮುಖ್ಯಕಾರ್ಯನಿರ್ವಾಹಕರು ಸಹಕಾರಿಯ ವಾರ್ಷಿಕ ವರದಿ ಮಂಡಿಸಿದರು ಸಹಕಾರಿಯ ಅಧಕ್ಷರು ಲೆಕ್ಕಪರಿಶೋಧನಾ ವರದಿಯನ್ನು ವಾಚಿಸಿದರು ಸಂಘದ ಕ್ರಿಯಾ ಯೋಜನೆಯನ್ನು ನಿರ್ದೇಶಕರಾದ ಪದ್ಮಜ ಜಯರಾಜ ಮಂಡಿಸಿದರು. ರಾಜಕುಮಾರ ದಮ್ಮನಸೂರ ಇವರು ಸಂಘದ 3 ವರ್ಷದ ಅಂದಾಜು ಬಜೆಟ್ ಮಂಡಿಸಿದರು ಅಧ್ಯಕ್ಷರಾದ ಗುರುನಾಥ ಜಾಂತಿಕರ ಸದಸ್ಯರಿಗೆ ಸದರಿ ಸಾಲಿನಲ್ಲಿ ಶೇ 11 ರಷ್ಟು ಲಾಭಾಂಶ ಘೋಸಿಸಿದರು.

ರಜತ ಮಹೋತ್ಸವದ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಿದರು ಕಾರ್ಯಕ್ರಮದಲ್ಲಿ ಹೆಚ್ಚು ಅಂಕ ಪಡೆದ ಪ್ರತಿಭಾನ್ವಿತ ಮಕ್ಕಳಾದ ಅಶೋಕ ತಂದೆ ಸಿದ್ರಾಮ ಎಸ್ ಎಸ್ ಎಲ್ ಸಿ ಯಲ್ಲಿ ಪ್ರತಿಶತ 98.72 ಹಾಗೂ ಕುಮಾರಿ ದೀಪಿಕಾ ತಂದೆ ಗುಂಡಪ್ಪಾ ಮೇತ್ರೆ ಶೇ 96.80, ಹಾಗೂ ಯಶ್ವಿಯಾಗಿ ಎಂ ಬಿ ಬಿ ಎಸ್ ಪದವಿ ಮುಗಿಸಿದ ಸಂಕಲ್ಪ ತಂದೆ ರಾಜಕುಮಾರ ದುಮ್ಮನಸೂರೆ ಹಾಗೂ ಪಿಯುಸಿಯಲ್ಲಿ ಹೆಚ್ಚು ಅಂಕ ಪಡೆದ ದಿಕ್ಷೀತ ಲಕ್ಷ್ಮಣ ಸೂರ್ಯನ್ನವರ ಶೇ 80 ಉತ್ತಮ ಗ್ರಾಹಕರಾದ ಶಿಮಂಗಲ ವೆಂಕಟ ವಕೀಲರು, ಮಸರತ್ ಬೆಗಂ ಫಯುಂ ಬಾಬಾ, ಹಣಮಂತ ತಿಪ್ಪಾರೆಡ್ಡಿ, ಮಂಗಲಾ ಮಲ್ಲಿಕಾರ್ಜುನ ಅಷ್ಟೂರ, ಗುಂಡಪ್ಪಾ ಸಜ್ಜನ ಶೆಟ್ಟಿ, ವಿಶೇಷ ಸನ್ಮಾನ ನಿವೃತ್ತ ಉಪನ್ಯಾಸಕರಾದ ಅಶೋಕ ಉಚ್ಚೆಕರ ಶಣ್ಮುಗಪ್ಪಾ, ವಿಜಯ ಕರ್ನಾಟಕದ ವರದಿಗಾರರಾದ ವಿಜಯಕುಮಾರ ಬೆಲ್ದೆ ಮಕ್ಕಣ ಕಲ್ಯಾಣ ಸಮಿತಿಯ ಸದಸ್ಯರಾದ ಮನ್ಮಥ ಮೀನಕೆರಾ ಇವರಿಗೆ ವಿಶೇಷ ಸನ್ಮಾನ ಕೈಗೊಳ್ಳಲಾಯಿತು. ಕಾರ್ಯಕ್ರಮದಲ್ಲಿ ಸದರಿ ಸಹಕಾರಿ ಸಂಘದ ಉಪಾದ್ಯಕ್ಷರಾದ ಬಸವರಾಜ ಸ್ವಾಮಿ ಹಾಗೂ ನಿರ್ದೇಶಕರಾದ ಚಂದ್ರಪ್ಪ ಬಿರಾದಾರ ರಾಜು ಬೆಮಳಖೇಡಕರ, ರಾಜಶೇಖ ಹೊಸಳ್ಳಿ, ಸುರೇಶ ಔರಾದಕರ, ಉಮಾದೇವಿ ಉಡೆದ, ಪದ್ಮಜ ಜೈ ಪ್ರಕಾಶ, ಸುನೀಲ ಅಗ್ರವಾಲ, ರಾಜಕುಮಾರ ದುಮ್ಮನಸೂರೆ, ಇವರು ಭಾಗವಹಿದರು ಕಾರ್ಯಕ್ರಮದ ಸ್ವಾಗತವನ್ನು ಅಮೃತ ಹೊಸಮನಿ ನಡೆಸಿಕೊಟ್ಟರು ನಿರೂಪಣೆಯನ್ನು ವೀರಶೇಟ್ಟಿ ಕೆ ಇವರು ನಡೆಸಿಕೊಟ್ಟರು ಹಾಗೂ ವಂದಾನಾರ್ಪಣೆಯನ್ನು ಸಹಕಾರಿ ಸಂಘದ ಮುಖ್ಯಕಾರ್ಯನಿರ್ವಾಹರಾದ ಶಿವರಾಜ ಹೂಗಾರ ಇವರು ನೆರವೇರಿಸಿದರು. ಹಾಗೂ ಕಲ್ಯಾಣ ಪತ್ತಿನ ಸೌಹಾರ್ದ ಸಹಕಾರಿ ನಿ ಬೀದರ ಇದರ ಸದಸ್ಯರು ಹಾಗೂ ಸಿಬ್ಬಂದಿ ವರ್ಗದವರು ಹಾಗೂ ಸೌಹಾರ್ದ ಸಂಯುಕ್ತ ಸಹಕಾರಿಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಭಾರತೀಯ ಸೇನಾ ಆಯ್ಕೆಗೆ ಪೂರ್ವ ಸಿದ್ಧತಾ ತರಬೇತಿ

**ಮಲ್ಲಮ್ಮ ನುಡಿ ವಾರ್ತೆ**
**ಬೀದರ:**

ಸೆಪ್ಟೆಂಬರ್.05–ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಭಾರತೀಯ ಸೇನೆ /ಇತರೆ ಯೂನಿಫಾರ್ಮ್ ಸೇವೆಗಳಿಗೆ ಸೇರ ಬಯಸುವ ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ–1, 2(ಎ), 3(ಎ) ಹಾಗೂ 3(ಬಿ) ಗಳ ಅರ್ಹ ಅಭ್ಯರ್ಥಿಗಳಿಗೆ ಆಯ್ಕೆಯ ಪೂರ್ವ ಸಿದ್ಧತೆ ಬಗ್ಗೆ ವೃತ್ತಿ ಮಾರ್ಗದರ್ಶನ ಹಾಗೂ ತರಬೇತಿಯನ್ನು ಉಚಿತವಾಗಿ ನೀಡಲಾಗುತ್ತಿದ್ದು, ಜಿಲ್ಲೆಯ ಅರ್ಹ ಅಭ್ಯರ್ಥಿಗಳಿಂದ (ಬಾಲಕರು) ಅರ್ಜಿ ಆಹ್ವಾನಿಸಲಾಗಿದೆ ಎಂದು ಬೀದರ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ತರಬೇತಿಯು ಬ್ರಹ್ಮಾವರ ತಾಲೂಕು ಬಾರ್ಕೂರು ಹನೆಹಳ್ಳಿ ನ್ಯಾಷನಲ್ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆಯಲಿದ್ದು, ಅಭ್ಯರ್ಥಿಯು ದಿನಾಂಕ: 26–09–2005 ರಿಂದ 26–09–2008ರ ಅವಧಿಯಲ್ಲಿ ಜನಿಸಿರುವ ಅರ್ಹರು ಸೆಪ್ಟಂಬರ್.26 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಹ ಅಭ್ಯರ್ಥಿಗಳನ್ನು ಅಕ್ಟೋಬರ್ 6 ರಂದು ನಡೆಯುವ ನಗರದ ಅಜ್ಜರಕಾಡು ಮಹಾತ್ಮಗಾಂಧಿ ಮೈದಾನದಲ್ಲಿ ರ್‍ಯಾಲಿಯಲ್ಲಿ ಆಯ್ಕೆ ಮಾಡಲಾಗುವುದು. ಸದರಿ ರ್‍ಯಾಲಿಯಲ್ಲಿ ಭಾಗವಹಿಸಲು ಇಚ್ಛೆ ಇರುವ ಅಭ್ಯರ್ಥಿಗಳು ಭಾಗವಹಿಸಬಹುದಾಗಿದೆ.

ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ, ಕೊಠಡಿ ಸಂಖ್ಯೆ: 304, ಬಿ ಬ್ಲಾಕ್, ಎರಡನೇ ಮಹಡಿ, ರಜತಾದ್ರಿ, ಮಣಿಪಾಲ–576104 ದೂರವಾಣಿ ಸಂಖ್ಯೆ: 0820–2574881/ಜಿಲ್ಲಾ/ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಥವಾ ವೆಬ್‌ಸೈಟ್ https://udupi.nic.in ಅನ್ನು ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

ನೋಂದಣಿ ಸಂಖ್ಯೆ:ಉನಿಬ/ನೊಂದನಿ/ಸೌ.ಸ. RG004S210000252/2021-22

**ಉಳವಿ ಚನ್ನಬಸವ ಪತ್ತಿನ ಸೌಹಾರ್ದ ಸಹಕಾರಿ ನಿ.,**

**ಪಿ.ಬಿ.ಸಿ.ಎಮ್.ಸಿ. ನೋ. 9–1–352/9–1–356, ಎರಡನೆ ಮಹಡಿ ಶಿವಸಾಯಿ ಕಾಂಪ್ಲೇಕ್ಸ್, ಬಸವೇಶ್ವರ ವೃತ್ತದ ಹತ್ತಿರ, ನೈಕಮಾನ ಹೈದ್ರಾಬಾದ ರಸ್ತೆ–585 401. ಮೊ.9686674821**

**5ನೇ ವಾರ್ಷಿಕ ಸಾಮಾನ್ಯ ಸಭೆಯ ನೋಟಿಸ್**

**ದಿನಾಂಕ:17–09–2025 ಬುಧವಾರ**

**ಸನ್ಮಾನ್ಯ ಸಹಕಾರಿ ಬಂಧು ಶ್ರೀ.ಶ್ರೀಮತಿ**.............................................................
.............................................................

ಉಳವಿ ಚನ್ನಬಸವ ಪತ್ತಿನ ಸೌಹಾರ್ದ ಸಹಕಾರಿ ನಿ., ಬೀದರನ 5ನೇ ಸಾಮಾನ್ಯ ಸಭೆಯನ್ನು ದಿನಾಂಕ:17–09–2025 ರಂದು ಬುಧವಾರ ಮುಂಜಾನೆ 11:00 ಸಹಕಾರಿ ಆವರಣದ ಬಸವೇಶ್ವರ ವೃತ್ತ ನೈಕಮಾನ ಬೀದರನಲ್ಲಿ ಕರೆಯಲಾಗಿದೆ. ದಯವಿಟ್ಟು ತಾವು ತಪ್ಪದೇ ಈ ಸಭೆಗೆ ಹಾಜರಾಗಬೇಕಾಗಿ ವಿನಂತಿ.

**ವಿಷಯಗಳು.**

1) ಪೂಜೆ ಮತ್ತು ಪ್ರಾರ್ಥನೆ
2) ಸರ್ವ ಸದಸ್ಯರಿಗೆ ಹಾಗೂ ಗಣ್ಯರಿಗೆ ಸ್ವಾಗತ
3) ಸಭೆ ನೋಟಿಸ್‌ನ್ನು ಓದುವುದು ಮತ್ತು ದಾಖಲಿಸುವುದು.
4) 4ನೇ ವಾರ್ಷಿಕ ಮಹಾಸಭೆ ನಡಾವಳಿಯನ್ನು ಓದಿ ಅನಮೋದಿಸುವುದು.
5) 2024–2025ನೇ ಸಾಲಿನ ಲೆಕ್ಕ ಪರಿಶೋಧನಾ ವರದಿ ಓದಿ ಧೃಢಿಕರಿಸುವುದು.
6) 2024–25ನೇ ಸಾಲಿನಲ್ಲಿ ಕ್ರೀಯಾ ಯೋಜನೆಯನ್ನು ಅನುಮೋದಿಸುವುದು.
7) 2025–26ನೇ ಸಾಲಿನ ಅಂದಾಜು ಆಯ ವ್ಯಯವನ್ನು ಮಂಜೂರು ಮಾಡುವುದು.
8) 2025–26ನೇ ಸಾಲಿನ ಲೆಕ್ಕ ಪರಿಶೋಧಕರ ನೇಮಕಾತಿ.
9) 2024–25ನೇ ಸಾಲಿನಲ್ಲಿ ಸದಸ್ಯರ ಸಾಲ ಮರುಪಾವತಿಯಲ್ಲಿ ಉತ್ತಮ ಗ್ರಾಹಕರಿಗೆ ಅಭಿನಂದನೆ ಸಲ್ಲಿಸುವ ಕುರಿತು.
10) ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು

ದಿನಾಂಕ:31/08/2025
ಸ್ಥಳ:ಬೀದರ

**ಸಹಿ/–**
**ಅಧ್ಯಕ್ಷರ ಆದೇಶದ ಮೇರೆಗೆ**
ನಾಗಶೆಟ್ಟಿ ಪಾಟೀಲ ಸುಂಕನಾಳ
ಮುಖ್ಯಕಾರ್ಯನಿರ್ವಾಹಣಾಧಿಕಾರಿ
ಬೀದರ

## ಸಮೀರ್ ನಿವಾಸದ ಮೇಲೆ

# ಬೆಳ್ತಂಗಡಿ ಪೊಲೀಸರ ದಾಳಿ

**ಬೆಂಗಳೂರು:**

ಸೆ.5– ಯೂ ಟ್ಯೂಬರ್ ಸಮೀರ್ ವಾಸವಾಗಿದ್ದ ಬನ್ನೆರುಘಟ್ಟದ ಹುಲ್ಲಹಳ್ಳಿಯ ಬಾಡಿಗೆ ಮನೆ ಮೇಲೆ ಬೆಳ್ತಂಗಡಿ ಪೊಲೀಸರು ಇಂದು ಮಧ್ಯಾಹ್ನ ದಾಳಿ ಮಾಡಿದ್ದಾರೆ. ಯೂ ಟ್ಯೂಬರ್ ಎಂಡಿ ಸಮೀರ್ ಬೆಳ್ತಂಗಡಿ ಪೊಲೀಸರಿಗೆ ಸರಿಯಾಗಿ ತನಿಖೆಗೆ ಸಹಕರಿಸದ ಹಿನ್ನೆಲೆಯಲ್ಲಿ ನ್ಯಾಯಾಲಯದಿಂದ ಸರ್ಚ್ ವಾರೆಂಟ್ ಪಡೆದು ಇನ್ಸ್‌ಪೇಕ್ಟರ್ ನಾಗೇಶ್ ಖದ್ರಿ ಮತ್ತು ಅವರ ತಂಡ ಎಫ್‌ಎಸ್‌ಎಲ್ ವಿಭಾಗದ ಸೋಕೋ ಸಿಬ್ಬಂದಿ ಜತೆ ಇಂದು ಮಧ್ಯಾಹ್ನ 1.30ರ ಸುಮಾರಿನಲ್ಲಿ ನಗರಕ್ಕೆ ಆಗಮಿಸಿ ಆತನ ಮನೆಯನ್ನು ಮಹಜರು ನಡೆಸಿದೆ. ಪ್ರಕರಣದ ವಿಡಿಯೋ ಮಾಡಲು ಬಳಸಿದ ಕಂಪ್ಯೂಟರ್ ಮತ್ತು ಮೊಬೈಲ್‌ಅನ್ನು ಈಗಾಗಲೇ ಪೊಲೀಸರು ವಶಕ್ಕೆ ಪಡೆದಿದ್ದಾರೆ. ಬೆಳ್ತಂಗಡಿ ಪೊಲೀಸರು ಈಗಾಗಲೇ ಆತನನ್ನು ಎರಡು ಬಾರಿ ವಿಚಾರಣೆಗೊಳಪಡಿಸಿ ಮಾಹಿತಿ ಪಡೆದುಕೊಂಡಿದ್ದಾರೆ.

# ಸರ್ಕಾರದಿಂದ ಪರಿಶಿಷ್ಟರ ಹಣ ದುರ್ಬಳಕೆ : ಅಶೋಕ್ ವಾಗ್ದಾಳಿ

**ಮಲ್ಲಮ್ಮ ನುಡಿ ವಾರ್ತೆ**
**ಬೆಂಗಳೂರು:**



ಸೆ.5– ಮುಖ್ಯಮಂತ್ರಿ ಸಿದ್ದರಾಮಯ್ಯನವರೇ, ತಾವು ಮತ್ತು ತಮ ಪಟಾಲಂ ಇನ್ನು ಮುಂದೆ ಎಂದಿಗೂ ಸಾಮಾಜಿಕ ನ್ಯಾಯದ ಬಗ್ಗೆ ಬುರುಡೆ ಭಾಷಣ ಮಾಡಿ ಬುದ್ಧ, ಬಸವ, ಅಂಬೇಡ್ಕರರಿಗೆ ಅವಮಾನ ಮಾಡಬೇಡಿ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್. ಅಶೋಕ್ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಈ ಕುರಿತು ತಮ ಅಧಿಕೃತ ಸಾಮಾಜಿಕ ಜಾಲ ತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ದಲಿತರು, ಹಿಂದುಳಿದ ವರ್ಗಗಳ ಜನರನ್ನು ವೋಟ್ ಬ್ಯಾಂಕ್ ಮಾಡಿಕೊಂಡು ಮೋಸ ಮಾಡಬೇಡಿ ಎಂದು ಕಿಡಿಕಾರಿದ್ದಾರೆ.

ಒಂದು ಕಡೆ ಹಿಂದುಳಿದ ವರ್ಗಗಳ ವಿವಿಧ ಅಭಿವೃದ್ಧಿ ನಿಗಮಗಳಿಗೆ ನೂರಾರು ಕೋಟಿ ಅನುದಾನ ಕಡಿತ ಮಾಡಿದ್ದೀರಿ, ಮತ್ತೊಂದು ಕಡೆ ಮೀಸಲಿಟ್ಟಿರುವ ಹಣವನ್ನು ಸರಿಯಾಗಿ ಖರ್ಚು ಮಾಡಿಲ್ಲ. ಇದೇನಾ ಸ್ವಾಮಿ ನಿಮ ಸಾಮಾಜಿಕ ನ್ಯಾಯ? ಕಾಂಗ್ರೆಸ್ ಸರ್ಕಾರಕ್ಕೆ ನಾಚಿಕೆಯಾಗಬೇಕು ಎಂದು ಆಕ್ರೋಶ ಹೊರಹಾಕಿದ್ದಾರೆ.

ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗೆ ವಿನಿಯೋಗವಾಗಬೇಕಾಗಿದ್ದ ವಾಲ್ಮೀಕಿ ಅಭಿವೃದ್ಧಿ ನಿಗಮದ 187 ಕೋಟಿ ಹಣವನ್ನ ಲಪಟಾಯಿಸಿದ್ದಾಯ್ತು. ಎಸ್‌ಸಿಎಸ್‌ಪಿ–ಟಿಎಸ್‌ಪಿ ಹಣದಲ್ಲಿ ಪ್ರತಿ ವರ್ಷ ಬರೋಬ್ಬರಿ 15 ಸಾವಿರ ಕೋಟಿ ರೂಪಾಯಿ ಹಣವನ್ನ ಬೇರೆಡೆ ವರ್ಗಾಯಿಸಿ ದುರ್ಬಳಕೆ ಮಾಡಿದ್ದಾಯ್ತು. ಈಗ ಹಿಂದುಳಿದ ಸಮುದಾಯಗಳ ಅಭಿವೃದ್ಧಿ ನಿಗಮಗಳ ಅಹಿಂದ ನಿಗಮಗಳ ಅನುದಾನ ಖೋತಾ, ಡೋಂಗಿ ಸಮಾಜವಾದಿಗಳ ಸಾಮಾಜಿಕ ನ್ಯಾಯ ಭಾಷಣಕ್ಕೆ ಮಾತ್ರ ಸೀಮಿತ! ಸಿಎಂ ಸಿದ್ದರಾಮಯ್ಯನವರೇ, ತಮ ಸರ್ಕಾರ ಬಂದಾಗಿನಿಂದ ಕಳೆದ ಎರಡು ವರ್ಷಗಳಲ್ಲಿ ಹಿಂದುಳಿದ ಸಮುದಾಯಗಳಿಗೆ ಮಾಡಿರುವ ದೊಡ್ಡ ಉಪಕಾರದ ಬಗ್ಗೆ ಓದಿಕೊಳ್ಳಿ ಎಂದು ವ್ಯಂಗ್ಯವಾಡಿದ್ದಾರೆ.

ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಅನುದಾನದಲ್ಲಿ 90 ಕೋಟಿ ರೂ. ಅನುದಾನ ಕಡಿತ, ವಿಶ್ವಕರ್ಮ ನಿಗಮಕ್ಕೆ 12 ಕೋಟಿ ಅನುದಾನ ಕಡಿತ, ಉಪ್ಪಾರ ನಿಗಮಕ್ಕೆ 7 ಕೋಟಿ ಅನುದಾನ ಕಡಿತ, ಅಂಬಿಗರ ಚೌಡಯ್ಯ ನಿಗಮಕ್ಕೆ 16 ಕೋಟಿ ರೂ. ಕಡಿತ, ಸವಿತಾ ಸಮಾಜಕ್ಕೆ 5 ಕೋಟಿ ಅನುದಾನ ಕಡಿತ ನೋಡಿದರೆ ಪ್ರತಿ ವರ್ಷ ನೂರಾರು ಕೋಟಿ ಅನುದಾನ ಕಡಿತವಾಗಿದೆ ಎಂದು ಅವರು ಸರ್ಕಾರದ ಗಮನಸೆಳೆದಿದ್ದಾರೆ.

# ಸಮೀಕ್ಷೆಯಲ್ಲಿ ಎಸ್.ಟಿ. ಗೊಂಡ ಎಂದೇ ಬರೆಸಿ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಸೆ. 05 : ರಾಜ್ಯ ಸರ್ಕಾರವು ಸೆಪ್ಟೆಂಬರ್ 22 ರಿಂದ ಅಕ್ಟೋಬರ್ 7 ರ ವರೆಗೆ ನಡೆಸಲಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯಲ್ಲಿ ಜಿಲ್ಲೆಯ ಗೊಂಡ ಸಮುದಾಯದವರು ಎಸ್.ಟಿ. ಗೊಂಡ ಎಂದೇ ಬರೆಸಬೇಕು ಎಂದು ಗೊಂಡ ಸಮುದಾಯದ ಮುಖಂಡರು ಮನವಿ ಮಾಡಿದ್ದಾರೆ. ಎಲ್ಲರೂ ಗೊಂಡ ಎಂದು ಬರೆಸಿದರೆ ಸರ್ಕಾರದ ವಿವಿಧ ಸೌಲಭ್ಯಗಳನ್ನು ಪಡೆಯಲು ಅನುಕೂಲವಾಗಲಿದೆ ಎಂದು ಜಿಲ್ಲಾ ಗೊಂಡ ಪರ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ತುಕಾರಾಮ ಚಿಮಕೋಡೆ, ಗೊಂಡ (ಕುರುಬ) ನೌಕರರ ಸಂಘದ ಅಧ್ಯಕ್ಷ ಬಸವರಾಜ ಮಾಳಗೆ, ಕಲಬುರಗಿ-ಬೀದರ್-ಯಾದಗಿರಿ ಹಾಲು ಒಕ್ಕೂಟದ ಮಾಜಿ ಅಧ್ಯಕ್ಷ, ಹಾಲಿ ನಿರ್ದೇಶಕ ಮಲ್ಲಿಕಾರ್ಜುನ ಬಿರಾದಾರ(ಪರಿಹಾರ), ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ವಿಜಯಕುಮಾರ ಕಾಶೆಂಪುರ, ಒಕ್ಕೂಟದ ಉಪಾಧ್ಯಕ್ಷ ಸಂಗಪ್ಪ ಚಿದ್ರಿ, ಕಾರ್ಯದರ್ಶಿ ಮಾಣಿಕಪ್ಪ ಬರಿದಾಬಾದ್, ಸಲಹೆಗಾರ ಧನರಾಜ ಕಟಗಿ, ಬೀದರ್ ತಾಲ್ಲೂಕು ಅಧ್ಯಕ್ಷ ಕುಶಾಲ್ ಹಾಸಗೊಂಡ ಹಾಗೂ ತುಕಾರಾಮ ಸೋರಳ್ಳಿ ತಿಳಿಸಿದ್ದಾರೆ.

ಗೊಂಡ ಸಮುದಾಯವು ದೇಶದ ಮೂಲನಿವಾಸಿಗಳ ಬುಡಕಟ್ಟು ಸಮುದಾಯವಾಗಿದೆ. ಕಲ್ಯಾಣ ಕರ್ನಾಟಕದ ಬೀದರ್, ಕಲಬುರಗಿ ಹಾಗೂ ಯಾದಗಿರಿ ಜಿಲ್ಲೆಗಳಲ್ಲಿ ಸಮುದಾಯದ ಜನರು ಅಧಿಕ ಸಂಖ್ಯೆಯಲ್ಲಿ ಇದ್ದಾರೆ. ಹಿಂದೆ ಕುಲಶಾಸ್ತ್ರೀಯ ಅಧ್ಯಯನ ನಡೆಸಿದ ರಾಜ್ಯ ಸರ್ಕಾರ ಈ ಮೂರು ಜಿಲ್ಲೆಗಳಲ್ಲಿ ಗೊಂಡ ಹಾಗೂ ಕುರುಬ ಪದಗಳು ಪರ್ಯಾಯ ಪದಗಳಾಗಿದ್ದು, ಅವುಗಳನ್ನು ಪರ್ಯಾಯ ಪದಗಳೆಂದು ಪರಿಗಣಿಸುವಂತೆ ಕೇಂದ್ರಕ್ಕೆ ಶಿಫಾರಸು ಮಾಡಿದೆ ಎಂದು ಹೇಳಿದ್ದಾರೆ.

ದೆಹಲಿಯ ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ, ಸಾಮಾಜಿಕ ಶಾಸ್ತ್ರಜ್ಞ ಡಾ. ಶಾಮಸಿಂಗ್ ಶಶಿ ಅವರು ತಮ್ಮ 'ದಿ ಶೆಫರ್ಡ್ ಆಫ್ ಇಂಡಿಯಾ' ಕೃತಿಯ ಪುಟ ಸಂಖ್ಯೆ 61 ರಲ್ಲಿ ಬೀದರ್ ಜಿಲ್ಲೆಯಲ್ಲಿ ಗೊಂಡ ಜನಾಂಗ ವಾಸವಾಗಿರುವುದನ್ನು ಉಲ್ಲೇಖಿಸಿದ್ದಾರೆ ಎಂದು ತಿಳಿಸಿದ್ದಾರೆ.

ಸಮುದಾಯ ಅನಕ್ಷರತೆ ಕಾರಣಕ್ಕಾಗಿ ಜಿಲ್ಲೆಯಲ್ಲಿ ಹಿಂದೆ ಸಾಮಾಜಿಕ, ಶೈಕ್ಷಣಿಕ, ರಾಜಕೀಯ ಹಾಗೂ ಆರ್ಥಿಕವಾಗಿ ತೀರಾ ಹಿಂದುಳಿದಿತ್ತು. ಸಮಾಜದ ಹಿರಿಯರ ಹೋರಾಟದ ಫಲವಾಗಿ ಎಸ್.ಟಿ. ಗೊಂಡ ಪ್ರಮಾಣ ಪತ್ರ ದೊರಕಿತ್ತು. ಅದರ ನಂತರ ಅಭಿವೃದ್ಧಿಯತ್ತ ಮುಖ ಮಾಡಿದೆ ಎಂದು ಹೇಳಿದ್ದಾರೆ. ಸಮುದಾಯದ ಹಿತಕ್ಕಾಗಿ ಸಮೀಕ್ಷಕರು ಮನೆ ಮನೆಗೆ ಭೇಟಿ ನೀಡಿದಾಗ ಗೊಂಡ ಎಂದು ಬರೆಸುವುದನ್ನು ಮರೆಯಬಾರದು ಎಂದು ತಿಳಿಸಿದ್ದಾರೆ.

# ಭಾಲ್ಕಿಯಲ್ಲಿ ಶಿಕ್ಷಕರ ದಿನಾಚರಣೆ: ರೋಗಿಗಳಿಗೆ ಹಣ್ಣು ವಿತರಣೆ

ಮಲ್ಲಮ್ಮ ನುಡಿ ವಾರ್ತೆ



ಭಾಲ್ಕಿ:ಸೆ.5:ಶಿಕ್ಷಕರ ದಿನಾಚರಣೆಯ ಅಂಗವಾಗಿ ಕಲ್ಯಾಣ ಕರ್ನಾಟಕದ ಎಲ್ಲ ಜಿಲ್ಲೆಗಳನ್ನು ಒಳಗೊಂಡ ಕಲ್ಯಾಣ ಕರ್ನಾಟಕ ಶಿಕ್ಷಕರ ಸಂಘದ ಸಂಸ್ಥಾಪಕ ಅಧ್ಯಕ್ಷರಾದ ಬಾಲಾಜಿ ಬೈರಾಗಿ ಅವರ ಅಧ್ಯಕ್ಷತೆಯಲ್ಲಿ ಭಾಲ್ಕಿ ನಗರದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯಲ್ಲಿ ಹೃದಯಸ್ಪರ್ಶಿ ಕಾರ್ಯಕ್ರಮ ಜರುಗಿತು.

ಈ ಸಂದರ್ಭದಲ್ಲಿ ಸಂಘದ ವತಿಯಿಂದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ರೋಗಿಗಳಿಗೆ ಹಣ್ಣುಗಳನ್ನು ವಿತರಿಸಿ,ಸಮಾಜ ಸೇವೆಯ ಮೂಲಕ ಶಿಕ್ಷಕರ ದಿನಾಚರಣೆಯನ್ನು ಆಚರಣೆ ಮಾಡುವ ಮೂಲಕ ಸಾರ್ಥಕಗೊಳಿಸಲಾಯಿತು.

ಬಾಲಾಜಿ ಬೈರಾಗಿ ಮಾತನಾಡಿ ಶಿಕ್ಷಕರು ಕೇವಲ ಪಾಠ ಹೇಳುವವರಲ್ಲ, ಅವರು ಸಮಾಜದಲ್ಲಿ ಮೌಲ್ಯಗಳ ಬೆಳಕನ್ನು ಹರಡುವವರು. ಶಿಕ್ಷಕರ ದಿನವನ್ನು ವಿದ್ಯಾರ್ಥಿಗಳಷ್ಟೇ ಅಲ್ಲ, ಸಮಾಜದ ಪ್ರತಿಯೊಬ್ಬರ ಜೀವನವನ್ನು ಸ್ಪರ್ಶಿಸುವ ದಿನವನ್ನಾಗಿಸಬೇಕು. ರೋಗಿಗಳಿಗೆ ಧೈರ್ಯ ತುಂಬುವುದು ನಮ್ಮ ಮಾನವೀಯ ಜವಾಬ್ದಾರಿಯಾಗಿದೆ.ಸಾಮಾಜಿಕ ಸೇವೆಗಳು ಮಾಡುವ ಮೂಲಕ ಗುರುಗಳಿಗೆ ಸಮಾಜದಲ್ಲಿ ಗೌರವ ಸಿಗುತ್ತದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಮಾನವೀಯತೆ, ಕರುಣೆ, ಸೇವಾಭಾವನೆಗಳನ್ನು ಪ್ರತಿಪಾದಿಸುವ ಈ ಕಾರ್ಯ ಸಮಾಜಕ್ಕೆ ಪ್ರೇರಣೆ-ಯಾಗಿದ್ದು, ಇತರ ಸಂಘಟನೆಗಳಿಗೂ ಮಾದರಿಯಾಗಿದೆ.

ಕಾರ್ಯಕ್ರಮದಲ್ಲಿ ಸಂತೋಷ ವಾಡೆ,ವಿಶ್ವನಾಥ ಕರಕರೇ,ಅಶೋಕ ಬಿರಾದರ,ರಾಜಶೇಖರ,ನೀಲಕಂಠ ಕುರುಣೆ,ವಿಜಯಕುಮಾರ,ಜಗನಾಥ ಸೋನೆ,ಭೀಮಣ್ಣಕೊಂಕಣಿ,ಅಶೋಕ ಮಲ್ಲೇಶಿ,ಹಣಮಶೆಟ್ಟಿ,ರಾಜಕುಮಾರ, ಬಸವರಾಜ,ಸತೀಶ,ಯಲ್ಲಪ್ಪ ಸೇರಿದಂತೆ ಅನೇಕ ಪದಾಧಿಕಾರಿಗಳು,ಸದಸ್ಯರು ಹಾಗೂ ಶಿಕ್ಷಕರು ಉಪಸ್ಥಿತರಿದ್ದರು.

# ಜಿ.ಎಸ್.ಟಿ. ದರ ಇಳಿಕೆ ಕೇಂದ್ರದ ಜನಪರ ನಿರ್ಣಯ ಜಿಲ್ಲಾ ಬಿಜೆಪಿ ಸ್ವಾಗತ



ಬೀದರ. ಸೆ. 05 : ಪ್ರಧಾನ ಮಂತ್ರಿ ಶ್ರೀ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಅವರ ಮಾರ್ಗದರ್ಶನದಂತೆ ಕೇಂದ್ರ ಸರ್ಕಾರದಿಂದ ದೇಶದಲ್ಲಿ ಜಿಎಸ್.ಟಿ ದರವನ್ನು ಇಳಿಸಲಾಗಿದೆ. ಇದರಿಂದ ದೇಶದ ಜನತೆಗೆ ಭಾರಿ ಅನುಕೂಲ ಆಗಲಿದೆ ದುಬಾರಿ ವಸ್ತುಗಳ ಮೇಲಿನ ಜಿ.ಎಸ್.ಟಿಯನ್ನು ಇಳಿಸಿ ಎಲ್ಲಾ ಜನರಿಗೆ ಅನುಕೂಲವಾಗುವಂತೆ ಮಾಡಿರುವ ಈ ದಿಟ್ಟ ನಿರ್ಣಯದ ಜಿಲ್ಲಾ ಬಿಜೆಪಿ ಜಿಲ್ಲಾಧ್ಯಕ್ಷರಾದ ಸೋಮನಾಥ ಪಾಟೀಲ ಅವರು ಸ್ವಾಗತ ಮಾಡಿದ್ದಾರೆ.

ದಿನನಿತ್ಯ ಉಪಯೋಗಿ ವಸ್ತುಗಳು, ಹಾಲಿನ ಉತ್ಪನ್ನಗಳು, ಅರೋಗ್ಯ, ಲೈಫ್ ಇನ್ಸುರೇನ್ಸ್ ನಂತಹ ಬಹು ಅವಶ್ಯಕತೆಗಳ ಮೇಲಿನ ಜಿ.ಎಸ್.ಟಿ ಸಂಪೂರ್ಣ ತೆಗೆದಿರವುದು ಜೊತೆಗೆ ಉಳಿದ ಎಲ್ಲಾ ವಸ್ತುಗಳ ಮೇಲೆಯೂ ಹೆಚ್ಚು ಕಡಿಮೆ ಜಿ.ಎಸ್.ಟಿ ಇಳಿಕೆ ಮಾಡಿರುವುದರಿಂದ ಅಗತ್ಯ ವಸ್ತುಗಳ ಬೆಲೆ ಕಡಿಮೆ ಆಗಲಿದೆ, ಜನರು ಸಂತೋಷದಿಂದ ಜೀವನ ಸಾಗಿಸಲು ಅನುಕೂಲವಾಗಲಿದೆ.

ಮಹತ್ವದ ನಿರ್ಣಯ ಕೈಗೊಂಡಿರುವ ದೇಶದ ಪ್ರಧಾನಮಂತ್ರಿಗಳಾದ ಸನ್ಮಾನ್ಯ ಶ್ರೀ ನರೇಂದ್ರ ಮೋದಿಜೀಯವರಿಗೆ, ಕೇಂದ್ರ ಹಣಕಾಸು ಸಚಿವೆ ಸನ್ಮಾನ್ಯ ಶ್ರೀಮತಿ. ನಿರ್ಮಲಾ ಸೀತಾರಾಮನ್ ಅವರಿಗೆ ಮತ್ತು ಎಲ್ಲಾ ಜಿ.ಎಸ್.ಟಿ. ಮಂಡಳಿಯ ಸದಸ್ಯರುಗಳಿಗೆ ಬಿಜೆಪಿ ಜಿಲ್ಲಾಧ್ಯಕ್ಷರಾದ ಸೋಮನಾಥ ಪಾಟೀಲ ಅವರು ಪತ್ರಿಕಾ ಪ್ರಕಟಣೆಯಲ್ಲಿ ಧನ್ಯವಾದಗಳು ತಿಳಿಸಿದ್ದಾರೆ.

# ಮಡಿವಾಳೇಶ್ವರ ಶಾಲೆಯಲ್ಲಿ ಶಿಕ್ಷಕರ ದಿನಾಚರಣೆ



ಬೀದರ. ಸೆ.05 : ಸರಸ್ವತಿ ಶಿಕ್ಷಣ ವಿಕಾಸ ಸಮಿತಿ ಸಂಚಾಲಿತ ಶ್ರೀ ಮಡಿವಾಳೇಶ್ವರ ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಇಂದು ಶಿಕ್ಷಕರ ದಿನಾಚರಣೆ ಅತ್ಯಂತ ಭಾವನಾತ್ಮಕವಾಗಿ ಆಚರಿಸಲಾಯಿತು.

ಅತಿಥಿ ನುಡಿಗಳಲ್ಲಿ ಶ್ರೀ ಶರಣು ಪಾಟೀಲ್ ಅವರು ಮಾತನಾಡಿ,"ರಾಷ್ಟ್ರ ನಿರ್ಮಾಣದಲ್ಲಿ ಶಿಕ್ಷಕರು ಮಹತ್ವದ ಪಾತ್ರವಹಿಸುತ್ತಾರೆ. ಶಿಕ್ಷಕರೇ ಭಾರತದ ಭವ್ಯ ನಿರ್ಮಾಣದ ಶಿಲ್ಪಿಗಳು. ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ನೆಚ್ಚಿನ ವೃತ್ತಿ ಶಿಕ್ಷಕ ವೃತ್ತಿಯಾಗಿತ್ತು. ಅವರು ರಾಷ್ಟ್ರಪತಿ ಹಾಗೂ ಉಪರಾಷ್ಟ್ರಪತಿಯಾಗಿ ದೇಶದ ಕೀರ್ತಿಯನ್ನು ಹೆಚ್ಚಿಸಿದರೂ, ಶಿಕ್ಷಕ ವೃತ್ತಿಯೇ ಅತ್ಯುನ್ನತವಾದದ್ದು ಎಂದು ಪ್ರತಿಪಾದಿಸಿದ್ದರು" ಎಂದರು.

ಅಧ್ಯಕ್ಷೀಯ ನುಡಿಗಳಲ್ಲಿ ಶ್ರೀ ಚನ್ನಬಸವಂತ ರೆಡ್ಡಿ ಮಾತನಾಡಿ, "ಶಿಕ್ಷಕರು ವಿದ್ಯಾರ್ಥಿಗಳ ಜೀವನಕ್ಕೆ ದಾರಿ ದೀಪರಾಗಬೇಕು. ಪಾಠದ ಹೊರತಾಗಿ ವಿದ್ಯಾರ್ಥಿಗಳ ಮನಸ್ಸಿನಲ್ಲಿ ಒಳ್ಳೆಯ ಪ್ರಭಾವ ಬೀರಬೇಕು. ಮಣ್ಣಿನ ಮುದ್ದೆಯನ್ನು ಮೂರ್ತಿಯಾಗಿ ರೂಪಿಸುವ ಶಕ್ತಿ ಶಿಕ್ಷಕರಲ್ಲಿದೆ. ಮೌಲ್ಯ, ಶಿಸ್ತು, ತ್ಯಾಗಭಾವ ಮತ್ತು ಸಮರ್ಪಣೆ ಶಿಕ್ಷಕರಲ್ಲಿ ಇರಬೇಕಾಗಿದೆ" ಎಂದು ಹೇಳಿದರು. ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷ ಪ್ರೊ. ಎಸ್.ಬಿ. ಸಜ್ಜನಶೆಟ್ಟಿ, ಕಾರ್ಯದರ್ಶಿ ಹನುಮಂತರಾವ್ ಪಾಟೀಲ್, ಉಪಾಧ್ಯಕ್ಷ ನಾಗೇಶ್ ರೆಡ್ಡಿ, ಆಡಳಿತ ಮಂಡಳಿ ಸದಸ್ಯ ಶಿವಶರಣಪ್ಪ ಪಾಟೀಲ್, ಆಡಳಿತಾಧಿಕಾರಿ ಬಂಡೆಪ್ಪ ಎಕ್ಕಲಾರೆ, ಪ್ರಾಥಮಿಕ ಶಾಲೆಯ ಮುಖ್ಯಗುರು ಅರ್ಚನಾ ಶಿರಿಗೇರಿ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಶಿಕ್ಷಕರಿಗೆ ಪಾದಪೂಜೆ ಸಲ್ಲಿಸಿ ಸನ್ಮಾನ ಮಾಡಿದರು. ವೈಷ್ಣವಿ ರಾಜೇಂದ್ರ ಪ್ರಸಾದ್ ಸ್ವಾಗತಿಸಿದರು, ಶ್ರದ್ಧಾ ನೀಲಕಂಠ ಭಕ್ತಿಗೀತೆ ಹಾಡಿದರು, ತ್ರಿಶಾ ಸಿದ್ದೇಶ್ವರ ನಿರೂಪಿಸಿದರು ಮತ್ತು ಅಂಕಿತ ಚಂದ್ರಕಾಂತ ವಂದನೆ ಸಲ್ಲಿಸಿದರು.

# ಅನ್ಯಾಯ, ದಬ್ಬಾಳಿಕೆ ಹೆಚ್ಚಳ: ಕಳವಳ




ಬೀದರ. ಸೆ. 05 : ವಿಶ್ವದ ಅತಿದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರದಲ್ಲಿ ಪ್ರಸ್ತುತ ದಲಿತರು, ಅಲ್ಪಸಂಖ್ಯಾತರು, ಮಹಿಳೆಯರ ಮೇಲೆ ಅನ್ಯಾಯ, ದಬ್ಬಾಳಿಕೆ ಹೆಚ್ಚುತ್ತಿದೆ ಎಂದು ಜಮಾ ಅತೆ ಇಸ್ಲಾಮಿ ಹಿಂದ್ ಕೇಂದ್ರ ಸಲಹಾ ಮಂಡಳಿ ಸದಸ್ಯ ಮೌಲಾನಾ ಮುಹಮ್ಮದ್ ಇಕ್ಬಾಲ್ ಮುಲ್ಲಾ ತೀವ್ರ ಕಳವಳ ವ್ಯಕ್ತಪಡಿಸಿದರು.

ನಗರದ ಬೀದರ್ ಗೇಟ್ ವೇ ಸಭಾಂಗಣದಲ್ಲಿ ನ್ಯಾಯದ ಹರಿಕಾರ ಪೈಗಂಬರ್ ಮುಹಮ್ಮದ್ ಸೀರತ್ ಅಭಿಯಾನ ಪ್ರಯುಕ್ತ ಗುರುವಾರ ಏರ್ಪಡಿಸಿದ್ದ 'ನ್ಯಾಯದ ಹರಿಕಾರ ಪೈಗಂಬರ್ ಮುಹಮ್ಮದ್' ಸಂವಾದದಲ್ಲಿ ಅವರು ಮಾತನಾಡಿದರು.

ಆರನೇ ಶತಮಾನದಲ್ಲಿ ಹೆಣ್ಣುಮಕ್ಕಳನ್ನು ಜನಿಸಿದ ಕೂಡಲೇ ಸಮಾಧಿ ಮಾಡಲಾಗುತ್ತಿತ್ತು. ಇಂದು ಅನೇಕ ಶ್ರೀಮಂತರು ಹೆಣ್ಣು ಭ್ರೂಣ ಹತ್ಯೆ ಮಾಡುತ್ತಿದ್ದಾರೆ. ಹೆಣ್ಣುಮಕ್ಕಳ ಬದುಕುವ ಹಕ್ಕು ಕಸಿಯುತ್ತಿದ್ದಾರೆ ಎಂದು ಹೇಳಿದರು.

ನಿರಪರಾಧಿಗಳು 30-35 ವರ್ಷ ಜೈಲಿನಲ್ಲಿದ್ದು ನಂತರ ನಿರಪರಾಧಿಗಳಾಗಿ ಬಿಡುಗಡೆಗೊಳ್ಳುತ್ತಿದ್ದಾರೆ. ಐದು ವರ್ಷಗಳಿಂದ ಜೈಲಿನಲ್ಲಿರುವ ಕೆಲವರ ವಿಚಾರಣೆ ಇನ್ನೂ ಪ್ರಾರಂಭವೇ ಆಗಿಲ್ಲ ಎಂದು ನ್ಯಾಯದ ಕುರಿತು ಅಸಂತೋಷ ವ್ಯಕ್ತಪಡಿಸಿದರು.

ಪ್ರವಾದಿ ಅವರು ಗಂಡು-ಹೆಣ್ಣು ಎನ್ನುವ ಭೇದ ತೊಡೆದು ಹಾಕಿದರು. ಯಾರಿಗಾದರೂ ಮೂವರು ಹೆಣ್ಣುಮಕ್ಕಳಿದ್ದರೆ, ಅವರ ಪಾಲನೆ-ಪೋಷಣೆ ಮಾಡಿದರೆ ಅವನು ಪ್ರವಾದಿಯವರ ಜತೆ ಸ್ವರ್ಗದಲ್ಲಿರುವನು ಎಂದು ಹೇಳಿದ್ದಾರೆ ಎಂದು ತಿಳಿಸಿದರು.

ತಾಯಿಯ ಪಾದದಲ್ಲೇ ಸ್ವರ್ಗ ವಿದೆ ಎಂಬ ಪ್ರವಾದಿಯವರ ವಚನ ಹೇಳಿ, ಹೆಣ್ಣುಮಕ್ಕಳ ಮಹತ್ವ ಮನವರಿಕೆ ಮಾಡಿದರು.

ಪ್ರವಾದಿ ಅವರು ಮಾನವರೆಲ್ಲ ಸಮಾನರು. ಒಂದೇ ತಂದೆ-ತಾಯಿಯ ಮಕ್ಕಳೆಂದು ಸಾರಿದರು. ಜಾತಿ, ಧರ್ಮ, ಮನೆತನ, ಬಣ್ಣ, ಭಾಷೆ ಆಧಾರಿತ ತಾರತಮ್ಯ ಹೋಗಲಾಡಿಸಿದರು. ಜನರ ಮನ ಪರಿವರ್ತನೆ ಮಾಡಿದರು. ಎಲ್ಲರಿಗೂ ಬದುಕುವ ಹಕ್ಕು ಕಲ್ಪಿಸಿದರು. ನ್ಯಾಯ ಸ್ಥಾಪಿಸಿದರು ಎಂದು ತಿಳಿಸಿದರು.

ದೇವರಿಗೆ ಭಯಪಟ್ಟು, ಪ್ರವಾದಿ ಮುಹಮ್ಮದ್(ಸ) ಅವರ ಜೀವನ ಅನುಸರಿಸಿದರೆ ಮತ್ತೆ ನ್ಯಾಯ ಸ್ಥಾಪಿಸಲು ಸಾಧ್ಯವಿದೆ ಎಂದು ತಿಳಿಸಿದರು.

ನಿವೃತ್ತ ಪ್ರಾಚಾರ್ಯ ಮುಹಮ್ಮದ್ ನಿಝಾಮುದ್ದೀನ್ ಅವರು, ಪೈಗಂಬರ್ ಮುಹಮ್ಮದ್ ನ್ಯಾಯದ ಹರಿಕಾರರಾಗಿದ್ದಾರೆ. ಸಾಮಾಜಿಕ, ಆರ್ಥಿಕ, ಮೂಲಭೂತ ಸೌಲಭ್ಯಗಳಂತಹ ವಿಷಯಗಳಲ್ಲಿ ಅವರ ನ್ಯಾಯ ಪರತೆ ಕಾಣಬಹುದಾಗಿದೆ ಎಂದು ತಿಳಿಸಿದರು.

ಉಪನ್ಯಾಸಕಿ ವಿದ್ಯಾದೇವಿ ಹಿರೇಮಠ ಅವರು, ನಾನು ಪ್ರವಾದಿ ಮುಹಮ್ಮದರ ಜೀವನದ ಪುಸ್ತಕ ಓದಿದಾಗ ಅವರ ಕುರಿತ ನನ್ನ ಮೊದಲಿನ ಅಭಿಪ್ರಾಯ ಬದಲಾಯಿತು. ನಿಷ್ಪಕ್ಷಪಾತ ಕನ್ನಡಕದಿಂದ ಇಸ್ಲಾಂ ಧರ್ಮದ ಅಧ್ಯಯನ ಮಾಡಿದರೆ ಸತ್ಯ ತಿಳಿಯುತ್ತದೆ ಎಂದರು.

ಡಾ. ರಾಮಚಂದ್ರ ಗಣಾಪುರ, ಡಾ. ವಿಜಯಶ್ರೀ ಬಶೆಟ್ಟಿ ಅವರು ಪ್ರವಾದಿಯವರ ಜೀವನದ ಮೇಲೆ ಬೆಳಕು ಚೆಲ್ಲಿದರು.

ಶಾಂತಿ ಪ್ರಕಾಶನದ ಪ್ರವಾದಿ ಮುಹಮ್ಮದ್ ಅವರ ಜೀವನ ಕುರಿತ ಎರಡು ಕೃತಿಗಳನ್ನು ಮೌಲಾನಾ ಮುಹಮ್ಮದ್ ಇಕ್ಬಾಲ್ ಮುಲ್ಲಾ ಹಾಗೂ ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷೆ ಗೀತಾ ಪಂಡಿತರಾವ್ ಚಿದ್ರಿ ಬಿಡುಗಡೆ ಮಾಡಿದರು.

ಜಮಾ ಅತೆ ಇಸ್ಲಾಮಿ ಹಿಂದ್ ರಾಜ್ಯ ಸಲಹಾ ಮಂಡಳಿ ಸದಸ್ಯ ಮುಹಮ್ಮದ್ ಆಸಿಫುದ್ದೀನ್, ಬೀದರ್ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ವಿಠ್ಠಲದಾಸ್ ಪ್ಯಾಗೆ, ಜಮಾ ಅತೆ ಇಸ್ಲಾಮಿ ಹಿಂದ್ ಮಹಿಳಾ ವಿಭಾಗದ ಸಂಚಾಲಕಿ ಅಸ್ಮಾ ಸುಲ್ತಾನಾ, ಜಿಲ್ಲಾ ಸಂಚಾಲಕಿ ತಾಹೀದ್ ಸಿಂಧೆ, ಪ್ರಮುಖರಾದ ಶ್ರೀಕಾಂತ ಸ್ವಾಮಿ, ಗುರುನಾಥ ಗಡ್ಡೆ, ಓಂಪ್ರಕಾಶ ರೊಟ್ಟೆ, ಮಹೇಶ ಗೋರನಾಳಕರ್, ವಿನಯ್ ಮಾಳಗೆ, ಎಂ.ಎಸ್. ಉಪ್ಪಿನ್, ಡಾ. ಲಕ್ಕಿ, ಬಾಬುರಾವ್ ಹೊನ್ನಾ, ವಿಜಯಕುಮಾರ, ಜಗದೀಶ್ ಬಿರಾದಾರ, ಶಿಕ್ಷಕಿಯರಾದ ಬಿಕಿಸ್ ಫಾತಿಮಾ, ಲತಿಕಾ, ಡಾ. ಸಾಲಿಕಾ ಕೌಸರ್ ಮತ್ತಿತರರು ಇದ್ದರು.

ಮುಹಮ್ಮದ್ ತಾಹಾ ಕಲೀಮುದ್ದೀನ್ ಕುಆನ್ ಪಠಿಸಿದರು. ಸಿರಾಜ್ ನೆಲವಾಡ ಕನ್ನಡಕ್ಕೆ ಅನುದಾದಿಸಿದರು. ಜಮಾ ಅತೆ ಇಸ್ಲಾಮಿ ಹಿಂದ್ ಸ್ಥಳೀಯ ಘಟಕದ ಅಧ್ಯಕ್ಷ ಮುಹಮ್ಮದ್ ಮೌಅಜ್ಜಂ ಸ್ವಾಗತಿಸಿದರು. ಮುಹಮ್ಮದ್ ಆರಿಫುದ್ದೀನ್ ವಂದಿಸಿದರು.

# ಸಾಧನೆಗೆ ಶಿಕ್ಷಕರ ಮಾರ್ಗದರ್ಶನ ಅತ್ಯಮೂಲ್ಯ : ರೇಷ್ಮಾ ಕೌರ



ಬೀದರ. ಸೆ. 05: ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮ ದಿನಾಚರಣೆ ನಿಮಿತ್ಯ ಶಿಕ್ಷಕರ ದಿನಾಚರಣೆಯನ್ನು ಗುರು ನಾನಕ ಸಂಸ್ಥೆಯ ವತಿಯಿಂದ ಆಯೋಜಿಸಿದ ಶಿಕ್ಷಕರ ದಿನಾಚರಣೆಯನ್ನು ದಿನಾಂಕ 05-09-2025 ಶುಕ್ರವಾರದಂದು ಜನವಾಡಾ ರಸ್ತೆಯಲ್ಲಿರುವ ಝಿರಾ ಕನ್ವೆಂಷನ್ ಹಾಲ್‌ನಲ್ಲಿ ವಿಜೃಂಭಣೆಯಿಂದ ಆಚರಿಸಲಾಯಿತು.

ಸಂಸ್ಥೆಯ ಅಧ್ಯಕ್ಷರಾದ ಡಾ॥ ಎಸ್. ಬಲಬೀರ ಸಿಂಗ್ ಅವರು ರಾಧಕೃಷ್ಣನ್‌ರವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಮಾಲಾರ್ಪಣೆ ಮಾಡಿ, ದೀಪ ಬೆಳೆಗಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡುತ್ತ ಸಕಲ ಶಿಕ್ಷಕರಿಗೆ ಶುಭಾಷಯಗಳನ್ನು ಕೋರಿದರು.

ಗುರು ನಾನಕ ಸಂಸ್ಥೆಯ ಉಪಾಧ್ಯಕ್ಷೆ ಶ್ರೀಮತಿ ರೇಷ್ಮಾ ಕೌರ ಅವರು ಮಾತನಾಡಿ ಶುಭಾಷಯಗಳನ್ನು ತಿಳಿಸುತ್ತ ಮುಂದೆ ಗುರಿ ಹಿಂದೆ ಗುರು ಇದ್ದಲ್ಲಿ ಜೀವನದಲ್ಲಿ ಯಶಸ್ಸು ಕಟ್ಟಿಟ್ಟ ಬುತ್ತಿ, ಪ್ರತಿಯೊಬ್ಬ ಶಿಕ್ಷಕರು ಸೇವಾ ಮನೋಭಾವನೆಯಿಂದ ಸೇವೆ ಸಲ್ಲಿಸಿ, ವಿದ್ಯಾರ್ಥಿಗಳಲ್ಲಿ ಶಿಸ್ತನ್ನು ದೇಶದ ಬಗ್ಗೆ ಗೌರವವನ್ನು ಬೆಳೆಸಬೇಕು ಎಂದು ಹೇಳಿದರು. ಶಿಕ್ಷಕರು ನಾಡನ್ನು ರಕ್ಷಿಸುವ ಭಾವನೆಯನ್ನು ವಿದ್ಯಾರ್ಥಿಗಳಲ್ಲಿ ಬೆಳೆಸಬೇಕು, ವಿದ್ಯಾರ್ಥಿಗಳಿಗೆ ಸನ್ಮಾರ್ಗದಲ್ಲಿ ತೆಗೆದುಕೊಂಡು ಹೋಗಿ ಒಳ್ಳೆಯ ನಾಗರಿಕರನ್ನಾಗಿ ಮಾಡಬೇಕು ವಿದ್ಯಾರ್ಥಿಗಳ ಭವಿಷ್ಯ ನಿಮ್ಮ ಕೈಯಲ್ಲಿದೆ, ಶಿಕ್ಷಕರ ಮಾರ್ಗದರ್ಶನವಿದ್ದಲ್ಲಿ ಯಾರು ಏನುಬೇಕಾದರೂ ಸಾಧಿಸಬಹುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಶಿಕ್ಷಕರನ್ನು ಸನ್ಮಾನಿಸಲಾಯಿತು. ಈ ಕಾರ್ಯಕ್ರಮದಲ್ಲಿ ಗುರು ನಾನಕ ಶಿಕ್ಷಣ ಸಂಸ್ಥೆಯ ಎಲ್ಲಾ ಶಾಲಾ ಕಾಲೇಜುಗಳ ಸುಮಾರು 800 ಕ್ಕಿಂತ ಹೆಚ್ಚು ಸಿಬ್ಬಂದಿ ವರ್ಗದವರು ಹಾಜರಿದ್ದರು. ಶಿಕ್ಷಕ-ಶಿಕ್ಷಕಿಯರಿಗಾಗಿ ವಿವಿಧ ಸ್ಪರ್ಧೆಗಳು ನಡೆದವು. ಶಿಕ್ಷಕ-ಶಿಕ್ಷಕಿಯರು ರಂಗೋಲಿ ಮತ್ತು ರ್‍ಯಾಂಪವಾಕ್ ಮಾಡುವುದರ ಮೂಲಕ ಗಮನ ಸೆಳೆದರು. ವಿಜೇತರಿಗೆ ಬಹುಮಾನಗಳನ್ನು ವಿತರಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಶ್ರೀ ನಾನಕ ಝಿರಾ ಸಾಹೇಬ್

ಫೌಂಡೇಷನ್‌ನ ಕಾರ್ಯದರ್ಶಿ ಸರದಾರ ನಾನಕ ಸಿಂಗ್, ಲೈಫ್ ಟ್ರಸ್ಟಿ ಸರದಾರ ಪ್ರೀತಮ ಸಿಂಗ್, ಆಡಳಿತ ಮಂಡಳಿಯ ಸದಸ್ಯರು, ಸಂಸ್ಥೆಯ ಎಲ್ಲಾ ಶಾಲಾ ಕಾಲೇಜುಗಳ ಪ್ರಾಚಾರ್ಯರು, ಸಿಬ್ಬಂದಿ ವರ್ಗದವರು ಹಾಜರಿದ್ದರು.

# ಸ್ಕೌಟ್ಸ್ ಗೈಡ್ಸ್‌ನಿಂದ ದೇಶಪ್ರೇಮ ಜಾಗೃತಿ: ಪಿ.ಜಿ.ಆರ್ ಸಿಂಧ್ಯಾ



ಬೀದರ. ಸೆ. 05 : ಭಾರತ ಗೈಟ್ಸ್ ಮತ್ತು ಗೈಡ್(ಕಾಲೇಜು ಮಟ್ಟದ ರೋರ್ಸ್ ಮತ್ತು ರೇಂರ್ಸ್) ನಿಂದ ಯುವಜನರಲ್ಲಿ ದೇಶಪ್ರೇಮ ಜಾಗೃತವಾಗುತ್ತದೆ ಎಂದು ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ರಾಜ್ಯ ಆಯುಕ್ತರು ಹಾಗೂ ಮಾಜಿ ಸಚಿವ ಪಿ.ಜಿ.ಆರ್ ಸಿಂಧ್ಯಾ ಹೇಳಿದರು.

ಮಂಗಳವಾರ ನಗರದ ಶಿವನಗರ ಉತ್ತರದಲ್ಲಿರುವ ದಿ.ಮಿಲಿನಿಯಮ್ ಪ್ರೌಢಶಾಲೆ ಅವರಣದಲ್ಲಿ ಬೀದರ್ ವಿಶ್ವವಿದ್ಯಾಲಯ, ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ) ಹಾಗೂ ಭಾರತ ಸ್ಕೌಟ್ಸ್ ಮತ್ತು ಗೈಡ್ಸ್‌ಳ ಸಹಯೋಗದಲ್ಲಿ ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಮುಖ್ಯ ಆಯುಕ್ತೆ ಡಾ.ಗುರಮ್ಮ ಸಿದ್ದಾರೆಡ್ಡಿ ಅವರ ಮಾರ್ಗದರ್ಶನದಲ್ಲಿ ಜಿಲ್ಲೆಯ ಪದವಿ ಪೂರ್ವ ಹಾಗೂ ಪದವಿ ಕಾಲೇಜುಗಳ ಉಪನ್ಯಾದಸಕರು ಮತ್ತು ಪ್ರಾಧ್ಯಾಪಕರಿಗೆ ಒಂದಿ ದಿನದ ಪ್ರಾರಂಭಿಕ ಶಿಬಿರ ಹಾಗೂ ರೋರ್ಸ್ ಲಿರ್ಸ್ ಮತ್ತು ರೆಂಜರ್ಸ್ ಲಿರ್ಸ್‌ಳ ಸಮಾವೇಶ ಉದ್ಘಾಟಿಸಿ ಮಾತನಾಡಿದರು. ಯುವಜನರಲ್ಲಿ ಶಿಸ್ತು, ತಾಳ್ಮೆ, ಸಂಯಮ ಹಾಗೂ ಭಾತೃತ್ವನೆಲೆಗೊಳ್ಳಲು ಭಾರತ ಸ್ಕೌಟ್ಸ್ ಮತ್ತು ಗೈಡ್‌ನಿಂದ ಮಾತ್ರ ಸಾಧ್ಯ. ಹಿರಿಯರ ಬಗ್ಗೆ ಗೌರವ, ದೇಶದ ಬಗ್ಗೆ ಕಾಳಜಿ, ಸಮಾಜದ ಬಗ್ಗೆ ಕಳಕಳಿ, ರಾಷ್ಟ್ರಸೇವೆ ಯುವಜನರ ಪರಮ ಧ್ಯೇಯವಾಗಬೇಕೆಂದರು.

ಬೀದರ್ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಿ.ಎಸ್ ಬಿರಾದಾರ ಮುಖ್ಯ ಅತಿಥಿಗಳಾಗಿ ಮಾತನಾಡಿ, ಕಾಲೇಜು ಹಂತದಲ್ಲಿ ರೆಂರ್ಸ್ ಹಾಗೂ ರೋರ್ಸ್ ಘಟಕ ಪ್ರಾರಂಭಿಸಿದರೆ ಅವರನ್ನು ಹಿಡಿತಕ್ಕೆ ತೆಗೆದುಕೊಳ್ಳಬಹುದು. ಅವರಲ್ಲಿ ಮಾನವಿಯ ಮೌಲ್ಯ ಬೆಳೆಸಬಹುದು. ರಾಜ್ಯ ಹಾಗೂ ರಾಷ್ಟ್ರ ಪುರಸ್ಕಾರಕ್ಕೆ ಪಾತ್ರರಾದ ವಿದ್ಯಾರ್ಥಿಗಳು ಭವಿಷ್ಯದಲ್ಲಿ ಸ್ಪರ್ಧಾತ್ಮಕ ಪರಿಕ್ಷೆಗಳು ಎದುರಿಸಲು ಹಾಗೂ ಹುದ್ದೆಗಳನ್ನು ಅಲಂಕರಿಸಲು ಇದ-ರಿಂದ ಸಾಧ್ಯವಾಗಲಿದೆ ಎಂದವರು ಹೇಳಿದರು.

ಸುವ ಎದೆಗಾರಿಕೆ ಸಲು ಇರುವ ಪರಿಕ್ಷೆಗಳಲ್ಲಿ ಭಾಗವಹಿಸಲು ಸ್ಕೌಟ್ಸ್ ಮತ್ತು ಗೈಡ್ಸ್ ಸಾಧ್ಯವಾಗಲಿದೆ. ಅದಕ್ಕಾಗಿ ನಮ್ಮ ವಿಶ್ವವಿದ್ಯಾಲಯ ವ್ಯಾಪ್ತಿಗೊಳಪಡುವ ಕಾಲೇಜುಗಳಲ್ಲಿ ಕಡ್ಡಾಯವಾಗಿ ಸ್ಕೌಟ್ಸ್ ಮತ್ತು ಗೈಡ್ಸ್(ರೋರ್ಸ್ ಮತ್ತು ರೆಂರ್ಸ್) ಘಟಕಗಳು ಸ್ಥಾಪಿಸಲು ಕರೆ ಕೊಟ್ಟರು.

ಬೀದರ್ ವಿಶ್ವವಿದ್ಯಾಲಯದ ಕುಲಸಚಿವೆ ಸುರೇಖಾ ಮಾತನಾಡಿ, ಕಾಲೇಜು ಹಂತಗಳಲ್ಲಿ ರೋರ್ಸ್ ಮತ್ತು ರೆಂರ್ಸ್‌ಳಿಗೆ ಆ ವಯಸ್ಸಿನಲ್ಲಿ ಸಾಮಾಜಿಕ ಮನೋಭಾವ ಹೆಚ್ಚಾಗಬೇಕಾದರೆ ಕಾಲೇಜಿನ ಎಲ್ಲ ಪ್ರಾಧ್ಯಾಪಕರು ಮತ್ತು ಉಪನ್ಯಾಸಕರು ಸ್ಕೌಟ್ಸ್ ಮತ್ತು ಗೈಡ್ಸ ?? ಗುರುಳಾಗಳಾಗುವಂತೆ ಕರೆ ನೀಡಿದರು.

ಶಾಲಾ ಶಿಕ್ಷಣ ಉಲಾಖೆಯ ಉಪ ನಿರ್ದೇಶಕ ಹೆಚ್.ಜಿ ಸುರೇಶ ಮಾತನಾಡಿ, ಸ್ಕೌಟ್ಸ್ ಮತ್ತು ಗೈಡ್ ಮಕ್ಕಳು ಸದಾ ದೈಹಿಕ ಹಾಗೂ ಮಾನಸಿಕವಾಗಿ ಸಧೃಡರಾಗಿರುವರು. ಕೋಮು ಸಾಮರಸ್ಯ ಹಾಗೂ ರಾಷ್ಟ್ರೀಯ ಭಾವ್ಯಕ್ಯತೆ ಗಟ್ಟಿಗೊಳ್ಳಲು ಸ್ಕೌಟ್ಸ್ ಮತ್ತು ಗೈಡ್ ತುಂಬ ಉಪಯುಕ್ತವಾಗಿದೆ ಎಂದರು. ಭಾರತ ಸ್ಕೌಟ್ಸ್ ಮತ್ತು ಗೈಡ್ ಜಿಲ್ಲಾ ಉಪಾಧ್ಯಕ್ಷೆ ಪ್ರೊ.ಲೀಲಾವತಿ ಚಾಕೊತೆ ಅಧ್ಯಕ್ಷತೆ ವಹಿಸಿದ್ದರು.

ಶಾಲಾ ಶಿಕ್ಷಣ ಇಲಾಖೆ(ಅಭಿವೃದ್ಧಿ) ಉಪ ನಿರ್ದೇಶಕ ಗುರುಪ್ರಸಾದ, ಶಾಹಿನ್ ಶಿಕ್ಷಣ ಸಂಸ್ಥೆಯ ಅಧ್ಯಕ್ಷರು ಹಾಗೂ ಸ್ಕೌಡ್ಸ್ ಮತ್ತು ಗೈಡ್ ಜಿಲ್ಲಾ ಉಪಾಧ್ಯಕ್ಷ ಡಾ.ಅಬ್ದುಲ್ ಖದೀರ್, ಸ್ಕೌಟ್ಸ್ ಮತ್ತು ಗೈಡ್‌ನ ರಾಜ್ಯ ಸಹಾಯಕ ಸಂಘಟನಾ ಆಯುಕ್ತರು ಮತ್ತು ಕಲ್ಯಾಣ ಕರ್ನಾಟಕ ಉಸ್ತುವಾರಿ ಮಲ್ಲೇಶ್ವರಿ ಜೂಜಾರೆ, ಗೈಡ್ ಜಿಲ್ಲಾ ಆಯುಕ್ತೆ ಸಂಧ್ಯಾರಾಣಿ ಪಾಟೀಲ, ಜಂಟಿ ಕಾರ್ಯದರ್ಶಿ ರಾಜೇಶ್ವರಿ ಭಾಲ್ಕೆ, ಜಿಲ್ಲಾ ತರಬೇತಿ ಆಯುಕ್ತ ಬಾಬುರಾವ ನಿಂಬೂರೆ, ಸಂಪನ್ಮೂಲ ವ್ಯಕ್ತಿ ಲತಾ ಮಂಜುನಾಥ, ಸ್ಥಳಿಯ ಸಂಸ್ಥೆ ಕಾರ್ಯದರ್ಶಿ ಅನಿಲ ಶಾಸ್ತ್ರೀ, ಸಹ ಕಾರ್ಯದರ್ಶಿ ರಾಚಯ್ಯ ನಾಶಿ ಹಾಗೂ ಇತರರು ಕಾರ್ಯಕ್ರಮದಲ್ಲಿದ್ದರು.

ಸ್ಕೌಟ್ಸ್ ಜಿಲ್ಲಾ ಆಯುಕ್ತ ಡಾ.ಹೆಚ್.ಬಿ ಭರಶೆಟ್ಟಿ ಪ್ರಾಸ್ತಾವಿಕ ಮಾತನಾಡಿದರು. ಭಾರತೀಯ ಕುಟುಂಬ ಯೋಜನಾ ಸಂಘದ ವ್ಯವಸ್ಥಾಪಕರು ಹಾಗೂ ಸ್ಕೌಟ್ಸ್ ಮತ್ತು ಗೈಡ್ ಜಿಲ್ಲಾ ಖಜಾಂಚಿ ಶ್ರೀನಿವಾಸ ಬಿರಾದಾರ ಸ್ವಾಗತಿಸಿದರು. ಜಿಲ್ಲಾ ಕಾರ್ಯದರ್ಶಿ ರಮೇಶ ತಿಪಶೆಟ್ಟಿ ಕಾರ್ಯಕ್ರಮ ನಿರೂಪಿಸಿ, ಜಿಲ್ಲಾ ಸಂಘಟನಾ ಶಿಕ್ಷಕಿ ಸುಜಾತಾ ಪುಜಾರಿ ವಂದಿಸಿದರು.



ಕಮಲನಗರ: ಪಟ್ಟಣದ ಲತಾ ಮಂಗೇಶ್ಕರ ಕನ್ಯಾ ಪ್ರೌಢಶಾಲೆಯಲ್ಲಿ ಮುಖ್ಯ ಗುರು ಅನಿಲಕುಮಾರ ಬಿರಾದಾರ, ಶಿಕ್ಷಕರ ದಿನಚಾರಣೆ ನಿಮಿತ್ಯ ಡಾ. ಸರ್ವಪಲ್ಲಿ ರಾಧಾಕೃಷ್ಣ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ನಮಿಸಿದರು. ಈ ಸಂದರ್ಭದಲ್ಲಿ ಸಿಬ್ಬಂದಿ ವರ್ಗದವರು ಮತ್ತು ಮಕ್ಕಳು ಇದ್ದರು.

# ಮಾದಕ ಮುಕ್ತ ಕರ್ನಾಟಕ ಅಭಿಯಾನ ಜಾಗೃತಿ

ಮಲ್ಲಮ್ಮ ನುಡಿ ವಾರ್ತೆ



ಕಮಲನಗರ:ಸೆ.5: ತಾಲೂಕಿನ ಡಿಗ್ಗಿ ಗ್ರಾಮ ಪಂಚಾಯಿತಿಯಲ್ಲಿ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ ಯೋಜನೆಯಡಿ ಪರಿವರ್ತನೆ ಮಾದಕ ಮುಕ್ತ ಕರ್ನಾಟಕ ಅಭಿಯಾನ ಜಾಗೃತಿ ಕಾರ್ಯಕ್ರಮವನ್ನು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಗುರುವಾರ ಜರುಗಿತು.

ಈ ವೇಳೆ ತಾಲೂಕು ಕಾರ್ಯಕ್ರಮ ವ್ಯವಸ್ಥಾಪಕರಾದ ಕವಿತಾ ಬಿರಾದಾರ ಅವರು ಮಾತನಾಡಿ, ಬೆಳೆಯುವ ಸಿರಿ ಮೊಳಕೆಯಲ್ಲಿ ಎಂಬಂತೆ ನೀವೆಲ್ಲ ವಿದ್ಯಾರ್ಥಿಗಳು ಮಾದಕ ವಸ್ತುಗಳಿಂದ ದೂರವಿರಬೇಕು. ಇಂತಹ ಕೆಟ್ಟ ಚಟಗಳಿಂದ ಎಷ್ಟೋ ಜನರ ಜೀವನವೇ ಹಾಳಾಗಿದೆ. ಆರೋಗ್ಯವೇ ಭಾಗ್ಯ ಎಂಬಂತೆ ನಿಮ್ಮ ಆರೋಗ್ಯದ ಬಗ್ಗೆ ನೀವು ಗಮನ ಹರಿಸಬೇಕು.

ಆರೋಗ್ಯವಿದ್ದರೆ ಎಂತಹ ಪರಿಸ್ಥಿತಿಯನ್ನು ಎದುರಿಸಲು ಸಾಧ್ಯ ಒಂದು ವೇಳೆ ಆರೋಗ್ಯವೇ ಹಾಳಾದರೆ ಏನು ಸಾಧಿಸಲು ಆಗದು. ನಿಮ್ಮ ಕುಟುಂಬದಲ್ಲಿ ಸಿಗುವ ಪೌಷ್ಟಿಕಾಹಾರ ಸೇವನೆ ಮಾಡಬೇಕು ಎಂದು ತಿಳಿಸಿದರು. ನಂತರ ಎಲ್ಲ ಮಕ್ಕಳಿಗೆ ಮಾದಕ ಮುಕ್ತ ಕರ್ನಾಟಕ ಅಭಿಯಾನ ಜಾಗೃತಿ ಪ್ರತಿಜ್ಞೆ ಮಾಡಿಸಿದರು.

ಕಾರ್ಯಕ್ರಮದಲ್ಲಿ ಶಾಲೆ ಮುಖ್ಯಗುರುಗಳಾದ ಸಂತೋಷ ಬಿರಾದಾರ, ಮುಖಂಡರಾದ ಸಂಗಮನಾಥ ಬಿರಾದಾರ, ಪಾಲಕ ಪ್ರತಿನಿಧಿ ನಾಮದೇವ,

ಗ್ರಾ. ಪಂ. ಕರಾವಸೂಲಿಗಾರರಾದ ಲಕ್ಷ್ಮಿ, ಅಂಗನವಾಡಿ ಕಾರ್ಯಕರ್ತೆ ಸವಿತಾ ರಾಂಪುರೆ, ಆಶಾ ಕಾರ್ಯಕರ್ತೆ ದೇವಿಕಾ ಪಂಚಾಳ,

ಸ್ವ ಸಹಾಯ ಸಂಘದ ಮಹಿಳೆಯರಾದ ಪುಷ್ಪ, ಭಾಗ್ಯಶ್ರೀ, ಶಶಿಕಲಾ, ಪರ್ಯಾಗಬಾಯಿ ಶಾಲೆ ಸಿಬ್ಬಂದಿ ವರ್ಗದವರು ಹಾಗೂ ಶಾಲಾ ಮಕ್ಕಳು ಭಾಗವಹಿಸಿದರು.

# ಶಿಕ್ಷಕರ ದಿನಾಚರಣೆ:ಗುರುಗಳಿಗೆ ಹೃತ್ಪೂರ್ವಕ ನಮನ
# ಸಮಾಜವನ್ನು ರೂಪಿಸುವ ಶಿಲ್ಪಿಗಳು – ಶಿಕ್ಷಕರು

ನಮ್ಮ ಜೀವನದಲ್ಲಿ ಅಮ್ಮ–ಅಪ್ಪನ ನಂತರ ಅತಿ ಮಹತ್ವದ ಸ್ಥಾನವನ್ನು ಹೊಂದಿರುವವರು ಶಿಕ್ಷಕರು. ಅಮ್ಮ–ಅಪ್ಪ ಬದುಕು ಕೊಟ್ಟರೆ,ಗುರುಗಳು ಬದುಕನ್ನು ಅರ್ಥಪೂರ್ಣವಾಗಿಸುವ ಮಾರ್ಗವನ್ನು ತೋರಿಸುತ್ತಾರೆ.ಮಕ್ಕಳಲ್ಲಿ ಜ್ಞಾನ,ಸಂಸ್ಕಾರ,ಮಾನವೀಯತೆ ಮತ್ತು ಹೊಣೆಗಾರಿಕೆಯನ್ನು ಬೆಳೆಸುವ ಮೂಲಕ ಸಮಾಜಕ್ಕೆ ಉತ್ತಮ ನಾಗರಿಕರನ್ನು ರೂಪಿಸುವ ಶಿಲ್ಪಿಗಳೇ ಶಿಕ್ಷಕರು.



ಶಿಕ್ಷಕರು ಅಂದರೆ ಕೇವಲ ಪಾಠ ಹೇಳುವವರು ಮಾತ್ರವಲ್ಲ,ಅವರು ವಿದ್ಯಾರ್ಥಿಗಳ ಜೀವನದ ದೀಪಸ್ತಂಭ. ಅಮ್ಮ–ಅಪ್ಪ ಬದುಕು ಕೊಟ್ಟರೆ,ಶಿಕ್ಷಕರು ಆ ಬದುಕಿಗೆ ಜೀವ ತುಂಬಿ ದಾರಿ ತೋರಿಸುವವರು.ಜ್ಞಾನವನ್ನು ಹಂಚುವ ಮೂಲಕ,ಮೌಲ್ಯಗಳನ್ನು ಬೋಧಿಸುವ ಮೂಲಕ,ಉತ್ತಮ ನಾಗರಿಕರನ್ನು ರೂಪಿಸುವ ಮೂಲಕ ಶಿಕ್ಷಕರು ಸಮಾಜ ನಿರ್ಮಾಣದಲ್ಲಿ ಅತ್ಯಂತ ಪ್ರಮುಖ ಪಾತ್ರ ವಹಿಸುತ್ತಾರೆ.

ಶಿಕ್ಷಕರ ಜೀವನ ತ್ಯಾಗ,ಶ್ರಮ ಮತ್ತು ಸೇವೆಯಿಂದ ತುಂಬಿರುತ್ತದೆ.ಅವರು ಪ್ರತಿದಿನ ತಮ್ಮ ವಿದ್ಯಾರ್ಥಿಗಳ ಬೆಳವಣಿಗೆಯ ಕನಸು ಕಾಣುತ್ತಾರೆ.ಅವರ ಸಾಧನೆಗಳಲ್ಲಿ ತಮಗೆ ತೃಪ್ತಿಯನ್ನು ಕಂಡುಕೊಳ್ಳುತ್ತಾರೆ.ಪ್ರತಿಯೊಬ್ಬ ಯಶಸ್ವಿ ವ್ಯಕ್ತಿಯ ಹಿಂದೆ ಒಬ್ಬ ಪ್ರೇರಣಾದಾಯಕ ಶಿಕ್ಷಕರ ಕೈವಾಡವಿರುವುದು ನಿಜ.

"ಗುರು ಬ್ರಹ್ಮಾ,ಗುರು ವಿಷ್ಣು,
ಗುರು ದೇವೋ ಮಹೇಶ್ವರಃ,
ಗುರು ಸಾಕ್ಷಾತ್ ಪರಬ್ರಹ್ಮ, ತಸ್ಮೈ ಶ್ರೀ ಗುರುವೇ ನಮಃ"

ಈ ಶ್ಲೋಕವು ಗುರುಗಳ ಮಹತ್ವವನ್ನು ಅದ್ಭುತವಾಗಿ ಸಾರುತ್ತದೆ.ಅಂದರೆ ಗುರುವೇ ಸೃಷ್ಟಿಕರ್ತ ಬ್ರಹ್ಮ,ಪೋಷಕ ವಿಷ್ಣು,ಸಂಹಾರಕ ಮಹೇಶ್ವರ ಹಾಗೂ ಸಾಕ್ಷಾತ್ ಪರಬ್ರಹ್ಮನ ರೂಪವೇ ಆಗಿದ್ದಾನೆ ಎಂದು ತಿಳಿಸುತ್ತದೆ.

ಡಾ. ಸರ್ವಪಲ್ಲಿ ರಾಧಾಕೃಷ್ಣ ಅವರು 1888ರ ಸೆಪ್ಟೆಂಬರ್ 5ರಂದು ಆಂಧ್ರಪ್ರದೇಶದ ತಿರುತಣಿಯಲ್ಲಿ ಜನಿಸಿದರು. ಬಾಲ್ಯದಲ್ಲಿಯೇ ಓದಿನಲ್ಲಿ ಅತೀ ಮೇಧಾವಿಯಾಗಿದ್ದ ಅವರು,ತಮ್ಮ ವಿದ್ಯಾಭ್ಯಾಸವನ್ನು ತತ್ವಶಾಸ್ತ್ರ ವಿಷಯದಲ್ಲಿ ಮುಂದುವರಿಸಿದರು. ಮದ್ರಾಸ್ ಕ್ರಿಶ್ಚಿಯನ್ ಕಾಲೇಜಿನಲ್ಲಿ ಅವರು ಸಾಧನೆ ಮಾಡಿದ್ದು,ಅಲ್ಲಿ ಪಡೆದ ಜ್ಞಾನದಿಂದಲೇ ಅವರು ಜಗತ್ತಿನ ಮಹಾನ ದಾರ್ಶನಿಕರ ಪಟ್ಟಿಯಲ್ಲಿ ಸೇರುತ್ತಾರೆ.

ಅವರು ಉಪನ್ಯಾಸಕರಾಗಿ ತಮ್ಮ ವೃತ್ತಿ ಆರಂಭಿಸಿ,ಮೈಸೂರಿನ ವಿಶ್ವವಿದ್ಯಾಲಯ ಹಾಗೂ ಕಲ್ಕತ್ತಾ ವಿಶ್ವವಿದ್ಯಾಲಯಗಳಲ್ಲಿ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸಿದರು.ಅವರ ಬೋಧನೆ ಮತ್ತು ಪಾಂಡಿತ್ಯದಿಂದ ಅವರು ವಿದ್ಯಾರ್ಥಿಗಳ ಮನಸ್ಸಿನಲ್ಲಿ ಗುರುಸ್ಥಾನವನ್ನು ಪಡೆದರು.ಅವರ ತತ್ವಜ್ಞಾನ ಪಾಶ್ಚಾತ್ಯ ಜಗತ್ತಿನಲ್ಲಿ ಸಹ ಮೆಚ್ಚುಗೆಯನ್ನು ಗಳಿಸಿತು.

ನಂತರ ಅವರು ಭಾರತದ ಮೊದಲ ಉಪರಾಷ್ಟ್ರಪತಿಯಾಗಿ ಮತ್ತು ಎರಡನೆಯ ರಾಷ್ಟ್ರಪತಿಯಾಗಿಯೂ ಸೇವೆ ಸಲ್ಲಿಸಿದರು. ರಾಷ್ಟ್ರಪತಿಯಾಗಿದ್ದರೂ ಕೂಡ ತಮ್ಮನ್ನು ಮೊದಲು ಶಿಕ್ಷಕ,ನಂತರ ರಾಷ್ಟ್ರಪತಿ ಎಂದು ಹೆಮ್ಮೆಯಿಂದ ಹೇಳಿಕೊಳ್ಳುತ್ತಿದ್ದರು.ಅದಕ್ಕಾಗಿಯೇ ಅವರ ಜನ್ಮದಿನವನ್ನು "ಶಿಕ್ಷಕರ ದಿನ"ವೆಂದು ದೇಶಾದ್ಯಂತ ಆಚರಿಸಲಾಗುತ್ತದೆ.

ಇಂಗ್ಲೆಂಡಿನ ಆಕ್ಸ್‌ಫರ್ಡ್ ವಿಶ್ವವಿದ್ಯಾಲಯದಲ್ಲಿ ಪ್ರಾಧ್ಯಾಪಕರಾಗಿದ್ದಾಗ ಪಾಶ್ಚಾತ್ಯ ಪಂಡಿತರೂ ಅವರ ತತ್ವಜ್ಞಾನಕ್ಕೆ ತಲೆಬಾಗಿದರು.ಅವರು ಬರೆದ "ಭಾರತೀಯ ತತ್ವಶಾಸ್ತ್ರ" ಕೃತಿ ಪೂರ್ವದ ಜ್ಞಾನವನ್ನು ಪಾಶ್ಚಾತ್ಯರಿಗೆ ಪರಿಚಯಿಸಿತು.

ರಾಷ್ಟ್ರಪತಿಯಾದಾಗಲೂ ತಮ್ಮ ಸರಳತೆಯನ್ನು ಕಳೆದುಕೊಳ್ಳದೇ,ವಿದ್ಯಾರ್ಥಿಗಳು ಮತ್ತು ಶಿಕ್ಷಕರ ಜೊತೆ ಸಮಯ ಕಳೆಯುತ್ತಿದ್ದರು."ನನ್ನನ್ನು ವಿದ್ಯಾರ್ಥಿಗಳು ಪ್ರೀತಿಸುತ್ತಾರೆ,ಅದೇ ನನಗೆ ದೊಡ್ಡ ಪ್ರಶಸ್ತಿ"ಎಂದು ಹೆಮ್ಮೆಯಿಂದ ಅವರು ಹೇಳುತ್ತಿದ್ದರು.

ಗುರುಗಳು ನಮ್ಮಲ್ಲಿ ತಾಳ್ಮೆ,ಶ್ರದ್ಧೆ,ಜ್ಞಾನ ಮತ್ತು ಧರ್ಮಾತ್ಮಕ ಮೌಲ್ಯಗಳನ್ನು ಬೆಳೆಸುತ್ತಾರೆ.ಕಬೀರದಾಸರು ಹೇಳಿದಂತೆ – "ಗುರುಗೋವಿಂದ ದೋವು ಖಡೆ,ಕಾಕೆ ಲಾಗು ಪಾಯೆ,ಬಲಿಹಾರಿ ಗುರು ಅಪನೆ,ಗೋವಿಂದ ದಿಯೋ ಬತಾಯ"

ಅಂದರೆ,ದೇವರೂ,ಗುರುವೂ ಎದುರಿಗೆ ನಿಂತಾಗ ಮೊದಲಿಗೆ ಗುರುವಿಗೆ ನಮಸ್ಕರಿಸಬೇಕು,ಏಕೆಂದರೆ ದೇವರ ದಾರಿಯನ್ನು ತೋರಿಸುವವರು ಗುರು.

ಭಾರತೀಯ ಸಂಸ್ಕೃತಿಯಲ್ಲಿ ಗುರು–ಶಿಷ್ಯರ ಸಂಬಂಧ ಅತ್ಯಂತ ಪವಿತ್ರ ಮತ್ತು ಪ್ರೇರಣಾದಾಯಕ.ಗುರುಗಳು ಕೇವಲ ಪಾಠ ಹೇಳುವವರಲ್ಲ,ಅವರು ಶಿಷ್ಯರ ಜೀವನವನ್ನು ರೂಪಿಸುವ ಮಾರ್ಗದರ್ಶಕರು.ಇತಿಹಾಸದಲ್ಲಿ ಹಾಗೂ ಪುರಾಣಗಳಲ್ಲಿ ಅನೇಕ ಅದ್ಭುತ ಉದಾಹರಣೆಗಳು ನಮಗೆ ದೊರಕುತ್ತವೆ:

ಮಹಾಭಾರತದ ಪ್ರಸಿದ್ಧ ಉದಾಹರಣೆ. ದ್ರೋಣಾಚಾರ್ಯರು ತಮ್ಮ ಶಿಷ್ಯರಿಗೆ ಧನುರ್ವಿದ್ಯೆ ಬೋಧಿಸುತ್ತಿದ್ದರು. ಅರ್ಜುನನ ತೀವ್ರ ಏಕಾಗ್ರತೆ,ಶ್ರದ್ಧೆ,ಪರಿಶ್ರಮ ನೋಡಿ ದ್ರೋಣಾಚಾರ್ಯರು ಅರ್ಜುನನನ್ನು "ಅತ್ಯುತ್ತಮ ಶಿಷ್ಯ" ಎಂದು ಕೊಂಡಾಡಿದರು. ಅರ್ಜುನನ ಕಣ್ಣೆದುರು ಹಕ್ಕಿಯ ಕಣ್ಣು ಮಾತ್ರ ಕಾಣುವ ದೃಷ್ಟಾಂತ ಎಲ್ಲ ವಿದ್ಯಾರ್ಥಿಗಳಿಗೆ ಪ್ರೇರಣೆ.

ಮೌರ್ಯ ಸಾಮ್ರಾಜ್ಯ ಸ್ಥಾಪನೆಯ ಹಿಂದೆ ಚಾಣಕ್ಯರ ತತ್ವ,ಬುದ್ಧಿವಂತಿಕೆ ಮತ್ತು ಮಾರ್ಗದರ್ಶನ ಪ್ರಮುಖ ಪಾತ್ರ ವಹಿಸಿತು.ಚಂದ್ರಗುಪ್ತನನ್ನು ಒಂದು ಸಾಮಾನ್ಯ ಬಾಲಕನಿಂದ ಭಾರತದ ಶ್ರೇಷ್ಠ ಸಾಮ್ರಾಟನನ್ನಾಗಿ ಮಾಡಿದದ್ದು ಗುರು–ಶಿಷ್ಯರ ಅಪ್ರತಿಮ ಸಂಬಂಧದ ಮಾದರಿ.

ಇದು ಆಧುನಿಕ ಯುಗದ ಅದ್ಭುತ ಉದಾಹರಣೆ. ರಾಮಕೃಷ್ಣರ ಆತ್ಮಸಾಕ್ಷಾತ್ಕಾರದ ಬೋಧನೆ ಸ್ವಾಮಿ ವಿವೇಕಾನಂದರ ಜೀವನವನ್ನು ಸಂಪೂರ್ಣವಾಗಿ ಪರಿವರ್ತಿಸಿತು.ನಂತರ ವಿವೇಕಾನಂದರು ವಿಶ್ವದ ಮುಂದೆ ಭಾರತದ ಸಂಸ್ಕೃತಿ,ಧರ್ಮ ಮತ್ತು ಗುರು–ಶಿಷ್ಯರ ಪರಂಪರೆಯ ಮಹತ್ವವನ್ನು ಪ್ರತಿಪಾದಿಸಿರು.

ಕಲಾಂ ಅವರ ಬಾಲ್ಯದಲ್ಲಿ ಅವರ ವಿಜ್ಞಾನ ಪ್ರೇರಣೆಗೆ ಕಾರಣರಾದವರು ಅವರ ಶಾಲಾ ಶಿಕ್ಷಕರಾದ ಸೋಲಮನ್ ಸರ್. ಅವರ ಪ್ರೇರಣೆಯಿಂದಲೇ ಕಲಾಂ ವಿಜ್ಞಾನ ಕ್ಷೇತ್ರದಲ್ಲಿ ದೊಡ್ಡ ಸಾಧನೆ ಮಾಡಿ "ಮಿಸೈಲ್ ಮ್ಯಾನ್" ಆಗಿ ಪ್ರಸಿದ್ಧರಾದರು.ಇದು ಆಧುನಿಕ ಕಾಲದ ಸ್ಪರ್ಶಿಸುವ ಗುರು–ಶಿಷ್ಯರ ಕಥೆ.

ಈ ಎಲ್ಲ ಉದಾಹರಣೆಗಳು ಹೇಳುವ ಮಾತು ಒಂದೇ – ಶ್ರದ್ಧೆ,ಶಿಸ್ತು,ನಿಷ್ಠೆ ಮತ್ತು ಪ್ರಾಮಾಣಿಕತೆ ಇದ್ದರೆ ಗುರು–ಶಿಷ್ಯರ ಸಂಬಂಧದಿಂದ ಜಗತ್ತೇ ಪರಿವರ್ತನೆಗೊಳಗಾಗಬಹುದು.

ಇಂದು ದೇಶದ ಭವಿಷ್ಯ ಮಕ್ಕಳ ಕೈಯಲ್ಲಿದೆ.ಆ ಮಕ್ಕಳನ್ನು ಗಟ್ಟಿ ಬೆನ್ನೆಲುಬಿನ,ಶ್ರೇಷ್ಠ ನಾಗರಿಕರಾಗಿ ರೂಪಿಸುವ ಹೊಣೆಗಾರಿಕೆ ಶಿಕ್ಷಕರ ಮೇಲಿದೆ. ಸಮಾಜದಲ್ಲಿ ಅಜ್ಞಾನ, ಮೂಢನಂಬಿಕೆ,ಅಸಮಾನತೆಗಳನ್ನು ದೂರ ಮಾಡಿ ಜ್ಞಾನ,ವಿವೇಕ ಮತ್ತು ಮಾನವೀಯ ಮೌಲ್ಯಗಳನ್ನು ಬೆಳೆಸುವ ಮಹಾನ ಕಾರ್ಯವನ್ನು ಶಿಕ್ಷಕರು ನಿರ್ವಹಿಸುತ್ತಿದ್ದಾರೆ.

ಈ ಶಿಕ್ಷಕರ ದಿನಾಚರಣೆಯ ದಿನದಂದು ನಾವು ನಮ್ಮ ಗುರುಗಳನ್ನೆಲ್ಲಾ ಸ್ಮರಿಸಬೇಕು,ಅವರ ಸೇವೆಯನ್ನು ಗೌರವಿಸಬೇಕು. ಕೃತಜ್ಞತೆಯ ಮನಸ್ಸಿನಿಂದ ನಮಗೆ ಮಾರ್ಗದರ್ಶನ ನೀಡಿದ ಎಲ್ಲ ಶಿಕ್ಷಕರಿಗೆ ನಮನ ಸಲ್ಲಿಸಬೇಕು. ಗುರುವಿನ ಸ್ಥಾನ ದೈವಕ್ಕಿಂತ ಶ್ರೇಷ್ಠ ಎಂದು ನಮ್ಮ ಸಂಸ್ಕೃತಿ ಹೇಳುತ್ತದೆ.ಆದ್ದರಿಂದ ಶಿಕ್ಷಕರಿಗೆ ಗೌರವ ಸಲ್ಲಿಸುವುದು ನಮ್ಮೆಲ್ಲರ ಕರ್ತವ್ಯ.ಶಿಕ್ಷಕರ ದಿನಾಚರಣೆ ನಮಗೆ ಸ್ಮರಿಸುತ್ತಿದೆ - ನಿಜವಾದ ಗೌರವ ಶಿಕ್ಷಕರಿಗೆ ಕೇವಲ ಹೂವುಗಳೊಂದಿಗೆ ಮಾತ್ರವಲ್ಲ,ಅವರ ಬೋಧನೆಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಸಿಗುತ್ತದೆ.ಎಲ್ಲ ಶಿಕ್ಷಕರಿಗೆ ಶಿಕ್ಷಕರ ದಿನಾಚರಣೆಯ ಹಾರ್ದಿಕ ಶುಭಾಶಯಗಳು



– ಚಂದ್ರಕಾಂತ ತಳವಾಡೆ
ಸಹ ಶಿಕ್ಷಕರು
ಸ.ಕಿ.ಪ್ರಾ.ಶಾಲೆ ಸೈದಾಪುರವಾಡಿ
ತಾ.ಭಾಲ್ಕಿ

# ಶಿಕ್ಷಕ–ವಿದ್ಯಾರ್ಥಿ ನಡುವಿನ ಸಂಬಂಧ ಗಟ್ಟಿಗೊಳ್ಳಲಿ



**ಮಲ್ಲಮ್ಮ ನುಡಿ ವಾರ್ತೆ**
**ಕಲಬುರಗಿ:**

ಸೆ.5: ಹಿಂದಿನ ಕಾಲದಲ್ಲಿ ವಿದ್ಯಾರ್ಥಿಗಳು ಶಿಕ್ಷಕರ ಬಗ್ಗೆ ಅಪಾರವಾದ ಗೌರವ, ಭಕ್ತಿ, ಶ್ರದ್ಧೆಯಿತ್ತು. ಆಧುನೀಕರಣಕ್ಕೆ ಒಳಗಾಗಿ ಪ್ರಸ್ತುತ ಸನ್ನಿವೇಶಗಳಲ್ಲಿ ಶಿಕ್ಷಕ–ವಿದ್ಯಾರ್ಥಿ ನಡುವಿನ ಸಂಬಂಧ ಸಡಿಲವಾಗುತ್ತಿರುವುದಕ್ಕೆ ವಿಷಾದ ವ್ಯಕ್ತಪಡಿಸಿದ ಉಪನ್ಯಾಸಕ ಎಚ್.ಬಿ.ಪಾಟೀಲ್, ಇಂದು ಗುರು–ಶಿಷ್ಯರ ಸಂಬಂಧವಾಗಿದ್ದು ಗಟ್ಟಿಗೊಳ್ಳಬೇಕಾಗಿದೆ ಎಂದು ಆಶಯ ವ್ಯಕ್ತಪಡಿಸಿದರು. ನಗರದ ಆಳಂದ ರಸ್ತೆಯ ಖಾದ್ರಿ ಚೌಕ್ ನಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಶುಕ್ರವಾರ ಏರ್ಪಡಿಸಿದ್ದ '63ನೇ ರಾಷ್ಟ್ರೀಯ ಶಿಕ್ಷಕರ ದಿನಾಚರಣೆ'ಯ ಕಾರ್ಯಕ್ರಮವನ್ನು ಡಾ.ಸರ್ವೆಪಲ್ಲಿ ರಾಧಾಕೃಷ್ಣರ ಭಾವಚಿತ್ರಕ್ಕೆ ಪುಷ್ಪ ನಮನಗಳನ್ನು ಸಲ್ಲಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಶಿಕ್ಷಕ ವೃತ್ತಿ ಪವಿತ್ರವಾದದ್ದು. ಶಿಕ್ಷಕರಿಗೆ ನಿವೃತ್ತಿಯಿಲ್ಲ. ವಿದ್ಯಾರ್ಥಿಗಳಿಗೆ ಜ್ಞಾನ, ಬುದ್ಧಿ, ಕೌಶಲಗಳನ್ನು ನೀಡಿ, ಅವರ ಭವಿಷ್ಯವನ್ನು ನಿರ್ಮಿಸುವ ಶಿಲ್ಪಿಗಳು ಶಿಕ್ಷಕರಾಗಿದ್ದಾರೆ. ಡಾ.ಸರ್ವೆಪಲ್ಲಿ ರಾಧಾಕೃಷ್ಣನ್ ಮತ್ತು ಶಿಕ್ಷಕರ ಕೊಡುಗೆಯನ್ನು ಸ್ಮರಿಸುವ ದಿನ ಇದಾಗಿದೆ. ನೈತಿಕ ಮೌಲ್ಯಗಳ ಪ್ರೋತ್ಸಾಹ, ಸಕಾರಾತ್ಮಕ ಕಲಿಕೆಯ ವಾತಾವರಣ, ಸಮಾಜದಲ್ಲಿ ಶಿಕ್ಷಕರ ಸ್ಥಾನಮಾನದ ಅವಲೋಕನ ಮಾಡುವುದು ದಿನಾಚರಣೆಯ ಹಿನ್ನಲೆಯಾಗಿದೆ ಎಂದರು.

ಸಂಸ್ಥೆಯ ಅಧ್ಯಕ್ಷ ಅಸ್ಲಾಂ ಶೇಖ್ ಮಾತನಾಡಿ, ಸದೃಢ ರಾಷ್ಟ್ರ ನಿರ್ಮಾಣದಲ್ಲಿ ಶಿಕ್ಷಕರ ಪಾತ್ರ ಪ್ರಮುಖವಾಗಿದೆ. ಶಿಕ್ಷಕರ ಮೇಲೆ ಗುರುತರ ಜವಾಬ್ದಾರಿಯಿದ್ದು, ಅದನ್ನು ಕರ್ತವ್ಯ ಬದ್ಧತೆಯಿಂದ ಮಾಡುವ ಮೂಲಕ ಶಿಕ್ಷಕ, ಗುರುವಾಗಬೇಕಾಗಿದೆ ಎಂದು ಮಾರ್ಮಿಕವಾಗಿ ನುಡಿದರು. ಕಾರ್ಯಕ್ರಮದಲ್ಲಿ ಸಮಾಜ ಸೇವಕ ಶಿವಯೋಗೆಪ್ಪಾ ಎಸ್.ಬಿರಾದಾರ, ಸಂಸ್ಥೆಯ ಶಿಕ್ಷಕಿಯರಾದ ಪೂಜಾ ಹೂಗಾರ, ಕಾವೇರಿ ಹೌದೆ, ಸ್ನೇಹಾ ಚವ್ಹಾಣ, ಮುಸ್ಕಾನ್ ಶೇಖ್ ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಸಮಾಜದಲ್ಲಿ ಸಾಮರಸ್ಯ ಸಾರುವ "ಈದ್ ಮಿಲಾದ್" ಹಬ್ಬ ; ಅರುಣಕುಮಾರ ಪಾಟೀಲ



**ಮಲ್ಲಮ್ಮ ನುಡಿ ವಾರ್ತೆ**
**ಅಫಜಲಪುರ :**

ಸೆ.5:ಸಮಾಜದಲ್ಲಿ ಸಾಮರಸ್ಯ ಸಾರುವ ಮೂಲಕ "ಮಹಮ್ಮದ್ ಪೈಗಂಬರ್"ಅವರ ನಮ್ಮೆಲ್ಲರ ಮನದಲ್ಲಿ ಹಚ್ಚ,ಹಸಿರಾಗಿ ಉಳಿದಿದ್ದಾರೆ ಎಂದು ಕೆಪಿಸಿಸಿ ಸದಸ್ಯರು ಹಾಗೂ ಹೆಚ್ಕೆಇ ಶಿಕ್ಷಣ ಮಂಡಳಿ ನಿರ್ದೇಶಕರಾದ ಅರುಣಕುಮಾರ ಎಂ.ವೈ.ಪಾಟೀಲ ಹೇಳಿದರು. ಅಫಜಲಪುರ ಮತಕ್ಷೇತ್ರದ ಫರಹತಾಬಾದ ಗ್ರಾಮದಲ್ಲಿ ಏರ್ಪಡಿಸಿದ " ಈದ್ –ಮಿಲಾದ್" ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ನಮ್ಮೆಲ್ಲರ ದರ್ಮ ಬೇರೆಯಾದರು, ನಮಗೆಲ್ಲರಿಗೂ ಪರಮಾತ್ಮ ಒಬ್ಬನೇ ದೇವರು. ಅದಕ್ಕಾಗಿ ನಾವೆಲ್ಲರೂ ಒಂದೇ ಎನ್ನುವ ಭಾವನೆ ಇಟ್ಟು–ಕೊಂಡು ಸೌಹಾರ್ದತೆಯಿಂದ ಜೀವನ ಮಾಡಬೇಕು. ಸಮಾಜದ ಮುಖಂಡರು ಇಟ್ಟಿರುವ ಬೇಡಿಕೆಗಳನ್ನು ಮುಂಬರುವ ದಿನಗಳಲ್ಲಿ ತ್ವರಿತಗತಿಯಲ್ಲಿ ಈಡೇರಿಸುವ ಪ್ರಯತ್ನ ಮಾಡುತ್ತೇನೆ ಎಂದು ಮುಖಂಡರಿಗೆ ತಿಳಿಸಿದರು.

ಫರಹತಾಬಾದ ಗ್ರಾಮದ ಅಲ್ಪಸಂಖ್ಯಾತ ಮುಖಂಡರು ಹಾಗೂ ಉದ್ಯಮಿಗಳಾದ ಖಾಜಾ ಹುಸೇನ್ ಮುಲ್ಲಾ ಮಾತನಾಡಿ, ನಮ್ಮ ಮನವಿಗೆ ಓಗೊಟ್ಟು ಬಂದು ಏರ್ಪಡಿಸಿದ ಈದ್–ಮಿಲಾದ್ ಹಬ್ಬದಲ್ಲಿ ಭಾಗವಹಿಸಿದ ಅರುಣಕುಮಾರ ಪಾಟೀಲ ಅವರಿಗೆ ನಮ್ಮ ಸಮಾಜದ ಮುಖಂಡರು ಹಾಗೂ ಯುವಕರ ವತಿಯಿಂದ ಕೃತಜ್ಞತೆಗಳನ್ನು ಸಲ್ಲಿಸುತ್ತೇನೆ.

ನಮ್ಮ ಬೇಡಿಕೆಯನ್ನು ಈಡೇರಿಸುವ ಭರವಸೆ ನೀಡಿರುವುದಕ್ಕೆ ಮಹಮ್ಮದ್ ಪೈಗಂಬರ್ ಮುಂಬರುವ ದಿನಗಳಲ್ಲಿ ಅರುಣಕುಮಾರ ಪಾಟೀಲ ಅವರಿಗೆ ಎಲ್ಲಾ ರೀತಿಯ ಅಧಿಕಾರ ನೀಡಲೆಂದು ಬೇಡಿಕೊಳ್ಳುವೆ ಎಂದು ತಿಳಿಸಿದರು.

ಫರಹತಾಬಾದ ಗ್ರಾಮದ ಶ್ರೀ ಮಹಾಂತಯ್ಯ ಸ್ವಾಮಿ, ಕಾಂಗ್ರೆಸ್ ಮುಖಂಡರು ಹಾಗೂ ಉದ್ಯಮಿಗಳಾದ ಸೋಮಶೇಖರ್ ಕಲಬುರಗಿ, ಕೇಶವ ಮೋಟಗಿ, ಮಾಜಿ ತಾ.ಪಂ.ಅಧ್ಯಕ್ಷ ಶಿವರಾಜ ಸಜ್ಜನ, ಗ್ರಾಮ ಪಂಚಾಯತ್ ಅಧ್ಯಕ್ಷ ಶರಣು ಸಜ್ಜನ, ಜಹೂರ ಹಜರತ್ ಹಾಗೂ ಸಮಾಜದ ಮುಖಂಡರು, ಯುವಕರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಸಿದ್ದೇಶ್ವರವಾಡಿಯಲ್ಲಿ ಭಕ್ತಿ ಪೂರ್ವಕವಾಗಿ ಕ್ರಾಂತಿ ಗಣೇಶ ವಿಶೇಷ ಪೂಜೆ



**ಮಲ್ಲಮ್ಮ ನುಡಿ ವಾರ್ತೆ**

ಬೀದರ್ ಸೇ 05: ಭಾಲ್ಕಿ ತಾಲೂಕಿನ ಸಿದ್ದೇಶ್ವರವಾಡಿಯ ಕ್ರಾಂತಿ ಗಣೇಶ ಮಂಡಳದಲ್ಲಿ ಕೊನೆಯ ದಿನದ ಪೂಜೆಯನ್ನು ಯುವ ಮುಖಂಡರಾದ ಸಂತೋಷ ಎಸ್ ಚಲ್ವಾಪುರೆ ಅವರು ಭಕ್ತಿ ಪೂರ್ವಕವಾಗಿ ನೆರವೇರಿಸಲಾಯಿತು.

ಕ್ರಾಂತಿ ಗಣೇಶ ಹಬ್ಬವನ್ನು ಭಕ್ತಿ ಭಾವದಿಂದ, ಅರ್ಥಪೂರ್ಣವಾಗಿ ಹಾಗೂ ಎಲ್ಲಾ ಸಮಾಜದ ವರ್ಗದ ಜನರು ಸೇರಿ ರಾಷ್ಟ್ರೀಯ ಏಕತೆ–ಯ ಸಂಕೇತವಾಗಿ ಆಚರಿಸಬೇಕು ಎಲ್ಲಾ ಗ್ರಾಮಸ್ಥರು ಸೇರಿ–ಕೊಂಡು ಕೊನೆಯ ದಿನ ಅದ್ದೂರಿಯಾಗಿ ಮೆರವಣಿಗೆಯ ಮೂಲಕ ಗಣೇಶನ ವಿಸರ್ಜನೆ ನೆರವೇರಿಸಿದರು,

ಇದೇ ಸಂಧರ್ಭದಲ್ಲಿ ರೇವಣಪ್ಪಾ ಘಾಳೆ, ಸಂತೋಷ್ ಮರುರೆ, ರಾಜಕುಮಾರ ಧನ್ನೂರೆ, ಅಪ್ಪು ಚಳಕಾಪುರೇ, ವಿವೇಕ್ ಅರಳಿ , ಆನಂದ ನೆಳಗೆ , ಅಂತೇಶ್ವರ ಚಳಕಾಪುರೇ, ಶಿವಕುಮಾರ ಎಸ್ ಚಲ್ವಾಪುರೆ, ವಿವೇಕ್ ಸ್ವಾಮಿ, ಶಿವಕುಮಾರ ಏಣ–ಕುರೆ, ಸಾಯಿ ತರನಳೆ, ಮೇಗು ಧನುರೆ,

,ಅನೇಕ ಕ್ರಾಂತಿ ಗಣೇಶ ಭಕ್ತರು ಪೂಜೆ ಹಾಗೂ ಮೆರವಣಿಗೆಯಲ್ಲಿ ಭಾಗವಹಿಸಿದರು,

# ಆಂತರಿಕ ದೂರು ಸಮಿತಿ ರಚನೆ ಕಡ್ಡಾಯ

**ಮಲ್ಲಮ್ಮ ನುಡಿ ವಾರ್ತೆ**
**ಬೀದರ:**

ಸೆಪ್ಟೆಂಬರ್.05–ಬೀದರ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಎಲ್ಲಾ ವಾಣಿಜ್ಯ ಸಂಸ್ಥೆಗಳು, ಉದ್ದಿಮೆಗಳು, ಕಾರ್ಖಾನೆಗಳು ಪ್ರತಿ ಸಂಸ್ಥೆಯ ಮಾಲೀಕರು ತಮ್ಮ ಸಂಸ್ಥೆಯಲ್ಲಿ ಕೆಲಸದ ಸ್ಥಳಗಳಲ್ಲಿ ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ ಮತ್ತು ನಿವಾರಿಸುವಿಕೆ) ಅಧಿನಿಯಮ–2013ನ್ನು ಅನುಷ್ಠಾನಗೊಳಿಸಿ ಸೆಕ್ಷನ್–4ರನ್ವಯ "ಆಂತರಿಕ ದೂರು ಸಮಿತಿ" ರಚನೆ ಮಾಡಬೇಕು ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿಗಳು ತಿಳಿಸಿದ್ದಾರೆ.

ಸರ್ವೋಚ್ಛ ನ್ಯಾಯಾಲಯ ನೀಡಿರುವ ನಿರ್ದೇಶನದಂತೆ 10 ಅಥವಾ 10ಕ್ಕಿಂತ ಹೆಚ್ಚು ಮಹಿಳಾ ಕಾರ್ಮಿಕರನ್ನು ಹೊಂದಿರುವ ಎಲ್ಲಾ ವಾಣಿಜ್ಯ ಸಂಸ್ಥೆಗಳು, ಉದ್ದಿಮೆಗಳು, ಕಾರ್ಖಾನೆಗಳು ಪ್ರತಿ ಸಂಸ್ಥೆಯ ಮಾಲೀಕರು ತಮ್ಮ ಸಂಸ್ಥೆಯಲ್ಲಿ ಕೆಲಸದ ಸ್ಥಳಗಳಲ್ಲಿ ಮಹಿಳೆಯರ ಮೇಲೆ ಲೈಂಗಿಕ ದೌರ್ಜನ್ಯ ಕಿರುಕುಳ (ತಡೆಗಟ್ಟುವಿಕೆ, ನಿಷೇಧಿಸುವಿಕೆ ಮತ್ತು ನಿವಾರಿಸುವಿಕೆ) ಅಧಿನಿಯಮ–2013 ಕಡ್ಡಾಯವಾಗಿ ಅನುಷ್ಠಾನಗೊಳಿಸಿ ಕೆಲಸ ಮಾಡುವ ಸ್ಥಳದಲ್ಲಿ ಸೆಕ್ಷನ್–4ರನ್ವಯ "ಆಂತರಿಕ ದೂರು ಸಮಿತಿ" ರಚನೆ ಮಾಡುವುದು ಕಡ್ಡಾಯವಾಗಿದೆ. ಈಗಾಗಲೆ ಆಂತರಿಕ ದೂರು ಸಮಿತಿ ರಚಿಸಿದ ಸಂಸ್ಥೆಯವರು ಹಾಗೂ ಮುಂದೆ "ಆಂತರಿಕ ದೂರು ಸಮಿತಿ ರಚಿಸುವ ಸಂಸ್ಥೆಯವರು ಸಮಿತಿ ರಚನೆ ಮಾಡಿದ ಆದೇಶದ ಪ್ರತಿಯನ್ನು ಬೀದರ ಜಿಲ್ಲಾಧಿಕಾರಿಗಳ ಕಛೇರಿಗೆ ಹಾಗೂ ಕಾರ್ಮಿಕ ಅಧಿಕಾರಿಯವರ ಕಛೇರಿ, ಸಿ.ಎಮ್.ಸಿ ನಂ.19–6–20, ಉತ್ತರ ಶಿವನಗರ, ಉದಗೀರ ರಸ್ತೆ, ಬೀದರ ಈ ವಿಳಾಸಕ್ಕೆ ಸಲ್ಲಿಸಬೇಕೆಂದು ಅವರು ತಿಳಿಸಿದ್ದಾರೆ.

ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಅಂಗವಾಗಿ ಜಿಲ್ಲಾ ಮಟ್ಟದ ಕ್ರೀಡೆ

# ಹಾಗೂ ಸಾಂಸ್ಕೃತಿಕ ಸ್ಪರ್ಧೆ: ಹೆಸರು ನೋಂದಣಿಗೆ ಸೂಚನೆ

**ಮಲ್ಲಮ್ಮ ನುಡಿ ವಾರ್ತೆ**
**ಕಲಬುರಗಿ:**

ಸೆ.04–ಅಕ್ಟೋಬರ್ 01ರಂದು ವಿಶ್ವ ಹಿರಿಯ ನಾಗರಿಕರ ದಿನಾಚಾರಣೆ ಅಂಗವಾಗಿ ಹಿರಿಯ ನಾಗರಿಕರಿಗಾಗಿ ಈ ಕೆಳಕಂಡಂತೆ ಜಿಲ್ಲಾ ಮಟ್ಟದ ಕ್ರೀಡೆ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

ವಯೋಮಿತಿ (60 ರಿಂದ 69 ವರ್ಷ ಮತ್ತು 70 ವರ್ಷ ಹಾಗೂ ಮೇಲ್ಪಟ್ಟವರಿಗೆ) (ಪುರುಷ/ಮಹಿಳೆ) ಏಕಪಾತ್ರ ಅಭಿನಯ, ಗಾಯನ ಸ್ಪರ್ಧೆ ಸಾಂಸ್ಕೃತಿಕ ಸ್ಪರ್ಧೆಯನ್ನು ಹಾಗೂ ವಯೋಮಿತಿ (60 ರಿಂದ 70 ವರ್ಷ, 70ವರ್ಷ ಮೇಲ್ಪಟ್ಟವರಿಗೆ) (ಪುರುಷ/ಮಹಿಳೆ) ಬಿರುಸಿನ ನಡಿಗೆ, ಮ್ಯೂಸಿಕಲ್ ಚೇರ್ ಕ್ರೀಡಾ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ. ಹಿರಿಯ ನಾಗರಿಕರು ವಯೋಮಿತಿ 60 ವರ್ಷ ಮೇಲ್ಪಟ್ಟ ವಯಸ್ಸಿನವರಾಗಿರಬೇಕು. ವಯಸ್ಸಿನ ದೃಢೀಕರಣಕ್ಕೆ ಸಂಬಂಧಿಸಿದಂತೆ ಅಗತ್ಯ ದಾಖಲೆಯನ್ನು ಸಲ್ಲಿಸಬೇಕು. ಹಿರಿಯ ನಾಗರಿಕರು ತಮ್ಮ ಹೆಸರುಗಳನ್ನು ಚಾಲ್ತಿಯಲ್ಲಿರುವ ದೂರವಾಣಿ ಸಂಖ್ಯೆಯೊಂದಿಗೆ ನೊಂದಾಯಿಸಿಕೊಳ್ಳಬೇಕು. ಕ್ರೀಡಾ ಸ್ಪರ್ಧೆಗಳಲ್ಲಿ ಭಾಗವಹಿಸುವ ಹಿರಿಯ ನಾಗರಿಕರು ಸಾಂಸ್ಕೃತಿ ಸ್ಪರ್ಧೆಗಳಲ್ಲಿ ಭಾಗವಹಿಸುವಂತಿಲ್ಲ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಭಾಗವಹಿಸುವ ಹಿರಿಯ ನಾಗರಿಕರು ಕ್ರೀಡಾ ಸ್ಪರ್ಧೆಗಳಲ್ಲಿ ಭಾಗವಹಿಸುವಂತಿಲ್ಲ.

ಆಸಕ್ತಿಯುಳ್ಳ ಅರ್ಹ ಹಿರಿಯ ನಾಗರಿಕರು ಎಲ್ಲಾ ಅಗತ್ಯ ಮಾಹಿತಿಯೊಂದಿಗೆ 2025ರ ಸೆಪ್ಟೆಂಬರ್ 8ರ ಸಂಜೆ 5 ಗಂಟೆಯೊಳಗಾಗಿ ಕಲಬುರಗಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಜಿಲ್ಲಾ ಕಚೇರಿಯಲ್ಲಿ ಕಚೇರಿ ವೇಳೆಯಲ್ಲಿ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಬೇಕು. ಈ ಸ್ಪರ್ಧೆಗಳನ್ನು ಇದೇ ಸೆಪ್ಟೆಂಬರ್ 9 ರಂದು ಕಲಬುರಗಿ ನಗರದ ಚಂದ್ರಶೇಖರ ಪಾಟೀಲ ಜಿಲ್ಲಾ ಕ್ರೀಡಾಂಗಣ/ವಿಜಯ ವಿದ್ಯಾಲಯ ಆವರಣದಲ್ಲಿ ಆಯೋಜಿಸಲಾಗುತ್ತದೆ.

ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಈ ಕಚೇರಿ ದೂರವಾಣಿ ಸಂ–ಖ್ಯೆ:08472–235222, ಪ್ರಕಾಶ ಜಾಧವ–9972563646 ಸ್ವಪ್ನಾ ಪಾಟೀಲ–7411612044 ಹಾಗೂ ಪ್ರಕಾಶ ದ್ಯಾಬೇರಿ 8217274757 ಇವರ ಮೊಬೈಲ್ ಸಂಖ್ಯೆಗೆ ಸಂಪರ್ಕಿಸಲು ಹಾಗೂ ಕಚೇರಿ ವೇಳೆಯಲ್ಲಿ ಕರೆ ಮಾಡಿ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಸೆ.7 ರಂದು ವಿದ್ಯುತ್ ವ್ಯತ್ಯಯ

**ಮಲ್ಲಮ್ಮ ನುಡಿ ವಾರ್ತೆ**
**ಬೀದರ:**

ಸೆಪ್ಟೆಂಬರ್.05– ಜೇಸ್ಕಾಂ ಬೀದರ ವಿಭಾಗದಲ್ಲಿ ಬರುವ 11ಕೆವಿ ಚಿದ್ರಿ ಫೀಡರ ಮೇಲೆ ಬರುವ ರಾಮನಗರ, ಬಿಲಾಲ್ ಕಾಲೋನಿ ಚಿದ್ರಿ ಚೌವರಸ್ತೆ, ಬುತ್ತಿಬಸವಣ, ಹಳೆ ಚಿದ್ರಿ ಹಾಗೂ 11ಕೆವಿ ವಿಮಾನ ನಿಲ್ದಾಣ ಫೀಡರ್ ಮೇಲೆ ಬರುವ ನ್ಯೂ ಆದರ್ಶ ಕಾಲೋನಿ, ಬದೇನವಾಜ ಕಾಲೋನಿಯ ಈ ಫೀಡರ ಮೇಲೆ ಕಾಮಗಾರಿ ಹಾಗೂ ತರ್ತು ನಿರ್ವಹಣೆ ಕೆಲಸವಿರುವ ಕಾರಣ ದಿನಾಂಕ: 07–09–2025 ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 3 ಗಂಟೆಯವರೆಗೆ ವಿದ್ಯುತ್ ಸರಬರಾಜು ಇರುವುದಿಲ್ಲ. ಗ್ರಾಹಕರು ಸಹಕರಿಸಬೇಕೆಂದು ಬೀದರ ನಗರ ಉಪ ವಿಭಾಗದ ಜೇಸ್ಕಾಂ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

# 64 ನೇ ಶಿಕ್ಷಕರ ದಿನಾಚರಣೆಯ ಶುಭಾಶಯಗಳು

ಅಜ್ಞಾನದಿಂದ ಸುಜ್ಞಾನದ ಕಡೆಗೆ ಅಂಧಕಾರದಿಂದ ಬೆಳಕಿನೆಡೆಗೆ ಅಸತ್ಯದಿಂದ ಸತ್ಯದೆಡೆಗೆ ಆದಿಯಿಂದ ಅನಂತ ನಡೆಗೆ ಕರೆದುಕೊಂಡು ಹೋಗುವ ಏಕೈಕ ಅದ್ಭುತ ಶಕ್ತಿಯೇ ಶಿಕ್ಷಕರು ನನ್ನ ಎಲ್ಲಾ ಶಿಕ್ಷಕರಿಗೆ ಶಿಕ್ಷಕರ ದಿನಾಚರಣೆಯ ಶುಭಾಶಯಗಳು ನಿರ್ಮಾಣವನ್ನು ಮಾಡುವಲ್ಲಿ ಮುಖ್ಯವಾದ ಪಾತ್ರವನ್ನು ವಹಿಸುತ್ತಾರೆ ಅದಕ್ಕಾಗಿಯೇ ಶಿಕ್ಷಕರ ದಿನಾಚರಣೆ ಶ್ರೇಷ್ಠ ದಿನಾಚರಣೆ–ಯಾಗಿದೆ. ಭಾರತದ ಎರಡನೆಯ ರಾಷ್ಟ್ರಪತಿ ಭಾರತದ ಶ್ರೇಷ್ಠ ಶ್ರೇಷ್ಠ ರಾಜನೀತಿಜ್ಞರಾಜನ್ ತಿನ್ನು ಡಾಕ್ಟರ್ ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮದಿನದ ಗೌರವಾರ್ಥವಾಗಿ ಶಿಕ್ಷಕರ ದಿನಾಚರಣೆಯನ್ನು ಆಚರಿಸಲಾಗುತ್ತದೆ 1902 ರಲ್ಲಿ ಡಾಕ್ಟರ್ ರಾಧಾಕೃಷ್ಣನ್ ಅವರ ಜನ್ಮದಿನವನ್ನು ಶಿಕ್ಷಕರ ದಿನವಾಗಿ ಆಚರಿಸಲು ಸಲಹೆ ನೀಡಿದರು ಅಂದಿನಿಂದ ಈ ಆಚರಣೆಯನ್ನು ಆಚರಿಸಲಾಗುತ್ತದೆ. ಈ ಆಚರಣೆಯ ಮುಖ್ಯ ಉದ್ದೇಶವೆಂದರೆ ವಿದ್ಯಾರ್ಥಿಗಳ ಜೀವನ ರೂಪಿಸುವಲ್ಲಿ ಶಿಕ್ಷಕರ ಪರಿಶ್ರಮ ಸಮರ್ಪಣೆ ಮತ್ತು ಅವರು ನೀಡಿದ ಕೊಡುಗೆಯನ್ನು ಗುರುತಿಸಿ ಗೌರವಿಸುವುದು ಆಗಿದೆ ಯಾವುದೇ ಒಬ್ಬ ವಿದ್ಯಾರ್ಥಿಯ ಸಾಧನೆ ಮಾಡುವಲ್ಲಿ ಶಿಕ್ಷಕರ ಪರಿಶ್ರಮ ಅಗಾಧವಾದುದು ಗುರಿ ಮುಂದೆ ಗುರು ಹಿಂದೆ ಇದ್ದರೆ ಏನು ಬೇಕಾದರೂ ಸಾಧಿಸಬಹುದು ಹೀಗಾಗಿ ಪ್ರತಿಯೊಬ್ಬರಿಗೆ ಶಿಕ್ಷಣ ಎಷ್ಟು ಮುಖ್ಯವೋ ಶಿಕ್ಷಕರು ಕೂಡ ಅಷ್ಟೇ ಮುಖ್ಯ ಗುರು ಇಲ್ಲದೆ ಗುರಿಯನ್ನು ತಲುಪುವುದು ಬಹಳ ಕಷ್ಟ ವಿದ್ಯಾರ್ಥಿಗಳ ಜೀವನದಲ್ಲಿನ ಭಯವನ್ನು ಹೋಗಲಾಡಿಸಿ ಭರವಸೆಯನ್ನು ತುಂಬುವ ಏಕೈಕ ವ್ಯಕ್ತಿ ಮತ್ತು ಶಕ್ತಿ ಎಂದರೆ ಅದು ಶಿಕ್ಷಕ ಮಾತ್ರ ವಿದ್ಯಾರ್ಥಿಗಳಲ್ಲಿ ಕಲಿಕೆಯ ಆಸಕ್ತಿಯನ್ನು ಹೆಚ್ಚಿಸಿ ಜ್ಞಾನ ತಿಳುವಳಿಕೆ ಅನ್ವಯ ಕೌಶಲ್ಯಗಳನ್ನು ಬೆಳೆಸುವ ಶ್ರೇಷ್ಠ ವ್ಯಕ್ತಿ ಎಂದರೆ ಶಿಕ್ಷಕರು ಎಂದು ನಾವು ಹೇಳಬಹುದಾಗಿದೆ. ಗುರು ಎಂದರೆ ವ್ಯಕ್ತಿಯಲ್ಲ ಒಂದು ಶಕ್ತಿ ಅಜ್ಞಾನದ ಕತ್ತಲೆಯನ್ನು ಕಳೆದು ಸುಜ್ಞಾನದಡೆಗೆ ಕರೆದುಕೊಂಡು ಹೋಗುವ ಕರೆದುಕೊಂಡು ಹೋಗುವ ಶಬ್ದವೇ ಗುರು ಪ್ರತಿ ವಿದ್ಯಾರ್ಥಿಯ ಬದುಕನ್ನು ರೂಪಿಸಿ ಉತ್ತಮ ಶಿಕ್ಷಣವನ್ನು ನೀಡುವುದರ ಜೊತೆಗೆ ಮೂಲತವನ್ನು ತಿಳಿಸಿ ಅವನಲ್ಲಿ ಸಂಸ್ಕಾರವನ್ನು ಬೆಳೆಸಿ ಉತ್ತಮ ನಾಗರಿಕನನ್ನಾಗಿ ಮಾಡುವಲ್ಲಿ ಶಿಕ್ಷಕರ ಪಾತ್ರ ಹಿರಿದಾಗಿದೆ ವಿದ್ಯಾರ್ಥಿಯ ಬದುಕಿನಲ್ಲಿ ಭರವಸೆಯ ಬೆಳಕನ್ನು ಬೆಳಗುವವರು ಶಿಕ್ಷಕರಾಗಿರುವುದರಿಂದ ಇಡೀ ಪ್ರಪಂಚವೇ ಶಿಕ್ಷಕರನ್ನು ಶ್ರೇಷ್ಠ ಸ್ಥಾನದಲ್ಲಿಟ್ಟು ಪೂಜಿಸಲಾಗುತ್ತದೆ . ಪ್ರತಿ ವಿದ್ಯಾರ್ಥಿಯ ಬದುಕಿನಲ್ಲಿ ದೀಪವಾಗಿ ಮೇಣದಬತ್ತಿಯಂತೆ ತಾನು ಉರಿದುಕೊಂಡು ಎಲ್ಲರಿಗೂ ಬೆಳಕು ನೀಡುವಂತೆ ಶಿಕ್ಷಕರು ಕೂಡ ತಾನು ಕಷ್ಟಪಟ್ಟು ವಿದ್ಯಾರ್ಥಿಗೆ ಸುಖವನ್ನು ನೀಡುವ ಕಾರ್ಯವನ್ನು ಮಾಡುತ್ತಿದ್ದಾರೆ ಈ ದಿನ ಅವರಿಗೆ ಮೀಸಲಿ ಗುರುಕುಲ ಶಿಕ್ಷಣದಿಂದ ಇಂದಿನ ಶಿಕ್ಷಣದವರೆಗೂ ಶಿಕ್ಷಕರು ಹಲವಾರು ವಿದ್ಯಾರ್ಥಿಗಳ ಜೀವನವನ್ನು ರೂಪಿಸಲು ತಮ್ಮನ್ನು ತಾವೇ ಸಮರ್ಪಿಸಿಕೊಂಡಿದ್ದಾರೆ ಅವರಲ್ಲಿ ಆತ್ಮವಿಶ್ವಾಸವನ್ನು ಬೆಳೆಸಿದ್ದಾರೆ ಜೀವನದ ಪ್ರತಿಯೊಂದು ತಪ್ಪು–ಒಪ್ಪುಗಳನ್ನು ತಿದ್ದಿ ಅವರವರ ಜವಾಬ್ದಾರಿಯ ನಿರ್ವಹಣೆಯ ಬಗ್ಗೆ ತಿಳಿಸಿಕೊಟ್ಟಿದ್ದಾರೆ ನಮ್ಮ ವಿದ್ಯಾರ್ಥಿಗಳ ಭವಿಷ್ಯ ಉಜ್ವಲವಾಗಲಿ ಎಂದು ತುಂಬು ಹೃದಯದಿಂದ ಹಾರೈಸಿ ಅದಕ್ಕೆ ಪೂರಕವಾದ ಸಕಾರಾತ್ಮಕವಾದ ಸರಿಯಾದ ಶಿಕ್ಷಣವನ್ನು ನೀಡುತ್ತಿದ್ದಾರೆ. ಇದನ್ನೆಲ್ಲ ಕಲಿಸಿ ಜೀವನದ ಪಾಠಗಳನ್ನು ಹಲವು ಅನುಭವಗಳನ್ನು ತಿಳಿಸಿದ ಶಿಕ್ಷಕರಿಗೆ ಒಂದು ಧನ್ಯವಾದಗಳು ತಿಳಿಸಲು ಈ ದಿನಾಚರಣೆಯನ್ನು ಆಚರಿಸಲಾಗುತ್ತಿದೆ ಆದರೆ ಇತ್ತೀಚಿನ ಶೈಕ್ಷಣಿಕ ಬದಲಾವಣೆಯಲ್ಲಿ ಶಿಕ್ಷಕರ ಮಹತ್ವ ಕಡಿಮೆಯಾಗುತ್ತಿದೆ ಎಂದು ಭಾಸವಾಗುತ್ತಿದೆ ಶಿಕ್ಷಣ ಮತ್ತು ಸಂಸ್ಕಾರ ನೀಡುವ ಶಿಕ್ಷಕರ ಸಂಖ್ಯೆ ಕಡಿಮೆಯಾಗಿದೆ ಇದು ದುರಂತದ ಸಂಗತಿ ಶಿಕ್ಷಣ ಕೇವಲ ಪ್ರಮಾಣ ಪತ್ರಗಳನ್ನು ಕೊಡುವ ಒಂದು ಸಂಸ್ಥೆಯಾಗಿದೆ ಶಿಕ್ಷಣ ಪಡೆದವರಿಂದ ಸಮಾಜ ಸುಧಾರಣೆಯಾಗುವ ಬದಲು ಅವರಿಂದಲೇ ಅನಾಗರಿಕ ವರ್ತನೆಗಳು ದಿನದಿಂದ ದಿನಕ್ಕೆ ಹೆಚ್ಚುತ್ತಿವೆ ಪೋಷಕರ ಅತಿಯಾದ ಆಸೆಗಳು ವಿದ್ಯಾರ್ಥಿ ಮತ್ತು ಶಿಕ್ಷಕರ ನಡುವಿನ ಹೆಚ್ಚಿನ ಹೊರೆ ಉಂಟಾಗುತ್ತಿದೆ ಕೇವಲ ಒಂದು ಸ್ಥಾನವನ್ನು ಪಡೆಯುವಲ್ಲಿ ಆತುರ ಹೆಚ್ಚು ಮತ್ತು ಹಣ ಗಳಿಸಬೇಕೆಂಬ ಆಸೆ ಹೆಚ್ಚುತ್ತಿದೆ ಇದರಿಂದ ನೈತಿಕ ಮೌಲ್ಯಗಳನ್ನು ಬೆಳೆಸಬೇಕಿರುವ ಶಿಕ್ಷಣ ಶಿಕ್ಷಕ ಅನೈತಿಕತೆಯತ್ತ ಸಾಗುತ್ತಿದೆ ಶಿಕ್ಷಣ ಹಾಗೂ ಶಿಕ್ಷಕರು ವಿಫಲರಾಗಿದ್ದಾರೆ ಇದಕ್ಕೆ ಸರಕಾರ ಮತ್ತು ಪೋಷಕರು ಶಿಕ್ಷಕರ ಶಿಕ್ಷಕರ ಮೇಲೆ ಹೇರುತ್ತಿರುವ ಅತಿಯಾದ ಒತ್ತಡವೇ ಕಾರಣ ಹಾಗಾಗಿ ನಾವುಗಳು ಈ 64 ನೇ ಶಿಕ್ಷಕರ ದಿನಾಚರಣೆ ಎಂದು ಎಲ್ಲಾ ಶಿಕ್ಷಕರನ್ನು ಗೌರವಿಸಿ ಸಂಸ್ಕಾರವನ್ನು ಬೆಳೆಸುವಲ್ಲಿ ನಾವು ಸಾಕಾರ ಕೊಡಬೇಕೆಂದು ಪ್ರಮಾಣ ಮಾಡುವುದರ ಮೂಲಕ ಉತ್ತಮ ಸಮಾಜದೊಳಗೆ ನಮ್ಮ ಪಯಣವನ್ನು ಸಾಗಿಸೋಣ ಹಾಗೂ ನಮ್ಮೆಲ್ಲ ಶಿಕ್ಷಕರ ಆಶೀರ್ವಾದದಿಂದ ಎಲ್ಲ ವಿದ್ಯಾರ್ಥಿಗಳ ಬದುಕು ಸುಂದರವಾಗಲಿ ಎನ್ನುವ ಆಶಯ ದೊಂದಿಗೆ ಈ ಲೇಖನವನ್ನು ಇಲ್ಲಿಗೆ ಮುಗಿಸುತ್ತಿದ್ದೇನೆ ಎಲ್ಲರಿಗೂ ಧನ್ಯವಾದಗಳು...



ಇಂತಿ ನಿಮ್ಮ ವಿಶ್ವಾಸಿ
ಬಸವರಾಜ್ ಎಸ್ ಸೇರಿ
ಉಪನ್ಯಾಸಕರು ದೊಡ್ಡಪ್ಪ ಅಪ್ಪ ಶಿಕ್ಷಣ ಮಹಾವಿದ್ಯಾಲಯ
ಬಸವಕಲ್ಯಾಣ
M.7829204013



**ಮಲ್ಲಮ್ಮ ನುಡಿ ವಾರ್ತೆ**
**ಬೀದರ:**

ಬೀದರ–ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಅಮೃತರಾವ ಚಿಮಕೋಡೆ ಅವರು ಬೀದರ ನಗರದ ಕೇಂದ್ರ ಬಸ್ ನಿಲ್ದಾಣ–ಕ್ಕೆ ಭೇಟಿ ನೀಡಿ, ಬಸ್ ಗಳಿಗೆ ಸಂಬಂಧಿಸಿದಂತೆ ಪ್ರಯಾಣಿಕರ ಜೊತೆ ಸಂವಾದ ನಡೆಸಿ, ಪರಿಶೀಲನೆ ಮಾಡಿದರು.

# ಇಂದು ಬಳ್ಳಾರಿ ಜಿಲ್ಲಾ ಮಟ್ಟದ ದಸರಾ ಕ್ರೀಟಾಕೂಟ

**ಮಲ್ಲಮ್ಮ ನುಡಿ ವಾರ್ತೆ**
**ಬಳ್ಳಾರಿ:**

ಸೆ.04–ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಸೆ.06 ರಂದು ಬೆಳಿಗ್ಗೆ 11 ಗಂಟೆಗೆ ನಗರದ ನಲ್ಲಚೇರುವು ಪ್ರದೇಶದ ಜಿಲ್ಲಾ ಕ್ರೀಡಾಂಗಣದಲ್ಲಿ ಬಳ್ಳಾರಿ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟ ಆಯೋಜಿಸಲಾಗಿದೆ.

ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಉಸ್ತುವಾರಿ ಸಚಿವ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಬಳ್ಳಾರಿ ಗ್ರಾಮೀಣ ಶಾಸಕ ಬಿ.ನಾಗೇಂದ್ರ ಅವರು ಅಧ್ಯಕ್ಷತೆ ವಹಿಸುವರು. ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ಶಾಸಕ ಜೆ.ಎನ್ ಗಣೇಶ್, ಸಂಸದರಾದ ಈ.ತುಕಾರಾಮ್, ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ಡಾ.ಸೈಯದ್ ನಾಸೀರ್ ಹುಸೇನ್, ವಿಧಾನಪರಿಷತ್ ಶಾಸಕ ಡಾ.ಚಂದ್ರಶೇಖರ್ ಬಿ.ಪಾಟೀಲ, ಶಾಸಕರಾದ ಬಿ.ಎಂ.ನಾಗರಾಜ, ನಾರಾ ಭರತ್ ರೆಡ್ಡಿ, ಈ ಅನ್ನಪೂರ್ಣ, ವಿಧಾನಪರಿಷತ್ ಶಾಸಕರಾದ ಶಶೀಲ್ ಜಿ.ನಮೋಶಿ, ವೈ.ಎಂ.ಸತೀಶ್, ಡಾ.ಬಾಬು ಜಗಜೀವನ್‌ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯಲು, ಬಳ್ಳಾರಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ.ವಿ.ಜೆ., ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್ ಸೇರಿದಂತೆ ಇತರರು ಉಪಸ್ಥಿತರಿರುವರು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಕೆ.ಗ್ರೇಸಿ ಅವರು ತಿಳಿಸಿದ್ದಾರೆ.

# ಕೆಯುಡಬ್ಲ್ಯೂಜೆ ಮನವಿಗೆ ಸ್ಪಂದನೆ
# ಆಯಾ ವರ್ಷವೇ ಪ್ರಶಸ್ತಿ ಪ್ರದಾನಕ್ಕೆ ಕ್ರಮ: ಕೆ.ವಿ.ಪ್ರಭಾಕರ್



**ಮಲ್ಲಮ್ಮ ನುಡಿ ವಾರ್ತೆ**
**ಬೆಂಗಳೂರು:**

ಪರಿಸರ ಅಭಿವೃದ್ಧಿ ಮತ್ತು ಅಭಿವೃದ್ಧಿ ಪತ್ರಿಕೋದ್ಯಮ ಪ್ರಶಸ್ತಿ ಹಾಗೂ ವಡ್ಡರ್ಸೆ ರಘುರಾಮ ಶೆಟ್ಟಿ ಪ್ರಶಸ್ತಿ ಪ್ರದಾನಕ್ಕೆ ದಿನಾಂಕ ನಿಗದಿ ಮಾಡಲು ಕ್ರಮ ವಹಿಸಲಾಗಿದೆ ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಅವರು ತಿಳಿಸಿದ್ದಾರೆ.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ) ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ವಿಧಾನಸೌಧದಲ್ಲಿ ಪ್ರಭಾಕರ್ ಅವರನ್ನು ಭೇಟಿ ಮಾಡಿ ವಾರ್ತಾ ಇಲಾಖೆಯಿಂದ ಪ್ರತಿ ವರ್ಷ ಕೊಡ ಮಾಡುವ ಈ ಪ್ರಶಸ್ತಿಗಳು ಕಳೆದ 7 ವರ್ಷಗಳಿಂದ ಬಾಕಿ ಉಳಿದಿವೆ ಎನ್ನುವುದನ್ನು ಗಮನಕ್ಕೆ ತಂದರು.

ಪ್ರಶಸ್ತಿ ಪುರಸ್ಕೃತರ ಆಯ್ಕೆ ಪ್ರಕ್ರಿಯೆ ಮುಗಿದು ಈಗಾಗಲೇ 8 ತಿಂಗಳಾಗಿದ್ದರೂ ಪ್ರಶಸ್ತಿ ಪ್ರದಾನಕ್ಕೆ ದಿನಾಂಕ ನಿಗಧಿಯಾಗಿಲ್ಲ. ಮುಂದೆ ಈ ರೀತಿ ಆಗದಂತೆ ಆಯಾ ವರ್ಷದ ಪ್ರಶಸ್ತಿಯನ್ನು ಆಯಾ ವರ್ಷವೇ ಪ್ರದಾನ ಮಾಡಲು ಕ್ರಮ ವಹಿಸಬೇಕು ಎಂದು ಮನವಿ ಮಾಡಿದರು.

ಈ ತಿಂಗಳ 19ರಂದು ಪ್ರಶಸ್ತಿ ಪ್ರದಾನ ಮಾಡಲು ಮುಖ್ಯಮಂತ್ರಿಗಳ ದಿನಾಂಕ ನಿಗದಿಗೊಳಿಸಲು ತಿಳಿಸಲಾಗಿದೆ. ಮುಂದೆ ಆಯಾ ವರ್ಷವೇ ಪ್ರಶಸ್ತಿ ಪ್ರದಾನ ಮಾಡಲು ಕ್ರಮ ವಹಿಸಲಾಗುವುದು ಎಂದು ಪ್ರಭಾಕರ್ ಅವರು ಭರವಸೆ ನೀಡಿದರು.

ಇದೇ ಸಂದರ್ಭದಲ್ಲಿ ಮುಖ್ಯಮಂತ್ರಿಗಳ ಆರೋಗ್ಯ ಸಂಜೀವಿನಿ ಯೋಜನೆಯನ್ನು ಎಲ್ಲ ಪತ್ರಕರ್ತರಿಗೂ ವಿಸ್ತರಿಸಿ ಆದಷ್ಟು ಬೇಗ ಜಾರಿಗೊಳಿಸಬೇಕು. ಗ್ರಾಮೀಣ ಪತ್ರಕರ್ತರ ಬಸ್ ಪಾಸ್ ಷರತ್ತು ಸಡಿಲಿಸಬೇಕು ಎಂದು ಒತ್ತಾಯಿಸಿದ ಮನವಿಯನ್ನು ಇದೇ ಸಂದರ್ಭದಲ್ಲಿ ಸಲ್ಲಿಸಲಾಯಿತು.

ಹಿರಿಯ ಪತ್ರಕರ್ತರುಗಳಾದ ರಮೇಶ ಹಿರೇಜಂಬೂರ, ಸುಂದರೇಶ್ ಜೊತೆಯಲ್ಲಿದ್ದರು.

# ಎರಡು ವರ್ಷದ ಕಂದಮ್ಮನಿಗೆ ನಾಯಿ ಕಡಿತ; ಸ್ಥಳೀಯರ ಆಕ್ರೋಶ

**ಮಲ್ಲಮ್ಮ ನುಡಿವಾರ್ತೆ**
**ಕುಕನೂರ :**

ಮನೆಯಂಗಳದಲ್ಲಿ ಆಟವಾಡುತ್ತಿದ್ದ ಎರಡು ವರ್ಷದ ಕಂದಮ್ಮನಿಗೆ ಬೀದಿನಾಯಿ ಕಚ್ಚಿಗಾಯಗೊಳಿಸಿದ ಘಟನೆ ಸಂಭವಿಸಿದೆ.

ಕುಕನೂರ ತಾಲೂಕಿನ ಮಂಡಲಗಿರಿ ಗ್ರಾಮದ ಈಶ್ವರಯ್ಯ ಚಂದ್ರಗಿರಿ ಎಂಬುವರ ಮನೆಯ ಮುಂದೆ ಆಟವಾಡುತ್ತಿದ್ದ ಅವರ ಎರಡು ವರ್ಷದ ಮಗು ಶ್ರೇಯಸ್ ಎಂಬ ಕಂದಮ್ಮನಿಗೆ ಬೀದಿ ನಾಯಿ ಕಚ್ಚಿಗಾಯಗೊಳಿಸಿದ್ದು ಸ್ಥಳೀಯರ ಆಕ್ರೋಶಕ್ಕೆ ಕಾರಣವಾಗಿದೆ.

ಬಲಗಣ್ಣಿನ ಪಕ್ಕದಲ್ಲಿ ಬೀದಿನಾಯಿ ಮಗುವಿಗೆ ಕಚ್ಚಿದ್ದು ಸ್ವಲ್ಪದಲ್ಲಿಯೇ ಕಣ್ಣಿಗೆ ಆಗಬೇಕಾದ ಗಾಯ ತಪ್ಪಿದಂತಾಗಿದ್ದು ಕುಕನೂರು ಸಮುದಾಯ ಆರೋಗ್ಯ ಕೇಂದ್ರದಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಕುಟುಂಬಸ್ಥರು ತಿಳಿಸಿದ್ದು ಮಗು ಪ್ರಾಣಾಪಾಯದಿಂದ ಪಾರಾಗಿದೆ ಎಂದು ತಿಳಿಸಿರುತ್ತಾರೆ.



ನಾಯಿ ಕಡಿತದ ನೋವಿನಿಂದ ಮಗು ತುಂಬಾ ಆಕ್ರಂದನದಿಂದ ಅಳುತ್ತಿದ್ದು,

ದಿನದಿಂದ ದಿನಕ್ಕೆ ಬೀದಿನಾಯಿಗಳ ಹಾವಳಿಯ ಪ್ರಕರಣಗಳು ಜಿಲ್ಲೆಯಾದ್ಯಂತ ಹೆಚ್ಚಾಗುತ್ತಿದ್ದು ಇದಕ್ಕೆ ಸ್ಥಳೀಯ ಆಡಳಿತಗಳು ಕಡಿಯೋಣ ಹಾಕುವಂತೆ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಗ್ರಾಮಸ್ಥರು ಆಗ್ರಹಿಸಿದ್ದು ಇನ್ನು ಮುಂದಾದರು ಜಿಲ್ಲಾಡಳಿತ ಎಚ್ಚೆತ್ತುಕೊಂಡು ಜಿಲ್ಲೆಯಲ್ಲಿ ಆಗುವಂತಹ ಬೀದಿ ನಾಯಿಗಳ ಹಾವಳಿಯ ಅನಾಹುತಗಳನ್ನು ತಪ್ಪಿಸಲು ಮುಂದಾಗುತ್ತದೆಯೇ

# ಪರಿಶಿಷ್ಟ ಜಾತಿ ಒಳಮೀಸಲಾತಿ ಅಳವಡಿಸಿಕೊಂಡು ಕಾಲಬದ್ಧವಾಗಿ ಹೊಸದಾಗಿ ನೇಮಕಾತಿ ಅಧಿಸೂಚನೆ ಹೊರಡಿಸಲು ಸೂಚನೆ

ಬಳ್ಳಾರಿ,
ಸೆ.05–ಸೆ.04ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ತೆ–ಗೆದುಕೊಂಡ ತೀರ್ಮಾನದಂತೆ ದಿನಾಂಕ: 28.10.2024ರ ನಂತರ ಸರ್ಕಾರದ ಯಾವುದೇ ಇಲಾಖೆ/ಮಂಡಳಿ/ನಿಗಮ/ಸ್ವಾಯತ್ತ ಸಂಸ್ಥೆಗಳ ಹುದ್ದೆಗಳಿಗೆ ನೇರ ನೇಮಕಾತಿಗಾಗಿ ಸಂಬಂಧಿಸಿದ ನೇಮಕಾತಿ ಪ್ರಾಧಿಕಾರಗಳು ಹೊರಡಿಸಿದ ಅಧಿಸೂಚನೆಗಳನ್ನು ರದ್ದುಗೊಳಿಸಿ ಸರಕಾರ ಆದೇಶ ಹೊರಡಿಸಿದೆ. ಪರಿಶಿಷ್ಟ ಜಾತಿ ಒಳಮೀಸಲಾತಿಯನ್ನು ಅಳವಡಿಸಿಕೊಂಡು ಕಾಲಬದ್ಧವಾಗಿ (Time Bound) ಹೊಸದಾಗಿ ನೇಮಕಾತಿ ಅಧಿಸೂಚನೆ ಹೊರಡಿಸುವಂತೆ ಸೂಚಿಸಲಾಗಿದೆ.

ಇದಕ್ಕೆ ಸಂಬಂಧಿಸಿದಂತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಸುತ್ತೋಲೆ ಹೊರಡಿಸಿದೆ.

ದಿನಾಂಕ: 28.10.2024ರ ಹಿಂದೆ ನೇರ ನೇಮಕಾತಿಗಾಗಿ ಅಧಿಸೂಚನೆ ಹೊರಡಿಸಿ, ದಿನಾಂಕ: 28.10.2024ರ ನಂತರ ಸರ್ಕಾರದ ಯಾವುದೇ ಇಲಾಖೆ/ಮಂಡಳಿ/ನಿಗಮ/ಸ್ವಾಯತ್ತ ಸಂಸ್ಥೆಗಳ ಹುದ್ದೆಗಳಿಗೆ ನೇರ ನೇಮಕಾತಿಗಾಗಿ ಸಂಬಂಧಿಸಿದ ನೇಮಕಾತಿ ಪ್ರಾಧಿಕಾರಗಳು ಯಾವುದಾದರೂ ತಿದ್ದುಪಡಿ ಅಧಿಸೂಚನೆಗಳನ್ನು ಹೊರಡಿಸಿದ್ದಲ್ಲಿ ಅಂತಹ ಎಲ್ಲಾ ಅಂತಹ ಎಲ್ಲಾ ನೇಮಕಾತಿ ಅಧಿಸೂಚನೆಗಳನ್ನೂ ಸಹ ರದ್ದುಗೊಳಿಸಿ, ಪರಿಶಿಷ್ಟ ಜಾತಿ ಒಳ ಮೀಸಲಾತಿಯನ್ನು ಅಳವಡಿಸಿಕೊಂಡು ಹೊಸದಾಗಿ ನೇಮಕಾತಿ ಅಧಿಸೂಚನೆ ಹೊರಡಿಸಬೇಕೆಂದೂ ಸಹ ಹಾಗು ಕಾಲಬದ್ದವಾಗಿ (ಖಿಟಜ ಃಡಿಟಟಜ) ನೇಮಕಾತಿ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲು ಎಲ್ಲಾ ನೇಮಕಾತಿ ಪ್ರಾಧಿಕಾರಗಳಿಗೆ ಆಯ್ಕೆ ಪ್ರಾಧಿಕಾರಗಳಿಗೆ ಸೂಚಿಸಲಾಗಿದೆ ಎಂದು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಸರಕಾರದ ಅಧೀನ ಕಾರ್ಯದರ್ಶಿಗಳು ಹೊರಡಿಸಿದ ಸುತ್ತೋಲೆಯಲ್ಲಿ ತಿಳಿಸಿದ್ದಾರೆ.

# ರಡ್ಡಿ ಸಹಕಾರಿ ಬ್ಯಾಂಕ್ ಅಡಿಗಲ್ಲು

**ಮಲ್ಲಮ್ಮ ನುಡಿವಾರ್ತೆ**
**ಕೊಪ್ಪಳ :**

ಧಾರವಾಡದ ರಡ್ಡಿ ಸಹಕಾರ ಬ್ಯಾಂಕ್ ಕೊಪ್ಪಳ ಶಾಖೆಯ ನೂತನ ಕಟ್ಟಡದ ಅಡಿಗಲ್ಲು ಸಮಾರಂಭ ಸೆ. 6 ರಂದು ಬೆಳಿಗ್ಗೆ 11:15ಕ್ಕೆ ಹಮ್ಮಿಕೊಳ್ಳಲಾಗಿದೆ. ನಗರದ ಎ.ಪಿ.ಎಂ.ಸಿ. ಮುಖ್ಯ ಕಚೇರಿಯ ಎದುರುಗಡೆ, ಗವಿಮಠ ರಸ್ತೆಯಲ್ಲಿ ನಡೆಯಲಿದ್ದು, ಶ್ರೀ ಗವಿಸಿದ್ದೇಶ್ವರ ಮಹಾಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಲಿದ್ದಾರೆ ಹಾಗೂ ಪ್ರಮುಖರು ಭಾಗವಹಿಸಲಿದ್ದಾರೆ ಎಂದು ಶಾಖಾ ಸಲಹಾ ಸಮಿತಿ ಹಾಗೂ ಸಿಬ್ಬಂದಿ ವರ್ಗ ಪ್ರಕಟಣೆ ನೀಡಿದ್ದಾರೆ.

# ಸೆ.07 ರಂದು ವಿದ್ಯುತ್ ವ್ಯತ್ಯಯ

**ಮಲ್ಲಮ್ಮ ನುಡಿ ವಾರ್ತೆ**
**ಬಳ್ಳಾರಿ:**

ಸೆ.05–ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–1ರ ವ್ಯಾಪ್ತಿಯ 110/11 ಕೆವಿ ಸೌತ್ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಲಿಂಕ್–ಲೈನ್ ಕಾಮಗಾರಿ ಕೈಗೊಳ್ಳುತ್ತಿರುವುದರಿಂದ ಸೆ.07ರಂದು ಬೆಳಿಗ್ಗೆ 08 ಗಂಟೆಯಿಂದ ಸಂಜೆ 06 ಗಂಟೆಯವರೆಗೆ ಎಫ್–23, ಎಫ್–24 ಮತ್ತು ಎಫ್–25 ಫೀಡರ್‌ಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

**ವಿದ್ಯುತ್ ವ್ಯತ್ಯಯವಾಗುವ ಪ್ರದೇಗಳು:** ನಗರದ ಹೆಚ್.ಆರ್.ಗವಿಯಪ್ಪ ವೃತ್ತ, ತೇರು ಬೀದಿ, ಜೈನ್ ಮಾರ್ಕೆಟ್, ಕಾಳಮ್ಮ ಸ್ಟ್ರೀಟ್, ಲಾರಿ ಟರ್ಮಿನಲ್, ರಂಗಮಂದಿರ, ಹೊಸ ಬಸ್ ನಿಲ್ದಾಣ, ಬಂಡಿಮೋಟ್, ಗೊಲ್ಲರಹಟ್ಟಿ, ಮಾರುತಿ ಕಾಲೋನಿ, ಬೆಂಗಳೂರು ರಸ್ತೆ, ಬಾಪೂಜಿ ನಗರ, ಕುರಿಕಮೇಲ, ಕಮೇಲ ರಸ್ತೆ, ಮೃತ್ಯುಂಜಯ ನಗರ, ಬೆಂಕಿ ಮಾರೆಮ್ಮ ಗುಡಿ ಹತ್ತಿರ, ಬಾಲಾಂಜಿನೇಯ ಗುಡಿ ರಸ್ತೆ, ಪಿ.ಕೆ.ಸ್ಟ್ರೀಟ್, ಬ್ರೂಸ್ ಪೇಟೆ ಪೊಲೀಸ್ ಠಾಣೆ, ಆರ್.ಕೆ.ಮಿಲ್ ರಸ್ತೆ, ಬಾಪೂಜಿ ನಗರ, ರಾಣಿತೋಟ, ಕಣೇಕಲ್ ಬಸ್ ಸ್ಟ್ಯಾಂಡ್, ಮಾರ್ಕೆಟ್, ಟೋಪಿಗಲ್ಲಿ, ಮರಿಸ್ವಾಮಿ ಮಠ ಹಾಗೂ ಮುಂತಾದ ಏರಿಯಾಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಮತ್ತು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ನೂರ್ ಜಾನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೂಲಭೂತ ಶೌಕರ್ಯ ಇಲ್ಲದೆ ನರಳುತ್ತಿದೆ ನಗರಾಭಿವೃದ್ಧಿ ಪ್ರಾಧಿಕಾರದ ಸರೋಜಮ್ಮ ಬಡಾವಣೆ..!




(ವೀರಯ್ಯ ವಿ ಹಿರೇಮಠ)
**ಮಲ್ಲಮ್ಮ ನುಡಿ ವಾರ್ತೆ**
**ಕೊಪ್ಪಳ:**

ನಗರಾಭಿವೃದ್ಧಿ ಪ್ರಾಧಿಕಾರದ ಮೊಟ್ಟ ಮೊಲದ ಲೇ ಔಟ್ ಸರೋಜಮ್ಮ ಬಡಾವಣೆ ನಿವೇಶನಗಳನ್ನು 23 ವರ್ಷಗಳ ಬಳಿಕ ಹಂಚಿಕೆ ಮಾಡಲಾದ ನಿವೇಶನಗಳ ಫಲಾನುಭವಿಗಳು ನಿಟ್ಟುಸಿರುಬಿಟ್ಟಿದ್ದರು. ಆದ–ರೇ ಬಡಾವಣೆಯಲ್ಲಿ ಮಾತ್ರ ಇನ್ನೂವರೆಗೂ ಮೂಲಬೂತ ಶೌಕರ್ಯ ವದಗಿಸುವಲ್ಲಿ ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದ ನಿರಾಸಕ್ತಿ ಪ್ರದರ್ಶಿಸುತ್ತಿದೆ. ಪ್ರಾಧಿಕಾರದ ಸುಮಾರು 19 ಎಕರೆ ಭೂಮಿಯನ್ನು ಮೆಡಿಕಲ್ ಕಾಲೇಜು ನಿರ್ಮಾಣಕ್ಕೆ ಬಿಟ್ಟುಕೊಡಲಾಯಿತು. ಹೀಗಾಗಿ ಉಳಿದ 9 ಎಕರೆಯನ್ನು ಸಹ ಮೆಡಿಕಲ್ ಕಾಲೇಜಿಗೆ ನೀಡಬೇಕು ಎನ್ನುವ ಕುರಿತು ಚರ್ಚೆ ನಡೆಯುತ್ತಲೇ ಇತ್ತು. ಆದರೆ, ಈ ನಡುವೆ ನಿವೇಶನಕ್ಕಾಗಿ ಸದಸ್ಯತ್ವ ಪಡೆದು, ಆರಂಭಿಕ ಶುಲ್ಕ ಪಾವತಿಸಿ ಕಾಯುತ್ತಲೇ ಇದ್ದವರು ನಮಗೆ ನಿವೇಶನಬೇಕು ಎಂದು ಪಟ್ಟು ಹಿಡಿದಿದ್ದರು. ಕೊನೆಗೆ ಅರ್ಹ ಪಲಾನುಭವಿಗಳಿಗೆ ನಿವೇಶನ ಹಂಚಿಕೆ ಮಾಡಿದ್ದರು, ಈಗಲಾದರೂ ಮನೆಗಳು ಸಿಕ್ಕವಲ್ಲ ಎಂದು ಸಮಾಧಾನ ಆದರೂ ಮನೆಕಟ್ಟಬೇಕು ಎಂಬುವವರ ಕನಸು ಇನ್ನೂ ನನಸಾಗುತ್ತಿಲ್ಲ ಎನ್ನಬಹುದು.

ನಗರಾಭಿವೃದ್ಧಿ ಪ್ರಾಧಿಕಾರದ ಪಾರ್ಕ್ ತುಂಬಾ ಮುಳ್ಳುಗಿಡ.. ಅನೈತಿಕ ತಾಣ..

ನಗರಾಭಿವೃದ್ಧಿ ಪ್ರಾಧಿಕಾರವೂ ನಿರ್ಮಿಸಿದ ಸರೋಜಮ್ಮ ಬಡಾವಣೆಗೆ ಇಲ್ಲಿಯವರೆಗೆ ರಸ್ತೆ ಯಾವುದು ಎಂಬುದು ಇಲ್ಲಿನ ನಿವೇಶನ ಪಡೆದವರಿಗೆ ಯಕ್ಷ ಪ್ರಶ್ನೆಯಾಗಿದೆ..? ಹಾಗೂ ನಿವೇಶನಗಳ ಅಭಿವೃದ್ಧಿ ಇಲ್ಲದೆ ಜನರು ಅಲ್ಲಿ ಮನೆಕಟ್ಟುವದು ಹೇಗೆ ಎಂಬ ಭಯದ ವಾತಾವರಣ ಇದೆ ಹಾಗೂ ರಾತ್ರಿ, ಹಗಲು ಇಲ್ಲಿ ಅನೈತಿಕ ತಾಣವಾಗಿ ಬದಲಾಗಿದೆ ಮುಳ್ಳು ಕಂಠೀಗಳು ಬೆಳೆದಿದ್ದು ಪಾರ್ಕ್ ಅಭಿವೃದ್ಧಿ ಇಲ್ಲದೆ, ಮುಳ್ಳು ಬೆಳೆದು, ಈಗ ಪಾಳುಬಿದ್ದಿವೆ ಇನ್ನಾದರೂ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶ್ರೀನಿವಾಸ ಗುಪ್ತಾ ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದ ಈ ಸರೋಜಮ್ಮ ಬಡಾವಣೆ ಅಭಿವೃದ್ಧಿಗೆ ಮುಂದಾಗಬೇಕು ಎಂಬುದು ನಿವೇಶನ ಪಡೆದ ಹಲವರ ಆಗ್ರಹವಾಗಿದೆ.

# ಕುಕನೂರಿನಲ್ಲಿ ಸಂಭ್ರಮದ ಈದ್ ಮಿಲಾದ್ ಆಚರಣೆ..!



**ಮಲ್ಲಮ್ಮ ನುಡಿ ವಾರ್ತೆ**
**ಕುಕನೂರ :**

ಪ್ರವಾದಿ ಮಹಮ್ಮದ್ ಪೈಗಂಬರ್ ಅವರ ಜನ್ಮದಿನದ ಅಂಗವಾಗಿ ಮುಸ್ಲಿಮರು ಕುಕನೂರ ಪಟ್ಟಣದಲ್ಲಿ ಶುಕ್ರವಾರ ಈದ್ ಮಿಲಾದ್ ಹಬ್ಬವನ್ನು ಶ್ರದ್ಧಾಭಕ್ತಿ ಹಾಗೂ ಸಡಗರಿಂದ ಆಚರಿಸಿದರು.

ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಡಿಜೆ ಮೆರವಣಿಗೆ ಮಾಡಿ ಗಮನ ಸೆಳೆದರು. ಹಬ್ಬದ ಪ್ರಯುಕ್ತ ಕುಕನೂರು ಪಟ್ಟಣದ ಜಾಮಿಯಾ ಮಸೀದಿಯನ್ನು ವಿದ್ಯುದ್ದೀಪಗಳಿಂದ ಅಲಂಕರಿಸಲಾಗಿತ್ತು.

ಹಬ್ಬದ ಪ್ರಯುಕ್ತ ಚಿಣ್ಣರಾದಿಯಾಗಿ ಎಲ್ಲರೂ ಹೊಸ ಬಟ್ಟೆಗಳನ್ನು ಧರಿಸಿ ಮಸೀದಿಯಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು. ತಮ್ಮ ಬಂಧು–ಬಾಂಧವರು ಹಾಗೂ ಸ್ನೇಹಿತರೊಂದಿಗೆ ಮಸೀದಿ ಬಳಿ ಹಬ್ಬದ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡರು.

ಗ್ರಾಮದ ಬೀದಿಗಳಲ್ಲಿ ನಡೆದ ಮೆರವಣಿಗೆಯಲ್ಲಿ ಸಾವಿರಾರು ಜನರು ಪಾಲ್ಗೊಂಡಿದ್ದರು. ಜಾಮಿಯಾ ಮಸೀದಿಯಿಂದ ಆರಂಭಗೊಂಡ ಮೆರವಣಿಗೆ ಶಿರೂರು ವೀರಭದ್ರಪ್ಪ ವೃತ್ತ, ಅಂಬೇಡ್ಕರ್ ವೃತ್ತ, ಟಿಪ್ಪು ಸುಲ್ತಾನ್ ವೃತ್ತ ದಿಂದ ನೇರವಾಗಿ ಹಲವು ಮಹನೀಯರ ಮೂರ್ತಿಗೆ ಹಾರವನ್ನು ಹಾಕಿದ ನಂತರ ಗೆಳೆಯರ ಬಳಗ ದಿಂದ ತಂಪು ಪಾನೀಯ ಕೊಟ್ಟು ಪರಸ್ಪರ ಶುಭಾಶಯ ಕೋರಿದರು. ಅಲ್ಲಿಂದ ಮೆರವಣಿಗೆ ಮಾರ್ಗವಾಗಿ ರಸ್ತೆ ಮೂಲಕ ಮಸೀದಿವರೆಗೆ ತೆರಳಿತು. ಈ ಸಂದರ್ಭದಲ್ಲಿ ಸಮುದಾಯದ ಮುಖಂಡರಾದ ರಸಿದ್ ಸಾಬ್ ಅಣಜಿಗೆರಿ, ರೈಮಾನ್ ಸಾಬ್ ಮಕಪ್ಪನವರ್, ರಫೀಸಾಬ್ ಹಿರೇಹಾಳ್, ಸಿರಾಜ್ ಕರ್ಮುಡಿ, ಮಮ್ಮದ್ ರಫಿ ಮಂಡಲಗಿರಿ, ಹಾಗೂ ಇನ್ನಿತರರು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

ಮೆರವಣಿಗೆಯುದ್ದಕ್ಕೂ ಘೋಷಣೆಗಳು ಮೊಳಗಿದವು. ಯುವಜನರು ಧ್ವಜಗಳನ್ನು ಹಿಡಿದು ಸಾಗಿದರು.

ಅಕ್ಕಪಕ್ಕ ನಿಂತು ಮೆರವಣಿಗೆಯನ್ನು ಕಣ್ತುಂಬಿಕೊಂಡರು. ನೂರಾರು ಜನರು


ಜಾಹಿರಾತಿಗಾಗಿ ಇಂದೇ
ಸಂಪರ್ಕಿಸಿ:9449732000


# ಕೊಪ್ಪಳದಲ್ಲಿ ಬಸವ ಸಂಸ್ಕೃತಿ ಅಭಿಯಾನ..! ಬಸವರಾಜ್ ಬಳ್ಳೊಳ್ಳಿ

**ಮಲ್ಲಮ್ಮ ನುಡಿವಾರ್ತೆ**
**ಕೊಪ್ಪಳ:**

ಸೆಪ್ಟೆಂಬರ್ 1 ರಿಂದ ಕರ್ನಾಟಕ ರಾಜ್ಯದಾದ್ಯಂತ ಆರಂಭವಾಗಿರುವ 'ಬಸವ ಸಂಸ್ಕೃತಿ ಅಭಿಯಾನ'ವು ಪ್ರತಿ ದಿನ ಒಂದೊಂದು ಜಿಲ್ಲಾ ಕೇಂದ್ರದಲ್ಲಿ ನಡೆದು, ಅಕ್ಟೋಬರ್ 5 ರಂದು ಬೆಂಗಳೂರಿನಲ್ಲಿ ಸಮಾರೋಪಗೊಳ್ಳಲಿದೆ. ಬಸವ ಸಂಸ್ಕೃತಿ ಅಭಿಯಾನ' ಕೊಪ್ಪಳದಲ್ಲಿ ಈ ಅಭಿಯಾನ ಇದೇ ಸೋಮವಾರ, ಸೆಪ್ಟೆಂಬರ್ 8 ರಂದು ಜರುಗಲಿದೆ ಎಂದು ಜಾಗತಿಕ ಲಿಂಗಾಯತ ಮಹಾಸಭಾ ರಾಜ್ಯ ಉಪಾಧ್ಯಕ್ಷ ಬಸವರಾಜ್ ಬಳ್ಳೊಳ್ಳಿ ಹೇಳಿದರು.




ಅವರು ಶುಕ್ರವಾರದಂದು ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ, ಉದ್ದೇಶಿಸಿ ಮಾತನಾಡಿ ಲಿಂಗಾಯತ ಮಠಾಧಿಪತಿಗಳ ಒಕ್ಕೂಟ, ಜಾಗತಿಕ ಲಿಂಗಾಯತ ಮಹಾಸಭಾ, ಬಸವ ಸಮಿತಿ, ವಿಶ್ವಗುರು ಬಸವೇಶ್ವರ ಟ್ರಸ್ಟ್, ರಾಷ್ಟ್ರೀಯ ಬಸವದಳ, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ, ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು, ಕದಳಿ ವೇದಿಕೆ, ಅಕ್ಕಮಹಾದೇವಿ ಮಹಿಳಾ ಮಂಡಳ ಮತ್ತು ಕೊಪ್ಪಳದ ಸರ್ವ ಬಸವಪರ ಸಂಘಟನೆಗಳ ಸಹಯೋಗದೊಂದಿಗೆ ಕೊಪ್ಪಳದ ಬಸವ ಸಂಸ್ಕೃತಿ ಅಭಿಯಾನ ಸಮಾರಂಭವನ್ನು ಆಯೋಜಿಸಲಾಗಿದೆ.

ಆ ದಿನ ಮುಂಜಾನೆ 11 ರಿಂದ 12 ಗಂಟೆಯವರೆಗೆ ಕಿಡದಾಳನ ಶಾರದಾ ಪಿ.ಯು. ಕಾಲೇಜು ಸಭಾಂಗಣದಲ್ಲಿ ಕಾಲೇಜು ವಿದ್ಯಾರ್ಥಿಗಳು ಮತ್ತು ಬಸವ ಸಂಸ್ಕೃತಿ ಅಭಿಯಾನದ ಎಲ್ಲ ಪೂಜ್ಯ ಮಠಾಧೀಶರುಗಳೊಂದಿಗೆ 'ವಚನ ಸಂವಾದ' ನಡೆಯಲಿದೆ. ಸಂಜೆ 5 ರಿಂದ 6 ಗಂಟೆಯವರೆಗೆ ಶ್ರೀ ಬಸವೇಶ್ವರ ವೃತ್ತದಿಂದ (ಗಂಜ್ ಸರ್ಕಲ್) ಮಧುಶ್ರೀ ಗಾರ್ಡನವರೆಗೆ ಪಾದಯಾತ್ರೆ ಇದ್ದು, ನಂತರ ಸಂಜೆ 6 ಗಂಟೆಯಿಂದ ರಾತ್ರಿ 8 ಗಂಟೆಯವರೆಗೆ ಹೊಸಪೇಟೆ ರಸ್ತೆಯಲ್ಲಿರುವ ಮಧುಶ್ರೀ ಗಾರ್ಡನ್ನಲ್ಲಿ 'ಬಸವ ಸಂಸ್ಕೃತಿ ಅಭಿಯಾನದ ವೇದಿಕೆ ಕಾರ್ಯಕ್ರಮ' ನಡೆಯಲಿದೆ. ಮುಖ್ಯ ಉಪನ್ಯಾಸಕರಾಗಿ ಶ್ರೀ ಗುರುಬಸವ ಮಹಾಮನೆ, ಚನ್ನಯ್ಯಗಿರಿ, ಮನಗುಂಡಿಯ ಶ್ರೀ ಬಸವಾನಂದ ಸ್ವಾಮಿಗಳು 'ಬಸವ ಸಂಸ್ಕೃತಿಯಲ್ಲಿ ಸ್ವಾತಂತ್ರ್ಯದ ಪರಿಕಲ್ಪನೆ' ಕುರಿತಾಗಿಯೂ ಮತ್ತು ಕಲಬುರಗಿಯ ಸಾಹಿತಿಗಳಾದ ಡಾ. ಕಾವ್ಯಶ್ರೀ ಮಹಾಗಾಂವಕರ ಇವರು 'ವಚನ ಚಳುವಳಿ ಇಂದಿನ ಅಗತ್ಯ' ಕುರಿತಾಗಿ ಮಾತನಾಡುವರು.

ಕೊಪ್ಪಳ ಜಿಲ್ಲೆಯ ಮತ್ತು ಬಸವ ಸಂಸ್ಕೃತಿ ಅಭಿಯಾನದ ಎಲ್ಲ ಪೂಜ್ಯ ಮಠಾಧೀಶರು ಹಾಗೂ ಕೊಪ್ಪಳ ಜಿಲ್ಲೆಯ ಎಲ್ಲ ಹಾಲಿ ಮತ್ತು ಮಾಜಿ ಜನಪ್ರತಿನಿಧಿಗಳು, ಬಸವ ಚಿಂತಕರು, ಬೃಹತ್ ಸಂಖ್ಯೆಯಲ್ಲಿ ಬಸವಾನುಯಾಯಿಗಳು ಪಾಲ್ಗೊಳ್ಳಲಿದ್ದಾರೆ.

ವೇದಿಕೆ ಕಾರ್ಯಕ್ರಮದ ನಂತರ ರಾತ್ರಿ 8 ರಿಂದ 8–30 ರ ವರೆಗೆ ಸಾಣೆಹಳ್ಳಿಯ ಪೂಜ್ಯಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮಿಗಳು ರಚಿಸಿದ 'ಜಂಗಮದೆಡೆಗೆ' ನಾಟಕವನ್ನು ಸಾಣೆಹಳ್ಳಿಯ ಶಿವಸಂಚಾರ ಕಲಾತಂಡ ಪ್ರದರ್ಶಿಸಲಿದೆ. ಆನಂತರ ಪ್ರಸಾದದ ಸ್ವೀಕಾರ ನಡೆಯಲಿದೆ.

ಈ ಮಹತ್ತರ ಅಭಿಯಾನದಲ್ಲಿ ಬೃಹತ್ ಸಂಖ್ಯೆಯಲ್ಲಿ ಬಸವಾನುಯಾಯಿಗಳು ಆಗಮಿಸಿ ಈ ಅಭಿಯಾನದ ಯಶಸ್ಸಿಗೆ ಸಹಕರಿಸಬೇಕು ಎಂದು ಮನವಿ ಮಾಡಿದರು

ಸುದ್ದಿಗೋಷ್ಠಿಯಲ್ಲಿ ಕೊಪ್ಪಳ ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಶಿವಕುಮಾರ್ ಕುಕುನೂರ, ಜಾಗತಿಕ ಲಿಂಗಾಯಿತ ಮಹಾಸಭಾದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಜೇಶ್ ಸಸಿಮಠ, ಜಾಗತಿಕ ಲಿಂಗಾಯತ ಮಹಾಸಭಾದ ಯುವ ಘಟಕದ ಅಧ್ಯಕ್ಷ ಶೇಖರ್ ಇಂಗಳದಾಳ ಉಪಸ್ಥಿತರಿದ್ದರು.

# ಇದಾಮಿಲಾದ ಹಬ್ಬ ಭಕ್ತಿ–ಸಂತೋಷದಿಂದ ಆಚರಣೆ



**ಮಲ್ಲಮ್ಮ ನುಡಿ ವಾರ್ತೆ**
**ಲಿಂಗಸಗೂರು:**

ಪಟ್ಟಣದಲ್ಲಿ ಇಂದು ಮುಸ್ಲಿಂ ಸಮುದಾಯದವರು ಇದಾಮಿಲಾದ ಹಬ್ಬವನ್ನು ಧಾರ್ಮಿಕ ಭಕ್ತಿ ಹಾಗೂ ಹರ್ಷೋಲ್ಲಾಸದಿಂದ ಆಚರಿಸಿದರು. ಬೆಳಿಗ್ಗೆಯಿಂದಲೇ ಮಸೀದಿಗಳಲ್ಲಿ ವಿಶೇಷ ನಮಾಜ್ ಪ್ರಾರ್ಥನೆ ಸಲ್ಲಿಸಿ, ಪರಸ್ಪರ "ಇದ್ ಮುಬಾರಕ್" ಶುಭಾಶಯಗಳನ್ನು ವಿನಿಮಯ ಮಾಡಿಕೊಂಡರು. ಹಬ್ಬದ ಅಂಗವಾಗಿ ಮಕ್ಕಳು ಹೊಸ ಬಟ್ಟೆಗಳನ್ನು ಧರಿಸಿ ಸಂತೋಷದಲ್ಲಿ ತೊಡಗಿದ್ದು, ಮನೆ ಮನೆಗಳಲ್ಲಿ ಸಿಹಿ ತಿನಿಸುಗಳನ್ನು ಹಂಚಿಕೊಳ್ಳುವ ಸಂಪ್ರದಾಯ ಜಾರಿಯಲ್ಲಿತ್ತು. ಬಡವರಿಗೆ ಅನ್ನ–ಹಣ ವಿತರಣೆ ಮಾಡುವ ಮೂಲಕ ಹಬ್ಬದ ಮಾನವೀಯ ಸಂದೇಶವನ್ನು ಸಮುದಾಯ ಸಾರಿತು.

ಪಟ್ಟಣದ ವಿವಿಧ ಭಾಗಗಳಲ್ಲಿ ಹಬ್ಬದ ಸಂಭ್ರಮ ತಲೆದೋರಿದ್ದು, ಪೊಲೀಸ್ ಇಲಾಖೆ ಶಾಂತಿ–ಸುರಕ್ಷತೆಗಾಗಿ ಅಗತ್ಯ ಬಂದೋಬಸ್ತು ಮಾಡಿತ್ತು. ಪುರಸಭೆಯವರು ಸ್ವಚ್ಛತೆ ಹಾಗೂ ನೀರು ಸರಬರಾಜಿಗೆ ಸೂಕ್ತ ವ್ಯವಸ್ಥೆ ಕಲ್ಪಿಸಿದ್ದರು. ಇದಾಮಿಲಾದ ಹಬ್ಬವು ಸಮಾಜದಲ್ಲಿ ಸಹಕಾರ, ಸಹಾನುಭೂತಿ ಮತ್ತು ಸ್ನೇಹಭಾವ ಬೆಳೆಸುವ ನಿಟ್ಟಿನಲ್ಲಿ ಮಹತ್ವದ ಸಂದೇಶ ನೀಡಿದೆ.

ಈ ಸಂದರ್ಭದಲ್ಲಿ ಮುಸ್ಲಿಂ ಮುಖಂಡರಾದ ಖಾದರ ಪಾಶಾ, ಪಯಾಜ್ ಮಾನಿಯರ್, ಬಾಬಾ ಖಾಜಿ, ಅಲ್ಲಾಬಕ್ಷ ಮಾನಿಯರ್, ಮುನ್ನಾ ಖಾಜಿ, ರವುಫ್ ಗ್ಯಾರಂಟಿ, ಯಕಬಾಲ ಪಾಶಾ, ಹಾರೂನ ಸಾಬ್, ಅಲ್ಲು ಪಟೇಲ್, ದಾದಾಮಿಯಾ, ಅನೀಸ್ ಪಾಶಾ ಹಾಗೂ ಇನ್ನಿತರರು ಪರಸ್ಪರ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡರು. ಹಬ್ಬದ ಅಂಗವಾಗಿ ರಕ್ತದಾನ ಶಿಬಿರವೂ ಆಯೋಜಿಸಲ್ಪಟ್ಟಿದ್ದು, 100 ಕ್ಕಿಂತ ಹೆಚ್ಚು ಮಂದಿ ಉತ್ಸಾಹದಿಂದ ರಕ್ತದಾನ ಮಾಡಿ ಸಮಾಜಸೇವೆಯ ಮಾದರಿಯನ್ನೂ ತೋರಿದರು.

# ಕರ್ನಾಟಕ ಲೋಕಸೇವಾ ಆಯೋಗ: ಸ್ಪರ್ಧಾತ್ಮಕ ಪರೀಕ್ಷೆ ರದ್ದು

**ಮಲ್ಲಮ್ಮ ನುಡಿ ವಾರ್ತೆ**
**ಬಳ್ಳಾರಿ,**

ಸೆ.05–ಕರ್ನಾಟಕ ಲೋಕಸೇವಾ ಆಯೋಗವು ಹೈ.ಕ ವೃಂದದಡಿ ಅಧಿಸೂಚಿಸಲಾಗಿದ್ದ ಕೃಷಿ ಇಲಾಖೆಯಲ್ಲಿನ ಕೃಷಿ ಅಧಿಕಾರಿ 42 ಹಾಗೂ ಸಹಾಯಕ ಕೃಷಿ ಅಧಿಕಾರಿ 231 ಹುದ್ದೆಗಳಿಗೆ ಸೆ.06 ರಂದು ಕನ್ನಡ ಭಾಷಾ ಪರೀಕ್ಷೆ ಮತ್ತು ಸೆ.07 ಹಾಗೂ ಅಕ್ಟೋಬರ್ 04 ರಂದು ನಡೆಸಲು ನಿಗದಿಪಡಿಸಲಾಗಿದ್ದ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ರದ್ದುಪಡಿಸಲಾಗಿದೆ ಎಂದು ಆಯೋಗವು ತಿಳಿಸಿದೆ.

ಆಯೋಗದ ಅಧಿಸೂಚನೆ ಸಂಖ್ಯೆ ಪಿಎಸ್‌ಸಿ 1 ಆರ್‌ಟಿಬಿ–4/2024 ದಿನಾಂಕ 20–09–2024 ಮತ್ತು ತಿದ್ದುಪಡಿ ಅಧಿಸೂಚನೆ ದಿನಾಂಕ 31–12–2024ರನ್ವಯ ಹೈ.ಕ ವೃಂದದಡಿ ಅಧಿಸೂಚಿಸಲಾಗಿದ್ದ ಕೃಷಿ ಇಲಾಖೆಯಲ್ಲಿನ ಕೃಷಿ ಅಧಿಕಾರಿ 42 ಹುದ್ದೆಗಳು ಹಾಗೂ ಸಹಾಯಕ ಕೃಷಿ ಅಧಿಕಾರಿ 231 ಹುದ್ದೆಗಳಿಗೆ ಸೆ.06 ರಂದು ಕನ್ನಡ ಭಾಷಾ ಪರೀಕ್ಷೆಯನ್ನು ಮತ್ತು ಸೆ.07 ಹಾಗೂ ಅಕ್ಟೋಬರ್ 04 ರಂದು ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಲು ನಿಗದಿಪಡಿಸಲಾಗಿತ್ತು.

ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 388 ಸೇನೆನಿ 2024 ಭಾ–3, ದಿನಾಂಕ:04–09–2025ರಂದು ಹೊರಡಿಸಿರುವ ಸುತ್ತೋಲೆಯಲ್ಲಿ "ದಿನಾಂಕ: 28.10.2024ರ ಹಿಂದೆ ನೇರ ನೇಮಕಾತಿಗಾಗಿ ಅಧಿಸೂಚನೆ ಹೊರಡಿಸಿ, ದಿನಾಂಕ: 28.10.2024ರ ನಂತರ ಸರ್ಕಾರದ ಯಾವುದೇ ಇಲಾಖೆ/ನಿಗಮ/ಮಂಡಳಿ/ಸ್ವಾಯತ್ತ ಸಂಸ್ಥೆಗಳ ಹುದ್ದೆಗಳಿಗೆ ನೇರ ನೇಮಕಾತಿಗಾಗಿ ಸಂಬಂಧಿಸಿದ ನೇಮಕಾತಿ ಪ್ರಾಧಿಕಾರಗಳು ಯಾವುದಾದರೂ ತಿದ್ದುಪಡಿ ಅಧಿಸೂಚನೆಗಳನ್ನು ಹೊರಡಿಸಿದ್ದಲ್ಲಿ ಅಂತಹ ಎಲ್ಲಾ ನೇಮಕಾತಿ ಅಧಿಸೂಚನೆಗಳನ್ನು ಸಹ ರದ್ದುಗೊಳಿಸಿ, ಪರಿಶಿಷ್ಟಜಾತಿ ಒಳ ಮೀಸಲಾತಿಯನ್ನು ಅಳವಡಿಸಿಕೊಂಡು ಹೊಸದಾಗಿ ನೇಮಕಾತಿ ಅಧಿಸೂಚನೆಗಳನ್ನು ಹೊರಡಿಸಬೇಕು ಎಂದು ಸೂಚಿಸಿದೆ.

ಹಾಗಾಗಿ ಹೈ.ಕ ವೃಂದದಡಿ ಅಧಿಸೂಚಿಸಲಾಗಿದ್ದ ಕೃಷಿ ಇಲಾಖೆಯಲ್ಲಿನ ಕೃಷಿ ಅಧಿಕಾರಿ 42 ಹಾಗೂ ಸಹಾಯಕ ಕೃಷಿ ಅಧಿಕಾರಿ 231 ಹುದ್ದೆಗಳಿಗೆ ಸೆ.06 ರಂದು ಕನ್ನಡ ಭಾಷಾ ಪರೀಕ್ಷೆ, ಸೆ.07 ಹಾಗೂ ಅಕ್ಟೋಬರ್ 04 ರಂದು ನಡೆಸಲು ನಿಗದಿಪಡಿಸಲಾಗಿದ್ದ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ರದ್ದುಪಡಿಸಲಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗವು ಪ್ರಕಟಣೆಯಲ್ಲಿ ತಿಳಿಸಿದೆ.

# ರಾಷ್ಟ್ರದ ಅಭಿವೃದ್ಧಿಗೆ ಯುವಕರೆ ಬುನಾದಿ

**ಮಲ್ಲಮ್ಮ ನುಡಿ ವಾರ್ತೆ**
**ಬಾಗಲಕೋಟೆ:**

ಸೆ5: ವಿಶೇಷ ಶಿಬಿರಗಳು ಸಾಮಾಜಿಕ ಸೇವೆಯಲ್ಲಿ ತೊಡಗುವಂತೆ ಮಾಡುವುದರ ಜೊತೆಗೆ ವ್ಯಕ್ತಿತ್ವ ವಿಕಸನ ಮತ್ತು ಕೌಶಲ್ಯ ಅಭಿವೃದ್ಧಿಗೆ ಸಹಾಯಕವಾಗುತ್ತವೆ ಎಂದು ಬಿವಿವಿ ಸಂಘದ ಕಾಲೇಜುಗಳ ಆಡಳಿತ ಮಂಡಳಿಯ ಪದನಿಮಿತ್ಯ ಕಾರ್ಯದರ್ಶಿಗಳಾದ ಡಾ.ಎಸ್.ಎಮ್ ಗಾಂವಕರ ಹೇಳಿದರು.

ಬಸವೇಶ್ವರ ಕಲಾ ಮಹಾವಿದ್ಯಾಲಯದ ಎನ್ಎಸ್ಎಸ್ ಘಟಕದ ವತಿಯಿಂದ ಮುಚಖಂಡಿ ಗ್ರಾಮದಲ್ಲಿ ಹಮ್ಮಿಕೊಂಡ ಏಳು ದಿನದ ವಾರ್ಷಿಕ ವಿಶೇಷ ಶಿಬಿರವನ್ನು ಸಸಿಗೆ ನೀರೆರೆಯುವುದರ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು. ಸ್ವಾತಂತ್ರ್ಯದ ಪ್ರಾರಂಭದಲ್ಲಿ ಬಡತನ, ಅನಕ್ಷರತೆಯ ಪರಿಸ್ಥಿತಿಯನ್ನು ಹೊಡೆದೊಡಿಸಲು ಮತ್ತು ಯುವಕರನ್ನು ಹಳ್ಳಿಯ ಸೇವೆಯಲ್ಲಿ ತೊಡಗಿಸಿಕೊಳ್ಳಬೇಕು ಎಂಬ ಗಾಂಧೀಜಿಯವರ ಕನಸನ್ನು ನನಸಾಗಿಸಲು ರಾಷ್ಟ್ರೀಯ ಸೇವಾ ಯೋಜನೆ ಹುಟ್ಟಿಕೊಂಡಿದೆ. ಶಿಬಿರದಿಂದ ನಾಯಕತ್ವಗುಣ ಬೆಳೆಯಲು ಸಹಾಯವಾಗುತ್ತದೆ. ನನ್ನ ಭಾರತಕ್ಕಾಗಿ ಒಗ್ಗಟ್ಟು ಎಂಬ ಘೋಷವಾಕ್ಯದೊಂದಿಗೆ ಈ ಶಿಬಿರ ಹಮ್ಮಿಕೊಂಡಿದ್ದು ಒಗ್ಗಟ್ಟಿನಲ್ಲಿ ಬಲವಿದೆ ಎಂಬುದನ್ನು ತೋರಿಸಲು ಇದೊಂದು ನಿಮಗೆ ಸುವರ್ಣವಕಾಶ ಇದನ್ನು ಸಮರ್ಪಕವಾಗಿ ಬಳಸಿಕೊಳ್ಳಿ ಎಂದರು.

ಅತಿಹೆಚ್ಚು ಯುವಕರನ್ನು ಹೊಂದಿರುವ ದೇಶ ನಮ್ಮದಾಗಿದ್ದು, ಎಲ್ಲರ ಶಕ್ತಿಯನ್ನು ಒಗ್ಗೂಡಿಸಿ ಹಳ್ಳಿಗಳನ್ನು ಎತ್ತರಕ್ಕೆ ಕೊಂಡೊಯ್ಯಬೇಕು. ದೇಶಿಯ ಉತ್ಪನ್ನಗಳನ್ನು ಬಳಕೆಗೆ ಕರೆ ನೀಡಬೇಕು. ದೇಶಕ್ಕಾಗಿ ನಾನು ಏನನ್ನಾದರೂ ಸಾಧನೆ ಮಾಡಬೇಕೆಂದು ಶಿಬಿರಾರ್ಥಿಗಳು ಪ್ರತಿಜ್ಞೆಯ ಪಣ ತೊಡಬೇಕು ಎಂದರು.

ಪ್ರಾಚಾರ್ಯರಾದ ಬಿ.ಆರ್ ಪಾಟೀಲ ಅವರು ಮಾತನಾಡಿ ವ್ಯಕ್ತಿತ್ವ ವಿಕಸನಕ್ಕಾಗಿ ಶಿಕ್ಷಣ ಕ್ಷೇತ್ರದಲ್ಲಿ ಹಲವಾರು ಘಟಕಗಳಿದ್ದು, ಎನ್ಎಸ್ಎಸ್ ಶಿಬಿರ ವಿಶೇಷ ವೇದಿಕೆಯಾಗಿದೆ. ಪಠ್ಯಕ್ರಮದಲ್ಲಿ ದೇಶದ ಜನಸಂಖ್ಯೆ ಅಭಿವೃದ್ಧಿಗೆ ಒಂದು ಶಾಪ ಎಂದು ಬೋಧನೆ ಮಾಡಲಾಗುತ್ತಿದೆ. ಆದರೆ ಅದನ್ನು ಸರಿಯಾದ ರೀತಿಯಲ್ಲಿ ಬೆಳೆಸಿಕೊಂಡರೆ ಅದು ಹೊರೆಯಾಗದೆ ವರವಾಗುತ್ತದೆ.



ಶಿಬಿರಗಳು ಸಮುದಾಯದೊಂದಿಗೆ ಯುವಕರನ್ನು ಬೆಸೆಯುವ ಕೆಲಸ ಮಾಡುತ್ತವೆ. ಪ್ರಸ್ತುತ ದಿನಗಳಲ್ಲಿ ಕೃಷಿಗೆ ಹೆಚ್ಚಿನ ಮನ್ನಣೆ ಸಿಗುತ್ತಿದ್ದು, ಹಳ್ಳಿಯನ್ನು ಅರ್ಥೈಸಿಕೊಳ್ಳುವ ಕೆಲಸವನ್ನು ಮಾಡಬೇಕು. ತಂತ್ರಜ್ಞಾನದಿಂದ ಆಹಾರ ಬೆಳೆಯಲು ಸಾಧ್ಯವಿಲ್ಲ ಅದನ್ನು ಮಾನವರೇ ಮಾಡಬೇಕು. ಎಐ ಆಗಮನದಿಂದ ನಿರುದ್ಯೋಗ ಹೆಚ್ಚುತ್ತದೆ ಎಂಬ ಭಯ ಹುಟ್ಟಿಸಲಾಗುತ್ತಿದೆ. ಅದು ಶುದ್ಧ ಸುಳ್ಳಾಗಿದ್ದು, ಸೂಕ್ಷ್ಮ ಕೌಶಲ್ಯ ಬೆಳಸಿಕೊಂಡವರಿಗೆ ಹೊಸದೊಂದು ವೇದಿಕೆ ಸಿಗಲಿದೆ ಎನ್ನುವುದನ್ನು ವಿದ್ಯಾರ್ಥಿಗಳು ಅರಿತುಕೊಳ್ಳಬೇಕು ಎಂದರು.

ಪ್ರಾಚಾರ್ಯರಾದ ಎಸ್. ಆರ್ ಮೂಗನೂರಮಠ ಅವರು ಮಾತನಾಡಿ ಸಾಮಾಜಿಕ ಕೌಶಲ್ಯಗಳು ಹೆಚ್ಚು ಪ್ರಾಧ್ಯಾನ್ಯತೆ ಪಡೆಯುತ್ತಿದ್ದು, ಅವುಗಳನ್ನು ಬೆಳಸಿಕೊಳ್ಳುವುದು ಅವಶ್ಯಕವಾಗಿದೆ. ದುಡಿಯುವ ಕೈಗಳಿಗೆ ಮಾತ್ರ ಊಟ ಮಾಡುವ ಹಕ್ಕಿದೆ, ಹಳ್ಳಿಗಳಲ್ಲೂ ತಂತ್ರಜ್ಞಾನ ಆಧಾರಿತ ಕೃಷಿಕಾರ್ಯಗಳು ಜಾರಿಯಲ್ಲಿದ್ದು ಜನಜೀವನವನ್ನು ಅರಿಯಲು ಶಿಬಿರಗಳು ಸಹಾಯ ಮಾಡುತ್ತವೆ ಎಂದರು.

ಕಾರ್ಯಕ್ರಮದಲ್ಲಿ ಎನ್ಎಸ್ಎಸ್ ಘಟಕಾಧಿಕಾರಿಗಳಾದ ಡಾ.ಎಂ.ಎಚ್ ವಡ್ಡರ, ಡಾ. ವಿರುಪಾಕ್ಷಿ ಎನ್.ಬಿ, ಐಕ್ಯೂಎಸಿ ಸಂಯೋಜಕರಾದ ಡಾ.ಎ.ಯು ರಾಠೋಡ ಸೇರಿದಂತೆ ಉಪನ್ಯಾಸಕರುಗಳು ಮತ್ತು ಶಿಬಿರಾರ್ಥಿಗಳು ಪಾಲ್ಗೊಂಡಿದ್ದರು.

# ರಾಷ್ಟ್ರೀಯ ಪೌಷ್ಟಿಕಾಂಶ ಸಪ್ತಾಹ ದಿನಾಚರಣೆ



**ಮಲ್ಲಮ್ಮ ನುಡಿ ವಾರ್ತೆ**
**ಬಾಗಲಕೋಟೆ:**

ಸೆ5: ಪ್ರತಿನಿತ್ಯದ ಆಹಾರ ಸೇವನೆಯಲ್ಲಿ ಅಧಿಕವಾಗಿ ಹಣ್ಣು ಮತ್ತು ತರಕಾರಿ ಸೇವನೆಯಿಂದ ಸಮತೂಕದ ಆಹಾರ ದೊರೆತಲ್ಲಿ ಸಧೃಡ ಹಾಗೂ ರೋಗನಿರೋಧಕ ಶಕ್ತಿ ಪಡೆಯಬಹುದು. ಸಾವಯವ ಕೈತೋಟ ಪ್ರತಿ ಮಹಿಳೆಯರೆಲ್ಲರೂ ಮನೆಯ ಅಂಗಳದಲ್ಲಿ ಅಥವಾ ತಾರಸಿ/ಮೇಲ್ಛಾವಣೆಯಲ್ಲಿ ವೈಜ್ಞಾನಿಕವಾಗಿ ಬೆಳೆಯಲು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ವಿಜ್ಞಾನಿಗಳ ಮಾರ್ಗದರ್ಶನದಲ್ಲಿ ಬೆಳೆದು ಆರೋಗ್ಯಯುತ ತಾಜಾ ತರಕಾರಿ ಹಾಗೂ ಹಣ್ಣುಗಳನ್ನು ಕಡಿಮೆ ಖರ್ಚಿನಲ್ಲಿ ಬೆಳೆಯಬಹುದು ಎಂದು ತರಕಾರಿ ತಜ್ಞರಾದ ಡಾ. ವಸಂತ ಗಾಣಿಗೇರ ಅವರು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ತೋಟಗಾರಿಕೆ ವಿಸ್ತರಣಾ ಶಿಕ್ಷಣ ಘಟಕ ಹಾಗೂ ಕರ್ನಾಟಕ ಕೃಷಿಕರ ಸಂಪನ್ಮೂಲ ಕೇಂದ್ರ, ಬಾಗಲಕೋಟ ಇವರ ಸಂಯುಕ್ತ ಆಶ್ರಯದಲ್ಲಿ 7 ದಿನಗಳ ರಾಷ್ಟ್ರೀಯ ಪೌಷ್ಠಿಕಾಂಶ ಸಪ್ತಾಹ ದಿನಾಚರಣೆ ಎಂಬ ಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಹಿಳೆಯರಿಗೆ ಕರೆ ನೀಡಿದರು.

ಈ ಜಾಗೃತಿ ಕಾರ್ಯಕ್ರಮದ ಪ್ರಯುಕ್ತ ಮಾದರಿ ಕೈತೋಟದ ಪ್ರಾತ್ಯಕ್ಷಿಕೆ, ಕಿರುಧಾನ್ಯ ಹಾಗೂ ಹಸಿರು ಸೊಪ್ಪಿನ ಮಹತ್ವ, ಆರೋಗ್ಯದಲ್ಲಿ ಔಷದೀಯ ಸಸ್ಯಗಳು, ಉತ್ತಮಜೀವನ ಶೈಲಿಗೆ ಪೌಷ್ಠಿಕ ಆಹಾರ ಎನ್ನುವ ಶಿರ್ಷಿಕೆಯ ಚಿತ್ರಕಲಾ ಸ್ಪರ್ಧಾ, ಒಲೆರಹಿತ ಪೌಷ್ಠಿಕ ಆಹಾರ ಅಡುಗೆ ಸ್ಪರ್ಧೆ ಹಾಗೂ ಪೌಷ್ಠಿಕ ಮತ್ತು ಅಪೌಷ್ಠಿಕತೆ ಕುರಿತು ವಿಚಾರ ಗೋಷ್ಠಿಗಳನ್ನು ಸತತ 7 ದಿನಗಳವರೆಗೆ ಆಯೋಜಿಸಲಾಗುವುದೆಂದು ಸಂಯೋಜಕರಾದ ಡಾ. ದೀಪಾ ತೇರದಾಳ ತಿಳಿಸಿದರು.

ಡಾ. ಭುವನೇಶ್ವರಿ ಜಿ. ಪ್ರಾಧ್ಯಾಪಕರು, ತೋಮವಿ, ಬಾಗಲಕೋಟರವರು ಮಾತನಾಡಿ ಪೌಷ್ಠಿಕ ಆಹಾರ ಉತ್ತಮ ಜೀವನಕ್ಕೆ ಸೋಪಾನ ಎಂದು ತಿಳಿಸಿದರು. ಸಂಪನ್ಮೂಲ ವಿಜ್ಞಾನಿಗಳಾಗಿ ಆಗಮಿಸಿದ ಡಾ. ವಿಜಯಾ ಹೊಸಮನಿ, ಸಹಾಯಕ ಪ್ರಾಧ್ಯಾಪಕರು, ತೋಮವಿ, ಬಾಗಲಕೋಟ ಇವರು ಅಡುಗೆ ಮನೆಯಲ್ಲಿ ಆರೋಗ್ಯ ಎಂಬ ವಿಷಯದ ಬಗ್ಗೆ ಕುರಿತು ಮಹಿಳೆಯರಿಗೆ ಅದರ ಬಗ್ಗೆ ಅರಿವು ಮೂಡಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ ರೇವಣಸಿದ್ದ ಆರ್. ಬಳ್ಳೊಳ್ಳಿ, ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಕೃಷಿಕರ ಸಂಪನ್ಮೂಲ ಕೇಂದ್ರ, ಬಾಗಲಕೋಟ ಇವರು ಕೃಷಿ ಹಾಗೂ ಕೃಷಿಯೇತರ ಚಟುವಟಿಕೆಗಳ ತರಬೇತಿಗಳನ್ನು ರೈತ ಮತ್ತು ರೈತ ಮಹಿಳೆಯರಿಗೆ ಉಚಿತವಾಗಿ ನೀಡುತ್ತೇವೆ ಎಂದು ತಿಳಿಸಿದರು. ಶ್ರೀಮತಿ ವಿಜಯಲಕ್ಷ್ಮಿ ಪಾಟೀಲ ರವರು ತರಬೇತಿ ಕಾರ್ಯಕ್ರಮದ ಯಶಸ್ಸಿಗೆ ಸಹಕಾರ ನೀಡಿದ ಎಲ್ಲರಿಗೂ ಸ್ವಾಗತಿಸಿ ಕೃತಜ್ಞತೆ ಸಲ್ಲಿಸಿದರು.

# ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳ ಜಯಂತಿ ಆಚರಣೆ



**ಮಲ್ಲಮ್ಮ ನುಡಿ ವಾರ್ತೆ**
**ಹನೂರು:**

ಸೆ 5:-ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿರಾಜೇಂದ್ರಮಹಾಸ್ವಾಮಿಗಳವರ ಆಶೀರ್ವಾದದಿಂದ ದೂರು ದೃಷ್ಟಿಯ ಫಲವಾಗಿ ಇಂದು ಜೆ.ಎಸ್.ಎಸ್ ಸಂಸ್ಥೆ ಬೆಳೆದು ದೇಶ ವಿದೇಶಗಳಲ್ಲೆಲ್ಲ ಪ್ರಖ್ಯಾತಿ ಪಡೆದಿದೆ. ಒಳ್ಳೆಯ ಹೆಸರನ್ನು ಪಡೆದಿರುವಂತಹ ಸಂಸ್ಥೆಯಾಗಿದೆ ಎಂದು ಮಾಜಿ ಶಾಸಕಿ ಪರಿಮಳ ನಾಗಪ್ಪ ಅವರು ತಿಳಿಸಿದರು.

ಕಾಮಗೆರೆ ಗ್ರಾಮದ ಜೆ.ಎಸ್.ಎಸ್ ಶಿಕ್ಷಣ ಸಂಸ್ಥೆಯಲ್ಲಿ ಹಮ್ಮಿಕೊಂಡಿದ್ದ ಶ್ರೀಮತ್ಸೂತ್ತೂರು ವೀರ ಸಿಂಹಾಸನ ಮಹಾಸಂಸ್ಥಾನ ಮಠ ಪರಮ ಪೂಜ್ಯ ಜಗದ್ಗುರು ಡಾಕ್ಟರ್ ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ ಶತ್ತೋತ್ತರ ದಸಮಾನೋತ್ಸವ (110 ನೇ ಜಯಂತಿ) ಆಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಜೆ.ಎಸ್.ಎಸ್ ಶಿಕ್ಷಣ ಸಂಸ್ಥೆಯು ಉತ್ತಮ ಪರಿಸರ ಶಿಕ್ಷಣ ನೀಡುತ್ತಿದೆ. ಶಾಲೆಯ ಮಕ್ಕಳು ಒಳ್ಳೆಯ ಶಿಕ್ಷಣವನ್ನು ಕಲಿತು ಉನ್ನತ ಸ್ಥಾನಕ್ಕೆ ಬೆಳೆಯ ಬೇಕು. ಓದುವುದರ ಜೊತೆಗೆ ಕ್ರೀಡಾ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಭಾಗವಹಿಸಬೇಕು ಶಾಲೆಗೆ ಶಿಕ್ಷಕರಿಗೆ ಊರಿಗೆ ಒಳ್ಳೆಯ ಹೆಸರು ತಂದು ಕೊಡಬೇಕು ಎಂದು ಸಲಹೆ ನೀಡಿದರು.

ನಮ್ಮೂರಿನ ಹೆಣ್ಣುಮಕ್ಕಳಿಗೆ ಶಾಲೆಯನ್ನು ತೆರೆಯಲು ಎಲ್ಲರ ಊರಿನವರ ಸಹಕಾರದಿಂದ ನಮ್ಮ ಮಾವನವರಾದ ಹುಚ್ಚಪ್ಪ ಅವರು ಪರಮ ಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ ಆಶೀರ್ವಾದದಿಂದ ಅವರ ಮಾರ್ಗದರ್ಶನದಲ್ಲಿ ತಮ್ಮ ಜಮೀನನ್ನು ಕೊಟ್ಟು ಇಲ್ಲಿ ಜೆ.ಎಸ್. ಎಸ್ ಶಿಕ್ಷಣ ಸಂಸ್ಥೆಯನ್ನು ತೆರೆಯಲು ಅವಕಾಶ ಮಾಡಿಕೊಟ್ಟರು.

ನಮ್ಮ ಪತಿಯವರಾದ ನಾಗಪ್ಪ ಅವರು ನಿಂತು ಶಾಲೆಯ ಕಟ್ಟಡ ನಿರ್ಮಾಣಕ್ಕೆ ಹಾಗೂ ಇಲ್ಲಿ ಒಂದು ಸರ್ಕಾರಿ ಆಸ್ಪತ್ರೆ ನಿರ್ಮಾಣ ಕಾರ್ಯವನ್ನು ಎಲ್ಲರ ಸಹಕಾರದಿಂದ ಪೂರ್ಣಗೊಳಿಸಲು ಶ್ರಮಿಸಿದ್ದಾರೆ. ಅಂತೆಯೇ ಈ ಜೆ.ಎಸ್. ಎಸ್ ಶಿಕ್ಷಣ ಸಂಸ್ಥೆಯು ಬೆಳೆದು ಇವತ್ತಿನ ದಿನಗಳಲ್ಲಿ ಸಾಕಷ್ಟು ಹೆಣ್ಣು ಮಕ್ಕಳ ವಿದ್ಯಾಭ್ಯಾಸಕ್ಕೆ ಒಂದು ಶೈಕ್ಷಣಿಕ ಸಂಸ್ಥೆಯಾಗಿ ಉತ್ತಮ ಶಿಕ್ಷಣವನ್ನು ನೀಡುತ್ತಾ ಈ ಭಾಗದ ಜನರಿಗೆ ಅನುಕೂಲ ಕಲ್ಪಿಸಿಕೊಟ್ಟಿದೆ ಎಂದು ಸ್ಮರಿಸಿದರು.

ಅಂದಿನ ದಿನಗಳಲ್ಲಿ ಶಾಲೆಯಲ್ಲಿ ಮಕ್ಕಳ ಹಾಜರಾತಿ ಕೊರತೆ ಇದ್ದರೂ ಸಹ ಅವತ್ತಿನ ದಿನಗಳಲ್ಲಿನ ಶಿಕ್ಷಕರನ್ನು ಮರೆಯುವಂತಿಲ್ಲ ಅವರ ಶ್ರಮ ತುಂಬಾನೇ ಇದೆ. ಅವರು ಶಾಲೆಯ ಸಮಯ ಮುಗಿದ ನಂತರ ಅಕ್ಕ ಪಕ್ಕದ ಹಳ್ಳಿಗಳಿಗೆ ಹೋಗಿ ಅಲ್ಲಿನ ತಮ್ಮ ಮಕ್ಕಳನ್ನು ಶಾಲೆಗೆ ಸೇರಿಸಿ ಎಂದು ಮನವೊಲಿಸಿ ಶಾಲೆಗೆ ಕ-ರೆತಂದು ಸೇರಿಸುವ ಮೂಲಕ ಶಿಕ್ಷಣ ಸಂಸ್ಥೆಯ ಬೆಳವಣಿಗೆ ಕಾರಣರಾಗಿದ್ದಾರೆ ಎಂದು ತಿಳಿಸಿದರು.

ಮೈಸೂರು ಜೆ.ಎಸ್.ಎಸ್ ಶಿಕ್ಷಣ ಸಂಸ್ಥೆ ನಿವೃತ್ತ ಪ್ರಾಂಶುಪಾಲರಾದ ಎಸ್.ಶಾಂತಪ್ಪ ಮಾತನಾಡಿ ಈ ಭಾಗದ ಹೆಚ್ಚು ಮಕ್ಕಳಿಗೆ ಉತ್ತಮ ಶಿಕ್ಷಣ ಸಿಗಬೇಕು ಎಂದು ದಿವಂಗತ ನಾಗಪ್ಪ ಅವರ ತಂದೆ ಹುಚ್ಚಪ್ಪ ಅವರು ಸುಮಾರು ಏಳುವರೆ ಎಕರೆಯಷ್ಟು ಜಾಗವನ್ನು ಆಸ್ಪತ್ರೆ ಹಾಗೂ ಶಾಲೆ ನಿರ್ಮಾಣ ಮಾಡಲು ದಾನವನ್ನಾಗಿ ನೀಡಿದರು.

1971ರಲ್ಲಿ ಕಾಮಗೆರೆಯಲ್ಲಿ ಜೆಎಸ್ಎಸ್ ಶಿಕ್ಷಣ ಪ್ರೌಢಶಾಲೆಯನ್ನು ಪ್ರಾರಂಭ ಮಾಡಿ ಶಿಕ್ಷಕರನ್ನು ನೇಮಿಸಿ. ಶಿಕ್ಷಕರಿಗೆ ತಮ್ಮ ಮನೆಯಲ್ಲಿ ಎಲ್ಲ ವ್ಯವಸ್ಥೆಯನ್ನು ಕೊಟ್ಟು ಇಲ್ಲೇ ಉಳಿದುಕೊಳ್ಳೋ ವ್ಯವಸ್ಥೆ ಮಾಡಿದರು. ನಂತರ ಬಂಡಳ್ಳಿ ರಾಮಾಪುರ ಅಜ್ಜೀಪುರ ಇಲ್ಲೆಲ್ಲಾ ಶಿಕ್ಷಣ ಸಂಸ್ಥೆಗಳನ್ನು ತೆರೆಯಲಾಯಿತು ಎಂದು ತಿಳಿಸಿದರು.

ನಂತರ 2024/25ನೇ ಸಾಲಿನ ಎ.ಸ್ಸೆ.ಸ್ಸೆ.ಲ್ಸಿ ಪರೀಕ್ಷೆ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ಹಾಗೂ ಶಾಲೆಯಲ್ಲಿ ನಡೆದ ವಿವಿಧ ಕ್ರೀಡೆ ಶಾಲಾ ಚಟುವಟಿಕೆಗಳಲ್ಲಿ ಭಾಗವಹಿಸಿ ವಿಜೇತರಾದ ಮಕ್ಕಳಿಗೆ ಬಹುಮಾನ ವಿತರಣೆ ಮಾಡಿ ಪ್ರೋತ್ಸಾಹಿಸಲಾಯಿತು.

ಕಾರ್ಯಕ್ರಮದಲ್ಲಿ ಗೌಡ್ರು ಮಲ್ಲಿಕಾರ್ಜುನ ಸ್ವಾಮಿ, ಗ್ರಾಮ ಪಂಚಾಯತ್ ಅಧ್ಯಕ್ಷ ಕೆ.ಕುಮಾರ್, ತಾಲೂಕು ಪಂ. ಮಾಜಿ ಸದಸ್ಯ ನಟೇಶ್, ಹಾಲು ಉತ್ಪಾದಕರ ಸಹಕಾರ ಸಂಘದ ಮಾಜಿ ಅಧ್ಯಕ್ಷ ಬಸವರಾಜಪ್ಪ, ಗ್ರಾಮ ಪಂ. ಸದಸ್ಯರಾದ ಶಿವಕುಮಾರ್, ಶಿವಪ್ರಕಾಶ್, ಲಕ್ಷ್ಮಮ್ಮ, ಮಹಾದೇವಮ್ಮ ಆನಂದ್, ಮಂಜುನಾಥ ಸ್ವಾಮಿ ಹಾಗೂ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ನಿರ್ದೇಶಕ ಕಿರಣ್, ಮುಖ್ಯ ಶಿಕ್ಷಕರಾದ ಗಿರಿಜಾಂಬ, ವಸಂತ್ ಕುಮಾರ್, ಸಹಶಿಕ್ಷಕರು ರಾಜಶೇಖರ್, ನವೀನ್ ಕುಮಾರ್, ಮೋಹನ್ ಕುಮಾರ್, ಶ್ವೇತಾ, ವಿಮಲಾ, ಮಮತಾ, ನಾಗವೇಣಿ, ನಂದಿನಿ ಪಾರ್ಲರ್ ಕೆ.ಬಿ ಮಧು ಸೇರಿದಂತೆ ಶಾಲೆಯ ವಿದ್ಯಾರ್ಥಿಗಳು ಇದ್ದರು.

# ಪತ್ರಕರ್ತ ಪ್ರಕಾಶ ಗುಳೇದಗುಡ್ಡ ನಿಧನ.

**ಮಲ್ಲಮ್ಮ ನುಡಿ ವಾರ್ತೆ**
**ಬಾಗಲಕೋಟೆ:**



ಸೆ.5- ಉದಯ ವಿಜಯ ಕನ್ನಡ ದಿನಪತ್ರಿಕೆಯ ಸಂಪಾದಕ, ಕಮತಗಿ ಗ್ರಾಮ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಪ್ರಕಾಶ ಗುಳೇದಗುಡ್ಡ (42)ಶುಕ್ರವಾರ ಹೃದಯಾಘಾತದಿಂದ ನಿಧನರಾದರು.
ಸ್ನೇಹಜೀವಿಯಾಗಿದ್ದ ಪ್ರಕಾಶ, ಸದಾ ಕ್ರಿಯಾಶೀಲ ವ್ಯಕ್ತಿ. ಕಳೆದ ಜುಲೈ ತಿಂಗಳಿನಲ್ಲಿ ಜರುಗಿದ ಜಿಲ್ಲಾ ಮಟ್ಟದ ಪತ್ರಕರ್ತರ ದಿನಾಚರಣೆ ಕಾರ್ಯಕ್ರಮದಲ್ಲಿ ' ಅತ್ಯುತ್ತಮ ಗ್ರಾಮೀಣ ಪತ್ರಕರ್ತ ' ಪ್ರಶಸ್ತಿ ಪಡೆದಿದ್ದ ಪ್ರಕಾಶ, ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ಬಾಗಲಕೋಟೆ ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾಗಿ ಕಾರ್ಯ ನಿರ್ವಹಣೆ ಮಾಡುತ್ತಿದ್ದರು. ಮೃತ ಪ್ರಕಾಶ ತಾಯಿ, ಪತ್ನಿ, ಪುತ್ರ ಹಾಗೂ ಪುತ್ರಿ ಸೇರಿದಂತೆ ಅಪಾರ ಬಂಧು ಬಳಗ ಅಗಲಿದ್ದಾರೆ.

**ಸಂತಾಪ:** ಪ್ರಕಾಶ ಗುಳೇದಗುಡ್ಡ ನಿಧನಕ್ಕೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಬಾಗಲಕೋಟೆ ಜಿಲ್ಲಾ ಘಟಕದ ಅಧ್ಯಕ್ಷ ಆನಂದ ಧಲಬಂಜನ, ಪ್ರಧಾನ ಕಾರ್ಯದರ್ಶಿ ಶಂಕರ ಕಲ್ಯಾಣಿ, ರಾಜ್ಯ ಕಾರ್ಯಕಾರಣಿ ಸದಸ್ಯ ಮಹೇಶ ಅಂಗಡಿ, ಹಿರಿಯ ಪತ್ರಕರ್ತರಾದ ಉಮೇಶ ಪೂಜಾರಿ, ಈಶ್ವರ ಶೆಟ್ಟರ, ರವಿ ಗಲಗಲಿ, ಶ್ರೀಶೈಲ ಬಿರಾದಾರ, ವಿಠ್ಠಲ ಬಲಕುಂದಿ, ರವಿ ಹಳ್ಳೂರ, ಕೃಷ್ಣಾ ಹಾದಿಮನಿ, ಅಭಿಷೇಕ ಪಾಟೀಲ, ರವಿ ಮುಖಿ, ಚಂದ್ರು ಅಂಬಿಗೇರ, ವೀರೇಶ ನಾಲತ್ತವಾಡ, ಶಂಕರ್ ಹೂಗಾರ, ಸಮೀರ ರಫುಫರ್, ಮುಜಾಫರ್ ಶಾಲಗಾರ, ರಾಜು ಗೌಳಿ, ಸುರೇಶ ಮಜ್ಜಗಿ, ಶಬ್ಬೀರ್, ಸಿಂಗದ, ಸಂಗಮೇಶ ಸಿನ್ನೂರ, ಸುನೀಲ್ ಮಾರಬಸರಿ, ನರಸಿಂಹಮೂರ್ತಿ, ರವಿ ದೇಶಪಾಂಡೆ ಮತ್ತಿತರರು ಸಂತಾಪ ವ್ಯಕ್ತಪಡಿಸಿದ್ದಾರೆ.

# ಮಹಿಳೆಯನ್ನು ವಂಚಿಸಿದ್ದ ನೈಜೀರಿಯಾ ವ್ಯಕ್ತಿಯ ಬಂಧನ

**ಮಲ್ಲಮ್ಮ ನುಡಿ ವಾರ್ತೆ**
**ಬಾಗಲಕೋಟೆ:**

ಸೆ.4- ಜಿಲ್ಲೆಯ ಇಳಕಲ್ ನಗರದ ಮಹಿಳೆಯೋರ್ವಳನ್ನು ಮದುವೆಯಾಗುವುದಾಗಿ ನಂಬಿಸಿ ಅವರಿಂದ 5 ಲಕ್ಷ ರೂಪಾಯಿ ಪಡೆದು ವಂಚಿಸಿದ್ದ ನೈಜಿರಿಯಾ ಮೂಲದ ವ್ಯಕ್ತಿಯನ್ನು ನಗರದ ಪೊಲೀಸರು ಬಂಧಿಸಿದ್ದಾರೆ. ಮ್ಯಾಟ್ರಿಮೋನಿ ಮೂಲಕ ಮಹಿಳೆಗೆ ಪರಿಚಿತನಾದ ನೈಜೀರಿಯಾದ ಆಲಿವರ್ ವುಗುವೋ ಒಗಿಚಿಕೊ ಎಂಬಾತ ಸತ್ಯ ಅಮಿತ ಹೆಸರಿನಲ್ಲಿ ಪರಿಚಯಿಸಿಕೊಂಡು ಮಹಿಳೆಯನ್ನು ವಂಚಿಸಿದ್ದ. ತಾನು ಲಂಡನ್ ನಿವಾಸಿ ಎಂದು ಹೇಳಿಕೊಂಡಿದ್ದ ಈತ, ತಾನು ಲಂಡನ್ನಿನಿಂದ ಮದುವೆಗಾಗಿ ಒಂದು ಕೋಟಿ ಯು.ಎಸ್ ಡಾಲರ್ ಹಣ ತಂದಿದ್ದು, ದೆಹಲಿ ಕಸ್ಟಮ್ಸ್ ಕಚೇರಿಯಲ್ಲಿ ಹಣ ಸೀಜ್ ಮಾಡಿದ್ದಾರೆ. ಅದನ್ನು ಬಿಡಿಸಿಕೊಳ್ಳಲು ಇಂಡಿಯನ್ ಕರೆನ್ಸಿ ಬೇಕಾಗಿದ್ದು ಅದಕ್ಕಾಗಿ 5.50 ಲಕ್ಷ ಹಣ ಕಳಿಸುವಂತೆ ತಿಳಿಸಿ ಹಣ ಪಡೆದು ವಂಚಿಸಿದ್ದ. ಹಾಲಿ ಮುಂಬಯಿ ನಿವಾಸಿಯಾಗಿದ್ದ ಈತ 2024 ರಲ್ಲಿ ಇಳಕಲ್ ಮಹಿಳೆಯನ್ನು ವಂಚಿಸಿದ್ದ. ಈ ಕುರಿತು ಇಳಕಲ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿ, ನಂತರ ಅದು ಬಾಗಲಕೋಟೆ ಸಿಇಎನ್ ಪೊಲೀಸ್ ಠಾಣೆಗೆ ವರ್ಗಾವಣೆಗೊಂಡಿತ್ತು. ಈ ಸಂಬಂಧ ಕಾರ್ಯಾಚರಣೆ ಕೈಗೊಂಡ ಸಿಇಎನ್ ಪೊಲೀಸರು ವಂಚಕನನ್ನು ಬಂಧಿಸಿದ್ದಾರೆ. ಬಂಧಿತ ವ್ಯಕ್ತಿಯಿಂದ 4 ಮೊಬೈಲ್, ಒಂದು ಲ್ಯಾಪ್‌ಟಾಪ್, ಪಾಸ್ಪೋರ್ಟ್, ಯುಎಸ್ ಡಾಲರ್ ಇರುವ ಹಾಳೆಯ ಬಂಡಲ್ ಜಪ್ತ ಮಾಡಿಕೊಂಡಿದ್ದಾರೆ.

# ರಕ್ತಚಂದನ ಸಾಗಾಟ: ಮೂವರ ಸೆರೆ

**ಮಲ್ಲಮ್ಮ ನುಡಿ ವಾರ್ತೆ**
**ಬೆಂಗಳೂರು:**

ಸೆ. 3- ಬ್ಲ್ಯಾಕ್ ಬಾಸ್ಟರ್ ಪುಷ್ಪ ಸಿನೆಮಾ ಮಾದರಿಯಲ್ಲಿ ಅಕ್ರಮವಾಗಿ 'ರಕ್ತಚಂದನ' ಚಂದನ ಸಾಗಾಟ ಹಾಗೂ ಮಾರಾಟ ಮಾಡುತ್ತಿದ್ದ ಆರೋಪದ ಮೇರೆಗೆ ಬೆಂಗಳೂರಲ್ಲಿ ಮೂವರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ.

ಆಂಧ್ರಪ್ರದೇಶದ ನೆಲಮಲ್ಲ ಅರಣ್ಯದಿಂದ ಅಕ್ರಮವಾಗಿ ರಕ್ತ ಚಂದನ ಸಾಗಾಟ ಮಾಡಿ ಹೊಸಕೋಟೆ ತಾಲೂಕಿನ ಕಟ್ಟಿಗೆಹಳ್ಳಿಯಲ್ಲಿ ಬೇರೆಗೆ ಸ್ಥಳಾಂತರಿಸಲಾಗುತ್ತಿದ್ದ ಖಚಿತ ಮಾಹಿತಿ ಮೇರೆಗೆ ದಾಳಿ ಮಾಡಿದ ಪೊಲೀಸರು ಮೂವರನ್ನು ವಶಕ್ಕೆ ಪಡೆದಿದ್ದಾರೆ.

# ಅಲ್ಲಮಪ್ರಭು ಪಾಟೀಲ, ಎಂ.ವೈ.ಪಾಟೀಲ ಮೇಘಾಲಯ ಭೇಟಿ



**ಮಲ್ಲಮ್ಮ ನುಡಿ ವಾರ್ತೆ**
**ಕಲಬುರಗಿ:**

ಸೆ.5-ಕರ್ನಾಟಕ ವಿಧಾನಸಭೆಯ ಸಾರ್ವಜನಿಕ ಉದ್ಯಮಗಳ ಸಮಿತಿಯು ಸಮಿತಿಯಲ್ಲಿರುವ ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ್, ಅಫಜಲಪುರ ಶಾಸಕ ಎಂ.ವೈ.ಪಾಟೀಲ ಸಮಿತಿ ಅಧ್ಯಕ್ಷ ಬಸವರಾಜ ನೀಲಪ್ಪ ಶಿವಣ್ಣನವರ್ ಮತ್ತು ಸಮಿತಿ ಸದಸ್ಯರಾದ ಆರಗ ಜ್ಞಾನೇಂದ್ರ, ಉಮಾಶ್ರೀ ಹಾಗೂ ಭಾರತಿಶೆಟ್ಟಿ ಅವರನ್ನು ಒಳಗೊಂಡ ತಂಡ ಮೇಘಾಲಯ ವಿಧಾನಸಭೆಯ ಸಭಾಧ್ಯಕ್ಷರಾದ ಥಾಮಸ್ ಎ.ಸಂಗ್ಮಾ ಮತ್ತು ಉಪಸಭಾಧ್ಯಕ್ಷರಾದ ಟಿ.ಡಿ.ಶಿರ ಅವರನ್ನು ಭೇಟಿ ಮಾಡಿತು. ಇದೇ ಸಂದರ್ಭದಲ್ಲಿ ಮೇಘಾಲಯದ ಸಾರ್ವಜನಿಕ ಉದ್ದಿಮೆಗಳ ಸಮಿತಿಯ ಕಾರ್ಯವಿಧಾನದ ಬಗ್ಗೆ ಮತ್ತು ಮೇಘಾಲಯದ ವಿವಿಧ ವಲಯಗಳ ವಿದ್ಯಮಾನಗಳ ಬಗ್ಗೆ ಸಮಿತಿ ಅವರೊಂದಿಗೆ ಚರ್ಚಿಸಿತು. ಕರ್ನಾಟಕ ವಿಧಾನಸಭೆಯ ಸಾರ್ವಜನಿಕ ಉದ್ದಿಮೆಗಳ ಸಮಿತಿಯ ಉಪಕಾರ್ಯದರ್ಶಿಯವರು ಸಮಿತಿಯ ಕಾರ್ಯವಿಧಾನ ಮತ್ತು ವಿಧಾನಸಭೆಯ ಕಾರ್ಯವಿಧಾನದ ನಿಯಮಗಳ ಪುಸ್ತಕಗಳನ್ನು ಮೇಘಾಲಯ ವಿಧಾನಸಭಾಧ್ಯಕ್ಷರಿಗೆ ಸಲ್ಲಿಸಿದರು.

# ಶಿಕ್ಷಕರ ದಿನಾಚರಣೆ | ಉತ್ತಮ ಶಿಕ್ಷಕರಿಗೆ ಜಿಲ್ಲಾ ಪ್ರಶಸ್ತಿ ಪ್ರಧಾನ

# ಮೌಲ್ಯಾಧಾರಿತ ಶಿಕ್ಷಣ ಅವಶ್ಯ : ಸಚಿವ ತಿಮ್ಮಾಪೂರ

**ಮಲ್ಲಮ್ಮ ನುಡಿ ವಾರ್ತೆ**
**ಬಾಗಲಕೋಟೆ:**

ಸೆಪ್ಟೆಂಬರ 05- ಶಿಕ್ಷಣದ ಜೊತೆಗೆ ತಂದೆ, ತಾಯಿ, ಗುರುಗಳು, ಹಿರಿಯರು ಸರಿ, ತಪ್ಪು, ನ್ಯಾಯ ನೀತಿಗಳಿಗೆ ಗೌರವ ನೀಡುವಂತಹ ಮೌಲ್ಯಾಧಾರಿತ ಶಿಕ್ಷಣದ ಅವಶ್ಯಕತೆ ಇದೆ ಎಂದು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಹೇಳಿದರು.

ನವನಗರದ ಕಲಾಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಉಪನಿರ್ದೇಶಕರ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಶಾಲಾ ಶಿಕ್ಷಣ ಸಂಸ್ಥೆ ಸಹಯೋಗದಲ್ಲಿ ಹಮ್ಮಿಕೊಂಡ ಜಿಲ್ಲಾ ಮಟ್ಟದ ಶಿಕ್ಷಕರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಕಳೆದ 15-20 ವರ್ಷಗಳಲ್ಲಿ ನಾವು ಕಂಡು ಅರಿಯದ ರೀತಿಯಲ್ಲಿ ಬದಲಾವಣೆ ಕಾಣುತ್ತಿದ್ದೇವೆ. ಸರಕಾರಿ ಶಾಲೆ ಹಾಗೂ ಖಾಸಗಿ ಶಾಲೆಗಳ ನಡುವೆ ಇಂದಿನ ಆನ್‌ಲೈನ್ ಪಾಠದ ಗುರು ಇಂದಿನ ವೈಜ್ಞಾನಿಕ ಯುಗದಲ್ಲಿ ದೊಡ್ಡ ಗುರುಗಳಾಗಿ ಪರಿಣಮಿಸಿದ್ದಾರೆ. ಗುರು-ಶಿಷ್ಯರ ಸಂಬಂದ ಕಡಿಮೆಯಾಗುತ್ತಿರುವುದು ಕಳವಳಕಾರಿ ಸಂಗತಿ ಎಂದರು. ಮೊಬೈಲ್ ಸೇರಿದಂತೆ ಆಧುನಿಕ ತಂತ್ರಜ್ಞಾನ ಮಾಹಿತಿಯುಳ್ಳ ಇಂದಿನ ಮಕ್ಕಳು ಶಿಕ್ಷಕರನ್ನೇ ಮೂಖರನ್ನಾಗುವಂತೆ ಪ್ರಶ್ನೆಗಳನ್ನು ಕೇಳುತ್ತಿರುವುದರಿಂದ ಶಿಕ್ಷಕರು ಇಂದಿನ ಮಕ್ಕಳಿಗೆ ಬೇಕಾಗುವಂತಹ ವಿಷಯಗಳ ಬಗ್ಗೆ ಅಧ್ಯಯನ ಮಾಡಬೇಕಾದ ಕಾಲ ಬಂದಿದೆ. ಶಿಕ್ಷಕರು ಪ್ರತಿನಿತ್ಯ ಕಲಿತು ಮಕ್ಕಳ ಜೊತೆ ಮಕ್ಕಳಾಗಿ ಬೋಧಿಸಬೇಕಾಗಿದೆ. ಗುರು-ಶಿಷ್ಯರ ಸಂಬಂದ ತಂದೆ-ತಾಯಿ ಸಂಬಂಧಕ್ಕಿಂತ ಹೆಚ್ಚು ಪರಿಣಾಮಕಾರಿಯಾಗಿದೆ. ವಿದ್ಯಾರ್ಥಿಗಳು ಕೇವಲ ಹೆಚ್ಚು ಅಂಕ ಪಡೆಯುವದರಿಂದ ಎಲ್ಲವನ್ನು ಕಲಿಯಲು ಸಾಧ್ಯವಿಲ್ಲ. ಮುಂದಿನ ಪೀಳಿಗೆ ಉತ್ತಮವಾಗಿರಬೇಕಾದರೆ ಮೌಲ್ಯಾಧಾರಿತ ಶಿಕ್ಷಣದ ಅವಶ್ಯಕತೆ ಇದೆ ಎಂದು ತಿಳಿಸಿದರು. ಸಂಸದ ಪಿ.ಸಿ.ಗದ್ದಿಗೌಡ ಮಾತನಾಡಿ ಅಕ್ಷರ ಜ್ಞಾನದ ಜೊತೆಗೆ ಮಾನವೀಯ ಮೌಲ್ಯವನ್ನು ಕೊಟ್ಟು ಬದುಕನ್ನು ರೂಪಿಸಿಕೊಟ್ಟ ಶಿಕ್ಷಕರನ್ನು ನೆನಪಿಸಿಕೊಳ್ಳುವ ಮಹತ್ವದ ದಿನವಾಗಿದೆ. ಮಕ್ಕಳಿಗೆ ಪಠ್ಯದ ಜೊತೆಗೆ ಕೌಶಲ್ಯಾಭಿವೃದ್ಧಿ ಯಂತಹ ಶಿಕ್ಷಣ ನೀಡಿದಲ್ಲಿ ಕಲಿತ ವಿದ್ಯೆಯಿಂದ ಸ್ವಯಂ ಉದ್ಯೋಗ ಪ್ರಾರಂಭಿಸಿ ಆರ್ಥಿಕ, ಸಾಮಾಜಿಕ ಬೆಳೆವಣಿಗೆ ಹೊಂದಲು ಸಾದ್ಯವಾಗುತ್ತದೆ. ಗುರುಭವನ ನಿರ್ಮಾಣಕ್ಕೆ ಅನುಧಾನ ನೀಡುವುದಾಗಿ ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಸಕ ಹಾಗೂ ಬಿಟಿಡಿಎ ಅಧ್ಯಕ್ಷ ಎಚ್. ವಾಯ್.ಮೇಟಿ ಮಾತನಾಡಿ ಶಿಕ್ಷಕರ ವೃತ್ತಿ ಪವಿತ್ರವಾಗಿದ್ದು, ಪ್ರತಿಯೊಬ್ಬ ಶಿಕ್ಷಕ ತಾನು ಶಿಕ್ಷಣ ನೀಡಿದ ವಿದ್ಯಾರ್ಥಿ ಸಮಾಜದಲ್ಲಿ ಒಳ್ಳೆಯ ಕೆಲಸ ಮತ್ತು ಕೆಟ್ಟ ಕೆಲಸ ಮಾಡಿದರೂ ಶಿಕ್ಷಕರ ಮೇಲೆ ಬರುತ್ತದೆ. ಈ ನಿಟ್ಟಿನಲ್ಲಿ ಶಿಕ್ಷಕರು ಜಾಗೃತಿಯಿಂದ ಕೆಲಸ ಮಾಡಬೇಕು ಎಂದರು. ನವನಗರದಲ್ಲಿ ನಿರ್ಮಿಸಲು ಉದ್ದೇಶಿಸಲಾದ ಗುರುಭವನಕ್ಕೆ ಅನುದಾನ ನೀಡುವ ಭರವಸೆ ನೀಡಿದರು. ಜಿಲ್ಲಾಧಿಕಾರಿ ಸಂಗಪ್ಪ ಮಾತನಾಡಿ ಶಿಕ್ಷಕರನ್ನು ದೇವರ ಸಮಾನರಾಗಿ ಕಾಣಲಾಗುತ್ತಿದ್ದು, ಅದರಿಂದಲೇ ಗುರುಬ್ರಹ್ಮ ಗುರುವಿಷ್ಣು ಗುರುದೇವೋ ಮಹೇಶ್ವರ, ಗುರುಸಾಕ್ಷಾತ್ ಪರಬ್ರಹ್ಮ ಎಂಬ ನುಡಿ ಅನಾದಿಕಾಲದಿಂದಲೂ ಬಂದಿದೆ. ಶಿಕ್ಷಕರಾದವರು ಮಕ್ಕಳ ಜೊತೆ ಪ್ರೀತಿಯಿಂದ ನಡೆದುಕೊಳ್ಳಬೇಕು. ಅಂದಾಗ ಮಾತ್ರ ಮಗುವಿನಲ್ಲಿರುವ ಮನಸ್ಸನ್ನು ಗೆಲ್ಲಲು ಸಾಧ್ಯವಾಗುತ್ತದೆ. ಇದರಿಂದ ವಿದ್ಯಾರ್ಥಿಗಳಲ್ಲಿ ಕಾಣಬಹುದಾದ ಮನೋಕಾಯಿಲೆಯಿಂದ ಮುಕ್ತಗೊಳಿಸಲು ಸಾಧ್ಯವಾಗುತ್ತದೆ ಎಂದರು. ಪ್ರಾರಂಭದಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಪ್ರಾಸ್ತಾವಿಕವಾಗಿ ಮಾತನಾಡಿದರು. ನವನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಸಹ ಪ್ರಾಧ್ಯಾಪಕ ಜಿ.ಜಿ.ಹಿರೇಮಠ ಶಿಕ್ಷಕ ದಿನಾಚರಣೆ ಕುರಿತು ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ನಗರಸಭೆ ಅಧ್ಯಕ್ಷೆ ಸವಿತಾ ಲೆಂಕನ್ನವರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಉಪ ವಿಭಾಗಾಧಿಕಾರಿ ಸಂತೋಷ ಜಗಲಾಸರ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎ.ಸಿ.ಮನ್ನಿಕೇರಿ, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಸುಭಾಸ ಸಂಪಗಾವಿ, ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಎಸ್.ಬಡದಾನಿ ಸೇರಿದಂತೆ ವಿವಿಧ ಶಿಕ್ಷಕರ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.



## ಉತ್ತಮ ಶಿಕ್ಷಕರಿಗೆ ಜಿಲ್ಲಾ ಪ್ರಶಸ್ತಿ

ಜಿಲ್ಲೆಯಲ್ಲಿ ಆಯ್ಕೆಗೊಂಡ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಉತ್ತಮ ಶಿಕ್ಷಕರನ್ನು ಸನ್ಮಾನಿಸಲಾಯಿತು. ಪ್ರಾಥಮಿಕ ವಿಭಾಗದಲ್ಲಿ ಬಿ.ಎ.ಚನ್ನಪ್ಪಗೌಡರ, ಎಂ.ಜಿ.ಸಂಕಾನಟ್ಟಿ, ಎಲ್.ಆಯ್.ಲಮಾಣಿ, ಎಸ್.ಎಸ್.ಬಡಿಗೇರ, ಬಸವರಾಜ ಬಿರಾದಾರ, ವಿ.ಎಸ್. ಕಲ್ಯಾಣಮಠ, ಮಂಜುಶ್ರೀ ಮಣಿ, ಆರ್.ಎಲ್.ಇನಾಮದಾರ, ವಿ.ಎಸ್.ಹಲಕುರ್ಕಿ, ಎನ್.ಬಿ.ಜಮಖಂಡಿ, ರಮೇಶ ಕಂಕಣವಾಡಿ, ಮಂಜುನಾಥ ಅಮೋಜಿ, ಪ್ರೌಢವಿಭಾಗದಲ್ಲಿ ಸಿ.ಎಚ್.ನರಸಾಪೂರ, ಐ.ಎಂ.ಉಜನಿ, ಮಹೇಶ ಸಿಂದಗಿ, ಬಿ.ಡಿ.ಚಿತ್ತರಗಿ, ಎಂ.ವಾಯ್.ಸೊಡ್ಡಿ, ಮಹಮ್ಮದರಫಿಕ್ ನದಾಫ್, ಜಿಲ್ಲಾ ಪಂಚಾಯತಯಿಂದ ಆಯ್ಕೆಯಾದ ಪ್ರಾಥಮಿಕ ವಿಭಾಗದಲ್ಲಿ ಭೀಮಮ್ಮ ದೇವದುರ್ಗ, ಎನ್.ವಾಯ್.ಮುಲ್ಲಾ, ಪಿ.ಎಚ್.ಇನಾಮದಾರ, ಎಂ.ವಾಯ್.ಗುಡಿಮನಿ, ಎನ್.ಎಂ.ಬೀಳಗಿ, ಜೆ.ಎಚ್.ಡಾಲಾಯತ, ಜೆ.ಎಸ್.ಗಳವೆ. ಪ್ರೌಢ ವಿಭಾಗದಿಂದ ಎಚ್.ಎ.ಸೌದಾಗರ, ಲಕ್ಷ್ಮಣ ಚನ್ನಾಪೂರ, ಶಿವಾನಂದ ಪದರಾ, ವಿಶೇಷ ಸತ್ಕಾರದಲ್ಲಿ ವಿದ್ಯಾಧರ ಹಿರೇಮಠ, ಎಂ.ಎಸ್.ಅರಳಿಮಟ್ಟಿ.

# ಆಶೆ ರಹಿತ ಕಾಯಕ ಪ್ರಜ್ಞೆ ಎಲ್ಲರಲ್ಲಿ ಮೂಡಲಿ : ಪ್ರೊ. ಗಣಪತಿ ಸಿನ್ನೂರ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಸೆ. 05 : ಅನಕ್ಷರನ್ನು ಸಾಕ್ಷರನಾಗಿ ಮಾಡಿ ಪರಿವರ್ತನ ಬದುಕಿಗೆ ಇಂಬು ನೀಡಿದ ಶರಣರ ಅರಿವಿನ ಪ್ರಜ್ಞೆ ಎಲ್ಲರಲ್ಲಿ ಮೂಡಿದಾಗ ಬದಲಾವಣೆ ಸಾಧ್ಯ. ಕೌಶಲ್ಯ ಆಧಾರಿತ ಸಮಗ್ರ ಶಿಕ್ಷಣ ಇಂದು ಅನಿವಾರ್ಯವಾಗಿದೆ. ಮಾತಿಗಿಂತ ಕೃತಿಗೆ ಬೆಲೆ ಜಾಸ್ತಿ ಎಂದು ಪ್ರೊ. ಗಣಪತಿ ಸಿನ್ನೂರ ಎಂದು ನುಡಿದರು.

ವಚನ ಚಾರಿಟೇಬಲ್ ಸೊಸೈಟಿ ಹಮ್ಮಿಕೊಂಡ ಜಿಲ್ಲಾ ಮಟ್ಟದ ಶಿಕ್ಷಕರ ದಿನಾಚರಣೆ ನಿಮಿತ್ಯ ಶಿಕ್ಷಣ ರತ್ನ ಪ್ರಶಸ್ತಿ ಸಮಾರಂಭದಲ್ಲಿ ಅನುಭಾವ ನಿವೇದಿಸುತ್ತ ಕರ್ನಾಟಕ ಕೇಂದ್ರಿಯ ವಿಶ್ವವಿದ್ಯಾಲಯ ಕಲಬುರಗಿಯ ವ್ಯವಹಾರ ಅಧ್ಯಯನ ವಿಭಾಗ ಸಹ ಪ್ರಾಧ್ಯಾಪಕರಾದ ಪ್ರೊ. ಗಣಪತಿ ಬಿ ಸಿನ್ನೂರ ಮಾತನಾಡುತ್ತ ವಚನ ಸಾಹಿತ್ಯ ಕಬ್ಬಿಣಕ್ಕಿಂತ ಗಟ್ಟಿಯಾಗಿದೆ ಅದನ್ನು ಪ್ರತಿಯೊಬ್ಬರ ಜೀವನದಲ್ಲಿ ಅಳವಡಿಸಿಕೊಂಡಾಗ ಜೀವನಕೊಂದು ಮೌಲ್ಯ. ಇಂದಿನ ಜಾಗತಿಕರಣದ ಕರಿ ನೆರಳಿನಲ್ಲಿ ವಚನ ಆಧಾರಿತ ಶಿಕ್ಷಣ ಅಭಿವೃದ್ಧಿಗೊಂಡರೆ ಒಳ್ಳೆ ನಾಗರಿಕ ಸಮಾಜ ನಿರ್ಮಾಣವಾಗುತ್ತದೆ.

ನಮ್ಮ ಆತ್ಮ ಸಾಕ್ಷಿಯಾಗಿ ಕೆಲಸ ಮಾಡಿದರೆ ಸುಸ್ಥಿರ ಬದುಕಿಗೆ ಬೆಳಕು ಕಾಣುತ್ತದೆ. 12ನೇ ಶತಮಾನದಲ್ಲಿ ಮೈಗಳರಿಗೆ ಅವಕಾಶವೇ ಇರಲ್ಲಿಲ್ಲ ಕಾಯಕವೇ ಕೈಲಾಸ, ದಾಸೋಹವೇ ದೇವಧಾಮ ಎಂದು ಎಲ್ಲಾ ಶರಣರು ಮಾನವೀಯತೀಯ ಮೌಲ್ಯಗಳನ್ನು ಪ್ರತಿ ಪಾದಿಸಿದರು. ಇಂದಿನ ಶಿಕ್ಷಣ ಕೇವಲ ಅಂಕಗಳಿಗೆ ಸಿಮೀತಗೊಂಡಿದೆ. ಶಿಕ್ಷಣ ಎನ್ನುವದು ಬದುಕಿನ ಬವಣೆ ನೀಗಿಸುವಂತಾಗಬೇಕು. ಇದರಿಂದ ಸಂಪೂರ್ಣ ಬಡತನ ನಿರ್ಮೂಲನೆಯಾಗಿ ಸಮೃದ್ಧಿ ಸಮಾಜ ಕಟ್ಟಬಹುದು. ಇದರಿಂದ ಎಲ್ಲೆಡೆ ಧನಾತ್ಮಕ ವಿಚಾರ



ಪ್ರತಿಬಿಂಬವಾಗುತ್ತದೆಂದು ನುಡಿದರು. ಕಾರ್ಯಕ್ರಮವನ್ನು ಸಸಿಗೆ ನೀರೆರೆದು ಕರಡ್ಯಾಳ ಚನ್ನಬಸವೇಶ್ವರ ಗುರುಕುಲದ ಪ್ರಾಚಾರ್ಯರಾದ ಬಸವರಾಜ ಮೊಳಕೇರಿ ಮಾತನಾಡುತ್ತ ನಮ್ಮ ಭಾಗ ಇಂದು ಶೈಕ್ಷಣಿಕವಾಗಿ ಅಭಿವೃದ್ಧಿಗೊಳ್ಳುತ್ತಿದೆ. ಹಿಂದುಳಿಯುವಿಕೆ ಎಂಬ ಭ್ರಾಂತಿಯಿಂದ ಇಂದು ಹೊರ ಬರಬೇಕಾಗಿದೆ. ನಮ್ಮಲ್ಲಿ ಬಸವ ತತ್ವ ಆಚರಣೆ ಅಳವಡಿಸಿ ಕೊಂಡರೆ ಅಸಮಾನತೆ ದೂರವಾಗಿ ಎಲ್ಲರು ಒಂದೇ ಎಂಬ ಕಲ್ಪನೆ ಮೂಡುತ್ತದೆ. ಇಂದು ಬೆಂಗಳೂರುನ ಜನ ಶಿಕ್ಷಣಕ್ಕಾಗಿ ಬೀದರಿಗೆ ಬರುತಿರುವದು ಒಂದು ಹೆಮ್ಮೆಯ ವಿಚಾರ ಹಾಗೂ ಪ್ರಗತಿಯ ಸಂಕೇತವಾಗಿದೆ. ವಚನ ಚಾರಿಟೇಬಲ್ ಸೊಸೈಟಿ ತಮ್ಮ ಸಮಾಜೊ ಧಾರ್ಮಿಕ ಕೆಲಸಗಳಲ್ಲಿ ತೊಡಗಿಸಿಕೊಂಡು ಆದರ್ಶ ಶಿಕ್ಷಕರಿಗೆ ಶಿಕ್ಷಣ ರತ್ನ ಪ್ರಶಸ್ತಿ ಪ್ರಧಾನ ಮಾಡುತಿರುವ ಸಮಾರಭ ಮನತುಂಬಿ ಬಂದಿದೆ. ಇದರಿಂದ ಶಿಕ್ಷಕರ ಆತ್ಮ ಅಭಿಮಾನ ಹೆಚ್ಚಾಗಿ ಇನ್ನೂ ಹೆಚ್ಚಿನ ರೀತಿಯಲ್ಲಿ ಕೆಲಸ ಮಾಡಲು ಪ್ರೇರಣೆ ನೀಡಿದಂತಾಗುತ್ತದೆಂದು ನುಡಿದರು. ಸಾಧ್ವಿ ಬಸವರಾಜ ಬಿರಾದಾರ ಅವರು ವಚನ ನೃತ್ಯ ಪ್ರಸ್ತುತ ಪಡೆಸಿದರು. ಕಾರ್ಯಕ್ರಮದ ವೇದಿಕೆಯಲ್ಲಿ ಸ್ವಪ್ನ ಮಹೇಶ ಮಾಶಟ್ಟಿ, ಡಾ. ಪ್ರಶಾಂತ ಮಾಶಟ್ಟಿ ಮಹಾವಿದ್ಯಾಲಯ ಹಾಗೂ ಮಹಿಳಾ ಬಸವ ಕೇಂದ್ರದ ಅಧ್ಯಕ್ಷೆ ಡಾ. ವಿದ್ಯಾವತಿ ಬಲ್ಲೂರ, ವಚನ ಸಮೂಹ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಅಲ್ಲಮಪ್ರಭು ನಾವದಗೇರೆ, ನಿರ್ದೇಶಕರಾದ ಶಿವಕುಮಾರ ಸಾಲಿ, ಸಂಜೀವಕುಮಾರ ಚಿಲ್ಲರ್ಗಿ, ರಾಜಶೇಖರ ಪಾಟೀಲ ಉಪಸ್ಥಿತಿ ಇದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಡಾ. ಸುರೇಶ ಪಾಟೀಲ ಮಾತನಾಡಿದರು. ಪ್ರಸ್ತಾವಿಕವಾಗಿ ಶಿವಶಂಕರ ಟೋಕರೆ ಮಾತನಾಡಿದರೆ, ಮಲ್ಲಿಕಾರ್ಜುನ ಟಂಕಸಾಲೆ ಸ್ವಾಗತಿಸಿ ವೈಜಿನಾಥ ಸಜ್ಜನಶೆಟ್ಟಿ ನಿರೂಪಿಸಿದ ಕಾರ್ಯಕ್ರಮ ಸಂಜೀವಕುಮಾರ ಬಿರಾದಾರ ಅವರ ವಂದನಾರ್ಪಣೆಯೊಂದಿಗೆ ಮುಕ್ತಾಯವಾಯಿತು.

ಇದೇ ಸಂಧರ್ಭದಲ್ಲಿ ವಚನ ಎನ್‌ಕ್ಲೇವ್ ಫೇಸ್–3 ಪುರನಾರಂಭದ ಯೋಜನೆಯ ಕರ ಪತ್ರ ಬಿಡುಗಡೆಗೊಳ್ಳಿಸಲಾಯಿತು. ಈ ಸಂಧರ್ಭದಲ್ಲಿ ಶಿಕ್ಷಣ ರತ್ನ ಪ್ರಶಸ್ತಿ ಪಡೆದವರು.

ಇಂಜಿನಿಯರಿಂಗ ಪ್ರೊ. ನೀಲಶೆಟ್ಟಿ ಕಾಶಿನಾಥ ಪ್ರಾಧ್ಯಾಪಕರು, ಗುರುನಾನಕ ದೇವ್ ಇಂಜಿನೀಯರಿಂಗ ಕಾಲೇಜು ಬೀದರ. 2) ಪದವಿ ಪೂರ್ವ ಪ್ರೊ. ರಾಜಶೇಖರ ಅಣ್ಣೆಪ್ಪ ಮಂಗಲಗಿ ಉಪನ್ಯಾಸಕರು (ಅಸ್ತ್ರಶಾಸ್ತ್ರ) ಸ.ಪ.ಪೂ. ಕಾಲೇಜು (ಬಾಲಕಿಯರ) ಬೀದರ. 3) ಪ್ರಥಮ ದರ್ಜೆ ಕಾಲೇಜು ಡಾ. ರಾಜಕುಮಾರ ಹೊಸದೊಡ್ಡೆ ಪ್ರಾಧ್ಯಾಪಕರು, ಸರಕಾರಿ ಮಹಿಳಾ ಪದವಿ ಕಾಲೇಜು ಬೀದರ. 4) ತೋಟಗಾರಿಕೆ ಕಾಲೇಜು ಡಾ. ಕೆ. ಪ್ರಸನ್ನ ಎಸ್. ಎಮ್. ಪ್ರಾಧ್ಯಾಪಕರು ತೋಟಗಾರಿಕೆ

ಮಹಾವಿದ್ಯಾಲಯ ಬೀದರ, 5) ಪಶುವೈದ್ಯಕೀಯ ಕಾಲೇಜು ಡಾ. ಅಶೋಕ ಅಪ್ಪಾರಾವ ಪವಾರ ಪ್ರಾಧ್ಯಾಪಕರು ಪಶುವೈದ್ಯಕೀಯ ಕಾಲೇಜು ಬೀದರ. 6) ವೈದ್ಯಕೀಯ (ಬ್ರಿಮ್ಸ್) ಕಾಲೇಜು ಬೀದರ ಡಾ. ಶ್ವೇತಾ ಸಂಗಮೇಶ ಕುನಕೇರಿ ಪ್ರಾಧ್ಯಾಪಕರು (ಬ್ರಿಮ್ಸ್) ಬೀದರ, 7) ಡಿಪ್ಲೊಮಾ ಕಾಲೇಜು ಶರಣ ಚನ್ನಬಸಪ್ಪ ಪಾಟೀಲ ಸರಕಾರಿ ಪಾಲಿಟೆಕ್ನಿಕ್ ಕಾಳಗಿ, 8) ಐಟಿಐ ಕಾಲೇಜು ಶರಣ ಜಗನ್ನಾಥ ಖ್ಯಾಡೆ ಕಿರಿಯ ತರಬೇತಿ ಅಧಿಕಾರಿ ಬಸವೇಶ್ವರ ಐಟಿಐ ಬಸವಕಲ್ಯಾಣ. 9) ಪ್ರೌಢ ಶಾಲೆ ಶರಣೆ ಶ್ರೀದೇವಿ ಪಾಟೀಲ ಸಹ ಶಿಕ್ಷಕರು ಸರಕಾರಿ ಪ್ರೌಢಶಾಲೆ ಕಮಠಾಣಾ. 10) ಪ್ರಾಥಮಿಕ ಶಾಲೆ ಶರಣ ಅನೀಲ ಶಾಸ್ತ್ರಿ ಸರಕಾರಿ ಪ್ರಾಥಮಿಕ ಶಾಲೆ ಬಸವಕಲ್ಯಾಣ.

## ಈದ್ ಸಂಭ್ರಮ: ಬೈಕ್ ರ್‍ಯಾಲಿ; ಪ್ರವಾಹ ಸಂತ್ರಸ್ತರಿಗೆ ದೇಣಿಗೆ ಸಂಗ್ರಹ

ಬೀದರ. ಸೆ. 05 : ಇಸ್ಲಾಂ ಧರ್ಮದ ಪ್ರವರ್ತಕ ಹಜರತ್ ಮುಹಮ್ಮದ್ ಪೈಗಂಬರ್ ಅವರ ಜನ್ಮದಿನದ ಅಂಗವಾಗಿ ನಗರ ಸೇರಿದಂತೆ ಜಿಲ್ಲೆಯಾದ್ಯಂತ ಈದ್ ಮಿಲಾದ್ ಹಬ್ಬವನ್ನು ಮುಸ್ಲಿಂ ಸಮುದಾಯದವರು ಅತ್ಯಂತ ಸಡಗರ, ಸಂಭ್ರಮದಿಂದ ಆಚರಿಸಿದರು.



ನಗರದ ಚೌಬಾರ ಸಮೀಪದ ಜುಮ್ಮಾ ಮಸೀದಿ, ಡಾ.ಬಿ.ಆರ್. ಅಂಬೇಡ್ಕರ್ ವೃತ್ತ, ಸಿದ್ಧಿ ತಾಲೀಮ್, ನಯಾ ಕಮಾನ್, ಮಹಮೂದ್ ಗಾವಾನ್ ವೃತ್ತ, ಶಹಾಗಂಜ್, ಮೈಲೂರ್, ಚಿದ್ರಿ ಹಾಗೂ ಗ್ರಾಮೀಣ ಭಾಗಗಳ ಮಸೀದಿ, ದರ್ಗಾಗಳಲ್ಲಿ ಬೆಳಿಗ್ಗೆ ವಿಶೇಷ ಪ್ರಾರ್ಥನೆ ಸಲ್ಲಿಸಿದರು. ಆನಂತರ ಪರಸ್ಪರ ಹಬ್ಬದ ಶುಭಾಶಯ ವಿನಿಮಯ ಮಾಡಿಕೊಂಡರು. ಬಳಿಕ ಮಹಮೂದ್ ಗಾವಾನ್ ವೃತ್ತದಿಂದ ಆರಂಭಗೊಂಡ ಮೆರವಣಿಗೆಯಲ್ಲಿ ಅಪಾರ ಸಂಖ್ಯೆಯ ಜನ ಪಾಲ್ಗೊಂಡಿದ್ದರು. ಹೆಚ್ಚಿನವರು ಕಾಲ್ನಡಿಗೆಯಲ್ಲಿ ಹೆಜ್ಜೆ ಹಾಕಿದರು. ಕೆಲವರು ಬೈಕ್ ಮೇಲೆ ಧ್ವಜಗಳನ್ನು ಬೀಸುತ್ತ ಘೋಷಣೆ ಹಾಕುತ್ತ ಶಾಂತಿಯುತವಾಗಿ ಮೆರವಣಿಗೆಯಲ್ಲಿ ಭಾಗವಹಿಸಿದ್ದರು. ಕಿರಿಯರಿಂದ ಹಿರಿಯರ ವರೆಗೆ ಎಲ್ಲ ವಯೋಮಾನದವರು ಪಾಲ್ಗೊಂಡಿದ್ದರು. ಮೆರವಣಿಗೆಯುದ್ದಕ್ಕೂ ಪೈಗಂಬರ್ ಅವರ ಜೀವನ ಸಂದೇಶಗಳನ್ನು ಹೇಳಿದರು. ಕೆಲವರು ಕುರಾನ್ ಪಠಣ ಮಾಡಿದರು. ಕೆಲ ಸಂಘ ಸಂಸ್ಥೆಯವರು ಮೆರವಣಿಗೆಯಲ್ಲಿ ಪಾಲ್ಗೊಂಡವರಿಗೆ ಪಾನಕ ವ್ಯವಸ್ಥೆ ಮಾಡಿದ್ದರು. ಪಂಜಾಬ್‌ನಲ್ಲಿ ಪ್ರವಾಹದಿಂದ ಸಂಕಷ್ಟಕ್ಕೆ ಸಿಲುಕಿರುವ ಜನರಿಗೆ ಯುವಕರು ದೇಣಿಗೆ ಕೂಡ ಸಂಗ್ರಹಿಸಿದರು. ಎಲ್ಲ ಮಸೀದಿಗಳಿಗೆ ವಿದ್ಯುತ್ ದೀಪಾಲಂಕಾರ ಮಾಡಲಾಗಿತ್ತು. ಶಹಾಗಂಜ್, ಡಾ.ಬಿ.ಆರ್. ಅಂಬೇಡ್ಕರ್ ವೃತ್ತ, ಬಸವೇಶ್ವರ ವೃತ್ತ, ನಯಾ ಕಮಾನ್, ಸಿದ್ಧಿ ತಾಲೀಮ್, ಚೌಬಾರ ಮೂಲಕ ಹಾದು ಜುಮ್ಮಾ ಮಸೀದಿ ಬಳಿ ಮೆರವಣಿಗೆ ಕೊನೆಗೊಂಡಿತು. ರಜಾ ದಿನವಾಗಿದ್ದರಿಂದ ಬಹುತೇಕ ಮಳಿಗೆಗಳು ಮಧ್ಯಾಹ್ನದ ವರೆಗೆ ಮುಚ್ಚಿದ್ದವು. ಜನರ ಸಂಚಾರ ಹೆಚ್ಚಿರದ ಕಾರಣ ಸಾರ್ವಜನಿಕರಿಗೆ ತೊಂದರೆ ಆಗಿರಲಿಲ್ಲ. ಮೆರವಣಿಗೆ ಹಾದು ಹೋಗುವವರೆಗೆ ಸಂಚಾರಿ ಪೊಲೀಸರು ಬೇರೆ ಮಾರ್ಗಗಳ ಮೂಲಕ ವಾಹನಗಳ ಸಂಚಾರಕ್ಕೆ ಅನುವು ಮಾಡಿದರು.

## ಕಾವೇರಿ ನದಿಯಲ್ಲಿ ಈಜಲು ಹೋಗಿದ್ದ ಬೆಂಗಳೂರಿನ ಇಬ್ಬರು ಬಿಬಿಎಂ ವಿದ್ಯಾರ್ಥಿಗಳ ದುರ್ಮರಣ



ಮಂಡ್ಯ:ಸೆ.5: ಕಾವೇರಿ ನದಿಯಲ್ಲಿ ಈಜಲು ಹೋದ ಇಬ್ಬರು ಬಿಬಿಎಂ ವಿದ್ಯಾರ್ಥಿಗಳು ನೀರಿನಲ್ಲಿ ಮುಳುಗಿ ಸಾವನ್ನಪ್ಪಿರುವ ಘಟನೆ ಶ್ರೀರಂಗಪಟ್ಟಣದ ) ಬಲಮುರಿಯಲ್ಲಿ ನಡೆದಿದೆ.

ಬೆಂಗಳೂರಿನ ಕೆ.ಆರ್.ಪುರಂ ನಿವಾಸಿಗಳಾದ ವಿಲಿಯಂ ಸ್ಯಾಮ್ (21), ವೆಂಕಟೇಶ್ (21) ಮೃತ ದುರ್ದೈವಿಗಳು. ಇಬ್ಬರು ಅಂತಿಮ ವರ್ಷದ ಬಿಬಿಎಂ ವ್ಯಾಸಂಗ ಮಾಡುತ್ತಿದ್ದರು. ಬೆಂಗಳೂರಿನಿಂದ 7 ಮಂದಿ ಪ್ರವಾಸಕ್ಕೆಂದು ಶ್ರೀರಂಗಪಟ್ಟಣಕ್ಕೆ ಬಂದಿದ್ದರು.

ಎಡಮುರಿ ಬಳಿ ಈಜಲು ಹೋಗಿದ್ದಾಗ ಆಯತಪ್ಪಿ ಬಿದ್ದ ಪರಿಣಾಮ ಈಜು ಬಾರದೆ ನೀರಿನಲ್ಲಿ ಮುಳುಗಿ ಸಾವನ್ನಪ್ಪಿದ್ದಾರೆ. ಜೊತೆಯಲ್ಲಿದ್ದ ಸ್ನೇಹಿತರು ಕೂಡಲೇ ಕೆ.ಆರ್.ಎಸ್. ಪೊಲೀಸ್ ಠಾಣೆಗೆ ವಿಷಯ ಮುಟ್ಟಿಸಿದ್ದಾರೆ. ಕೂಡಲೇ ಶ್ರೀರಂಗಪಟ್ಟಣ ಅಗ್ನಿಶಾಮಕ ಸಿಬ್ಬಂದಿಗಳು ಮೃತ ಇಬ್ಬರು ವಿದ್ಯಾರ್ಥಿಗಳ ಶವ ಹೊರ ತೆಗೆದಿದ್ದಾರೆ.

ಕೆ.ಆರ್.ಎಸ್. ಆಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆ ನಡೆಸಿ ಮೃತ ದೇಹಗಳನ್ನು ವಾರಸುದಾರರಿಗೆ ಒಪ್ಪಿಸಲಾಗಿದೆ. ಮಕ್ಕಳನ್ನು ಕಳೆದುಕೊಂಡ ಪೋಷಕರ ಆಕ್ರಂದನ ಮುಗಿಲು ಮುಟ್ಟಿತ್ತು. ಈ ಸಂಬಂಧ ಕೆ.ಆರ್.ಎಸ್. ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ದಕ್ಷಿಣ ಆಫ್ಘಾನ್‌ನಲ್ಲಿ ಮತ್ತೆ ಭೂಕಂಪ

ಕಾಬೂಲ್, ಸೆ 5: ದಕ್ಷಿಣ ಅಫ್ಘಾನಿಸ್ತಾನದಲ್ಲಿ 5.8 ತೀವ್ರತೆಯ ಭೂಕಂಪ ಸಂಭವಿಸಿದ ನಂತರ ದೆಹಲಿ–ಎನ್ ಸಿಆರ್ ಮತ್ತು ಜಮ್ಮು ಮತ್ತು ಕಾಶ್ಮೀರ ಸೇರಿದಂತೆ ಉತ್ತರ ಭಾರತದ ಹಲವು ಭಾಗಗಳಲ್ಲಿ ಗುರುವಾರ ರಾತ್ರಿ ಭೂಕಂಪನ ಸಂಭವಿಸಿದೆ ಎಂದು ಶ್ರೀನಗರ ಹವಾಮಾನ ಕೇಂದ್ರ ತಿಳಿಸಿದೆ.

ದಕ್ಷಿಣ ಅಫ್ಘಾನಿಸ್ತಾನದಲ್ಲಿ 160 ಕಿಲೋಮೀಟರ್ ಆಳದಲ್ಲಿ ರಾತ್ರಿ 10.26 ರ ಸುಮಾರಿಗೆ ಭೂಕಂಪ ಸಂಭವಿಸಿದೆ. ಇದು 34.58 ಉತ್ತರ ಅಕ್ಷಾಂಶ ಮತ್ತು 70.66 ಪೂರ್ವ ರೇಖಾಂಶದಲ್ಲಿ ಸಂಭವಿಸಿದೆ ಎಂದು ಹವಾಮಾನ ಕೇಂದ್ರ ಹೇಳಿದೆ.

ಒಂದು ವಾರದೊಳಗೆ ಅಫ್ಘಾನಿಸ್ತಾನದಲ್ಲಿ ಸಂಭವಿಸಿದ ಮೂರನೇ ಭೂಕಂಪ ಇದಾಗಿದೆ. ಅಫ್ಘಾನಿಸ್ತಾನದಲ್ಲಿ ಭಾನುವಾರ 6.3 ತೀವ್ರತೆಯ ಮೊದಲ ಭೂಕಂಪ ಸಂಭವಿಸಿದ್ದರೆ, 5.3 ತೀವ್ರತೆಯ ಎರಡನೇ ಭೂಕಂಪ ಮಂಗಳವಾರ ಸಂಭವಿಸಿದೆ.

ಮೊನ್ನೆ ಸಂಭವಿಸಿದ ಭೂಕಂಪದಲ್ಲಿ ಅಫ್ಘಾನಿಸ್ತಾನದಲ್ಲಿ 2000ಕ್ಕೂ ಹೆಚ್ಚು ಜನರು ಮೃತಪಟ್ಟಿದ್ದಾರೆ. ತಾಲಿಬಾನ್ ಪ್ರಕಾರ, ಅಫ್ಘಾನಿಸ್ತಾನದಲ್ಲಿ ಸಾವಿನ ಸಂಖ್ಯೆ 2,205ಕ್ಕೆ ಏರಿದೆ. ಕುನಾರ್ ನಲ್ಲಿ ಹೆಚ್ಚಿನ ಸಾವುನೋವುಗಳು ಸಂಭವಿಸಿವೆ. ಅಫ್ಘಾನಿಸ್ತಾನದಲ್ಲಿ ರಕ್ಷಣಾ ಕಾರ್ಯಾಚರಣೆಗಳು ಇನ್ನೂ ನಡೆಯುತ್ತಿವೆ. ಆದರೆ ಅಲ್ಲಲ್ಲಿ ಬಿದ್ದಿರುವ ಅವಶೇಷಗಳು ಪರಿಹಾರ ಪ್ರಯತ್ನಗಳಿಗೆ ಅಡ್ಡಿಯಾಗಿದೆ.

"ಜನರಿಗಾಗಿ ಡೇರೆಗಳನ್ನು ಸ್ಥಾಪಿಸಲಾಗಿದೆ ಮತ್ತು ಪ್ರಥಮ ಚಿಕಿತ್ಸೆ ಮತ್ತು ತುರ್ತು ಸಾಮಗ್ರಿಗಳ ವಿತರಣೆ ನಡೆಯುತ್ತಿದೆ," ಎಂದು ತಾಲಿಬಾನ್ ವಕ್ತಾರ ಹಮ್ದುಲ್ಲಾ ಫಿತ್ರಾತ್ ಹೇಳಿದ್ದಾರೆ. ರಕ್ಷಣಾ ಪ್ರಯತ್ನಗಳು ಸಹ ಇನ್ನೂ ನಡೆಯುತ್ತಿವೆ ಎಂದು ಅವರು ಹೇಳಿದ್ದಾರೆ.

ಅಫ್ಘಾನಿಸ್ತಾನದಲ್ಲಿ ಪರಿಸ್ಥಿತಿ ಭೀಕರವಾಗಿರುವುದರಿಂದ ಅಫ್ಘಾನಿಸ್ತಾನಕ್ಕೆ ಧನಸಹಾಯವನ್ನು ಹೆಚ್ಚಿಸುವಂತೆ ಸಹಾಯ ಸಂಸ್ಥೆಗಳು ಅಂತಾರಾಷ್ಟ್ರೀಯ ಸಮುದಾಯವನ್ನು ಒತ್ತಾಯಿಸಿವೆ.

## ಮತಪತ್ರ ಬಿಜೆಪಿಗೆ ಆತಂಕ ಗಾಬರಿ ಏಕೆ? ಡಿಕೆಶಿ



ಬೆಂಗಳೂರು:ಸೆ.5: ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಇವಿಎಂ ಬದಲಿಗೆ ಮತಪತ್ರಗಳನ್ನು ಬಳಸುವ ತೀರ್ಮಾನವನ್ನು ರಾಜ್ಯಸರ್ಕಾರ ಕೈಗೊಂಡಿದೆ. ಈ ತೀರ್ಮಾನದ ಬಗ್ಗೆ ಬಿಜೆಪಿಗೆ ಆತಂಕ–ಗಾಬರಿ ಏಕೆ ಎಂದು ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ ಶಿವಕುಮಾರ್ ಪ್ರಶ್ನಿಸಿ ಸ್ಥಳೀಯ ಸಂಸ್ಥೆಗಳಲ್ಲಿ ಮತಪತ್ರ ಬಳಸುವ ರಾಜ್ಯಸರ್ಕಾರದ ತೀರ್ಮಾನವನ್ನು ಸಮರ್ಥಿಸಿಕೊಂಡಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚುನಾವಣಾ ಕಾನೂನಿನಲ್ಲೇ ಮತಪತ್ರ ಬಳಸಲು ಅವಕಾಶವಿದೆ. ಈ ಕಾನೂನನ್ನು ನಾವು ಮಾಡಿದ್ದಲ್ಲ, ಬಿಜೆಪಿಯವರೇ ಮಾಡಿರುವುದು, ಹೀಗಿರುವಾಗ ಮತಪತ್ರ ಬಳಸುವ ರಾಜ್ಯಸರ್ಕಾರದ ತೀರ್ಮಾನವನ್ನು ಬಿಜೆಪಿಯವರು ವಿರೋಧಿಸುತ್ತಿರುವುದು ಏಕೆ? ಅವರಿಗೆ ಆತಂಕ ಗಾಬರಿಯಾಗಿದೆಯೇ ಎಂದು ವ್ಯಂಗ್ಯವಾಗಿ ಹೇಳಿದ್ದಾರೆ.

ಸ್ಥಳೀಯ ಸಂಸ್ಥೆಗಳ ಚುನಾವಣಾ ಸಂದರ್ಭದಲ್ಲಿ ಮತಪತ್ರ ಅಥವಾ ಇವಿಎಂನ್ನು ಬಳಸಬಹುದು ಎಂಬ ಕಾನೂನನ್ನು ಬಿಜೆಪಿಯವರೇ ಮಾಡಿದ್ದಾರೆ. ನಾವು ಕಾನೂನಿನಂತೆ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಮತಪತ್ರ ಬಳಸುವ ತೀರ್ಮಾನ ಮಾಡಿದ್ದೇವೆ. ಮುಂದೆ ನಡೆಯುವ ಬಿಬಿಎಂಪಿ ಸೇರಿದಂತೆ ಎಲ್ಲ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲೂ ಇವಿಎಂ ಬದಲು ಮತಪತ್ರ ಬಳಕೆಯಾಗಲಿದೆ ಎಂದರು.

### ಆಪ್ ಸ್ವಾಗತ

ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಇವಿಎಂ ಬದಲು ಮತಪತ್ರ ಬಳಸುವ ರಾಜ್ಯಸರ್ಕಾರದ ತೀರ್ಮಾನವನ್ನು ಆಮ್ ಆದ್ಮಿ ಪಕ್ಷ ಸ್ವಾಗತಿಸಿದೆ. ಇತ್ತೀಚಿನ ಚುನಾವಣೆಗಳಲ್ಲಿ ಮತಗಳ್ಳತನವಾಗಿದೆ ಎಂದು ಇಂಡಿಯಾ ಒಕ್ಕೂಟದ ನಾಯಕರುಗಳು ಮಾಡಿರುವ ಗುರುತರ ಆರೋಪಗಳಿಗೆ ಪ್ರಧಾನಿ ಮೋದಿ ಪ್ರತಿಕ್ರಿಯೆ ನೀಡಿಲ್ಲ. ಜತೆಗೆ ಆರೋಪಕ್ಕೆ ಒಳಗಾಗಿರುವ ಕೇಂದ್ರ ಚುನಾವಣಾ ಆಯೋಗವು ಸೂಕ್ತ ಸ್ಪಷ್ಟೀಕರಣ, ಸಮಜಾಯಿಷಿ ನೀಡದೆ ಆರೋಪ ಮಾಡಿರುವ ನಾಯಕರ ವಿರುದ್ಧವೇ ಹೇಳಿಕೆ ನೀಡಿದೆ. ಇಂತಹ ಸಂದರ್ಭದಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಮತಪತ್ರ ಬಳಕೆ ಸ್ವಾಗತಾರ್ಹ ಎಂದು ಆಮ್ ಆದ್ಮಿ ಪಕ್ಷದ ರಾಜ್ಯ ಮಾಧ್ಯಮ ಸಂಚಾಲಕ ಜಗದೀಶ್. ವಿ ಸದಂ ಹೇಳಿದ್ದಾರೆ.

## ವಿವಾಹ ನೆಪದಲ್ಲಿ ಮಹಿಳೆಗೆ ವಂಚನೆ ನೈಜೀರಿಯಾ ಪ್ರಜೆ ಸೆರೆ

ಬಾಗಲಕೋಟೆ,ಸೆ.5: ಮಹಿಳೆಗೆ ಮದುವೆಯಾಗುವುದಾಗಿ ನಂಬಿಸಿ 5.50 ಪಡೆದು ವಂಚಿಸಿದ್ದ ನೈಜೀರಿಯಾ ಪ್ರಜೆಯನ್ನು ಜಿಲ್ಲೆಯ ಸಿಇಎನ್ ಪೊಲೀಸರು ಬಂಧಿಸಿದ್ದಾರೆ.

ಅಲಿವರ್ ವುಗುವೊ ಒಕಿಚಿಕು ಎಂಬ ವ್ಯಕ್ತಿ ಬಂಧಿತ ಆರೋಪಿ. ಬಂಧಿತನಿಂದ 4 ಮೊಬೈಲ್, 1 ಲ್ಯಾಪ್‌ಟಾಪ್, ಪಾಸ್‌ಪೋರ್ಟ್, ಅಮೆರಿಕ ಡಾಲರ್ ಇರುವ ಬಂಡಲ್‌ಗಳನ್ನು ಜಪ್ತಿ ಮಾಡಲಾಗಿದೆ.

ಆರೋಪಿ ಅಲಿವರ್ ಇಳಕಲ್ ಮೂಲದ ಮಹಿಳೆಗೆ ಮದುವೆ ಮಾಡಿಕೊಳ್ಳುವುದಾಗಿ ಹೇಳಿ 5.50 ಲಕ್ಷ ರೂ. ಪಡೆದು ಮೋಸಮಾಡಿದ್ದು, ಮಹಿಳೆಯು ಇಳಕಲ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು. ಮಹಿಳೆಯ ದೂರಿನ ಅನ್ವಯ ಪ್ರಕರಣದ ತನಿಖೆ ಕೈಗೆತ್ತಿಕೊಂಡ ಸಿಇಎನ್ ಪೊಲೀಸರು ಕಾರ್ಯಾಚರಣೆ ಕೈಗೊಂಡು ಮುಂಬೈನಲ್ಲಿದ್ದ ಆರೋಪಿಯನ್ನು ಬಂಧಿಸಿ ನ್ಯಾಯಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ಅಲಿವರ್ ವುಗುವೊ ಒಕಿಚಿಕು ಮೆಟ್ರೋಮೋನಿ ಮೂಲಕ ಇಳಕಲ್ ಮೂಲದ ವಿಚ್ಛೇದಿತ ಸ್ನೇಹಾ(ಹೆಸರು ಬದಲಾಯಿಸಲಾಗಿದೆ) ಅವರನ್ನು ಅಮಿತ್ ದಾಸ್ ಹೆಸರಿನಲ್ಲಿ ಪರಿಚಯ ಮಾಡಿಕೊಂಡಿದ್ದ. ಲಂಡನ್‌ನಲ್ಲಿ ನಾನು ನೆಲೆಸಿದ್ದೇನೆ. ನನ್ನ ಬಳಿ ಲಕ್ಷಾಂತರ ರೂ. ದುಡ್ಡಿದೆ. ನಿಮ್ಮ ಪ್ರೊಫೈಲ್ ನನಗೆ ಇಷ್ಟವಾಯಿತು ಎಂದು ಹೇಳಿ ನಂಬಿಸಿದ್ದ. ಪ್ರೊಫೈಲಿನಲ್ಲಿ ಬೇರೆ ಫೋಟೋ ಹಾಕಿದ್ದರಿಂದ ಸ್ನೇಹಾ ಈತನ ಮಾತನ್ನು ನಂದಿದ್ದರು.

ಲಂಡನ್‌ನಿಂದ ಒಂದು ಸಾವಿರ ಯುಎಸ್ ಡಾಲರ್ ತಂದಿದ್ದೇನೆ. ದೆಹಲಿ ಕಸ್ಟಮ್ಸ್ ಆಫೀಸ್‌ನಲ್ಲಿ ಹಣವನ್ನು ಜಪ್ತಿ ಮಾಡಿದ್ದಾರೆ. ಈ ಹಣವನ್ನು ಬಿಡಿಸಿಕೊಳ್ಳಲು ತುರ್ತಾಗಿ ಇಂಡಿಯನ್ ಕರೆನ್ಸಿ ಬೇಕಾಗಿದೆ ಎಂದು ಹೇಳಿದ್ದ. ಈತನ ಮಾತನ್ನು ಕೇಳಿ ಲಕ್ಷ ಲಕ್ಷ ಹಣವನ್ನು ಸ್ನೇಹಾ ವರ್ಗಾಯಿಸಿದ್ದರು. ಹಣ ಖಾತೆಗೆ ಬಂದ ಬೆನ್ನಲ್ಲೇ ಆತ ಸಂಪರ್ಕ ಕಡಿತಗೊಳಿಸಿದ್ದ. ತಾನು ವಂಚನೆಗೆ ಒಳಗಾದ ವಿಚಾರ ಗೊತ್ತಾಗಿ ಸ್ನೇಹಾ ಅವರು 2024 ರಲ್ಲಿ ಇಳಕಲ್ ನಗರ ಠಾಣೆಯಲ್ಲಿ ದೂರು ದಾಖಲು ಮಾಡಿದ್ದರು. ಈ ಕೇಸ್ ಬಾಗಲಕೋಟೆ ಸಿಇಎನ್ ಪೊಲೀಸ್ ಠಾಣೆಗೆ ವರ್ಗಾವಣೆಯಾಗಿತ್ತು. ಈ ಪ್ರಕರಣವನ್ನು ತನಿಖೆ ಚುರುಕುಗೊಳಿಸಿದ ಸಿಇಎನ್ ಪೊಲೀಸರು ಕಾರ್ಯಾಚರಣೆ ಮಾಡಿ ನೈಜೀರಿಯನ್ ಪ್ರಜೆಯನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

## ಔತಣಕೂಟ, ಮಸ್ಕ್‌ಗೆ ಆಹ್ವಾನವಿಲ್ಲ

ವಾಷಿಂಗ್ಟನ್,ಸೆ.5–ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಜಗತ್ತಿನ ತಂತ್ರಜ್ಞಾನ ದಿಗ್ಗಜ ಸಂಸ್ಥೆಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ರಾತ್ರಿ ಔತಣಕೂಟ ಹಮ್ಮಿಕೊಂಡಿದ್ದರು, ಒಂದು ಕಾಲದ ಮಿತ್ರ ಹಾಗು ಉದ್ಯಮಿ ಎಲನ್ ಮಸ್ಕ್‌ಗೆ ಆಹ್ವಾನ ಇರಲಿಲ್ಲ ಎನ್ನುವ ಸಂಗತಿ ಬೆಳಕಿಗೆ ಬಂದಿದೆ.

ಔತಣಕೂಟಕ್ಕೆ ಬಿಲ್‌ಗೇಟ್ಸ್, ಟಿಮ್ ಕುಕ್, ಜುಕರ್ಬರ್ಗ್ ಮತ್ತು ಸುಂದರ್ ಪಿಚೈ ಸೇರಿದಂತೆ ತಾಂತ್ರಿಕ ನಾಯಕರಿಗೆ ಭೋಜನ ಏರ್ಪಡಿಸಿದ್ದರು. ಈ ಭೋಜನಕೂಟದಲ್ಲಿ ಕೃತಕ ಬುದ್ಧಿಮತ್ತೆಯ ಕಡೆಗೆ ಮತ್ತಷ್ಟು ಒತ್ತು ನೀಡುವಮತೆ ಜಾಗತಿಕ ತಂತ್ರಜ್ಞಾನ ಕಂಪನಿಗಳಿಗೆ ಡೊನಾಲ್ಡ್ ಟ್ರಂಪ್ ಸೂಚಿಸಿದ್ದಾರೆ.

ಅತಿಥಿ ಪಟ್ಟಿಯಲ್ಲಿ ಮೈಕ್ರೋಸಾಫ್ಟ್ ಸಹ–ಸಂಸ್ಥಾಪಕ ಬಿಲ್ ಗೇಟ್ಸ್, ಆಪಲ್ ಸಿಇಒ ಟಿಮ್ ಕುಕ್, ಮೆಟಾ ಸಿಇಒ ಮಾರ್ಕ್ ಜುಕರ್ಬರ್ಗ್ ಮತ್ತು ಅತಿದೊಡ್ಡ ಕೃತಕ ಬುದ್ಧಿಮತ್ತೆ ಮತ್ತು ತಂತ್ರಜ್ಞಾನ ಸಂಸ್ಥೆಗಳ ಒಂದು ಡಜನ್ ಇತರ ಮುಖ್ಯ ಕಾರ್ಯನಿರ್ವಾಹಕರು ಭಾಗಿಯಾಗಿದ್ದರು ಎಂದು ಶ್ವೇತಭವನ ತಿಳಿಸಿದೆ.

ರೋಸ್ ಗಾರ್ಡನ್‌ನಲ್ಲಿ ಭೋಜನ ನಡೆಯಬೇಕಿತ್ತು, ಅಲ್ಲಿ ಡೊನಾಲ್ಡ್ ಟ್ರಂಪ್ ಇತ್ತೀಚೆಗೆ ಹುಲ್ಲಿನ ಹುಲ್ಲುಹಾಸಿನ ಮೇಲೆ ನೆಲಹಾಸು ಹಾಕಿ, ಫ್ಲೋ?ಲೀರಿಡಾದ ಪಾಮ್ ಬೀಚ್‌ನಲ್ಲಿರುವ ಮಾರ್–ಎ–ಲಾಗೊ ಕ್ಲಬ್‌ನಲ್ಲಿ ಹೊರಾಂಗಣ ವ್ಯವಸ್ಥೆ ಹೋಲುವ ಟೇಬಲ್‌ಗಳು, ಕುರ್ಚಿಗಳು ಮತ್ತು ಛತ್ರಿಗಳನ್ನು ಸಿದ್ದಪಡಿಸಿದ್ದರು ಪ್ರತಿಕೂಲ ಹವಾಮಾನದ ಕಾರಣ ಭೋಜನಕೂಟವನ್ನು ಶ್ವೇತಭವನದ ರಾಜ್ಯ ಊಟದ ಕೋಣೆಗೆ ಸ್ಥಳಾಂತರಿಸಲು ಅಧಿಕಾರಿಗಳು ತಿಳಿಸಿದ್ದಾರೆ.

ಕೃತಕ ಬುದ್ಧಿಮತ್ತೆ ಕುರಿತು ವಿಶೇಷ ಕಾರ್ಯಪಡೆಯಲ್ಲಿ ಗೂಗಲ್ ಸಿಇಒ ಸುಂದರ್ ಪಿಚೈ, ಐಬಿಎಂ ಅಧ್ಯಕ್ಷ ಮತ್ತು ಸಿಇಒ ಅರವಿಂದ್ ಕೃಷ್ಣ ಮತ್ತು ಕೋಡ್.ಆರ್ಗ್ ಅಧ್ಯಕ್ಷ ಕ್ಯಾಮರೂನ್ ವಿಲ್ಸನ್ ಕೂಡ ಭಾಗವಹಿಸಿದ್ದರು.

ಜೊತೆಗೆ ಗೂಗಲ್ ಸಂಸ್ಥಾಪಕ ಸೆರ್ಗೆ ಬ್ರಿನ್, ಮೈಕ್ರೋಸಾಫ್ಟ್ ಸಿಇಒ ಸತ್ಯ ನಾಡೆಲ್ಲಾ, ಓಪನ್‌ಎಐ ಸಿಇಒ ಸ್ಯಾಮ್ ಆಲ್ಟ್‌ಮನ್ ಮತ್ತು ಸಂಸ್ಥಾಪಕ ಗ್ರೆಗ್ ಬ್ರಾಕ್‌ಮನ್, ಒರಾಕಲ್ ಸಿಇಒ ಸಫ್ರಾ ಕ್ಯಾಟ್ಜ್, ಬ್ಲೂ ಒರಿಜಿನ್ ಸಿಇಒ ಡೇವಿಡ್ ಲಿಂಪ್, ಮೈಕ್ರಾನ್ ಸಿಇಒ ಸಂಜಯ್ ಮೆಹ್ರೋತ್ರಾ, ಟಿಐಬಿಸಿಒ ಸಾಫ್ಟ್‌ವೇರ್ ಅಧ್ಯಕ್ಷ ವಿವೇಕ್ ರಣದಿವ್, ಪಲಂತಿರ್ ಕಾರ್ಯನಿರ್ವಾಹಕ ಶ್ಯಾಮ್ ಶಂಕರ್, ಸ್ಕೇಲ್ ಎಐ ಸಂಸ್ಥಾಪಕ ಮತ್ತು ಸಿಇಒ ಅಲೆಕ್ಸಾಂಡರ್ ವಾಂಗ್ ಮತ್ತು ಶಿಫ್ಟ್ 4 ಪೇಮೆಂಟ್ಸ್ ಸಿಇಒ ಜೇರೆಡ್ ಐಸಾಕ್‌ಮನ್ ಇದ್ದರು ಎಂದು ತಿಳಿಸಲಾಗಿದೆ.

ಡೊನಾಲ್ಡ್ ಟ್ರಂಪ್ ಹಾಗು ಪ್ರಥಮ ಮಹಿಳೆ ಮೆಲಾನಿಯಾ ಟ್ರಂಪ್ ಮತ್ತು ಮೆಟಾ ಸಿಇಒ ಮಾರ್ಕ್ ಜುಕರ್ಬರ್ಗ್ ನಡುವಿನ ಉದ್ದನೆಯ ಮೇಜಿನ ಮಧ್ಯದಲ್ಲಿ ಕುಳಿತಿದ್ದರು. ಶ್ವೇತಭವನದ ಹೊಸ ಕೃತಕ ಬುದ್ಧಿಮತ್ತೆ ಶಿಕ್ಷಣ ಕಾರ್ಯಪಡೆಯ ಸಭೆಯ ಅಧ್ಯಕ್ಷತೆಯನ್ನು ಮೆಲಾನಿಯಾ ಟ್ರಂಪ್ ವಹಿಸಿದ್ದರು.

ಡೊನಾಲ್ಡ್ ಟ್ರಂಪ್ ಅವರು ಉನ್ನತ ತಂತ್ರಜ್ಞಾನ ಕಾರ್ಯನಿರ್ವಾಹಕರೊಂದಿಗೆ ನಡೆಸಿದ ಸಭೆ ರಿಪಬ್ಲಿಕನ್ ಪಕ್ಷದೊಳಗೆ ಉದ್ಭವಿಸುತ್ತಿರುವ ಭಿನ್ನಾಭಿಪ್ರಾಯಗಳನ್ನು ಇನ್ನಷ್ಟು ಹೆಚ್ಚಿಸಬಹುದು. ವಾಷಿಂಗ್ಟನ್‌ನಲ್ಲಿ ನಡೆದ ಸಂಪ್ರದಾಯವಾದಿ ಸಮ್ಮೇಳನದಲ್ಲಿ ಭಾಷಣ ಮಾಡುವಾಗ ಕಾಂಗ್ರೆಸ್‌ನಲ್ಲಿ ಡೊನಾಲ್ಡ್ ಟ್ರಂಪ್ ಅವರ ಆಪ್ತ ಮಿತ್ರರಲ್ಲಿ ಒಬ್ಬರಾದ ಸೆನೆಟರ್ ಜೋಶ್ ಹಾವ್ಲಿ, ತಂತ್ರಜ್ಞಾನ ಉದ್ಯಮದ ಬಗ್ಗೆ ತೀಕ್ಷ್ಣವಾದ ಟೀಕೆ ಮಾಡಿದ್ದಾರೆ.

## ಗುಜರಾತ್ ಗೆ ರೆಡ್ ಅಲರ್ಟ್

ನವದೆಹಲಿ, ಸೆ. 5: ಉತ್ತರ ಹಾಗೂ ಮಧ್ಯ ಭಾರತದ ಹಲವು ರಾಜ್ಯಗಳಲ್ಲಿ ಮಳೆಯ ಆರ್ಭಟ ಮುಂದುವರಿದಿದೆ. ಈ ಮಧ್ಯೆ, ಹವಾಮಾನ ಇಲಾಖೆ ಗುಜರಾತ್ ಗೆ ರೆಡ್ ಅಲರ್ಟ್ ಘೋಷಿಸಿದ್ದು, ಅತಿ ಹೆಚ್ಚು ಮಳೆಯಾಗುವ ಮುನ್ಸೂಚನೆ ನೀಡಿದೆ. ಏತನ್ಮಧ್ಯೆ, ಕಳೆದ ಕೆಲವು ದಿನಗಳಿಂದ ಎಡೆಬಿಡದೆ ಸುರಿಯುತ್ತಿರುವ ಮಳೆಯಿಂದಾಗಿ ತತ್ತರಿಸಿರುವ ದೆಹಲಿ ಮತ್ತು ಗುರುಗ್ರಾಮ್ ಮತ್ತು ನೋಯ್ಡಾಗೆ ಸ್ವಲ್ಪ ಬಿಡುವು ಸಿಗಬಹುದು ಎಂದು ಹವಾಮಾನ ಇಲಾಖೆ ತಿಳಿಸಿದೆ. ಹವಾಮಾನ ಇಲಾಖೆ ಬಿಡುಗಡೆ ಮಾಡಿರುವ ಬುಲೆಟಿನ್‌ನಲ್ಲಿ, ರಾಷ್ಟ್ರರಾಜಧಾನಿಯಲ್ಲಿ ಸದ್ಯ ಮಳೆಯಾಗುವುದಿಲ್ಲ ಎಂದು ಹೇಳಿರುವುದು ಅಲ್ಪ ನಿರಾಳ ತಂದಿದೆ. ಆದರೆ ಗುರುಗ್ರಾಮ್ ಮತ್ತು ಫರಿದಾಬಾದ್ ನಲ್ಲಿ ಮಳೆ ಮುಂದುವರಿಯುತ್ತದೆ ಎಂದು ಹೇಳಿದೆ. ಮುಂದಿನ 3 ಗಂಟೆಗಳಲ್ಲಿ



ಫರಿದಾಬಾದ್, ಗುರುಗ್ರಾಮ್, ಝುಜ್ಜರ್, ಜಿಂದ್, ಕರ್ನಾಲ್, ಕುರುಕ್ಷೇತ್ರ, ನುಹ್, ಪಲ್ವಾಲ್, ಪಾಣಿಪತ್, ರೇವಾರಿ, ರೋಹ್ಟಕ್, ಸೋನಿಪತ್, ಯಮುನಾನಗರದ ಕೆಲವು ಸ್ಥಳಗಳಲ್ಲಿ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ ಎಂದು ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರ ಎಚ್ಚರಿಕೆ ನೀಡಿದೆ.

ಇಂದು ಮತ್ತು ನಾಳೆ ನಡುವೆ ಗುಜರಾತ್‌ನಲ್ಲಿ ಧಾರಾಕಾರ ಮಳೆಯಾಗುವ

ಸಾಧ್ಯತೆಯಿದ್ದು, ಸೌರಾಷ್ಟ್ರ ಮತ್ತು ಕಚ್ ಪ್ರದೇಶಗಳು

ಭಾರಿ ಮಳೆಗೆ ಸಾಕ್ಷಿಯಾಗುವ ಸಾಧ್ಯತೆ ಇದೆ. ರಾಜಸ್ಥಾನದಲ್ಲಿಯೂ ಮುಂದಿನ ನಾಲ್ಕು ದಿನ ಭಾರಿ ಮಳೆ ಸುರಿಯುವ ಮುನ್ಸೂಚನೆ ಇದೆ. ಹಾಗೆಯೇ ಒಡಿಶಾದಲ್ಲಿ ಸೆಪ್ಟೆಂಬರ್ 7 ರವರೆಗೆ ಭಾರಿ ಮಳೆಯಾಗುವ ಬಗ್ಗೆ ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ.

## ಸೋನಿಯಾ ಗಾಂಧಿಗೆ ಧರ್ಮಸ್ಥಳದ ಬಗ್ಗೆ ಏನು ಗೊತ್ತಿದೆ? : ವಿ.ಸೋಮಣ್ಣ

ಚಿಕ್ಕಬಳ್ಳಾಪುರ: ಸೆ.5: ಸೋನಿಯಾ ಗಾಂಧಿ ಅವರಿಗೆ ಧರ್ಮಸ್ಥಳದ ಬಗ್ಗೆ ಏನು ಗೊತ್ತಿದೆ? ಅವರ ತಲೆಯಲ್ಲಿ ತಮ್ಮ ಮಗನನ್ನು ಪ್ರಧಾನಿ ಮಾಡಬೇಕು ಎನ್ನುವುದಷ್ಟೇ ಇದೆ ಎಂದು ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದರು.

ಧರ್ಮಸ್ಥಳದಲ್ಲಿ ನೂರಾರು ಶವಗಳನ್ನು ಹೂಳಲಾಗಿದ್ದು, ಈ ಪ್ರಕರಣದಲ್ಲಿ ಮಧ್ಯಪ್ರವೇಶಿಸುವಂತೆ ಕಾಂಗ್ರೆಸ್ ವರಿಷ್ಠರಾದ ಸೋನಿಯಾ ಗಾಂಧಿ ಅವರಿಗೆ ಮಹಿಳಾ ಸಂಘಟನೆಗಳು ಪತ್ರ ಬರೆದಿರುವ ವಿಚಾರವಾಗಿ ವಿ.ಸೋಮಣ್ಣ ಅವರು ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದರು. ಇದನ್ನು ಆ ಹೆಣ್ಣು ಮಕ್ಕಳಿಗೆ ಯಾರೋ ಹೇಳಿಕೊಟ್ಟು ಮಾಡಿಸಿರಬಹುದು. ಸಿದ್ದರಾಮಯ್ಯ ಮತ್ತು ಅವರ ತಂಡದ ಹೊಸ ಕಥೆಯಂತಿದೆ ಎಂದರು.

ಡಿ.ಕೆ.ಶಿವಕುಮಾರ್ ಬುದ್ಧಿವಂತಿಕೆಗೆ ಬೇಸರ ಮಾಡಿಕೊಂಡಿರುವವರು ಹೀಗೆ ಮಾಡಿಸಿರಬಹುದು. ಇಂತಹದ್ದೆಲ್ಲವನ್ನೂ ಮಾಡುವುದೇ ಕಾಂಗ್ರೆಸ್‌ನವರ ಕುತಂತ್ರ. ಸೋನಿಯಾ ಗಾಂಧಿ ಅವರ ಬಗ್ಗೆ ಅಪಾರ

ಗೌರವವಿದೆ. ಅವರು ಒಳ್ಳೆಯವರು. ನನ್ನ ಮಗ ರಾಹುಲ್ ಗಾಂಧಿ ಪ್ರಧಾನಿ ಆಗಬೇಕು ಎನ್ನುವ ತವಕದಲ್ಲಿ ಜೀವನ ಸಾಗಿಸುತ್ತಿದ್ದಾರೆ ಎಂದು ಹೇಳಿದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.